ಸಂಪುಟ: 04 ಸಂಚಿಕೆ: 128 ಪುಟಗಳು: 08 ಭಾನುವಾರ 21 ಜುಲೈ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**
ಜ್ಞಾನ ನಮ್ಮ ಮಧ್ಯೆ ಇರುವಂತಹುದೇ, ಆದರೆ ಮನುಷ್ಯ ಅದನ್ನು ಆವಿಷ್ಕರಿಸಿ, ಅನಾವರಣಗೊಳಿಸುವ ಮಹತ್ಕಾರ್ಯದಲ್ಲಿ ತೊಡಗಬೇಕು.

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಮಳೆ ಅಬ್ಬರ ಹಲವೆಡೆ ಅವಾಂತರ

• ಉದಯವಾಹಿನಿ, ಬೆಂಗಳೂರು

ಬಂಗಾಳಕೊಲ್ಲಿಯ ವಾಯು ಕುಸಿತದಿಂದಾಗಿ ರಾಜ್ಯದ ಹಲವೆಡೆ ವರುಣನ ಆರ್ಭಟ ಮುಂದುವರೆದಿದ್ದು, ಕರಾವಳಿ, ಮಲೆನಾಡು, ರಾಜ್ಯದ ಇತರ ಜಿಲ್ಲೆಗಳಲ್ಲಿ ಧಾರಾಕಾರ ಮಳೆ ಸುರಿಯುತ್ತಿರುವುದರಿಂದ ದ.ಕನ್ನಡ, ಉಡುಪಿ,ಶಿವಮೊಗ್ಗ, ಕೊಡಗು, ಹಾಸನ ಜಿಲ್ಲೆಗಳಲ್ಲಿ ಮಳೆರಾಯ ಅವಾಂತರ ಸೃಷ್ಟಿಸಿದ್ದಾನೆ. ಈ ಜಿಲ್ಲೆಗಳಿಗೆ ಶಾಲಾ-ಕಾಲೇಜು ರಜೆ ಘೋಷಿಸಲಾಗಿದೆ. ಮಳೆಯ ರುದ್ರ ನರ್ತನ ಮುಗಿಯುವ ಲಕ್ಷಣಗಳು ಕಾಣುತ್ತಿಲ್ಲ. ಉ.ಕನ್ನಡ ಜಿಲ್ಲೆಯ ಅಂಕೋಲಾದಲ್ಲಿ ಭಾರಿ ಗಾತ್ರದ ಗುಡ್ಡ ಕುಸಿದು ಪರಿಹಾರ ಕಾರ್ಯಾಚರಣೆಗೆ ಅಡ್ಡಿಯಾಗಿದೆ. ಉ.ಕನ್ನಡ ಜಿಲ್ಲೆಯಲ್ಲಿ ವ್ಯಾಪಕ ಮಳೆಯಾಗುತ್ತಿರುವುದರಿಂದ ಮುನ್ನೆಚ್ಚರಿಕೆ ಕ್ರಮವಾಗಿ ರಜೆ ಘೋಷಿಸಲಾಗಿದೆ ಎಂದು ಜಿಲ್ಲಾಧಿಕಾರಿ ಲಕ್ಷ್ಮಿಪ್ರಿಯಾ ಅವರು ಮಾಹಿತಿ ನೀಡಿದ್ದಾರೆ. ರಾಜ್ಯದಲ್ಲಿ ಇನ್ನು 4 ದಿನಗಳ ಕಾಲ ವರ್ಷಧಾರೆ ಮುಂದುವರೆಯಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.ಇತ್ತ ದ.ಕನ್ನಡ ಜಿಲ್ಲೆಯಾದ್ಯಂತ ಭಾರಿ ಮಳೆ ಸುರಿಯುತ್ತಿದ್ದು, ಶಾಲಾ-ಕಾಲೇಜಿಗೆ ರಜೆ ಘೋಷಿಸಲಾಗಿದೆ. ಅಂಗನವಾಡಿಯಿಂದ ದ್ವಿತೀಯ ಪಿಯುಸಿವರೆಗಿನ ವಿದ್ಯಾರ್ಥಿಗಳಿಗೆ ರಜೆ ಘೋಷಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಆದೇಶಿಸಿದ್ದಾರೆ. ಮತ್ತೊಂದೆಡೆ ಉಡುಪಿ ಜಿಲ್ಲೆಯಾದ್ಯಂತ ವರುಣ ಭೋರ್ಗರೆಯುತ್ತಿರುವುದರಿಂದ ಜನಜೀವನ ಅಸ್ತ ವ್ಯಸ್ತಗೊಂಡಿದ್ದು, ಶಾಲೆಗಳಿಗೆ ರಜೆ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ವಿದ್ಯಾಕುಮಾರಿ ತಿಳಿಸಿದ್ದು, ಪದವಿ ಕಾಲೇಜುಗಳಿಗೆ, ಇಂಜಿನಿಯರಿಂಗ್ ಹಾಗೂ ಪಾಲಿಟೆಕ್ನಿಕ್ ವಿದ್ಯಾರ್ಥಿಗಳಿಗೆ ರಜೆ ನೀಡಲಾಗಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಹಾಸನ ಜಿಲ್ಲೆಯಲ್ಲೂ ವರುಣ ಆರ್ಭಟಿಸುತ್ತಿದ್ದು, ಹಾಸನ ಜಿಲ್ಲೆಯ ಸಕಲೇಶಪುರ, ಆಲೂರು,ಬೇಲೂರು, ಹಾಸನ, ಹೊಳೆನರಸೀಪುರ ಮತ್ತು ಅರಕಲಗೂಡು ಶಾಲೆಗಳಿಗೆ ರಜೆ ನೀಡಲಾಗಿದೆ ಎಂದು ಡಿಡಿಪಿಐ ಹೆಚ್.ಕೆ ಪಾಂಡು ಆದೇಶಿಸಿದ್ದಾರೆ. ಕೊಡಗು ಜಿಲ್ಲೆಯಲ್ಲೂ ಭಾರಿ ಬಿರುಗಾಳಿ ಮಳೆ ಸುರಿಯುತ್ತಿದೆ. ಇದರಿಂದಾಗಿ ಸಾಮಾನ್ಯ ಜನಜೀವನೇರುಪೇರಾಗಿದೆ.ಮುನ್ನೆಚ್ಚರಿಕೆ ಕ್ರಮವಾಗಿ ಜಿಲ್ಲೆಯಾದ್ಯಂತ ಕೂಡ ಶಾಲಾ-ಕಾಲೇಜುಗಳಿಗೆ ರಜೆ ನೀಡಲಾಗಿದೆ. ಪದವಿ ಹಾಗೂ ಸ್ನಾತಕೋತ್ತರ ಕಾಲೇಜುಗಳನ್ನು ಹೊರತುಪಡಿಸಿ ಅಂಗನವಾಡಿ ಸೇರಿದಂತೆ ಎಲ್ಲಾ ಶಾಲಾ-ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ ಎಂದು ಕೊಡಗು ಜಿಲ್ಲಾಧಿಕಾರಿ ವೆಂಕಟರಾಜ ತಿಳಿಸಿದ್ದಾರೆ. ಭಾರಿ ಮಳೆಯಿಂದಾಗಿ ಕೊಡಗು ಜಿಲ್ಲೆಯ ಪ್ರಸಿದ್ಧ ಅಬ್ಬಿ ಫಾಲ್ಸ್ ಉಕ್ಕಿ ಹರಿಯುತ್ತಿದೆ. ಈ ಜಲಪಾತ ಕಾವೇರಿ ನದಿಯಿಂದ 20 ಅಡಿ ಎತ್ತರದಿಂದ ಬಂಡೆಯ ಮೇಲೆ ಧುಮುಕ್ಕುತ್ತಿದೆ. ಈ ಜಲಪಾತ ಕಣ್ತುಂಬಿಕೊಳ್ಳುವುದೇ ಬಲು ಚೆನ್ನ.ರಾಜ್ಯದ ಕರಾವಳಿ, ದಕ್ಷಿಣ ಒಳನಾಡು ಜಿಲ್ಲೆಗಳಲ್ಲಿ ವರುಣ ಬಿಡುವು ನೀಡಿಲ್ಲ. ಹೀಗಾಗಿ ರೆಡ್ ಅಲರ್ಟ್ ಘೋಷಿಸಲಾಗಿದೆ. ಒಂದು ವಾರದಿಂದ ಕರಾವಳಿ ಜಿಲ್ಲೆಗಳಲ್ಲಿ ಸುರಿಯುತ್ತಿರುವ ವರುಣನ ಅಬ್ಬರಕ್ಕೆ ಹಲವೆಡೆ ಗುಡ್ಡ ಕುಸಿತ, ಮನೆ ಹಾನಿ ಸಂಭವಿಸಿದೆ. ಮಳೆಯಿಂದಾಗಿ ಬೆಂಗಳೂರು-ಮಂಗಳೂರು ನಡುವಿನ ರಸ್ತೆ ಸಂಚಾರ ಏರುಪೇರಾಗಿದೆ. ಪ್ರಮುಖ ನದಿಗಳಾದ ಕಾಳಿ, ಗಂಗಾವಳಿ, ಅಘನಾಶಿನಿ, ನೇತ್ರಾವತಿ, ಕುಮಾರಧಾರ ಸೇರಿ 10ಕ್ಕೂ ಹೆಚ್ಚು ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿದೆ.

**1** ಗುಡ್ಡ ಕುಸಿತ ಸಂಭವಿಸಿದ ಸ್ಥಳಕ್ಕೆ ಕೇಂದ್ರ ಸಚಿವ ಎಚ್. ಡಿ.ಕುಮಾರಸ್ವಾಮಿ ಭೇಟಿ

**2** ಮಾಧ್ಯಮಗಳಲ್ಲಿ ಪ್ರಸಾರವಾಗದಂತೆ ತಡೆಯಲಾಗಿದೆ ಎಂದು ಜೆಡಿಎಸ್ ಆರೋಪ

**3** ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಜೆಡಿಎಸ್ ಸರಣಿ ಟ್ವೀಟ್



### ಶಿಥಿಲಗೊಂಡಿದ್ದ ಮನೆಯ ಗೋಡೆ ಕುಸಿತ

ನಿರಂತರ ಮಳೆಯಿಂದಾಗಿ ಶಿಥಿಲಗೊಂಡಿದ್ದ ಮನೆ ಗೋಡೆ ಕುಸಿದು ಮಹಿಳೆಯೊಬ್ಬರು ಮೃತಪಟ್ಟಿದ್ದು ಮಹಿಳೆಯ ಕೈಯಲ್ಲಿ ಇದ್ದ ಮಗು ಅದೃಷ್ಟ ವಶಾತ್ ಪ್ರಾಣಾಪಾಯದಿಂದ ಪಾರಾಗಿದೆ. ತಾಲ್ಲೂಕಿನ ಕಗ್ಗುಂಡಿ ಗ್ರಾಮದ ಹೇಮಲತಾ (22) ಮೃತ ದುರ್ದೈವಿ. ಕಳೆದ ಕೆಲವು ದಿನಗಳಿಂದ ತಾಲ್ಲೂಕಿನಾದ್ಯಂತ ಎಡೆಬಿಡದೆ ಸುರಿಯುತ್ತಿರುವ ಮಳೆಯಿಂದ ಮನೆಯ ಗೋಡೆ ಶಿಥಿಲಗೊಂಡಿತ್ತು ಶುಕ್ರವಾರ ಬೆಳಿಗ್ಗೆ 11 ಗಂಟೆ ಸಮಯದಲ್ಲಿ ಶಿಥಿಲಗೊಂಡಿದ್ದ ಮನೆಯಗೋಡೆ ಕುಸಿಯುತ್ತಿರುವುದನ್ನು ಗಮನಿಸಿದ ಮಹಿಳೆ ಹೇಮಲತಾ ತನ್ನ ಕೈಯಲ್ಲಿದ್ದ ಒಂದುವರೆ ವರ್ಷದ ಮಗುವನ್ನು ಮನೆಯಿಂದ ಹೊರಕ್ಕೆ ಎಸೆದು ತಾನು ಹೊರಬರಲು ಪ್ರಯತ್ನಿಸುವಷ್ಟರಲ್ಲಿ ಗೋಡೆ ಏಕಾಏಕಿ ಮಹಿಳೆ ಮೇಲೆ ಬಿದ್ದಿದ್ದರಿಂದ ಸ್ಥಳದಲ್ಲಿ ಮತಪಟ್ಟದ್ದಾರೆ.

### ಕೆಆರ್‌ಎಸ್ ಭರ್ತಿ

ಕಾವೇರಿ ಜಲಾನಯನ ಪ್ರದೇಶದಲ್ಲಿ ಸುರಿಯುತ್ತಿರುವ ಮಳೆಯಿಂದಾಗಿ ಕೆಆರ್‌ಎಸ್ ಅಣೆಕಟ್ಟೆಯಲ್ಲಿ 5 ದಿನದಲ್ಲಿ 15 ಟಿಎಂಸಿ ನೀರು ಸಂಗ್ರಹವಾಗಿದ್ದು, ಅಣೆಕಟ್ಟೆ ಸಂಪೂರ್ಣ ಭರ್ತಿಯಾಗಲಿದೆ.124.80 ಗರಿಷ್ಠ ಮಟ್ಟದ ಅಣೆಕಟ್ಟೆಯಲ್ಲಿ 120 ಅಡಿ ನೀರು ಸಂಗ್ರಹವಾಗಿದೆ. ಜಲಾಶಯ ಭರ್ತಿಗೆ



ಕೇವಲ 4 ಅಡಿ ಮಾತ್ರ ಬಾಕಿ ಉಳಿದಿದೆ. ಸದ್ಯ ಅಣೆಕಟ್ಟೆಗೆ 51,374 ಕ್ಯೂಸೆಕ್ ನೀರು ಹರಿದು ಬರುತ್ತಿದೆ. ಮುನ್ನೆಚ್ಚರಿಕೆ ಕ್ರಮವಾಗಿ 4,714 ಕ್ಯೂಸೆಕ್ ನೀರನ್ನು ಬಿಡುಗಡೆ ಮಾಡಲಾಗುತ್ತಿದೆ. ಈ ಹೊರ ಹರಿವಿನ ಪ್ರಮಾಣ ಯಾವುದೇ ಕ್ಷಣದಲ್ಲಾದರೂ ಹೆಚ್ಚಾಗಬಹುದಾಗಿದೆ. ಈ ಹಿನ್ನೆಲೆಯಲ್ಲಿ ನದಿಪಾತ್ರದ ಜನರಿಗೆ ಎಚ್ಚರಿಕೆಯಿಂದಿರುವಂತೆ ಜಿಲ್ಲಾಡಳಿತ ಸೂಚನೆ ನೀಡಿದೆ.ಅಣೆಕಟ್ಟೆಯಿಂದ 10 ಸಾವಿರಕ್ಕೂ ಅಧಿಕ ಕ್ಯೂಸೆಕ್ ನೀರನ್ನು ಹೊರ ಬಿಡಲಾಗುತ್ತಿದೆ. 10 ಗೇಟ್‌ಗಳ ಮೂಲಕ ನೀರು ಹರಿಸಲಾಗಿದ್ದು, ನೀರಿನ ರಭಸ ಹಾಲಿನ ನೊರೆಯಂತೆ ಬಂಡೆಗಳಿಗೆ ಅಪ್ಪಳಿಸಿ ಭೋರ್ಗರೆದು ಕಾವೇರಿ ನದಿಗೆ ಹರಿದು ಹೋಗುತ್ತಿದೆ.

### ಮೀನುಗಾರರಿಗೆ ಎಚ್ಚರಿಕೆ

ಅರಬ್ಬಿ ಸಮುದ್ರದಲ್ಲಿ ವಾಯುಭಾರ ಕುಸಿತದಿಂದಾಗಿ ರಾಜ್ಯದ ಕರಾವಳಿ ಪ್ರದೇಶಗಳ ಸಮುದ್ರದಲ್ಲಿ ರಕ್ಕಸ ಗಾತ್ರದ ಅಲೆಗಳು ಅಬ್ಬರಿಸುತ್ತಿವೆ. ಈ ಹಿನ್ನೆಲೆಯಲ್ಲಿ ಮೀನುಗಾರರು ಯಾವುದೇ ಕಾರಣಕ್ಕೂ ಸಮುದ್ರಕ್ಕೆ ಇಳಿಯಬಾರದು ಎಂದು ಭಾರತೀಯ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ. ಉಡುಪಿಯಲ್ಲಿ ಸಮುದ್ರ ಭೋರ್ಗರೆಯುತ್ತಿದ್ದು, ಕಡಲ ಕಿನಾರೆಯಲ್ಲಿರುವ ತೆಂಗಿನ ಮರಗಳು ರಕ್ಕಸ ಅಲೆಗಳ ರಭಸಕ್ಕೆ ಕೊಚ್ಚಿ ಹೋಗಿವೆ. ಸಮುದ್ರ ತೀರದ ಆಸುಪಾಸಿನ ಮನೆಗಳಿಗೂ ನೀರು ನುಗ್ಗುವ ಆತಂಕ ಎದುರಾಗಿದೆ.



## ಗುಡ್ಡ ಕುಸಿತ ಪ್ರದೇಶಕ್ಕೆ ಎಚ್‌ಡಿಕೆ ಭೇಟಿ, ಕಾರ್ಯಾಚರಣೆಗೆ ಸೂಚನೆ

• ಉದಯವಾಹಿನಿ, ಉತ್ತರ ಕನ್ನಡ

ಕೇಂದ್ರದ ಭಾರೀ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್ .ಡಿ.ಕುಮಾರಸ್ವಾಮಿ ಅವರು ಇಂದು ಜಿಲ್ಲೆಯ ಅಂಕೋಲಾ ತಾಲ್ಲೂಕಿನ ಶಿರೂರು ಹೆದ್ದಾರಿ ಬಳಿ ಗುಡ್ಡ ಕುಸಿದಿದ್ದ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.ಈ ಸಂದರ್ಭದಲ್ಲಿ ಸಂತ್ರಸ್ತರೊಂದಿಗೆ ಹೆಚ್‌ಡಿಕೆ ಅವರು ಮಾತನಾಡಿ ಸಮಸ್ಯೆಗಳನ್ನು ಆಲಿಸಿದರು. ಇನ್ನು ಮಳೆ, ನೆರೆ ಪರಿಸ್ಥಿತಿ, ಹಾನಿ, ರಕ್ಷಣಾ ಕಾರ್ಯಾಚರಣೆ ಇತ್ಯಾದಿಗಳ ಬಗ್ಗೆ ಜಿಲ್ಲಾಧಿಕಾರಿಗಳಿಂದ ಅವರು ಮಾಹಿತಿ ಪಡೆದುಕೊಂಡರು. ಅಲ್ಲದೇ ತ್ವರಿತಗತಿಯಲ್ಲಿ ಕಾರ್ಯಾಚರಣೆ ಮಾಡುವಂತೆ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದರು. ಗುಡ್ಡ ಕುಸಿತದ ಭೀಕರತೆಯನ್ನು ಕುಮಾರಸ್ವಾಮಿ ಅವರು ಖುದ್ದು ಕೆಸರಿನಲ್ಲಿ ಓಡಾಡಿ ಗಮನಹರಿಸಿದರು. ಈ ವೇಳೆ ವಿಧಾನಸಭೆಯ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸಿ.ಬಿ.ಸುರೇಶ್ ಬಾಬು ಸೇರಿದಂತೆ ಹಲವರಿದ್ದರು.

## ಸಿದ್ದರಾಮಯ್ಯಗೆ ಮುಡಾ ಸಂಕಷ್ಟ ಲೋಕಾದಲ್ಲಿ ದೂರು ದಾಖಲು

• ಉದಯವಾಹಿನಿ, ಬೆಂಗಳೂರು

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ-ಮುಡಾದಲ್ಲಿ ನಡೆದಿರುವ ಅಕ್ರಮ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ವಿರುದ್ಧ ಲೋಕಾಯುಕ್ತಕ್ಕೆ ದೂರು ನೀಡಲಾಗಿದೆ. ಬಿಜೆಪಿ ಮುಖಂಡ ಎನ್. ಆರ್.ರಮೇಶ್, ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ವಿರುದ್ಧ 400 ಪುಟಗಳ ದಾಖಲೆ ಸಮೇತ ಲೋಕಾಯುಕ್ತಕ್ಕೆ ದೂರು ನೀಡಿದ್ದು, ಸೂಕ್ತ ತನಿಖೆಗೆ ಒತ್ತಾಯಿಸಿದ್ದಾರೆ. ಮುಡಾದಿಂದ ಸಿಎಂ ಸಿದ್ದರಾಮಯ್ಯ ಪತ್ನಿ ಪಾರ್ವತಿ ಹೆಸರಿಗೆ ಹಂಚಿಕೆಯಾಗಿರುವ 14 ನಿವೇಶನಗಳು, ಅದರ ಮೂಲ ದಾಖಲೆಗಳ ಸಮೇತ ದೂರು ನೀಡಿದ್ದಾರೆ. ಸಿಎಂ ಸಿದ್ದರಾಮಯ್ಯ, ಪತ್ನಿ ಪಾರ್ವತಿ, ಸಿದ್ದರಾಮಯ್ಯ ಅವರ ಭಾವ ಹಾಗೂ ಮುಡಾದ ಕೆಲ ಅಧಿಕಾರಿಗಳ ವಿರುದ್ಧ ದೂರು ನೀಡಲಾಗಿದ್ದು, ತನಿಖೆ ನಡೆಸುವಂತೆ ಒತ್ತಾಯಿಸಿದ್ದಾರೆ.

## ಮಳೆಹಾನಿ ಪ್ರದೇಶಗಳಲ್ಲಿ ಕ್ಷಿಪ್ರ ಕಾರ್ಯಾಚರಣೆಗೆ ಸಿಎಂ ಸೂಚನೆ

• ಉದಯವಾಹಿನಿ, ಬೆಂಗಳೂರು

ಅಂಕೋಲಾ ಸೇರಿದಂತೆ ಮಳೆ ಹಾನಿ ಪ್ರದೇಶಗಳಿಗೆ ನಾಳೆ ಭೇಟಿ ನೀಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಮಾಧ್ಯಮದವರ ಪ್ರಶ್ನೆಗೆ ಮುಖ್ಯ ಮಂತ್ರಿ ಈ ಪ್ರತಿಕ್ರಿಯೆ ನೀಡಿದ್ದು, ಮಳೆಹಾನಿ ಪ್ರದೇಶಗಳಲ್ಲಿ ಪರಿಹಾರ ಕ್ರಮಗಳನ್ನು ಕೈಗೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ.ರಕ್ಷಣಾ ಮತ್ತು ಪರಿಹಾರ ಕಾರ್ಯಗಳು ನಡೆಯುತ್ತಿವೆ ಎಂದು ತಿಳಿಸಿದ್ದಾರೆ. ರಾಜ್ಯದ ಹಲವೆಡೆ ಕೆಲವು ದಿನಗಳಿಂದ ಸುರಿಯುತ್ತಿರುವ ಧಾರಾಕಾರ ಮಳೆಗೆ ಕೆಲವು ಪ್ರಮುಖ ರಸ್ತೆಗಳು ಕುಸಿದಿದ್ದು, ಅಂಕೋಲಾ, ಗೋಕರ್ಣಗಳಲ್ಲಿ ಗುಡ್ಡ ಕುಸಿದಿವೆ. ಅಂಕೋಲಾದಲ್ಲಿ ಗುಡ್ಡ ಕುಸಿದು ಹಲವು ಪ್ರಾಣಗಳನ್ನು ಬಲಿ ಪಡೆದುಕೊಂಡಿದೆ. ರಕ್ಷಣಾ ಮತ್ತು ಪರಿಹಾರ ಕಾರ್ಯಗಳು ಚುರುಕಾಗಿ ನಡೆಯುತ್ತಿದ್ದು, ಸಂತ್ರಸ್ತರನ್ನು ಸಾಂತ್ವನ ಕೇಂದ್ರಗಳಿಗೆ ಸ್ಥಳಾಂತರಿಸಲಾಗಿದೆ. ರಸ್ತೆಗಳನ್ನು ಸಂಚಾರಕ್ಕೆ ತೆರವುಗೊಳಿಸುವ ಕಾರ್ಯ ನಡೆಯುತ್ತಿದೆ. ಸಂಸದ ಕುಮಾರಸ್ವಾಮಿಯವರೂ ಅಂಕೋಲಾಗೆ ಭೇಟಿ ನೀಡುವುದಾಗಿ ತಿಳಿಸಿದ್ದಾರೆ. ಸ್ಥಳದಲ್ಲಿ ಪರಿಹಾರ ಕಾರ್ಯಾಚರಣೆ ಭರದಿಂದ ಸಾಗುತ್ತಿದ್ದು, ಮಾಧ್ಯಮದವರಿಗೆ ಪ್ರವೇಶ ನಿರಾಕರಿಸಿರುವುದರ ವಿರುದ್ಧ ಸ್ಥಳೀಯ ಜನಪ್ರತಿನಿಧಿಗಳು ಮತ್ತು ಮಾಧ್ಯಮದವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಪೌಷ್ಠಿಕ ಆಹಾರ ಪೂರೈಸಲು ಅಜೀಂ ಪ್ರೇಂಜಿ ಫೌಂಡೇಶನ್ ಜೊತೆ ಒಪ್ಪಂದ

• ಉದಯವಾಹಿನಿ, ಬೆಂಗಳೂರು

ಅಜೀಂ ಪ್ರೇಮ್ ಜಿ ಪ್ರತಿಷ್ಠನದೊಂದಿಗೆ ಮಾಡಿಕೊಂಡಿರುವ ಒಪ್ಪಂದದಲ್ಲಿ ವಾರದ ನಾಲ್ಕು ದಿನಗಳು ಸರ್ಕಾರಿ ಶಾಲೆಗಳು ಹಾಗೂ ಸರ್ಕಾರಿ ಅನುದಾನಿತ ಶಾಲೆಗಳಿಗೆ ಮೊಟ್ಟೆಯನ್ನು ಸರಬರಾಜು ಮಾಡಲು ಒಪ್ಪಿಕೊಂಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಾಲಾ ಮಕ್ಕಳಿಗೆ ವಾರದಲ್ಲಿ ನಾಲ್ಕು ದಿನಗಳು ಮೊಟ್ಟೆ ವಿತರಣೆ ಮಾಡುವ ಕಾರ್ಯಕ್ರಮವನ್ನು ಇಂದು ಉದ್ಘಾಟಿಸಿದ್ದು ಮಕ್ಕಳು ಆರೋಗ್ಯವಂತರಾಗಿರಲು ಪೌಷ್ಟಿಕ ಆಹಾರ ಅಗತ್ಯ ಎಂದು ಹೇಳಿದರು. ಬಡವರ ಮಕ್ಕಳಿಗೂ ಉತ್ತಮ ಶಿಕ್ಷಣಕ್ಕಾಗಿ ಅವಕಾಶಗಳನ್ನು ಸೃಷ್ಟಿಸುವುದು ನಮ್ಮ ಆಶಯ. ಈ ಕಾರಣಕ್ಕೇ ಸಮವಸ್ತ್ರ, ಶೂ, ಸಾಕ್ಸ್ ಕೊಡುವ ಜೊತೆಗೆ ಹೆಚ್ಚೆಚ್ಚು ವಸತಿ ಶಾಲೆಗಳನ್ನು ತೆರೆಯುತ್ತಿದ್ದೇವೆ ಎಂದರು. ಶಿಕ್ಷಣ ಸಚಿವ ಮಧು ಬಂಗಾರಪ್ಪ, ವಿಪ್ರೋ ಮುಖ್ಯಸ್ಥರಾದ ಅಜೀಂ ಪ್ರೇಮ್ ಜಿ ದಂಪತಿ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ.ಅತೀಕ್ ಅಹಮದ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯ ದರ್ಶಿ ನಸೀರ್ ಅಹಮದ್, ಗ್ಯಾರಂಟಿ ಅನುಷ್ಠಾನ ಸಮಿತಿ ಉಪಾಧ್ಯಕ್ಷರಾದ ಮೆಹರೂಜ್ ಸೇರಿ ಹಲವು ಗಣ್ಯರು ಉಪಸ್ಥಿತರಿದ್ದರು.

## ಆಕ್ಟಿವ್ ಆಗದ ನಾಯಕರಿಗೆ ಕೆಪಿಸಿಸಿ ಮೇಜರ್ ಸರ್ಜರಿ

### ಟಾಸ್ಕ್ ಸಮರ್ಪಕವಾಗಿ ನಿಭಾಯಿಸದ್ದಕ್ಕೆ ಕಾಂಗ್ರೆಸ್ ಮೇಜರ್ ಸರ್ಜರಿ

• ಉದಯವಾಹಿನಿ, ಬೆಂಗಳೂರು

ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ನಿರೀಕ್ಷಿತ ಮಟ್ಟದ ಹೆಚ್ಚು ಸೀಟು ಗೆಲ್ಲದ ಕಾರಣ ಹಾಗೂ ಚುನಾವಣೆಯಲ್ಲಿ ಶಾಸಕರಿಗೆ ವಹಿಸಿದ್ದ ಟಾಸ್ಕ್ ಸಮರ್ಪಕವಾಗಿ ನಿಭಾಯಿಸದ್ದಕ್ಕೆ ಇದೀಗ ಕಾಂಗ್ರೆಸ್ ಮೇಜರ್ ಸರ್ಜರಿಗೆ ಮುಂದಾಗಿದೆ. ಆ ಮೂಲಕ ಪಕ್ಷ ಸಂಘಟನೆಗೆ 'ಕೈ'ಪಡೆ ಸಿದ್ಧತೆ ಮಾಡಿದೆ. ಇದಕ್ಕೆ ಪುಷ್ಠಿ ಎಂಬಂತೆ, ನಿಷ್ಕ್ರಿಯರಾಗಿರುವವರ ಶಾಸಕರಿಗೆ ನೀಡಲಾದ ಜವಾಬ್ದಾರಿಯಲ್ಲಿ ಬದಲಾವಣೆ ಮಾಡುವುದು ಖಚಿತ ಎಂದು ಕೆಪಿಸಿಸಿ ಅಧ್ಯಕ್ಷ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

'ಯಾರು ಕಾರ್ಯೋನ್ಮುಖರಾಗಿಲ್ಲ ಅಂತಹವರನ್ನು ಖಂಡಿತವಾಗಿ ಬದಲಾಯಿಸುತ್ತೇವೆ.. ಈ ಬಗ್ಗೆ ಸಿಎಲ್‌ಪಿ ಸಭೆಯಲ್ಲೂ ಹೇಳಿದ್ದೇನೆ ಎಂದು ಮಾಹಿತಿ ನೀಡಿದ್ದಾರೆ.

ಇನ್ನು ಜಿಲ್ಲಾ ಮಟ್ಟದಲ್ಲಿ ಕಾಂಗ್ರೆಸ್ ಕಚೇರಿ ಕಡ್ಡಾಯವಾಗಿ ಇರಬೇಕು. ಶಾಸಕರ ಮನೆಯಲ್ಲಿ ಪಕ್ಷದ ಸಭೆ ಮಾಡಕೂಡದು. ಮನೆಯಲ್ಲಿ ಕಾರ್ಯಕರ್ತರನ್ನು ಭೇಟಿ ಮಾಡಲಿ. ಆದರೆ ಪಕ್ಷದ ಸಭೆಗಳು ಪಕ್ಷದ ಕಚೇರಿಯಲ್ಲೇ ಆಗಬೇಕು. ಇನ್ನು ಅಧಿವೇಶನದ ಬಳಿಕ ಇಬ್ಬರು ಮಂತ್ರಿಗಳು ಪಕ್ಷದ ಕಚೇರಿಯಲ್ಲಿ ಕಾರ್ಯಕರ್ತರನ್ನು ಭೇಟಿ ಮಾಡಿ ಅಹವಾಲು ಸ್ವೀಕರಿಸಲಿದ್ದಾರೆ ಎಂದು ಡಿಕೆಶಿ ತಿಳಿಸಿದ್ದಾರೆ.



## ವಿಧಾನಸೌಧ ಗುಮ್ಮಟದಲ್ಲಿ ಕಾಣಿಸಿಕೊಂಡ ಬಿರುಕು

### ಪರಿಶೀಲನೆ ಬಳಿಕ ಸ್ಪೀಕರ್ ಯುಟಿ ಖಾದರ್ ಹೇಳಿದ್ದೇನು

• ಉದಯವಾಹಿನಿ, ಬೆಂಗಳೂರು

ರಾಜಧಾನಿ ಬೆಂಗಳೂರಿನಲ್ಲಿ ಹಲವಾರು ಐತಿಹಾಸಿಕ ಕಟ್ಟಡಗಳನ್ನು ನೋಡಬಹುದು. ಅದರಲ್ಲಿ ಪ್ರಜಾಪ್ರಭುತ್ವದ ದೇಗುಲ ಎಂದೇ ಕರೆಸಿಕೊಳ್ಳುವ ವಿಧಾನಸೌಧ ಕೂಡ ಒಂದು. ಇದೀಗ ವಿಧಾನಸೌಧದ ಗುಮ್ಮಟದಲ್ಲಿ ಬಿರುಕು ಕಾಣಿಸಿಕೊಂಡಿದ್ದು, ಇಂದು ಸ್ಪೀಕರ್ ಯುಟಿ ಖಾದರ್ ಅವರು ಅಧಿಕಾರಿಗಳ ಜೊತೆಗೆ ಆಗಮಿಸಿ ಪರಿಶೀಲನೆ ನಡೆಸಿದರು. ಹೌದು ವಿಧಾನಸೌಧದ ಪೂರ್ವ ದಿಕ್ಕಿನಲ್ಲಿನ ಗುಮ್ಮಟದಲ್ಲಿ ಬಿರುಕು ಕಾಣಿಸಿಕೊಂಡಿದೆ. ವಿಧಾನಸೌಧದ ಮೊಗಸಾಲೆಯಲ್ಲಿ ಈ ಒಂದು ಗುಮ್ಮಟವಿದ್ದು, ಮಳೆ ನೀರಿನಿಂದ ಬಿರುಕು ಬಿಟ್ಟ ಸ್ಥಳದಿಂದ ಮುಗುಶಾಲೆಯಲ್ಲಿ ನೀರು ಸೋರುತ್ತಿದೆ. ಸ್ಥಳಕ್ಕೆ ಸ್ಪೀಕರ್ ಯುಟಿ ಖಾದರ್ ಅವರು ಆಗಮಿಸಿ ಪರಿಶೀನೇ ನಡೆಸಿದರು.

ಇದೊಂದು ಬಹಳ ಹಿಂದಿನ ವರ್ಷದ ಕಟ್ಟಡ ಕೆಲವೊಂದು ಲೋಪದೋಷಗಳು ಆಗಿರಬಹುದು. ಇದು ನಮ್ಮ ವ್ಯಾಪ್ತಿಗೆ ಬರುವುದಿಲ್ಲ. ಈ ಕುರಿತು ಮುಖ್ಯಮಂತ್ರಿಗಳ ಗಮನಕ್ಕೆ ತರುತ್ತೇನೆ. ಇದು ಡಿಪಿಆರ್ ಲೋಕೋಪಯೋಗಿ ಇಲಾಖೆ ಅಡಿ ಬರುತ್ತದೆ. ಅವರ ಗಮನಕ್ಕೆ ತಂದು ಸರಿಪಡಿಸಲು ಹೇಳುತ್ತೇನೆ ಎಂದರು. ಬಹಳ ಹಳೆಯ ಕಾಲದ ಕಟ್ಟಡವಾಗಿರುವುದರಿಂದ ಈ ರೀತಿ ಆಗಿರಬಹುದು. ಒಂದು ಕಡೆ ಸರಿಪಡಿಸುವಾಗ ಇನ್ನೊಂದು ಕಡೆ ಕೆಲವೊಂದು ಲೋಪದೋಷಗಳಾಗಿರುವುದು ಸಹಜ. ಇದರ ಸ್ವಚ್ಚತೆಗೆ ಸಂಬಂಧಪಟ್ಟ ಹಾಗೆ ಇನ್ನಷ್ಟು ಈ ಒಂದು ಕಟ್ಟಡದ ಸಂಸ್ಕೃತಿಯನ್ನು ಉಳಿಸಿ ಇದರ ಸೌಂದರ್ಯೀಕರಣಕ್ಕೆ ಸಂಬಂಧಪಟ್ಟ ಇಲಾಖೆಗೆ ಸೂಚಿಸಲಾಗುತ್ತದೆ ಎಂದು ತಿಳಿಸಿದರು.

## ತಾಕತ್ತಿದ್ದರೆ ಇ.ಡಿ ವಿರುದ್ಧ ಸಿದ್ದರಾಮಯ್ಯ ದೂರು ನೀಡಲಿ : ಆರ್. ಅಶೋಕ್

● ನಿಗಮದಲ್ಲಿ ನಡೆದಿರುವ ಭ್ರಷ್ಟಾಚಾರದ ಹಣ ಲೋಕಾ ಚುನಾವಣೆಗೆ ಬಳಕೆ ● ನಾಗೇಂದ್ರ ಬಾಯಿಬಿಟ್ಟರೆ ಬುಡಕ್ಕೆ ಬರಬಹುದು ಎಂಬ ಆತಂಕ

• ಉದಯವಾಹಿನಿ, ಬೆಂಗಳೂರು

ಒಂದು ವೇಳೆ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣವನ್ನು ಲೋಕಸಭೆ ಚುನಾವಣೆಗೆ ಬಳಕೆ ಮಾಡಿಕೊಂಡಿಲ್ಲ ಎನ್ನುವುದಾದರೆ ಜಾರಿ ನಿರ್ದೇಶನಾಲಯ (ಇ.ಡಿ) ವಿರುದ್ಧ ತಾಕತ್ತಿದ್ದರೆ ದೂರು ದಾಖಲಿಸಲಿ ಎಂದು ರಾಜ್ಯ ಸರ್ಕಾರಕ್ಕೆ ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಬಹಿರಂಗ ಸವಾಲು ಎಸೆದಿದ್ದಾರೆ.

ನಿಗಮದಲ್ಲಿ ನಡೆದಿರುವ ಭ್ರಷ್ಟಾಚಾರದ ಹಣವನ್ನು ಲೋಕಸಭೆ ಚುನಾವಣೆಗೆ ಬಳಕೆ ಮಾಡಿದೆ ಎಂದು ಇ.ಡಿ ಪತ್ರಿಕಾ ಪ್ರಕಟಣೆಯನ್ನು ಬಿಡುಗಡೆ ಮಾಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಇದನ್ನು ನಿರಾಕರಿಸುವುದಾದರೆ ಇ.ಡಿ ವಿರುದ್ಧ ದೂರು ದಾಖಲಿಸುವ ತಾಕತ್ತು ಇಲ್ಲವೇ ಎಂದು ಪ್ರಶ್ನೆ ಮಾಡಿದರು.

ಇ.ಡಿ ವಶದಲ್ಲಿರುವ ಮಾಜಿ ಸಚಿವ ನಾಗೇಂದ್ರ ನನ್ನ ಹೆಸರು ಬಾಯಿಬಿಟ್ಟರೆ ಬುಡಕ್ಕೆ ಬರಬಹುದು ಎಂಬ ಆತಂಕದಿಂದಲೇ ನೋಟಿಸ್ ನೀಡುವ ಮೊದಲೇ ಜಾಮೀನು ತೆಗೆದುಕೊಳ್ಳಲು ಮುಂದಾಗಿದ್ದಾರೆ. ನನ್ನ ಹೆಸರು ಹೇಳಿ ಎಂದು ನಾಗೇಂದ್ರ ಮೇಲೆ ಇ.ಡಿಯವರು ಒತ್ತಡ ಹಾಕುತ್ತಿದ್ದಾರೆ ಎಂದು ಹೇಳಿರುವುದು ನಾಚಿಕೆಗೇಡಿನ ಸಂಗತಿ. ಒಬ್ಬ ಅಧಿಕಾರಿ ಕನಿಷ್ಟ ಎಂದರೂ 50 ಲಕ್ಷ ನುಂಗಬಹುದು. ನಿಗಮದ ಅಧಿಕಾರಿಗಳಾದ ಪದ್ಮನಾಭ ಮತ್ತು ಪರಶುರಾಮ ನಡೆಸಿರುವ ಸಂಭಾಷಣೆ ಬಿಡುಗಡೆಯಾದ ಮೇಲೂ ನಾಗೇಂದ್ರನನ್ನು ಸಮರ್ಥಿಸಿಕೊಳ್ಳುತ್ತಿರುವ ಸಿದ್ದರಾಮಯ್ಯನವರ ಮರ್ಮ ಎಲ್ಲಾರಿಗೂ ಅರ್ಥವಾಗುತ್ತದೆ ಎಂದು ವ್ಯಂಗ್ಯವಾಡಿದರು.

40 ಕೋಟಿ ಚೆಕ್ ಕೊಟ್ಟಿರುವುದು ಸುಳ್ಳೇ ದೂರವಾಣಿ ಸಂಭಾಷಣೆ ನಡೆಸಿರುವುದು ಸುಳ್ಳೇ ಡೆತ್‌ನೋಟ್ ಕೂಡ ಸುಳ್ಳು ಎಂದು ಹೇಳಬೇಕಿತ್ತು. ಬರೀ ಪದ್ಮನಾಭ ಎಂದು ಸಿಎಂ ಹೇಳಿದರೂ ಅಲ್ಲಿಂದ ಮುಂದಕ್ಕೆ ಹೋಗಲೇ ಇಲ್ಲ ಎಂದು ತರಾಟೆಗೆ ತೆಗೆದುಕೊಂಡರು.

ನಾವು ವಾಲ್ಮೀಕಿ ಹಗರಣದ ಬಗ್ಗೆ ಮಾತನಾಡಿದರೆ ಸಿದ್ದರಾಮಯ್ಯನವರು ಬಿಜೆಪಿ ಹಗರಣದ ಬಗ್ಗೆ ಮಾತನಾಡುತ್ತಿದ್ದಾರೆ. ಅಕಾರಕ್ಕೆ ಬಂದು ಒಂದು ವರ್ಷವಾಯಿತು. ನಮ್ಮ ಮೇಲೆ 40% ಆರೋಪ ಮಾಡಿದ್ದೀರಿ. 15 ತಿಂಗಳು ಏನು ಮಾಡುತ್ತಿದ್ದೀರಿ ನೀವು, ರಾಹುಲ್ ಗಾಂ ಡಿ.ಕೆ.ಶಿವಕುಮಾರ್ ಕಟಕಟೆಯಲ್ಲಿ ನಿಂತಿರಲಿಲ್ಲವೇ ಎಂದು ಪ್ರಶ್ನೆ ಮಾಡಿದರು. ಬಿಜೆಪಿ ಸರ್ಕಾರದ ಹಗರಣಗಳನ್ನು ತನಿಖೆ ಮಾಡಿಸುತ್ತೇವೆ ಎಂದು ಹೇಳಿದ್ದೀರಿ. ಬಂದ ಮೂರು ತಿಂಗಳಲ್ಲಿ ಅಫಿಡೆವಿಟ್ ಸಲ್ಲಿಸಿದಾಯಿತು. ಮೂರಾಯ್ತು, ಆರಾಯ್ತು, 15 ತಿಂಗಳಾಯ್ತು ವರದಿ ಎಲ್ಲಿ ಹೋಯ್ತು ಎಂದು ಪ್ರಶ್ನೆಗಳ ಪ್ರಶ್ನೆ ಮಾಡಿದರು.

ಸಿದ್ದರಾಮಯ್ಯನವರೇ ನಿಮಗೆ ಉಳಿದಿರುವುದು ಕೇವಲ ಮೂರುವರೆ ವರ್ಷ ಮಾತ್ರ. ನಮ್ಮ ಮೇಲೆ ನೀವು 20 ಹಗರಣಗಳ ಆರೋಪ ಮಾಡಬಹುದು. ನಾವು ನಿಮ್ಮ ಮೇಲೆ 70 ಹಗರಣಗಳ ಸಾಕ್ಷಿ ಸಮೇತ ಬುಕ್ ಬಿಡುಗಡೆ ಮಾಡುತ್ತೇವೆ. ಇದು ಸಿಎಜಿ ವರದಿಯ ಲೆಕ್ಕಗಳೆಂದು ಅಶೋಕ್ ಪುಸ್ತಕವನ್ನು ಬಿಡುಗಡೆ ಮಾಡಿದರು.

ನಿಗಮದಲ್ಲಿರುವ ಹಣವನ್ನು ಕರ್ನಾಟಕದ ಬಾರ್‌ಗಳಿಗೆ ಹಾಕಿಸಿ ದರೆ ಗೊತ್ತಾಗಬಹುದೆಂಬ ಕಾರಣದಿಂದ ತೆಲಂಗಾಣದ ಬಾರ್‍ಗೆ ಹಾಕಿಸಿದ್ದೀರಿ. ಹಣವನ್ನು ಡ್ರಾ ಮಾಡಿಕೊಂಡಿದ್ದೀರಿ. ರಾಜ್ಯ ಸರ್ಕಾರವೇ ಹಣವನ್ನು ತುಂಬಬೇಕು. ಜೈಲಿನಲ್ಲಿರುವ ನಾಗೇಂದ್ರನನ್ನು ಏಕೆ ಬಿಡಿಸಿಕೊಂಡು ಬಂದಿಲ್ಲ ಎಂದು ಪ್ರಶ್ನಿಸಿದರು.

ಎಸ್‌ಐಟಿ ರಚನೆ ಮಾಡಿದ್ದೇ ಈ ಹಗರಣವನ್ನು ಮುಚ್ಚಿ ಹಾಕಲು. ಇದು ನಿಜವಾದ ಎಸ್‌ಐಟಿಯೇ ಅಲ್ಲ. ಸಿದ್ದರಾಮಯ್ಯ, ಶಿವಕುಮಾರ್, ಸುರ್ಜೆವಾಲ ಕೃಪಾಪೋಷಿತ ನಾಟಕ ಮಂಡಳಿ. ಒಂದು ತಿಂಗಳಾದರೂ ಹಗರಣದ ಪ್ರಮುಖ ಆರೋಪಿಗಳಿಗೆ ನೋಟಿಸ್ ಕೊಡಲಿಲ್ಲ. ಸಾಹೇಬ್ರು ಹೇಳಿದ ಮೇಲೆ ನಾವೇನು ಮಾಡುವುದು ಎಂದು ವಿಚಾರಣೆಯನ್ನು ಕಬೋರ್ಡ್‌ಗೆ ಹಾಕಲು ಅಧಿಕಾರಿಗಳು ಮುಂದಾಗಿದ್ದರು ಎಂದು ದೂರಿದರು.

> ರಾಜ್ಯದಲ್ಲಿ ಮಳೆಯಿಂದ ಹಾನಿಗೊಳಗಾಗಿರುವ ಪ್ರದೇಶದಲ್ಲಿ ನಾನು ಮತ್ತು ಕುಮಾರಸ್ವಾಮಿ ಭೇಟಿ ಕೊಡುತ್ತೇವೆ. ಅನೇಕ ಕಡೆ ಅನಾಹುತ ಸಂಭವಿಸಿದರೂ ಸಂಬಂಧಪಟ್ಟ ಸಚಿವರು ಭೇಟಿ ನೀಡಿಲ್ಲ. ಜನರು ತತ್ತರಿಸಿ ಹೋಗಿದ್ದಾರೆ. ಮಳೆ ಬಂದು 15 ದಿನವಾಗಿದೆ. ಸರ್ಕಾರದ ಕತ್ತೆ ಕಾಯುತ್ತಿದೆಯೇ.
> -ಆರ್. ಅಶೋಕ್, ವಿಪಕ್ಷ ನಾಯಕ



### ಕಂಡ ಕಂಡವರ ಮೇಲೆ ಆರೋಪ

ಮಾಜಿ ಸಚಿವ ಎಚ್.ಡಿ.ರೇವಣ್ಣ ಅವರನ್ನು ಜೈಲಿಗೆ ಹಾಕಲಾಯಿತು. ಆದರೆ ವಾಲ್ಮೀಕಿ ಹಗರಣವನ್ನು ಮುಚ್ಚಲು ಮುಂದಾಗಿದ್ದರು. ಸಿದ್ದರಾಮಯ್ಯನವರು ಎಷ್ಟು ಹತಾಶರಾಗಿದ್ದಾರೆ ಎಂದರೆ ಸುದ್ದಿಗೋಷ್ಠಿಯಲ್ಲಿ ಕೇಂದ್ರ ಸರ್ಕಾರದ ಪ್ರಹ್ಲಾದ್ ಜೋಷಿ, ಎಚ್.ಡಿ.ಕುಮಾರಸ್ವಾಮಿ ಹಾಗೂ ಬಿಜೆಪಿ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್. ಸಂತೋಷ್ ಹೆಸರೇಳಿದ್ದಾರೆ. ಹಣವನ್ನು ನುಂಗಿ ನೀರು ಕುಡಿದಿರುವ ಇವರು ಈಗ ಕಂಡ ಕಂಡವರ ಮೇಲೆ ಆರೋಪ ಮಾಡುತ್ತಿದ್ದಾರೆ ಎಂದು ತರಾಟೆಗೆ ತೆಗೆದುಕೊಂಡರು.

ಈ ದಿನದ ದರ ಪೆಟ್ರೋಲ್: 103.44 ₹/L ಡೀಸೆಲ್ : 89.97 ₹/L ಬಂಗಾರ: ₹7,397/Gram24ct ₹6,780/Gram22ct ಬೆಳ್ಳಿ: ₹91.60/Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಜಡ ಪಂಚಭೂತ ಧರ್ಮಗಳಿಲ್ಲವಾತ್ಮಂಗೆ

ನಿಜಗುಣರ ಪರಮಾನುಭವ ಬೋಧೆಯ ಮಾತು. ದೇಹ ಪಂಚಭೂತಾತ್ಮಕ. ದೇಹದಲ್ಲಿನ ಗುಣಧರ್ಮಗಳು ಪಂಚಭೂತಗಳವು, ಹೊರತು ಆತ್ಮನ ಗುಣಧರ್ಮಗಳಲ್ಲ. ತಾನು ಚೈತನ್ಯ, ದೇಹ ಜಡ. ಜಡಧರ್ಮ ಚೈತನ್ಯದ್ದಾಗದು, ಚೈತನ್ಯದ ಧರ್ಮ ಜಡದ್ದಾಗದು. ನರ ಮೂಳೆ ಮಾಂಸ ಚರ್ಮ ಕೂದಲು ಇವು ಭೂಮಿಯ ಅಂಶಗಳಾಗಿದ್ದು ಇವುಗಳಲ್ಲಿನ ಕಠಿಣತೆ ಭೂಮಿಯ ಧರ್ಮ ಹೊರತು ಆತ್ಮನದ್ದಲ್ಲ. ಮೂತ್ರ ಪಿತ್ತ ವೀರ್ಯ ರಕ್ತ ಕಫ ಇವುಗಳಲ್ಲಿನ ದ್ರವಾಂಶ ಜಲದ್ದು ಹೊರತು ಆತ್ಮನದ್ದಲ್ಲ. ಸಂಭೋಗ ಹಸಿವು ಬಾಯಾರಿಕೆ ನಿದ್ರೆ ಆಲಸ್ಯ ಇವು ಅಗ್ನಿಯ ಧರ್ಮಗಳು, ಆತ್ಮನ ಧರ್ಮಗಳಲ್ಲ. ಹರಿಯುವುದು (ನಡೆಯುವುದು) ಹಾರುವುದು ತಡೆಯುವುದು ಸುಳಿಯುವುದು ನಿಲ್ಲುವುದು ಇವು ವಾಯುವಿನ ಧರ್ಮಗಳು,ಆತ್ಮನ ಧರ್ಮಗಳಲ್ಲ. ಇನ್ನು ಕಾಮ ಕ್ರೋಧ ಲೋಭ ವ್ಯಾಮೋಹ ಭಯ ಇವು ಆಕಾಶದ ಗುಣಧರ್ಮಗಳು ಹೊರತು ಆತ್ಮನ ಗುಣಧರ್ಮಗಳಲ್ಲ. ಹೀಗೆ ದೇಹಧರ್ಮಗಳೇ ಬೇರೆ, ಆತ್ಮನ ಧರ್ಮಗಳೇ ಬೇರೆ. ಆದಾಗ್ಯೂ ಒಂದರ ಧರ್ಮವನ್ನು ಮತ್ತೊಂದರಲ್ಲಿ ಆರೋಪಿಸಿಕೊಂಡಿದ್ದರಿಂದ ನಾನು ಹುಟ್ಟುತ್ತೇನೆ ಸಾಯುತ್ತೇನೆ ಇತ್ಯಾದಿಯಾಗಿ ದೇಹಧರ್ಮ ಆತ್ಮನಲ್ಲಿ, ನೋಡುತ್ತೇನೆ ತಿಳಿಯುತ್ತೇನೆ ಇತ್ಯಾದಿಯಾಗಿ ಆತ್ಮನ ಧರ್ಮ ದೇಹದಲ್ಲಿ ತಪ್ಪು ಗ್ರಹಿಕೆಯಾಗಿದೆ. ಈ ತಪ್ಪು ಗ್ರಹಿಕೆಯಿಂದಾಗಿಯೇ ಜೀವನು ದುಃಖಿಯಾಗಿದ್ದಾನೆ. ಪ್ರತ್ಯೇಕಿಸಿ ಯಥಾರ್ಥವಾಗಿ ತಿಳಿದರೆ ತಾನೇ ಸುಖೀ.

# ಇಂದು ರಾಷ್ಟ್ರೀಯ ತಿರಂಗಾ ಧ್ವಜ ದಿನ: ಗೌರವಿಸೋಣ

## ■ ಸೈನ್ಯಗಳು ಎಷ್ಟು ಮುಖ್ಯವೋ, ಅದೇ ರೀತಿಯಲ್ಲಿ ರಾಷ್ಟ್ರದ ಗುರು ರಾಷ್ಟ್ರ ಧ್ವಜವು ಅಷ್ಟೇ ಪ್ರಮುಖ

• ಉದಯವಾಹಿನಿ, ಬೆಂಗಳೂರು

ಒಂದು ದೇಶಕ್ಕೆ ಅದರ ಇತಿಹಾಸ, ಸಂಪನ್ಮೂಲಗಳು, ಜನಸಂಖ್ಯೆ ಸರ್ಕಾರ, ಸೈನ್ಯಗಳು ಎಷ್ಟು ಮುಖ್ಯವೊ, ಅದೇ ರೀತಿಯಲ್ಲಿ ರಾಷ್ಟ್ರದ ಗುರು ರಾಷ್ಟ್ರ ಧ್ವಜವು ಅಷ್ಟೇ ಪ್ರಮುಖವಾಗಿರುತ್ತದೆ. ಜನರಲ್ಲಿ ದೇಶಾಭಿಮಾನ ಸೃಷ್ಟಿಸುವುದು, ಐತಿಹಾಸಿಕ ಸ್ಮರಣಾರ್ಥವಾಗಿ, ಏಕತೆ, ಗುರುತಿನ ಸಂಕೇತಕ್ಕೆ, ಶೈಕ್ಷಣಿಕ ಮೌಲ್ಯ, ದೇಶ ಭಕ್ತಿಯ ಹಾಗೂ ನಾವೆಲ್ಲರು ಒಂದೇ ಎಂಬ ಭಾವನೆ ಮೂಡಿಸುವುದಕ್ಕೆ ರಾಷ್ಟ್ರ ಧ್ವಜವು ಸಂಕೇತವಾಗಿರುತ್ತದೆ. ಭಾರತೀಯರ ಇತಿಹಾಸದಲ್ಲಿ ಪಾಶ್ಚಿಮಾತ್ಯ ದೇಶಗಳಿಂದ ಸ್ವಾತಂತ್ರ್ಯ ಪಡೆಯಲು ಅನೇಕ ವಿಷಯಗಳು ಪ್ರೇರಣೆಯನ್ನು ನೀಡಿದ್ದು ಅದರಲ್ಲಿ ರಾಷ್ಟ್ರೀಯ ಧ್ವಜ ಎಂಬ ಪರಿಕಲ್ಪನೆಯು ಪ್ರಮುಖ ಪಾತ್ರ ವಹಿಸಿದೆ. ಆದ್ದರಿಂದ 1947 ರಂದು ನಡೆದಸಂವಿಧಾನ ಸಭೆಯಲ್ಲಿ ತ್ರಿವರ್ಣ ಧ್ವಜವನ್ನು ಪರಿಚಯಸಲಾಗುತ್ತದೆ. ಈ ಕಾರಣದಿಂದ ದೇಶದ ಧಜವನ್ನು ಗೌರವಿಸುವ ಉದ್ದೇಶದಿಂದ ಜುಲೈ 22 ರಂದು ರಾಷ್ಟ್ರೀಯ ಧ್ವಜ ದಿನವಾಗಿ ಆಚರಣೆಯನ್ನು ಮಾಡಲಾಗುತ್ತದೆ.

ಭಾರತದ ಸ್ವಾತಂತ್ರ್ಯ ಹೋರಾಟದ ಸಮಯದಲ್ಲಿ ಭಾರತೀಯ ಗೀತೆಗಳು, ಘೋಷಣೆಗಳು, ಧ್ಯೇಯವಾಕ್ಯಗಳು, ಜೊತೆಗೆ ಹಲವಾರು ಮಾದರಿಗಳ ಜೊತೆಗೆ ದೇಶದಲ್ಲಿ ಬಾವುಟಗಳ ಮೂಲಕ ಸ್ವಾತಂತ್ರ್ಯ ಹೋರಾಟವನ್ನು ಮಾಡುತ್ತಾ ಬಂದಿದ್ದಾರೆ. ನಮ್ಮ ರಾಷ್ಟ್ರ ಧ್ವಜವು ಬೆಳೆದು ಬಂದ ಹಾದಿಯನ್ನು ನೋಡುವುದಾದರೆ 1857ರ ಪ್ರಥಮ ಸ್ವಾತಂತ್ರ್ಯ ಸಂಗ್ರಾಮವು ಭಾರತೀಯರಾದ ನಾವೆಲ್ಲ ಒಂದು ಎಂಬ ಭಾವನೆ ಮೂಡಿಸುತ್ತದೆ, ಅಲ್ಲಿಂದ ಭಾರತೀಯ ಧ್ವಜದ ಕಲ್ಪನೆ ರೂಪುಗೊಳ್ಳುತ್ತದೆ. ನಂತರದ ದಿನಗಳಲ್ಲಿ 1907ರ ಆಗಸ್ಟ್ 22 ರಂದು ಜರ್ಮನಿಯ ಸ್ಟಟ್‌ಗಾಡ್‌ನಲ್ಲಿ ನಡೆದ ಅಂತರಾಷ್ಟ್ರೀಯ ಸಮಾಜವಾದಿ ಸಮ್ಮೇಳನದಲ್ಲಿ ಭಿಕಾಜಿ ಕಾಮಾ ಅವರು ಗಮನ ಸೆಳೆಯಲು ಹೊಸ ಧ್ವಜವನ್ನು ಹಾರಿಸಿದರು. ಆದರೆ ಅದು ವಿಫಲವಾಯಿತು. 1916 ರಲ್ಲಿ ಪಿಂಗಲಿ ವೆಂಕಯ್ಯ ಅವರು ಮೂವತ್ತು ಹೊಸ ವಿನ್ಯಾಸಗಳನ್ನು ಮದ್ರಾಸ್ ಹೈಕೋರ್ಟಿಗೆ ಸಲ್ಲಿಸಿದರು.

ಅದೇ ವರ್ಷ ಆನಿ ಬೆಸೆಂಟ್ ಮತ್ತು ಬಾಲಗಂಗಾಧರ ತಿಲಕ್ ಅವರು ಹೋಮ್ ರೂಲ್ ಚಳುವಳಿಯ ಭಾಗವಾಗಿ ಹೊಸ ಧ್ವಜವನ್ನು ಅಳವಡಿಸಿಕೊಂಡರು. ಏಪ್ರಿಲ್ 1921 ರಲ್ಲಿ ಮಹಾತ್ಮ ಗಾಂಧಿಯವರು ತಮ್ಮ ಜರ್ನಲ್ ಇಂಡಿಯಾದಲ್ಲಿ ಭಾರತೀಯ ಧ್ವಜದ ಅಗತ್ಯತೆಯ ಬಗ್ಗೆ ಬರೆದರು.

ಗಾಂಧಿಜಿಯವರು ಪಿಂಗಳಿ ವೆಂಕಯ್ಯ ಅವರಿಗೆ ಕೆಂಪು ಮತ್ತು ಹಸಿರು ಬಣ್ಣದಲ್ಲಿ ನೂಲುವ ಚಕ್ರ ಹೊಂದಿದ ಧ್ವಜವನ್ನು ಪ್ರಸ್ತಾಪಿಸಿದರು. 1923ರಲ್ಲಿ ಸಾರ್ವಜನಿಕ ಮೆರವಣಿಗೆಗಳು ಮತ್ತು ಸಾಮಾನ್ಯ ಜನರ ಪ್ರದರ್ಶನದ ಕಲ್ಪನೆಯೊಂದಿಗೆ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರು ಧ್ವಜ ಚಳುವಳಿಯನ್ನು ಪ್ರಾರಂಭಿಸಿದರು. 1931ರ ಸಭೆಯಲ್ಲಿ ಸ್ವರಾಜ್ ಧ್ವಜವು ಅಧಿಕೃತ ಧ್ವಜವಾಯಿತು. ಆ ವೇಳೆಗಾಗಲೇ ಧ್ವಜವು ಸ್ವಾತಂತ್ರ್ಯ ಚಳುವಳಿಯ ಸಂಕೇತವಾಯಿತು.




**ಜನರಲ್ಲಿ ದೇಶಾಭಿಮಾನ ಸೃಷ್ಟಿ**

ರಾಷ್ಟ್ರಧ್ವಜವನ್ನು ಗೌರವಿಸುವುದರಿಂದ ನಾಗರಿಕರಲ್ಲಿ ರಾಷ್ಟ್ರೀಯ ಏಕತೆ ಮತ್ತು ಸಮಗ್ರತೆಯ ಮನೋಭಾವ ಹೆಚ್ಚುತ್ತದೆ. ನಮ್ಮ ಧ್ವಜದ ಇತಿಹಾಸ, ಮಹತ್ವ ಮತ್ತು ಸಾಂಕೇತಿಕತೆಯ ಬಗ್ಗೆ ಸಾರ್ವಜನಿಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ತಿಳಿಸಬೇಕು.

> ಅಂತಿಮವಾಗಿ ಭಾರತ ದೇಶ ಸ್ವಾತಂತ್ರ್ಯ ಪಡೆಯುವ ಕೆಲವು ದಿನಗಳ ಮೊದಲು ಅಂದರೆ 1947 ರ 22 ಜುಲೈ ರಂದು ನಡೆದ ಸಂವಿಧಾನ ಸಭೆಯಲ್ಲಿ ಆಳವಾದ ಕೇಸರಿ, ಬಿಳಿ ಮತ್ತು ಗಾಢ ಹಸಿರು ಸಮ ಪ್ರಮಾಣದ ತ್ರಿವರ್ಣ ಹಾಗೂ ಬಳಿ ಬಣ್ಣದ ಮಧ್ಯದಲ್ಲಿ ನೀಲಿ ಅಶೋಕ ಚಕ್ರವನ್ನು ಹೊಂದಿದ ಧ್ವಜವನ್ನು ಪ್ರಸ್ತಾಪಿಸಿದರು. ಈ ಧ್ವಜವು 1947ರ ಆಗಸ್ಟ್ 15 ರಂದು ಭಾರತೀಯ ರಾಷ್ಟ್ರೀಯ ಧ್ವಜವಾಗಿ ಹಾರಿಸಲಾಯಿತು.

> ಸಾರ್ವಜನಿಕರು ತಮ್ಮ ದೇಶಕ್ಕಾಗಿ ಎಷ್ಟು ಗೌರವ ಮತ್ತು ಭಕ್ತಿಯನ್ನು ಹೊಂದಿದ್ದಾರೋ ಅಷ್ಟೇ ಪ್ರಮಾಣದಲ್ಲಿ ರಾಷ್ಟ್ರೀಯ ಧ್ವಜಕ್ಕೂ ಗೌರವನ್ನು ನಿಡಬೇಕು. ಧ್ವಜಕ್ಕೆ ಅಗೌರವನ್ನು ಎಂದಿಗೂ ತೊರಿಸದೆ ಇತತರಿಗೆ ಮಾದರಿಯಾಗಿ ಇರಬೇಕು. ಬೇರೆಯಾದರು ಧ್ವಜಕ್ಕೆ ಚ್ಯುತಿ ಬರುವಂತಹ ಕೆಲಸ ಮಾಡಿದರೆ ಅವರಿಗೆ ಅರಿವು ಮೂಡಿಸೋಣ, ಎಲ್ಲರೂ ರಾಷ್ಟ್ರ ಧ್ವಜವನ್ನು ಗೌರವಿಸೋಣ.

## ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಬಿಗ್ ಶಾಕ್; ಪಾಲಿಕೆಯಿಂದ ನೋಟಿಸ್ ಜಾರಿ

• ಉದಯವಾಹಿನಿ, ಬೆಂಗಳೂರು

ಆಸ್ತಿ ತೆರಿಗೆ ಉಳಿಸಿಕೊಂಡಿರುವ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಬಿಬಿಎಂಪಿ ನೋಟಿಸ್ ಜಾರಿ ಮಾಡಿದೆ. ಶೇ.100ರಷ್ಟು ತೆರಿಗೆ ಪಾವತಿಸುವಂತೆ ಬಿಬಿಎಂಪಿ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ತಿಳಿಸಿತ್ತು. ಆದರೆ ಇದಕ್ಕೆ ವಿರೋಧ ವ್ಯಕ್ತಪಡಿಸಿರುವ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟ ಆಸ್ತಿ ತೆರಿಗೆ ಪಾವತಿಸದೇ ಪ್ರತಿಭಟಿಸಿದೆ. ಈಗಾಗಲೇ ಶೇ.25ರಷ್ಟು ತೆರಿಗೆ ಪಾವತಿಸಲಾಗುತ್ತಿದೆ. ಬೇರೆ ರಾಜ್ಯಗಳಲ್ಲಿ ಶಿಕ್ಷಣ ಸಂಸ್ಥೆಗಳಿಗೆ ತೆರಿಗೆ ವಿನಾಯಿತಿ ಇದೆ. ಈಗ ಬಿಬಿಎಂಪಿ ಶೇ.100ರಷು ತೆರಿಗೆ ಪಾವತಿಸಲು ಸೂಚಿಸಿರುವುದು ಖಂಡನೀಯ ಎಂದು ಖಾಸಗಿ ಶಿಕ್ಷಣ ಸಂಸ್ಥೆಗಳು ಆಕ್ರೋಶ ವ್ಯಕ್ತಪಡಿಸಿವೆ. ಈ ಬೆಳವಣಿಗೆ ಬೆನ್ನಲ್ಲೇ ಇದೀಗ ಬಿಬಿಎಂಪಿ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ನೂರರಷ್ಟು ತೆರಿಗೆ ಪಾವತಿಸುವಂತೆ ಸೂಚಿಸಿ ನೋಟಿಸ್ ಜಾರಿ ಮಾಡಿದೆ.

## ಕೆಂಪು ಹಣ್ಣು! ಶತಕದ ಗಡಿ ದಾಟಿದ ಟೊಮ್ಯಾಟೋ ಬೆಲೆ ಏರಿಕೆ

• ಉದಯವಾಹಿನಿ, ಬೆಂಗಳೂರು

ದೇಶದೆಲ್ಲೆಡೆ ಕೆಂಪು ಹಣ್ಣಿನ ಹವಾ ಜೋರಾಗಿದೆ. ಟೊಮ್ಯಾಟೋ ಬೆಲೆ ಕೇಳಿದ್ರೆ ಸಾಕು ತಲೆ ತಿರುಗಿ ಬೀಳುವಂತಾಗಿದೆ. ಟೊಮ್ಯಾಟೋ ಬೆಳೆದವರಿಗೆ ಒಳ್ಳೆಯ ಸಮಯ ಬಂದಿದ್ದರೆ, ಅದನ್ನು ಖರೀದಿಸುವ ಗ್ರಾಹಕರು ಇದೀಗ ಕಣ್ಣೀರಿಡುವಂತಾಗಿದೆ. ಮಳೆಗಾಲದ ನಡುವೆ ಟೊಮ್ಯಾಟೋ ಬೆಲೆ ದಿನದಿಂದ ದಿನಕ್ಕೆ ಏರುತ್ತಿದೆ.ಕೆಲ ದಿನಗಳಿಂದ 79 ರಿಂದ 90 ರೂಪಾಯಿ ಒಳಗೆ ಏರಿಳಿತ ಕಾಣುತ್ತಿದ್ದ ಟೊಮ್ಯಾಟೋ ಬೆಲೆ ಇದೀಗ ಆನ್‌ಲೈನ್ ಮಾರ್ಕೆಟ್‌ನಲ್ಲಿ ಶತಕದ ಗಡಿ ದಾಟಿದೆ. ಟೊಮ್ಯಾಟೋ ಹೆಚ್ಚಾಗಿ ಬೆಳೆಯುವ ಬೆಂಗಳೂರಿನ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಭಾರಿ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಟೊಮ್ಯಾಟೋ ಬೆಲೆಯಲ್ಲಿ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ ಎಂದು ಮಾರುಕಟ್ಟೆಯ ತಜ್ಞರು ಅಂದಾಜಿಸಿದ್ದಾರೆ. ಭಾರಿ ಮಳೆಯ ಜತೆಗೆ ರೋಗಗಳು ಮತ್ತು ಕಡಿಮೆ ಇಳುವರಿ ಕೂಡ ಟೊಮ್ಯಾಟೋ ಬೆಲೆ ಏರಿಕೆಗೆ ಕಾರಣವಾಗಿದೆ. ಕೆಲ ಆನ್‌ಲೈನ್ ಡೆಲಿವರಿ ಪ್ಲಾಟ್‌ಫಾರ್ಮ್‌ಗಳಲ್ಲಿ ಪ್ರತಿ ಕೆಜಿ ಟೊಮ್ಯಾಟೋ 100 ರಿಂದ 104 ರೂಪಾಯಿಗೆ ಮಾರಾಟವಾಗುತ್ತಿದ್ದರೆ, ಚಿಲ್ಲರೆ ಅಂಗಡಿಗಳಲ್ಲಿಯೂ ಸಹ ನೂರರ ಗಡಿ ಸಮೀಪ ತಲುಪಿದೆ.

## ಜೈಲಿನಲ್ಲಿ ಮನೆ ಊಟ, ಹಾಸಿಗೆ, ಪುಸ್ತಕ ನೀಡಲು ಮನವಿ: ದರ್ಶನ್ ಅರ್ಜಿ ಸಲ್ಲಿಕೆ

• ಉದಯವಾಹಿನಿ, ಬೆಂಗಳೂರು

ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಪರಪ್ಪನ ಅಗ್ರಹಾರ ಜೈಲು ಸೇರಿರುವ ನಟ ದರ್ಶನ್, ಮನೆ ಊಟ, ಹಾಸಿಗೆ, ಪುಸ್ತಕ ನೀಡುವಂತೆ ಕೋರಿ ಕೋರ್ಟ್ ಮೆಟ್ಟಿಲೇರಿದ್ದಾರೆ. ಜೈಲಿನ ಊಟ ಒಗ್ಗೂಡದ ಕಾರಣಕ್ಕೆ ತನಗೆ ಜೈಲಿನಲ್ಲಿ ಮನೆ ಊಟ ನೀಡುವಂತೆ ಹಾಗೂ ಬಟ್ಟೆ, ಹಾಸಿಗೆ, ಪುಸ್ತಕ ನೀಡುವಂತೆ ಕೋರಿ ನಟ ದರ್ಶನ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಹೈಕೋರ್ಟ್ ಪೀಠ, ಈ ಬಗ್ಗೆ ಮ್ಯಾಜಿಸ್ಟ್ರೇಟ್ ಕೋರ್ಟ್‌ಗೆ ಅರ್ಜಿ ಸಲ್ಲಿಸಲು ಸೂಚಿಸಿತ್ತು. ಈ ಹಿನ್ನೆಲೆಯಲ್ಲಿ ಇದೀಗ ನಟ ದರ್ಶನ್ ಮ್ಯಾಜಿಸ್ಟ್ರೇಟ್ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಜೈಲಿನಲ್ಲಿ ಮನೆ ಊಟ, ಬಟ್ಟೆ, ಹಾಸಿಗೆ, ಪುಸ್ತಕ ವಿಚಾರವಾಗಿ ನಟ ದರ್ಶನ್ ಸಲ್ಲಿರುವ ಅರ್ಜಿ ವಿಚಾರಣೆಯನ್ನು ಮ್ಯಾಜಿಸ್ಟ್ರೇಟ್ ಕೋರ್ಟ್ ಜುಲೈ 26ರೊಳಗೆ ನಡೆಸಿ, ತೀರ್ಮಾನ ಕೈಗೊಳ್ಳಬೇಕಿದೆ.

## ಬೆಂಗಳೂರಿನಲ್ಲಿ 2 ಕೋಟಿಗೂ ಅಧಿಕ ಮೌಲ್ಯದ ಶ್ರೀಗಂಧದ ತುಂಡುಗಳು ಜಪ್ತಿ

• ಉದಯವಾಹಿನಿ, ಬೆಂಗಳೂರು

ರಾಜಧಾನಿ ಬೆಂಗಳೂರಿನಲ್ಲಿ ಅಕ್ರಮವಾಗಿ ಸಂಗ್ರಹಿಸಿಟ್ಟಿದ್ದ ಶ್ರೀಗಂಧದ ತುಂಡುಗಳನ್ನು ಅರಣ್ಯ ಜಾಗೃತ ದಳ ಸಿಬ್ಬಂದಿ ದಾಳಿ ನಡೆಸಿ ಜಪ್ತಿ ಮಾಡಿದ್ದಾರೆ.

ಬೆಂಗಳೂರಿನ ಕೆ.ಆರ್.ಪುರಂ ಬಳಿಯ ಐಟಿಐ ಫ್ಯಾಕ್ಟರಿಯ ಗೋಡೌನ್ ಮೇಲೆ ದಾಳಿ ನಡೆಸಿರುವ ಅರಣ್ಯ ಜಾಗೃತ ದಳ ಸಿಬ್ಬಂದಿ, ಬರೋಬ್ಬರಿ 2 ಕೋಟಿಗೂ ಅಧಿಕ ಮೌಲ್ಯದ ಶ್ರೀಗಂಧದ ತುಂಡುಗಳನ್ನು ವಶಕ್ಕೆ ಪಡೆದಿದ್ದಾರೆ. ಅಕ್ರಮವಾಗಿ ಗಂಧದ ತುಂಡುಗಳನ್ನು ಸಾಗಾಟ ಮಾಡಲೆಂದು ಸಂಗ್ರಹಿಸಿ ಇಡಲಾಗಿತ್ತು. ಈ ಬಗ್ಗೆ ಮಾಹಿತಿ ಬಂದ ಹಿನ್ನೆಲೆಯಲ್ಲಿ ದಾಳಿ ನಡೆಸಲಾಗಿದ್ದು ಆರೋಪಿಗಳನ್ನು ಬಂಧಿಸಲಾಗಿದೆ.

## ಡ್ರೈವಿಂಗ್ ಕಲಿಸುವ ನೆಪದಲ್ಲಿ ಕಿರುಕುಳ

• ಉದಯವಾಹಿನಿ, ಬೆಂಗಳೂರು

ಯುವತಿಗೆ ಲೈಂಗಿಕ ಕಿರುಕುಳ ನೀಡಿದ್ದಕ್ಕೆ ಕಾರ್ ಡ್ರೈವಿಂಗ್ ಕಲಿಸುವಾತನನ್ನು ಬಂಧಿಸಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ಡ್ರೈವಿಂಗ್ ಕಲಿಸುವ ನೆಪದಲ್ಲಿ ಯುವತಿಗೆ ಲೈಂಗಿಕ ಕಿರುಕುಳ ನೀಡಲು ಯತ್ನಿಸಿದ ಟ್ರೈನರ್ ಅಣ್ಣಪ್ಪನೇ ಆರೋಪಿ 18 ವರ್ಷದ ಯುವತಿಗೆ ಕಿಕಾರ್ ಡ್ರೈವಿಂಗ್ ಕಲಿಯಲು ಡ್ರೈವಿಂಗ್ ಸ್ಕೂಲ್ ಒಂದರಲ್ಲಿ ತರಬೇತಿ ಪಡೆಯುತ್ತಿದ್ದಳು. ಈಕೆ ತರಬೇತಿಯನ್ನು ಮುಗಿಸಿದ ಬಳಿಕ ನಿಮ್ಮದೇ ಸ್ವಂತ ಕಾರಿನಲ್ಲಿ ವಿಶೇಷ ತರಬೇತಿ ನೀಡುವುದಾಗಿ ಅಣ್ಣಪ್ಪ ಹೇಳಿದ್ದ. ಇದಕ್ಕಾಗಿ 15 ದಿನಗಳಿಗೆ 10,500 ರೂ ಶುಲ್ಕವನ್ನೂ ಪಡೆದಿದ್ದ. ಜುಲೈ 7ರಂದು ಬೆಳಗ್ಗೆ ಯುವತಿಗೆ ತರಬೇತಿ ನೀಡುತ್ತಿದ್ದ ಆರೋಪಿ, ಕಾರ್ಡ್ ರೋಡ್ ಫ್ಲೈಓವರ್ ಬಳಿ ಬಂದಾಗ ತನ್ನ ಮರ್ಮಾಂಗ ಪ್ರದರ್ಶಿಸಿ ಯುವತಿಗೆ ಕಿರುಕುಳ ನೀಡಿದ್ದಾನೆ. ದಿಕ್ಕು ತೋಚದಂತಾದ ಯುವತಿ ಕಾರಿನಿಂದ ಇಳಿದು ಹೋಗಿದ್ದಾಳೆ. ನಂತರ ಬಸವೇಶ್ವರ ನಗರ ಠಾಣೆಯಲ್ಲಿ ಯುವತಿ ದೂರು ದಾಖಲಿಸಿದ್ದಳು. ದೂರಿನನ್ವಯ ಪ್ರಕರಣ ದಾಖಲಿಸಿಕೊಂಡ ಪೊಲೀಸರು ಆರೋಪಿಯನ್ನ ಬಂಧಿಸಿ ಜೈಲಿಗಟ್ಟಿದ್ದಾರೆ.

## ಜನ ಸಾಮಾನ್ಯರು ಅರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು: ಸಲಹೆ

• ಉದಯವಾಹಿನಿ, ಕೆಂಗೇರಿ

ಜನ ಸಾಮಾನ್ಯರು ಮಾರಕ ರೋಗಗಳ ಬಗ್ಗೆ ಬಹಳ ಎಚ್ಚರಿಕೆಯಿಂದ ಇರಬೇಕು ಎಂದು ಕುಂಬಳಗೂಡು ಗ್ರಾಮ ಪಂಚಾಯತಿ ಸದಸ್ಯರಾದ ಮಹಮ್ಮದ್ ಅಸೀಫ್ ರವರು ಸಲಹೆ ನೀಡಿದರು ಕುಂಬಳಗೂಡು ಗ್ರಾಮ ಪಂಚಾಯತಿ ವ್ಯಾಪ್ತಿಯ ಕಂಬೀಪುರದಲ್ಲಿ ಆಯೋಜಿಸಲಾಗಿದ್ದ ಉಚಿತ ಅರೋಗ್ಯ ತಪಾಸಣಾ ಶಿಬಿರದ ನೇತೃತ್ವವಹಿಸಿ ಮಾತನಾಡಿದ ಅವರು ಇಂದಿನ ಪರಿಸ್ಥಿತಿಯಲ್ಲಿ ಬಡವರು ಮತ್ತು ಮಧ್ಯಮವರ್ಗದವರು ಒಳ್ಳೆಯ ಗುಣಮಟ್ಟದ ಆರೋಗ್ಯವನ್ನು ಪಡೆಯಬೇಕು ಏಕೆಂದರೆ ಕೊರೋನ ವೈರಸ್ ಮಹಾಮಾರಿ ಜನ ಸಾಮಾನ್ಯರ ಜೀವಕ್ಕೆ ಮಾರಕವಾಗಿ ಪರಿಣಮಿಸಿತು ಅದರಂತೆ ಸೊಳ್ಳೆಗಳಿಂದ ಹರಡುವ ಡೆಂಗ್ಯೂ ಜ್ವರ ಕೆಮ್ಮು ಶೀತ ಇನ್ನು ಮುಂತಾದ ಚರ್ಮ ರೋಗ ಲಕ್ಷಣಗಳನ್ನು ಹೊಂದಿರುತ್ತದೆ ಇದರಿಂದ ಮನುಷ್ಯನ ಮೇಲೆ ಹೆಚ್ಚು ಪ್ರಭಾವವನ್ನು ಬೀರಿ ಸಾವು ಸಂಭವಿಸುವ ಸಾಧ್ಯತೆ ಇರುತ್ತದೆ




ಇದೇ ಸಮಯದಲ್ಲಿ ಬಿಪಿ ಸಕ್ಕರೆ ಕಾಯಿಲೆ ಸ್ತ್ರೀ ರೋಗ ಸಮಸ್ಯೆಗಳು ಹೃದಯ ಸಂಬಂಧಿ ಕಾಯಿಲೆಗೆ ಚಿಕಿತ್ಸೆ ಮೂಳೆಗೆ ಸಂಬಂಧಿಸಿದಂತೆ ಚಿಕಿತ್ಸೆ ಕಣ್ಣುಗಳ ತಪಾಸಣೆ ಹಾಗು ಇನ್ನಿತರ ಅರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು ಈ ಮಹಮ್ಮದ್ ಇಲಿಯಾಜ್ ಮಹಮ್ಮದ್ ಹುಸೇನ್ ಅಜ್ಗರ್ ಫೈಜ್ಜಿಲಾ ಸಲೀಂ ಮುನಿರಾಜ್ ಜಬೀಹುಲಾ ಮುತ್ತಹೀರ್ ಅಜಂ ಫಜಲ್ ಶಫೀ ಸೇರಿದಂತೆ ಕುಂಬಳಗೂಡು ಪ್ರಾಥಮಿಕ ಆರೋಗ್ಯ ಕೇಂದ್ರದ ಹಿರಿಯ ವೈದ್ಯ ಅಧಿಕಾರಿ ಡಾ/ ಶಾಲಿನಿ ಹಿರಿಯ ಅರೋಗ್ಯ ನಿರೀಕ್ಷಣಾ ಆಧಿಕಾರಿ ಬಸವರಾಜ್ ಇಸ್ಮಾಯಿಲ್ ಪಿಹೆಚ್ ಸಿಓ ರಾಧ ಹಾಗು ಅಶಾ ಕಾರ್ಯಕರ್ತೆಯರು ಪಂಚಾಯತಿ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು

> ಕುಂಬಳಗೂಡು ಪ್ರಾಥಮಿಕ ಆರೋಗ್ಯ ಕೇಂದ್ರದ ಸಹಕಾರದೊಂದಿಗೆ ಅಯುಶ್ಮಾನ್ ಅಮೃತ್ ಅಭಿಯಾನದ ಅಡಿಯಲ್ಲಿ ಕುಂಬಳಗೂಡು ಗ್ರಾಮ ಪಂಚಾಯತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳಲ್ಲಿ ಉಚಿತವಾದ ಅರೋಗ್ಯ ತಪಾಸಣೆ ಮಾಡುವ ಮೂಲಕ ಜನ ಸಾಮಾನ್ಯರಲ್ಲಿ ಅರಿವು ಮತ್ತು ಜಾಗೃತಿ ಮೂಡಿಸುವ ಸಲುವಾಗಿ ಉಚಿತವಾಗಿ ಅರೋಗ್ಯ ತಪಾಸಣಾ ಶಿಬಿರದ ವ್ಯವಸ್ಥೆಯನ್ನು ಮಾಡಲಾಗಿದೆ ಇದನ್ನು ಸಾರ್ವಜನಿಕರು ಸದು ಪಯೋಗ ಪಡಿಸಿಕೊಂಡು ರೋಗಗಳಿಂದ ಮುಕ್ತರಾಗಬೇಕು ಎಂದು ಸಲಹೆ ನೀಡಿದರು

## ಬಾಯಿತಪ್ಪಿನಿಂದ ಆಡಿದ ಮಾತು ದಯವಿಟ್ಟು ಕ್ಷಮಿಸಿ

• ಉದಯವಾಹಿನಿ, ಬೆಂಗಳೂರು



ನಾದಬ್ರಹ್ಮ ಎಂದೇ ಖ್ಯಾತಿ ಪಡೆದಿರುವ ಸಂಗೀತ ನಿರ್ದೇಶಕ ಹಂಸಲೇಖ ಆಗಾಗ ವಿವಾದಗಳಿಂದಲೂ ಸುದ್ದಿಯಾಗುತ್ತಿರುತ್ತಾರೆ. ಇತ್ತೀಚೆಗೆ ಅವರು ಜೈನ ಧರ್ಮದ ಬಗ್ಗೆ ನೀಡಿದ್ದ ಹೇಳಿಕೆಯೊಂದು ತೀವ್ರ ವಿವಾದಕ್ಕೆ ಕಾರಣವಾಗಿತ್ತು. ಜೈನ ಸಮುದಾಯದವರು ಹಂಸಲೇಖ ಕ್ಷಮೆ ಯಾಚಿಸುವಂತೆ ಒತ್ತಾಯಿಸಿದ್ದರು.

ಈ ಬೆಳವಣಿಗೆ ಬೆನ್ನಲ್ಲೇ ಇದೀಗ ಸಂಗೀತ ನಿರ್ದೇಶಕ ಹಂಸಲೇಖ ತಮ್ಮ ಹೇಳಿಕೆಗೆ ಕ್ಷಮೆ ಕೋರಿದ್ದಾರೆ. ಬಾಯಿ ತಪ್ಪಿನಿಂದ ಆ ಮಾತು ಆಡಿದ್ದೆ. ಇದನ್ನು ಇಲ್ಲಿಗೆ ಬಿಡಿ ಎಂದು ಹೇಳಿದ್ದಾರೆ.

ಕಾರ್ಯಕ್ರಮವೊಂದರಲ್ಲಿ ಪಾಲ್ಗೊಂಡಿದ್ದ ಹಂಸಲೇಖ, 'ಜೈನರ ಫಿಲಾಸಫಿಯಲ್ಲಿ 24 ಜನ್ಮಗಳು ಇವೆಯಂತೆ. ಅದೆಲ್ಲವೂ ಸುಳ್ಳು, ಬುಲ್ ಶಿಟ್' ಎಂದು ಹೇಳಿದ್ದರು. ಹಂಸಲೇಖ ಹೇಳಿಕೆಗೆ ಜೈನರು ವಿರೋಧ ವ್ಯಕ್ತಪಡಿಸಿದ್ದರು. ಜೈನ ಧರ್ಮಕ್ಕೆ ಅಪಮಾನ ಮಾಡಿದ್ದು ಸರಿಯಲ್ಲ, ಜಗತ್ತಿನ ಅತಿದೊಡ್ಡ ಅಹಿಂಸಾ ಧರ್ಮ, ಧಾನಧರ್ಮಗಳಿಗೆ ಶ್ರೇಷ್ಠತೆ ಪಡೆದ ಜೈನ ದರ್ಮದವನ್ನು ಹಂಸಲೇಖ ಟೀಕಿಸಿರುವುದು ಖಂಡನೀಯ. ಸಾರ್ವಜನಿಕವಾಗಿ ಕ್ಷಮೆ ಕೇಳುವಂತೆ ಒತ್ತಾಯಿಸಿದ್ದರು.

ಈ ಹಿನ್ನೆಲೆಯಲ್ಲಿ ಇದೀಗ ಹಂಸಲೇಖ, ತಮ್ಮ ಹೇಳಿಕೆಗೆ ಕ್ಷಮೆ ಕೇಳಿ ವಿವರಣೆಯನ್ನೂ ನೀಡಿದ್ದಾರೆ.

ಅದು ಬಾಯಿತಪ್ಪಿನಿಂದ ಆಡಿದ ಮಾತು. ಇನ್ಮುಂದೆ ಇಂತಹ ತಪ್ಪು ಮಾಡಲ್ಲ. ದಯಮಾಡಿ ಕ್ಷಮಿಸಿ. ಜೈನ ಧರ್ಮದ ವಿರುದ್ಧ ಮಾತನಾಡಬೇಕು, ಆ ಪದ ಬಳಕೆ ಮಾಡಬೇಕು ಎಂದು ಮಾಡಿಲ್ಲ. ಅಂದು ನಾನಿದ್ದ ಜಾಗದಲ್ಲಿ ಎಲ್ಲರೂ ಎಳೆದಾಡುತ್ತಿದ್ದರು. ಅವರಿಗೆ ಗದರೋಕೆ ಹೋಗಿ ಈಕಡೆ ಬಂದೆ. ಆ ಮಾತು ಬಂದಿದ್ದು ತಪ್ಪಾಯ್ತು. ನಾನು ಪಂಪನ ದಾಸಾನು ದಾಸ. ಕನ್ನಡ ಕಟ್ಟಿದ ಆ ಮಹಾನ್ ವ್ಯಕ್ತಿಯ ಸೇವೆಗೆ ನಿಂತಿದ್ದೇನೆ. ಇದನ್ನು ದಯಮಾಡಿ ಬೆಳಸಬೇಡಿ ಎಂದು ಪೋಸ್ಟ್ ಮಾಡಿದ್ದಾರೆ.

## 2000 ಸಾವಿರ ವೈಟ್ ಟಾಪಿಂಗ್ ಕಾಮಗಾರಿ ಲೋಕಾಯಕ್ತ ತನಿಖೆಗೆ ಒತ್ತಾಯ

• ಉದಯವಾಹಿನಿ, ಬೆಂಗಳೂರು

ಜಗನ್ನಾಥ ಭವನದಲ್ಲಿ ಬಿಜೆಪಿ ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷರಾದ ಎಸ್ ಹರೀಶ್ ಬೆಂಗಳೂರು ಕೇಂದ್ರ ಜಿಲ್ಲಾಧ್ಯಕ್ಷರಾದ ಸಪ್ತಗಿರಿ ಗೌಡ ಮತ್ತು ಮಾಜಿ ಮಹಾಪೌರರಾದ ಎಂ.ಗೌತಮ್ ಕುಮಾರ್ ರವರು ಬಿಬಿಎಂಪಿ ವ್ಯಾಪ್ತಿಯಲ್ಲಿ ವೈಟ್ ಟಾಪಿಂಗ್ ರಸ್ತೆಯ ಕುರಿತು ಮಾಧ್ಯಮಗೋಷ್ಠಿ.

ಇದೇ ಸಂದರ್ಭದಲ್ಲಿ ಎಸ್.ಹರೀಶ್ ರವರು ಮಾತನಾಡಿ ಬಿಜೆಪಿ ಸರ್ಕಾರದ ಆಡಳಿತ ಅವಧಿಯಲ್ಲಿ ಅಂದಿನ ಮುಖ್ಯಮಂತ್ರಿಗಳಾದ ಬಸವರಾಜ್ ಬೊಮ್ಮಾಯಿರವರು ಹೊರ ರಸ್ತೆ, ಒಳರಸ್ತೆಗಳ ಮತ್ತು ಫುಟ್ ಪಾತ್ ಚರಂಡಿ ಅಭಿವೃದ್ದಿಗಳಿಗೆ 6000ಸಾವಿರ ಕೋಟಿ ರೂಪಾಯಿ ಅನುದಾನ ನೀಡಿದ್ದರು. 2018ರಲ್ಲಿ ಹಲವಾರು ರಸ್ತೆಗಳು ಅಭಿವೃದ್ದಿಯಾಗಿದೆ ಮತ್ತು ಕಾಮಗಾರಿಗಳು ನಡೆಯುತ್ತಿದೆ ಆದರೆ ಕಾಂಗ್ರೇಸ್ ಪಕ್ಷದ ಸರ್ಕಾರ ಅಂತಹ ರಸ್ತೆಗಳು ವೈಟ್ ಟಾಪಿಂಗ್ ರಸ್ತೆ ಮಾಡಲು ಅನುಮೋದನೆ ನೀಡಿದೆ. ರಸ್ತೆಗಳು ನಿರ್ಮಾಣವಾಗಿ ಒಂದು ವರ್ಷವಾಗಿದೆ ಮತ್ತು ಕೆಲವು ಕಾಮಗಾರಿಗಳು ಚಾಲನೆಯಲ್ಲಿದೆ ಕಾಮಗಾರಿ ಕುರಿತು ಟಿ.ವಿ.ಸಿ.ಸಿ.ಪರಿಶೀಲನೆ ಮಾಡಬೇಕು ಅದರೆ ಅಂತಹ ರಸ್ತೆಗಳಿಗೆ ವೈಟ್ ಟಾಪಿಂಗ್ ಮಾಡುತ್ತಿದ್ದಾರೆ. ಉತ್ತಮ ರಸ್ತೆಗಳಿಗೆ ವೈಟ್ ಟಾಪಿಂಗ್ ಮಾಡುವ ಅವಶ್ಯಕತೆ ಇದಿಯ. ಹಳೆಯ ಗುತ್ತಿಗೆದಾರರನ್ನ ರದ್ದು ಪಡಿಸದೇ, 15ದಿನಗಳ ಅವಧಿಯಲ್ಲಿ ಟೆಂಡರ್ ಕರೆದು ಮಾರ್ಚ್ ತಿಂಗಳಲ್ಲಿ ವರ್ಕ್ ಆರ್ಡರ್ ನೀಡಿರುತ್ತಾರೆ ಇದರ ಹಿಂದಿನ ಉದ್ದೇಶ ಮೇ ತಿಂಗಳಲ್ಲಿ ನಡೆದ ಲೋಕಸಭಾ ಚುನಾವಣೆಯಲ್ಲಿ ಹಣ ಸಂಗ್ರಹ ಮಾಡಲು. ಬಿಬಿಎಂಪಿಯಲ್ಲಿ ಕೆಲವು ಅಧಿಕಾರಿಗಳು ಸರ್ಕಾರದ ಏಜೆಂಟ್ ರಂತೆ ಕೆಲಸ ಮಾಡುತ್ತಿದ್ದಾರೆ. ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್, ಪ್ರಧಾನ ಅಭಿಯಂತರ ಪ್ರಹ್ಲಾದ್, ಮುಖ್ಯ ಅಭಿಯಂತರಾದ ಲೋಕೇಶ್ ರವರ ವಿರುದ್ದ ಸೂಕ್ತ ತನಿಖೆಯಾಗಬೇಕು. 25ಕೋಟಿ ರೂಪಾಯಿ ವೆಚ್ಚದ ಕಾಮಗಾರಿಗಳು ರತ್ನ ಕಲಾ ತಾಂತ್ರಿಕ ಸಲಹೆ ಸಮಿತಿ ಕಳುಹಿಸಬೇಕು ಅದರೆ ಅ ಸಮಿತಿಯನ್ನ ರದ್ದುಪಡಿಸಿ, ಬಿಬಿಎಂಪಿಯಲ್ಲಿ ತಾಂತ್ರಿಕ ಸಲಹೆ ಸಮಿತಿ ಮಾಡಿಕೊಂಡಿದ್ದಾರೆ ಇದರ ಉದ್ದೇಶವೇನು. 150ಕಿಲೋ ಮೀಟರ್ ಒಂದೇ ಬಾರಿಗೆ ವೈಟ್ ಟಾಪಿಂಗ್ ರಸ್ತೆ ನಿರ್ಮಾಣ ಮಾಡುವುದರಿಂದ ಸಂಚಾರ ನಿಯಂತ್ರಣ ಮಾಡಲು ಸಾಧ್ಯವಿಲ್ಲ. ಉತ್ತಮ ರಸ್ತೆಗಳಿಗೆ ವೈಟ್ ಟಾಪಿಂಗ್ ಹೆಸರಿನಲ್ಲಿ ಲೂಟಿ ಮಾಡಿದ್ದಾರೆ ಇದರ ಬಗ್ಗೆ ಸೂಕ್ತ ತನಿಖೆ ಮಾಡಬೇಕು ಎಂದು ಲೋಕಾಯುಕ್ತಕ್ಕೆ ದೂರು ಸಲ್ಲಿಸಲಾಗುವುದು ಎಂದು ಹೇಳಿದರು.




## ಹೆಚ್‌ಡಿಕೆ ಭೇಟಿ ಸುದ್ದಿಯಾಗದಂತೆ ಸಿಎಂ ತಡೆ; ವ್ಯಂಗ್ಯ

• ಉದಯವಾಹಿನಿ, ಬೆಂಗಳೂರು

ಉತ್ತರ ಕನ್ನಡ ಸೇರಿದಂತೆ ರಾಜ್ಯದ ಹಲವೆಡೆ ಮಳೆಯಿಂದಾಗಿ ಅವಾಂತರಗಳು ಸೃಷ್ಟಿಯಾಗಿದ್ದು, ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಅವರು ಸ್ಥಳ ಪರಿಶೀಲನೆ ಮತ್ತು ಸಂತ್ರಸ್ತರಿಗೆ ಧೈರ್ಯ ಹೇಳಲು ತೆರಳಿದ್ದಾರೆ. ಆದರೆ ಹೆಚ್‌ಡಿಕೆ ಭೇಟಿ ಸುದ್ದಿಯಾಗದಂತೆ ಸಿಎಂ ಸಿದ್ದರಾಮಯ್ಯ ತಡೆದಿದ್ದಾರೆ, 5 ಕಿಮೀ ದೂರದಲ್ಲೇ ಬ್ಯಾರಿಕೇಡ್ ಹಾಕಿ ಮಾಧ್ಯಮಗಳ ಪ್ರವೇಶಕ್ಕೆ ನಿರ್ಬಂಧಿಸಿದ್ದಾರೆ ಎಂದು ಜೆಡಿಎಸ್ ವಾಗ್ದಾಳಿ ನಡೆಸಿದೆ.

ಈ ಬಗ್ಗೆ ಎಕ್ಸ್‌ನಲ್ಲಿ ಬರೆದುಕೊಂಡಿರುವ ಜೆಡಿಎಸ್, ಶಿರೂರಿನ ಗುಡ್ಡ ಕುಸಿತ ಪ್ರದೇಶಕ್ಕೆ ಕೇಂದ್ರ ಸಚಿವರಾದ ಹೆಚ್‌ಡಿ ಕುಮಾರಸ್ವಾಮಿ ಭೇಟಿ ನೀಡಿರುವುದು ಸುದ್ದಿಯಾಗದಂತೆ ತಡೆಯಲು ಯತ್ನಿಸಿರುವುದು ಸಿದ್ದರಾಮಯ್ಯ ಅವರ ಅಂಜು ಬುರುಕುತನ ತೋರಿಸುತ್ತದೆ. ರಕ್ಷಣಾ ಕಾರ್ಯಾಚರಣೆ ಸ್ಥಳದಿಂದ 5 ಕಿ.ಮೀ ದೂರದಲ್ಲೇ ಬ್ಯಾರಿಕೇಡ್ ಹಾಕಿ ಮಾಧ್ಯಮಗಳ ಪ್ರವೇಶಕ್ಕೆ ನಿರ್ಬಂಧ ವಿಧಿಸಿದ್ದಾರೆ. ಮಾಧ್ಯಮಗಳ ಸ್ವತಂತ್ರ್ಯ ಹತ್ತಿಕ್ಕುವ ನಿಮ್ಮ ಈ ನಡೆ ಸಂವಿಧಾನ ವಿರೋಧಿ ಅಲ್ಲವೇ ಮುಖ್ಯಮಂತ್ರಿಗಳೇ.. ದುರಂತ ನಡೆದು ಇಷ್ಟು ದಿನಗಳಾದರೂ ಶಿರೂರಿಗೆ ನೀವಾಗಲಿ, ನಿಮ್ಮ ಸರ್ಕಾರದ ಯಾವುದೇ ಸಚಿವರಾಗಲಿ, ಸ್ಥಳಕ್ಕೆ ಭೇಟಿ ನೀಡಿಲ್ಲ. ಸಂತ್ರಸ್ತರ ಸಂಕಷ್ಟ ಆಲಿಸಿಲ್ಲ. ಆದರೆ ಮಾನ್ಯ ಕುಮಾರಸ್ವಾಮಿ ಅವರು ಶಿರೂರು ಗ್ರಾಮಕ್ಕೆ ಭೇಟಿ ನೀಡುವ ವೇಳೆಯೂ ನಿಮ್ಮ ಸರ್ಕಾರದ ಈ ಸೇಡಿನ ರಾಜಕೀಯ ಥರವೇ..



> ಅದೇನೇ ಇರಲಿ, ಕುಮಾರಸ್ವಾಮಿ ಅವರಂತೂ ಪ್ರಚಾರಕ್ಕೆನೂ ಶಿರೂರಿಗೆ ಭೇಟಿ ನೀಡುತ್ತಿಲ್ಲ, ಜಿಲ್ಲಾಡಳಿತವನ್ನು ಬಳಸಿ ಮಾಧ್ಯಮದವರನ್ನು ತಡೆದ ಮಾತ್ರಕ್ಕೆ, ಕುಮಾರಸ್ವಾಮಿ ಅವರ ಭೇಟಿ ನಿಲ್ಲಿಸಲು ಸಾಧ್ಯವೇ ಸಂತ್ರಸ್ತರ ಕಷ್ಟ ಆಲಿಸುವುದನ್ನು ತಡೆಯಲು ಸಾಧ್ಯವೇ ಎಂದು ಪಕ್ಷ ವಾಗ್ದಾಳಿ ನಡೆಸಿದೆ.
>
> ಜೆಡಿಎಸ್

## ಶಿರೂರು ಗುಡ್ಡ ಕುಸಿತ: ಘಟನಾ ಸ್ಥಳಕ್ಕೆ ಇಂದು ಸಿಎಂ

• ಉದಯವಾಹಿನಿ, ಬೆಂಗಳೂರು



ಕರಾವಳಿ, ಮಲೆನಾಡು ಭಾಗದಲ್ಲಿ ವರುಣಾರ್ಭಟಕ್ಕೆ ಸೃಷ್ಟಿಯಾಗಿರುವ ಅನಾಹುತ, ಅವಾಂತರಗಳು ಒಂದೆರಡಲ್ಲ. ಶಿರೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಗುಡ್ಡ ಕುಸಿತ ದುರಂತದಲ್ಲಿ 10 ಜನರು ಸಾವನ್ನಪ್ಪಿದ್ದು, ಘಟನಾ ಸ್ಥಳಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಭೇಟಿ ನೀಡಲಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಈ ವಿಷಯ ತಿಳಿಸಿದ್ದಾರೆ.

ನಾಳೆ ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ತಾಲ್ಲೂಕಿನ ಶಿರೂರು ಗ್ರಾಮಕ್ಕೆ ಭೇಟಿ ನೀಡುತ್ತೇನೆ. ಶಿರೂರು ಹೆದ್ದಾರಿಯಲ್ಲಿ ಗುಡ್ಡ ಕುಸಿತ ಸಂಭವಿಸಿ ಅನಾಹುತ ಸಂಭವಿಸಿದೆ. ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸುತ್ತೇನೆ ಎಂದು ತಿಳಿಸಿದರು. ರಾಜ್ಯದ ಹಲವೆಡೆ ಭಾರಿ ಮಳೆಯಿಂದಾಗಿ ಗುಡ್ಡ ಕುಸಿತ, ಮನೆ ಹಾನಿ, ಬೆಳೆ ಹಾನಿ, ರಸ್ತೆ ಸಂಪರ್ಕ ಕಡಿತದಂತಹ ಘಟನೆಗಳು ನಡೆದಿವೆ. ಸಚಿವರು, ಶಾಸಕರು, ಅಧಿಕಾರಿಗಳು ಘಟನಾ ಸ್ಥಳಗಳಿಗೆ ಭೇಟಿ ನೀಡಿ ರಕ್ಷಣಾ ಕಾರ್ಯಾಚರಣೆ, ಪರಿಹಾರ ನೀಡುವ ಕೆಲ ಮಾಡುತ್ತಿದ್ದಾರೆ ಎಂದರು. ಇದೇ ವೇಳೆ ಶಿರೂರು ಗುಡ್ಡ ಕುಸಿತ ಸ್ಥಳಕ್ಕೆ ಇಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಭೇಟಿ ವಿಚಾರವಾಗಿ ಪ್ರತಿಕ್ರಿಯಿಸಿದ ಸಿಎಂ ಸಿದ್ದರಾಮಯ್ಯ, ಕುಮಾರಸ್ವಾಮಿಯವರೂ ಭೇಟಿ ಕೊಟ್ಟು ಪರಿಶೀಲಿಸಲಿ. ನಾನು, ನಮ್ಮ ಸಚಿವರು ಕೂಡ ಶಿರೂರಿಗೆ ಭೇತಿ ಕೊಟ್ಟು ಪರಿಶೀಲನೆ ನಡೆಸುತ್ತೇವೆ ಎಂದು ಹೇಳಿದರು.

# ವರುಣನ ಕೃಪೆಯಿಂದ ಕೋರ್ಟ್ ಆದೇಶ ಪಾಲನೆ

## ■ ಕೆಪಿಸಿಸಿ ಕಚೇರಿಯ ಭಾರತ ಜೋಡೋ ಸಭಾಂಗಣ ಆವರಣದಲ್ಲಿ ಶಿವಕುಮಾರ್ ಮಾಧ್ಯಮಗಳ ಪ್ರಶ್ನೆಗಳಿಗೆ ಪ್ರತಿಕ್ರಿಯೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಉತ್ತಮ ಮಳೆಯಾಗುತ್ತಿದ್ದು, ವರುಣ ದೇವನ ಕೃಪೆಯಿಂದ ಕಾವೇರಿ ನೀರು ಹಂಚಿಕೆ ವಿಚಾರದಲ್ಲಿ ಕೋರ್ಟ್ ಆದೇಶ ಪಾಲನೆ ಹಾಗೂ ರಾಜ್ಯದ ರೈತರ ಹಿತ ರಕ್ಷಣೆ ಸಾಧ್ಯವಾಗುತ್ತಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು. ಕೆಪಿಸಿಸಿ ಕಚೇರಿಯ ಭಾರತ ಜೋಡೋ ಸಭಾಂಗಣ ಆವರಣದಲ್ಲಿ ಶಿವಕುಮಾರ್ ಅವರು ಮಾಧ್ಯಮಗಳ ಪ್ರಶ್ನೆಗಳಿಗೆ ಶನಿವಾರ ಪ್ರತಿಕ್ರಿಯಿಸಿದರು.

ಇನ್ನೆರಡು ಮೂರು ದಿನಗಳಲ್ಲಿ ಕೆಆರ್ ಎಸ್ ಅಣೆಕಟ್ಟು ತುಂಬಲಿದ್ದು, ತಮಿಳುನಾಡಿನ ಪಾಲಿನ ನೀರನ್ನು ಹರಿಸಬಹುದಾದ ಸೂಚನೆ ವ್ಯಕ್ತವಾಗಿವೆ. ಇದರ ಜತೆಗೆ ನಮ್ಮ ರೈತರ ಹಿತಕಾಯಲು ಕೆರೆ ತುಂಬಿಸುವ ಕಾರ್ಯಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಕಾಲುವೆಗಳಿಗೆ ನೀರು ಹರಿಸಲಾಗುತ್ತಿದೆ. ಭತ್ತ ನಾಟಿ ಮಾಡುವ ಮುನ್ನ ಸ್ವಲ್ಪ ತಾಳ್ಮೆ ವಹಿಸಬೇಕು. ನೀರು ಎಷ್ಟು ಪ್ರಮಾಣದಲ್ಲಿ ಬರಲಿದೆ ಎಂಬುದು ಇನ್ನು ತಿಳಿದಿಲ್ಲ. ಹೀಗಾಗಿ ಕೃಷಿ ಇಲಾಖೆಯವರ ಜತೆ ಚರ್ಚೆ ಮಾಡಿ ತೀರ್ಮಾನ ಮಾಡಲಾಗುವುದು. ನಾವು ಮುಂಜಾಗ್ರತವಾಗಿ ರಂಗನತಿಟ್ಟು ಸೇರಿದಂತೆ ಇತರೆಡೆ ದೋಣಿ ವಿಹಾರ ಸ್ಥಗಿತಗೊಳಿಸಿದ್ದು, ಹೊಳೆಗಳ ಅಕ್ಕಪಕ್ಕದ ಪ್ರದೇಶಗಳಲ್ಲಿ ರೆಡ್ ಅಲರ್ಟ್ ಘೋಷಿಸಿದ್ದೇವೆ. ಕರಾವಳಿ ಭಾಗದಲ್ಲಿ ಕೇರಳ ಮೂಲದ ಚಾಲಕ ವಾಹನ ಸಮೇತ, ಗುಡ್ಡ ಕುಸಿತಕ್ಕೆ ಸಿಲುಕಿದ್ದಾನೆ. ಮಳೆ ಮುಂದುವರಿದಿರುವ ಕಾರಣ ತೆರವು ಕಾರ್ಯಕ್ಕೆ ಅಡ್ಡಿಯುಂಟಾಗಿದೆ. ನಾವು ನಮ್ಮ ಪ್ರಯತ್ನ ಮಾಡುತ್ತಿದ್ದೇವೆ. ನಮ್ಮ ಸಚಿವರು ಶಾಸಕರು, ನಾಯಕರು ಸ್ಥಳದಲ್ಲಿದ್ದು, ಅವರ ಕರ್ತವ್ಯ ನಿಭಾಯಿಸುತ್ತಿದ್ದಾರೆ ಎಂದು ಮಾಹಿತಿ ನೀಡಿದರು.

ಮಳೆ ಹಾನಿ ಯಾಗಿರುವ ಅಂಕೋಲಾ ಸೇರಿದಂತೆ ಇತರ ಕಡೆಗಳಿಗೆ ಕುಮಾರಸ್ವಾಮಿ ಭೇಟಿ ಬಗ್ಗೆ ಅವರು ಯಾವ ಫೀಲ್ಡಿಗೆ ಇಳಿದಿದ್ದಾರೆ ಅವರು ಸಿಆರ್ ಪಿಎಫ್ ಪಡೆ ಕರೆಸಿ, ತೆರವು ಕಾರ್ಯಕ್ಕೆ ನೆರವಾಗಿದ್ದರೆ, ಫೀಲ್ಡಿಗೆ ಇಳಿದಿದ್ದಾರೆ ಎಂದು ಹೇಳಬಹುದಿತ್ತು. ಅನಾಹುತ ನಡೆದ ಒಂದೇ ತಾಸಿನಲ್ಲಿ ನಮ್ಮ ಸಚಿವರನ್ನು ಸ್ಥಳಕ್ಕೆ ಕಳುಹಿಸಿದ್ದೇವೆ. ನಮ್ಮ ಸಚಿವರಾದ ಮಂಕಳಾ ವೈದ್ಯ, ಕೃಷ್ಣ ಬೈರೇಗೌಡರು ಸ್ಥಳಕ್ಕೆ ಹೋಗಿ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಂಡಿದ್ದಾರೆ. ವಿಡಿಯೋ ಕಾನ್ಫರೆನ್ಸ್ ಮೂಲಕ ಅಧಿಕಾರಿಗಳಿಗೆ ಅಗತ್ಯ ಸೂಚನೆ ನೀಡಿದ್ದಾರೆ. ರಾಜ್ಯ ಸರ್ಕಾರ ತನ್ನ ಜವಾಬ್ದಾರಿ ಸಮರ್ಥವಾಗಿ ನಿಭಾಯಿಸುತ್ತಿದೆ. ಕುಮಾರಸ್ವಾಮಿ ಅವರು ಭೇಟಿ ನೀಡಿದ್ದಾರೆ. ಅವರು ಭೇಟಿ ನೀಡಿರುವುದಕ್ಕೆ ನಮ್ಮ ಆಕ್ಷೇಪವಿಲ್ಲ. ಈ ವಿಚಾರದಲ್ಲಿ ಈಗ ರಾಜಕಾರಣ ಮಾಡುವುದು ಬೇಡ. ಮೊದಲು ಜನರ ರಕ್ಷಣೆ ಮಾಡೋಣ ಎಂದರು.

### 300 ಕೋಟಿಗೂ ಹೆಚ್ಚು ಅಕ್ರಮ

ನಿಗಮಗಳಲ್ಲಿ ಪಾರದರ್ಶಕತೆ ತರಲು ಮುಂದಾಗಿದ್ದು, ಸರ್ಕಾರ ಎಲ್ಲಾ ನಿಗಮಗಳ ಹಣ ಹಿಂಪಡೆಯುತ್ತಿರುವ ಬಗ್ಗೆ ಕೇಳಿದಾಗ, ನಾವು ನಮ್ಮ ಅಧ್ಯಕ್ಷರುಗಳಿಗೆ ಈ ವಿಚಾರವಾಗಿ ಹೇಳಿದ್ದೆವು. ನಿಗಮಗಳಲ್ಲಿ ಕೆಲವು ಅಧಿಕಾರಿಗಳು ಖದೀಮರು ಸೇರಿಕೊಂಡಿದ್ದಾರೆ. ಬಿಜೆಪಿ ಆಡಳಿತದಲ್ಲೂ ತಿಂದು ಈಗಲೂ ಸೇರಿಕೊಂಡಿದ್ದಾರೆ. ಬಿಜೆಪಿ ಅವಧಿಯಲ್ಲಿ 300 ಕೋಟಿಗೂ ಹೆಚ್ಚು ಅಕ್ರಮ ನಡೆದಿದೆ. ಅದೇ ಅಧಿಕಾರಿಗಳು ಈಗ ಇದ್ದು, ಡಿ ವರ್ಗದ ನೌಕರರನ್ನು ಎಂಡಿ ಮಾಡಿದ್ದಾರೆ. ಅಂತಹ ಪ್ರಕರಣಗಳನ್ನು ಪರಿಶೀಲನೆ ಮಾಡಲಾಗುವುದು. ಹೀಗಾಗಿ ಆರ್ಥಿಕ ಇಲಾಖೆ ನಿಯಂತ್ರಣದಲ್ಲಿ ಇಟ್ಟುಕೊಳ್ಳಲು ಮುಂದಾಗಿದೆ ಎಂದರು.

**ಕಾವೇರಿ ನೀರು ಹಂಚಿಕೆ ವಿಚಾರ**



> ಕಾಂಗ್ರೇಸ್ ಪಕ್ಷದ ಜಿಲ್ಲಾ ಹಾಗೂ ಬ್ಲಾಕ್ ಕಾಂಗ್ರೇಸ್ ಅಧ್ಯಕ್ಷರ ಸಭೆ ಬಗ್ಗೆ ಕೇಳಿದಾಗ, ಬ್ಲಾಕ್ ಮಟ್ಟದಲ್ಲಿ ಪಕ್ಷವನ್ನು ಪುನರ್ ರಚನೆ ಮಾಡಬೇಕಿದೆ. ಹೀಗಿರುವ ಅಧ್ಯಕ್ಷರುಗಳು ಬಹಳ ವರ್ಷಗಳಿಂದ ಪಕ್ಷಕ್ಕೆ ದುಡಿದಿದ್ದಾರೆ. ಅವರಿಗೆ ಸೂಕ್ತ ಸ್ಥಾನಮಾನ ನೀಡಬೇಕಿದೆ. ಕೆಲವರಿಗೆ ಬಡ್ತಿ ನೀಡಬೇಕು. ಮತ್ತೆ ಕೆಲವರಿಗೆ ಜವಾಬ್ದಾರಿ ನೀಡಬೇಕಿದೆ. ಜಿಲ್ಲಾ ಪಂಚಾಯ್ತಿ, ತಾಲ್ಲೂಕು ಪಂಚಾಯ್ತಿ ಚುನಾವಣೆಗೆ ನ್ಯಾಯಾಲಯ ಯಾವಾಗ ಬೇಕಾದರೂ ಸೂಚನೆ ನೀಡಬಹುದು. ಅವುಗಳಿಗೆ ತಯಾರಿ ಮಾಡಿಕೊಳ್ಳಬೇಕು. ಖಾಲಿ ಇರುವ ಹುದ್ದೆಗಳಿಗೆ ನೇಮಕಾತಿ. ಈ ಎಲ್ಲಾ ವಿಚಾರಗಳನ್ನು ಚರ್ಚೆ ಮಾಡಿ, ಮಾರ್ಗದರ್ಶನ ನೀಡಲು ಜಿಲ್ಲಾ ಹಾಗೂ ಬ್ಲಾಕ್ ಮಟ್ಟದ ಅಧ್ಯಕ್ಷರ ಸಭೆ ಕರೆದಿದ್ದೇವೆ ಎಂದು ತಿಳಿಸಿದರು.
>
> –ಡಿಸಿಎಂ ಡಿ.ಕೆ ಶಿವಕುಮಾರ್

# ಅಂತರಗಂಗೆ ಬೆಟ್ಟ, ಬಂಗಾರಪೇಟೆಯಲ್ಲಿ ಜಿಪ್‌ಲೈನ್

## ಪ್ರವಾಸಿಗರು ಹಾಗೂ ಯುವ ಜನತೆಯನ್ನು ಆಕರ್ಷಿಸಲು ಜಿಲ್ಲೆಯ ವಿವಿಧೆಡೆ ಅರಣ್ಯ ಇಲಾಖೆಯು ಹಲವಾರು ಯೋಜನೆ

• ಉದಯವಾಹಿನಿ ಕೋಲಾರ

ಪ್ರವಾಸಿಗರು ಹಾಗೂ ಯುವಜನತೆಯನ್ನು ಆಕರ್ಷಿಸಲು ಜಿಲ್ಲೆಯ ವಿವಿಧೆಡೆ ಅರಣ್ಯ ಇಲಾಖೆಯು ಹಲವಾರು ಯೋಜನೆ ರೂಪಿಸಿದ್ದು, ಅಂತರಗಂಗೆ ಬೆಟ್ಟ ಹಾಗೂ ಬಂಗಾರಪೇಟೆ ವೃಕ್ಷೋದ್ಯಾನದಲ್ಲಿ ಜಿಪ್‌ಲೈನ್ ನಿರ್ಮಿಸಲು ಮುಂದಾಗಿದೆ. ಜಿಲ್ಲಾಧಿಕಾರಿ ಅಕ್ರಂ ಪಾಷಾ ಹಾಗೂ ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿ ವಿ.ಏಡುಕೊಂಡಲು ನೇತೃತ್ವದಲ್ಲಿ ಈ ಸಂಬಂಧ ಯೋಜನೆ ರೂಪಿಸಿದ್ದು, ಅನುದಾನವೂ ಸಿದ್ಧವಿದೆ.

ಅಂತರಗಂಗೆ ಬೆಟ್ಟದಲ್ಲಿ ಚಾರಣ (ಟ್ರೆಕ್ಕಿಂಗ್) ಆರಂಭವಾಗುವ ದೇಗುಲದ ಕಲ್ಯಾಣಿ ಸಮೀಪದಿಂದ ಬೆಟ್ಟದ ತುದಿವರೆಗೆ ಜಿಪ್‌ಲೈನ್ ಅಳವಡಿಸಲು ಜಾಗ ನಿಗದಿಪಡಿಸಲಾಗಿದೆ.

ಬೆಲ್ಟ್ ಹಾಕಿಕೊಂಡು ನೇತಾಡುತ್ತಾ ತಂತಿಯಲ್ಲಿ ಜಾರುವ ಸಾಹಸಮಯ ಕ್ರೀಡೆ ಜಿಲ್ಲೆಯಲ್ಲಿ ಸದ್ಯ ಎಲ್ಲೂ ಇಲ್ಲ. ಜಿಪ್‌ಲೈನ್ ಸುಮಾರು 500 ಮೀಟರ್ ಉದ್ದವಿರಲಿದೆ. ಈಗಾಗಲೇ ಯೋಜನೆಗೆ 75 ಲಕ್ಷ ಅನುದಾನ ಬಿಡುಗಡೆಯಾಗಿದೆ. ಹಾಗೆಯೇ ಬಂಗಾರಪೇಟೆಯ ಬಳಿ ಇರುವ ವೃಕ್ಷೋದ್ಯಾನದಲ್ಲಿ ಜಿಪ್‌ಲೈನ್ ಅಳವಡಿಸಲು ಅರಣ್ಯ ಇಲಾಖೆ ಮುಂದಾಗಿದ್ದು, 35 ಲಕ್ಷ ಅನುದಾನ ಲಭ್ಯವಿದೆ. ಅರಣ್ಯ ಇಲಾಖೆಗೆ ಸಂಬಂಧಿಸಿದ ಪ್ರದೇಶಗಳಲ್ಲಿ ಪ್ರವಾಸಿಗರನ್ನು ಆಕರ್ಷಿಸುವಂತೆ ಇರುವ ಪ್ರದೇಶಗಳನ್ನು ಗುರುತಿಸಿ ಮಾಹಿತಿಯನ್ನು ಜಿಲ್ಲಾಧಿಕಾರಿ ಹಾಗೂ ಪ್ರವಾಸೋದ್ಯಮ ಇಲಾಖೆ ಗಮನಕ್ಕೂ ತರಲಾಗಿದೆ.

ಕೋಲಾರಕ್ಕೆ ಪ್ರವಾಸಿಗರು ಬಂದರೆ ಕೇವಲ ದೇಗುಲ ನೋಡಿಕೊಂಡು ಹೋಗುತ್ತಾರೆ. ಹೀಗಾಗಿ, ಅರಣ್ಯ ಇಲಾಖೆಯಿಂದ ವಿವಿಧ ಯೋಜನೆ ರೂಪಿಸಲಾಗಿದೆ. ಜಿಲ್ಲೆಯ ನಾಲ್ಕೈದು ಸ್ಥಳದಲ್ಲಿ ಪ್ರವಾಸಿ ಚಟುವಟಿಕೆ ನಡೆಸಲಾಗುವುದು' ಎಂದು ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿ ವಿ.ಏಡುಕೊಂಡಲು ತಿಳಿಸಿದರು.

ಅರಣ್ಯ ಇಲಾಖೆಯಿಂದ ಅಂತರಗಂಗೆ ಬೆಟ್ಟದಲ್ಲಿ ರೆಸ್ಟೋರೆಂಟ್ ಆರಂಭಿಸಲೂ ಯೋಜನೆ


☛ ಉದಯವಾಹಿನಿ ಚಿತ್ರ

ಪ್ರಕೃತಿ ಬಗ್ಗೆ ಮಕ್ಕಳಿಗೆ ಅರಿವು

ರೂಪಿಸಲಾಗಿದೆ. ಈ ಸಂಬಂಧ ಜಿಲ್ಲಾಧಿಕಾರಿ ಜೊತೆ ಚರ್ಚಿಸಲಾಗಿದೆ. ವಿವಿಧ ಇಲಾಖೆಗಳಿಂದ ಹಣ ಹೊಂದಿಸಿಕೊಂಡು ಇಂಟರ್‌ಪ್ರಿಟೇಷನ್ ಸೆಂಟರ್ ಮಾಡಲಾಗುವುದು. ವಸ್ತು ಪ್ರದರ್ಶನ ಮಾದರಿಯ ಈ ಕೇಂದ್ರ ನಿರ್ಮಾಣಕ್ಕೆ 32 ಲಕ್ಷ ಬಂದಿದೆ. ಟೆಂಡರ್ ಆಗಿದ್ದು, ಸದ್ಯದಲ್ಲೇ ಕೆಲಸ ಆರಂಭವಾಗಲಿದೆ. ಅದಾದ ಮೇಲೆ ಜಿಪ್‌ಲೈನ್ ಕೆಲಸ ಶುರುವಾಗಲಿದೆ' ಎಂದರು. ಅರಣ್ಯ ಇಲಾಖೆಯಿಂದ ಚಿಣ್ಣರಿಗೆ ವನ ದರ್ಶನ ಎಂಬ ಯೋಜನೆ ಇದೆ. ಆದರೆ, ಜಿಲ್ಲೆಯಲ್ಲಿ ಸರಿಯಾದ ವ್ಯವಸ್ಥೆ ಇಲ್ಲದ ಕಾರಣ ಬೇರೆ ಕಡೆ ಕರೆದುಕೊಂಡು ಹೋಗುತ್ತಿದ್ದೇವೆ. ಅರಣ್ಯದಲ್ಲೇ ರಾತ್ರಿ ವಾಸ್ತವ್ಯ ಹೂಡುವುದು, ಪ್ರಕೃತಿ ಬಗ್ಗೆ ಮಕ್ಕಳಿಗೆ ಅರಿವು ಮೂಡಿಸುವ ಚಟುವಟಿಕೆಗಳಲ್ಲಿ ಈ ಯೋಜನೆಯಡಿ ಹಮ್ಮಿಕೊಳ್ಳಲಾಗುತ್ತದೆ' ಎಂದು ಹೇಳಿದರು.

### ಕ್ರೀಡಾ ಚಟುವಟಿಕೆ ಕಾಮಗಾರಿಗೆ 2 ಕೋಟಿ ಅನುದಾನ ಮಂಜೂರು

ಕೋಲಾರ ತಾಲ್ಲೂಕಿನ ಅಂತರಗಂಗೆ ದೇಗುಲ ಜಿಪ್‌ಲೈನ್-ಪ್ರಾತಿನಿಧಿಕ ಚಿತ್ರ, ಜಲಸಾಹಸ ಕ್ರೀಡೆ-ಪ್ರಾತಿಧಿನಿಕ ಚಿತ್ರ ವಿ.ಏಡುಕೊಂಡಲು500 ಮೀಟರ್ ಉದ್ದದ ಜಿಪ್‌ಲೈನ್ ಸಾಹಸ ಕ್ರೀಡೆ ಅಂತರಗಂಗೆಯಲ್ಲಿ ರೆಸ್ಟೋರೆಂಟ್ ಸ್ಥಾಪನೆಗೆ ನಿರ್ಧಾರ ಕೆಲ ಕಾಮಗಾರಿಗಳಿಗೆ ಟೆಂಡರ್ -ಸದ್ಯದಲ್ಲೇ ಕೆಲಸ ಆರಂಭ . ಏಡುಕೊಂಡಲು ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿ ಕೋಲಾರ ಜಿಲ್ಲೆಯಲ್ಲಿ ಅರಣ್ಯ ಇಲಾಖೆಯಿಂದ ವಿವಿಧ ಸಾಹಸ ಕ್ರೀಡಾ ಚಟುವಟಿಕೆ ಕಾಮಗಾರಿಗೆ 2 ಕೋಟಿ ಅನುದಾನ ಮಂಜೂರಾಗಿದೆ. ಈಗಾಗಲೇ 50 ಲಕ್ಷ ಬಂದಿದೆ.

ಯರಗೋಳ್ ಹಿನ್ನೀರಲ್ಲಿ ಜಲ ಸಾಹಸ ಕ್ರೀಡೆ ಬಂಗಾರಪೇಟೆ ತಾಲ್ಲೂಕಿನ ಯರಗೋಳ್ ಜಲಾಶಯದ ಹಿನ್ನೀರಿನಲ್ಲಿ ಜಲ ಸಾಹಸ ಕ್ರೀಡೆ ವ್ಯವಸ್ಥೆ ಮಾಡಲು ಅರಣ್ಯ ಇಲಾಖೆ ಮುಂದಾಗಿದೆ. ಜಿಲ್ಲೆಯಲ್ಲಿ ನೇಚರ್ ಕ್ಯಾಂಪ್ ಎಲ್ಲೂ ಇಲ್ಲ. ಈ ನಿಟ್ಟಿನಲ್ಲಿ ಕಾಮಸಮುದ್ರದಲ್ಲಿ ಅರಣ್ಯ ಇಲಾಖೆ ಇಲಾಖೆ ಜಾಗದಲ್ಲಿ ನೇಚರ್ ಕ್ಯಾಂಪ್ ಟ್ರೆಕ್ಕಿಂಗ್ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ. 'ಪ್ರವಾಸಿಗರು ಚಾರಣ ಪ್ರೇಮಿಗಳು ಜಿಲ್ಲೆಗೆ ಹೆಚ್ಚಿನ ಸಂಖ್ಯೆಯಲ್ಲಿ ಬರುತ್ತಾರೆ. ಹೀಗಾಗಿ ನೇಚರ್ ಕ್ಯಾಂಪ್ ಮಾಡಿ ವಾಸ್ತವ್ಯಕ್ಕೆ ವ್ಯವಸ್ಥೆ ಮಾಡಲಾಗುವುದು. ಟೆಂಟ್ ವ್ಯವಸ್ಥೆಯನ್ನೂ ಮಾಡಲಾಗುವುದು -ಏಡುಕೊಂಡಲು

## ಕನ್ನಡ ಜ್ಯೋತಿ ರಥಯಾತ್ರೆ: ಸಚಿವರಿಂದ ವಿಜೃಂಭಣೆಯ ಚಾಲನೆ


☛ ಉದಯವಾಹಿನಿ ಚಿತ್ರ

ಯುವ ಸಮುದಾಯಕ್ಕೆ ಕನ್ನಡ ಭಾಷೆಯ ಹಿರಿಮೆ-ಗರಿಮೆ, ನಾಡು-ನುಡಿ, ನೆಲ-ಜಲ ಸಂರಕ್ಷಣೆಯ ಬಗ್ಗೆ ಪರಿಚಯಿಸುವ ನಿಟ್ಟಿನಲ್ಲಿ ನಾಡಿನಾದ್ಯಂತ ''ಕರ್ನಾಟಕ ಸಂಭ್ರಮ 50-ಹೆಸರಾಯಿತು ಕರ್ನಾಟಕ ಉಸಿರಾಯಿತು ಕನ್ನಡ''ದ ಸಂದೇಶ ಹೊತ್ತು ರಥಯಾತ್ರೆ ಸಂಚರಿಸುತ್ತಿದೆ. ಕನ್ನಡಿಗರಲ್ಲದೆ ಅನ್ಯಭಾಷಿಕರಲ್ಲಿಯೂ ಕನ್ನಡದ ಬಗ್ಗೆ ಅಭಿಮಾನ ಮೂಡಿಸುವ ಪ್ರಯತ್ನ ಇದಾಗಿದೆ. ವಿದೇಶಗಳಲ್ಲಿರುವ ಕನ್ನಡ ಮನಸುಗಳು ಕನ್ನಡ ಸಂಘಗಳ ಮೂಲಕ ಭಾಷೆಯ ಹಿರಿಮೆಯನ್ನು ಮತ್ತಷ್ಟು ಹೆಚ್ಚಿಸುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ -ಡಾ. ಜಿ.ಪರಮೇಶ್ವರ

• ಉದಯವಾಹಿನಿ ತುಮಕೂರು

ರಾಜ್ಯಕ್ಕೆ ಕರ್ನಾಟಕವೆಂದು ನಾಮಕರಣಗೊಂಡು 50 ವರ್ಷ ತುಂಬಿರುವ ಸುಸಂದರ್ಭದಲ್ಲಿ ಕನ್ನಡ ನಾಡು-ನುಡಿ, ಸಂಸ್ಕೃತಿಯ ಕಂಪನ್ನು ಪಸರಿಸುವ ಸಲುವಾಗಿ ನಾಡಿನಾದ್ಯಂತ ಹಮ್ಮಿಕೊಂಡಿರುವ ''ಕನ್ನಡ ಜ್ಯೋತಿ ರಥಯಾತ್ರೆ''ಗೆ ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ|| ಜಿ.ಪರಮೇಶ್ವರ ಅವರು ವಿಜೃಂಭಣೆಯ ಚಾಲನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗದಲ್ಲಿ ಕನ್ನಡ ತಾಯಿ ಭುವನೇಶ್ವರಿ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಮೂಲಕ ರಥಯಾತ್ರೆಗೆ ಚಾಲನೆ ನೀಡಿ ಮಾತನಾಡಿದ ಅವರು ಕನ್ನಡ ಸುಂದರ ಭಾಷೆ. ಸಿರಿವಂತ ಭಾಷೆ. ಕನ್ನಡ ಭಾಷೆ ಸುಮಾರು 2000 ವರ್ಷಗಳ ಇತಿಹಾಸ ಹೊಂದಿರುವ ಪ್ರಾಚೀನ ಭಾಷೆ. ನಮ್ಮ ಮಾತೃ ಭಾಷೆ ಕನ್ನಡವನ್ನು ಉಳಿಸಿ ಬೆಳೆಸುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಅಭಿಪ್ರಾಯಪಟ್ಟರು.

ಇತ್ತೀಚೆಗಷ್ಟೆ ಬಹರೇನ್ ದೇಶದಲ್ಲಿ ಏರ್ಪಡಿಸಿದ್ದ ಕನ್ನಡ ಸಂಘದ 50ನೇ ವರ್ಷದ ಸಂಭ್ರಮಾಚರಣೆಯಲ್ಲಿ ಪಾಲ್ಗೊಂಡು ಸಂತಸಪಟ್ಟ ಕ್ಷಣಗಳ ಬಗ್ಗೆ ಹಂಚಿಕೊಂಡ ಅವರು ಬರುವ ಸೆಪ್ಟೆಂಬರ್ ಮಾಹೆಯಲ್ಲಿ ಕೆನಡಾ ದೇಶದ ಟೊರಾಂಟೋ ನಗರದಲ್ಲಿ ಕನ್ನಡ ಸಂಘದ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಲು ರಾಜ್ಯ ಸರ್ಕಾರದ ಪ್ರತಿನಿಧಿಯಾಗಿ ತೆರಳುತ್ತಿದ್ದು, ಹೊರ ದೇಶಗಳಲ್ಲಿ ಕನ್ನಡ ಸಂಘಗಳನ್ನು ಕಟ್ಟಿ ಭಾಷೆಯನ್ನು ಬೆಳೆಸುತ್ತಿರುವ ಪ್ರತಿಯೊಬ್ಬ ಕನ್ನಡಿಗರ ಭಾಷಾಭಿಮಾನ ನಮಗೆ ಪ್ರೇರಣೆಯಾಗಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಪಾಲಿಕೆ ಆಯುಕ್ತ ಬಿ.ವಿ. ಅಶ್ವಿಜ, ಅಪರ ಜಿಲ್ಲಾಧಿಕಾರಿ ಶಿವಾನಂದ ಬಿ. ಕರಾಳೆ, ಉಪವಿಭಾಗಾಧಿಕಾರಿ ಗೌರವ್ ಕುಮಾರ್ ಶೆಟ್ಟಿ, ತಹಶೀಲ್ದಾರ್ ಎಂ. ಸಿದ್ದೇಶ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಿ.ಎಂ. ರವಿಕುಮಾರ್, ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ಕೆಂಕೆರೆ ಮಲ್ಲಿಕಾರ್ಜುನ, ಕರ್ನಾಟಕ ನಾಟಕ ಅಕಾಡೆಮಿ ಸದಸ್ಯ ಉಗಮ ಶ್ರೀನಿವಾಸ್, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ವಿವಿಧ ಪದಾಧಿಕಾರಿಗಳು, ಕನ್ನಡ ಸಂಘಟನೆಗಳ ಮುಖಂಡರು, ಶಾಲಾ ಮಕ್ಕಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಶಿಶುಗಳನ್ನು ಬಿಸಾಡದೇ ಸರ್ಕಾರದ ವಶಕ್ಕೆ ಒಪ್ಪಿಸಿ


☛ ಉದಯವಾಹಿನಿ ಚಿತ್ರ

• ಉದಯವಾಹಿನಿ, ಶಿಡ್ಲಘಟ್ಟ

ಪೋಷಕರಿಗೆ ಬೇಡವಾದ ನವಜಾತ ಶಿಶುಗಳನ್ನು ಎಲ್ಲೆಂದರಲ್ಲಿ ಬಿಸಾಡದೇ ಸರ್ಕಾರದ ವಶಕ್ಕೆ ಒಪ್ಪಿಸಿ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ನೌತಾಜ್ ತಿಳಿಸಿದರು. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ದತ್ತು ಪೂರ್ವ ಪೋಷಕತ್ವದ ಸಭೆಯನ್ನು ನಡೆಸಿ ಮಾತನಾಡಿದರು. ತಂದೆ ತಾಯಿಯ ಜಗಳದಲ್ಲಿ ಮಗು ಬಡವಾಯಿತೇ. ಎಂಬ ಗಾದೆ ಮಾತಿದೆ ಅದರಂತೆ ಮಕ್ಕಳನ್ನ ಹೆತ್ತ ತಂದೆ ತಾಯಿಯರೇ ಹೆಚ್ಚಾಗಿ ಎಲ್ಲಂದರಲ್ಲಿ ಬಿಸಾಡಿ ಹೋಗುತ್ತಿದ್ದಾರೆ. ನಿಮಗೆ ಮಗು ಬೇಡ ಅಂದ್ರೆ ದತ್ತು ಕೇಂದ್ರಗಳಿಗೆ ನೀಡಿ ಎಂದರು. ಹಾಗೆಯೇ ದತ್ತು ಪಡೆಯುತ್ತಿರುವ ದಂಪತಿಗಳಿಗೆ ದತ್ತು ಪ್ರಕ್ರಿಯೆಯ ಬಗ್ಗೆ ಸಂಪೂರ್ಣ ಮಾಹಿತಿಯನ್ನು ನೀಡಿ ಮಗುವನ್ನು ದಂಪತಿಗಳ ವಶಕ್ಕೆ ನೀಡಿದರು.

ಕೆ.ವಿ ಟ್ರಸ್ಟ್ ವಿಶೇಷ ದತ್ತು ಕೇಂದ್ರದಲ್ಲಿನ ಸುಮಾರು ಆರು ತಿಂಗಳ ಅಂಜಲಿ ಎಂಬ ಹೆಣ್ಣು ಮಗುವನ್ನು ಚೆನ್ನೈ ಮೂಲದ ದಂಪತಿಗಳಿಗೆ ಕೇಂದ್ರ ದತ್ತು ಸಂಪನ್ಮೂಲ ಸಂಸ್ಥೆ ಮುಖಾಂತರ ಹೊಂದಾಣಿಕೆಯಾಗಿರುವ ಮಗುವನ್ನು ಮಮತೆಯ ತೊಟ್ಟಿಲುಗಳಲ್ಲಿ ಇಡುವ ಮೂಲಕ ಮಕ್ಕಳಿಲ್ಲದೇ ಇರುವ ಪೋಷಕರಿಗೆ ದತ್ತು ನೀಡಿ, ಬೇಡವಾದ ಮಕ್ಕಳಿಗೆ ಕುಟುಂಬ ವಾತಾವರಣ ಕಲ್ಪಿಸಿ ಉತ್ತಮ ಭವಿಷ್ಯ ನೀಡಬಹುದಾಗಿದೆ ಎಂದರು.

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ವಿಶೇಷ ದತ್ತು ಕೇಂದ್ರ ಪ್ರಾರಂಭವಾದಾಗಿನಿಂದ ಇದುವರೆಗೂ ಒಟು 38 ಮಕ್ಕಳನ್ನು ದತ್ತು ಪ್ರಕ್ರಿಯೆ ಮೂಲಕ ದತ್ತು ನೀಡಲಾಗಿದ್ದು, ಇದರಲ್ಲಿ ಅಮೆರಿಕಾ, ಕೆನಡಾ, ಇಟಲಿ ದೇಶಗಳಿಗೆ ಒಟ್ಟು 5 ಮಕ್ಕುಳು ವಿದೇಶಿ , ಉಳಿದಂತೆ 33 ಮಕ್ಕಳು ದೇಶಿ ದತ್ತು ಮುಖಾಂತರ ನೀಡಲಾಗಿದೆ ಎಂದರು. ಈ ಸಂದರ್ಭದಲ್ಲಿ ಮಕ್ಕಳ ರಕ್ಷಣಾಧಿಕಾರಿ ಗಾಯಿತ್ರಿ,ಮಂಜುನಾಥ್, ಕಾನೂನು ಸಲಹೆಗಾರ ರಾಮೇಗೌಡ, ಕೆ.ವಿ ಟ್ರಸ್ಟ್‌ನ ನಾರಾಯಣಸ್ವಾಮಿ ಸೇರಿದಂತೆ ಮತ್ತಿತರರು ಇದ್ದರು.

## ಕೋಲಾರ ಅಬಕಾರಿ ಅಧಿಕಾರಿಗಳ ಭ್ರಷ್ಟಾಚಾರ ವಿರುದ್ಧ ಕಠಿಣ ಕ್ರಮವಾಗಲಿ : ಎನ್.ಗಿರೀಶ್

• ಉದಯವಾಹಿನಿ, ಕೋಲಾರ

ಜಿಲ್ಲೆಯಲ್ಲಿ ಅಬಕಾರಿ ಅಧಿಕಾರಿಗಳ ಭ್ರಷ್ಟಾಚಾರದ ವಿರುದ್ಧ ಸರ್ಕಾರ ಕಠಿಣ ಕ್ರಮ ಜರುಗಿಸಬೇಕು ಎಂದು ಜಿಲ್ಲಾ ಮದ್ಯ ಮಾರಾಟಗಾರರ ಕ್ಷೇಮಾಭಿ ವೃದ್ಧಿ ಸಂಘವು ತೀವ್ರ ಆಕ್ರೋಶ ವ್ಯಕ್ತಪಡಿಸಿದೆ.



ಕೋಲಾರ ಜಿಲ್ಲೆಯ ಅಬಕಾರಿ ಅಕ್ರಮಗಳ ಕುರಿತು ವಿಧಾನಪರಿಷತ್‌ನಲ್ಲಿ ಗುರುವಾರ ಪ್ರಸ್ತಾಪಿಸಿದ ಎಂಎಲ್ಸಿ ಅನಿಲ್ ಕುಮಾರ್ ಅವರ ನಡೆಯನ್ನು ಸಂಘವು ಬೆಂಬಲಿಸಿದೆ. ಈ ಬಗ್ಗೆ ಸಂಘದ ಪ್ರಧಾನ ಕಾರ್ಯದರ್ಶಿ ಎನ್. ಗಿರೀಶ್ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ್ದಾರೆ.

ತಮ್ಮದೇ ಮೂಲಗಳನ್ನು ಆಧರಿಸಿ ಎಂಎಲ್ ಸಿ ಅನಿಲ್ ಕುಮಾರ್ ಅವರು ಸದನದಲ್ಲಿ ಕೋಲಾರ ಜಿಲ್ಲೆಯ ಅಬಕಾರಿ ಇಲಾಖೆಯ ಅಧಿಕಾರಿಗಳ ಅಕ್ರಮಗಳ ಬಗ್ಗೆ ಪ್ರಸ್ತಾಪಿಸಿದ್ದಾರೆ.

ಈಗ ನಡೆಯುತ್ತಿರುವ ಅಧಿಕಾರಿಗಳ ಅಕ್ರಮಗಳನ್ನು ಕೊನೆಗಾಣಿಸಬೇಕಾಗಿದೆ.

ಅಬಕಾರಿ ಇಲಾಖೆಯ ಭ್ರಷ್ಟಾಚಾರದ ಬಗ್ಗೆ ಹಲವು ಶಾಸಕರು ಈ ಹಿಂದೆಯೇ ಆರೋಪಿಸಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿಲ್ಲ, ಸದಸ್ಯರಿಗೆ ಬೆಲೆಯಿಲ್ಲದಂತಾಗಿದೆ ಎಂದೂ ಎನ್.ಗಿರೀಶ್ ದೂರಿದ್ದಾರೆ.

ಬಂಗಾರಪೇಟೆ ಶಾಸಕ ನಾರಾಯಣಸ್ವಾಮಿ, ಕೋಲಾರ ಶಾಸಕ ಕೊತ್ತೂರು ಮಂಜುನಾಥ ಅವರು, ಖುದ್ದು ಜಿಲ್ಲಾ ಉಸ್ತುವಾರಿ ಸಚಿವರೇ ಕೋಲಾರದ ಅಬಕಾರಿ ಅಧಿಕಾರಿಗಳಿಗೆ ಸಭೆಗಳಲ್ಲಿ ಎಚ್ಚರಿಕೆ ಕೊಟ್ಟಿದ್ದರೂ ಪ್ರಯೋಜನವಾಗಿಲ್ಲ. ಭ್ರಷ್ಟ ಅಧಿಕಾರಿಗಳು ರುಚಿ ಪಳಗಿಬಿಟ್ಟಿದ್ದಾರೆ ಎಂದೂ ಎನ್.ಗಿರೀಶ್ ಆರೋಪಿಸಿದ್ದಾರೆ.

ಈಗಲಾದರೂ ಇಲ್ಲಿನ ಅಬಕಾರಿ ಅಧಿಕಾರಿಗಳ ಅಕ್ರಮಗಳನ್ನು ಅಂತ್ಯ ಮಾಡಲು ರಾಜ್ಯ ಸರ್ಕಾರ ಕಠಿಣ ಕ್ರಮ ಜರುಗಿಸಬೇಕು ಎಂದು ಅವರು ಒತ್ತಾಯ ಮಾಡಿದ್ದಾರೆ.

## ಮಕ್ಕಳಲ್ಲಿ ನಾಯಕತ್ವ ಜವಾಬ್ದಾರಿ: ಮಕ್ಕಳಿಗೆ ವಿಶೇಷ ಅನುಭವ

• ಉದಯವಾಹಿನಿ, ಶಿಡ್ಲಘಟ್ಟ

ಇಂದಿನ ಮಕ್ಕಳೇ ಇಂದಿನ ನಾಯಕರು ಎಂದು ಹೇಳುವಾಗ ಮಕ್ಕಳಲ್ಲಿ ನಾಯಕತ್ವ ಹಾಗೂ ಜವಾಬ್ದಾರಿ ನಿರ್ವಹಣಾ ಸಾಮರ್ಥ್ಯ ಅಭಿವೃದ್ದಿಪಡಿಸುವ ಅಗತ್ಯತೆ ಎದ್ದು ಕಾಣುತ್ತಿದೆ. ಮಕ್ಕಳಲ್ಲಿ ಇಂತಹ ಗುಣಗಳನ್ನು ಬೆಳೆಸುವಲ್ಲಿ ಮಕ್ಕಳ ಸಂಸತ್ತು ಪ್ರಮುಖ ಪಾತ್ರ ವಹಿಸುತ್ತದೆ. ಮಕ್ಕಳ ಸಂಸತ್ ಎಂಬುದು ಮಕ್ಕಳ ಪ್ರಾತಿನಿಧಿಕ ರಚನೆಯಾಗಿದ್ದು, ಶಾಲಾ ಸಿಬ್ಬಂದಿ ಜೊತೆ ಶಾಲಾ ನಿರ್ವಹಣೆಯಲ್ಲಿ ಮಕ್ಕಳನ್ನೂ ಪಾಲುದಾರರನ್ನಾಗಿ ಮಾಡುವುದು ಇದರ ಪ್ರಮುಖ ಉದ್ದೇಶವಾಗಿದೆ ಎಂದು ಶಾಲಾ ಶಿಕ್ಷಕ ಸಿ.ಎಲ್ ಸತೀಶ್ ತಿಳಿಸಿದರು.

ನಗರದ ಸರ್ಕಾರಿ ಪ್ರೌಢಶಾಲೆ ಶಿಡ್ಲಘಟ್ಟ ವಿದ್ಯಾರ್ಥಿಗಳಿಂದ ಶಾಲಾ ಸಂಸತ್ ಚುನಾವಣೆ - 2024 ಹಮ್ಮಿಕೊಂಡಿದ್ದ ಚುನಾವಣೆಯು ಯಶಸ್ವಿಯಾಗಿ ನಡೆಯಿತು.

ಮಕ್ಕಳ ಸಂಸತ್‌ನಲ್ಲಿ ಮಕ್ಕಳೇ ಸಂಪೂರ್ಣ ಭಾಗಿದಾರರಾಗಿರುತ್ತಾರೆ. ತಮ್ಮ ಹಕ್ಕುಗಳನ್ನು ಪಡೆಯುವ ಮೂಲಕ ಕರ್ತವ್ಯಗಳನ್ನು ನಿರ್ವಹಿಸುವ ಜವಾಬ್ದಾರಿ ಕಲಿಯುವ ವೇದಿಕೆ. ಮಕ್ಕಳ ಲ್ಲಿ ಪ್ರಜಾಸತ್ತಾತ್ಮಕ ಮೌಲ್ಯಗಳನ್ನು ಬೆಳೆಸುವುದು ಶಿಕ್ಷಣ ಮೌಲ್ಯವಾಗಿದೆ. ಈ ನಿಟ್ಟಿನಲ್ಲಿ ಶಾಲಾ ಸಂಸತ್ ಹೆಚ್ಚು ಮಹತ್ವ ಪಡೆದುಕೊಂಡಿದೆ ಎಂದರು.


☛ ಉದಯವಾಹಿನಿ ಚಿತ್ರ

### ಚುನಾವಣೆಯ ಅರಿವು

ಸಾರ್ವತ್ರಿಕ ಚುನಾವಣೆ ಮಾದರಿಯಂತೆ ಶಾಲಾ ಸಂಸತ್ ಚುನಾವಣೆಯಲ್ಲಿ ನಾಮಪತ್ರ ಸಲ್ಲಿಕೆ, ನಾಮಪತ್ರ ವಾಪಸ್ ಪಡೆಯುವುದು, ನಾಮಪತ್ರ ಪರಿಶೀಲನೆ, ಅಂತಿಮವಾಗಿ ಚುನಾವಣೆ ಕಣದಲ್ಲಿ ಉಳಿದ ಅಭ್ಯರ್ಥಿಗಳ ಘೋಷಣೆ, ಚುನಾವಣೆ ಪ್ರಚಾರ, ಚುನಾವಣೆ ದಿನಾಂಕ ಪ್ರಕಟಣೆ ಎಲ್ಲ ಪ್ರಕ್ರಿಯೆಗಳು ವ್ಯವಸ್ಥಿತವಾಗಿ ಜರುಗುವ ಮೂಲಕ ವಿದ್ಯಾರ್ಥಿಗಳಿಗೆ ಚುನಾವಣೆಯ ಅರಿವು ಮೂಡಿಸಿದವು.

ಶಾಲಾ ಮೈದಾನದಲ್ಲಿ ವಿದ್ಯಾರ್ಥಿಗಳು ಪ್ರಚಾರ ನಡೆಸಿ, ತಮಗೇ ಮತ ಹಾಕುವಂತೆ ಮತದಾರ(ವಿದ್ಯಾರ್ಥಿ)ನ್ನು ಮನವೊಲಿಸುತ್ತಿರುವುದು ಮಾಡಿಕೊಳ್ಳುವ ದೃಶ್ಯಗಳು ಗಮನ ಸೆಳೆದವು. ಶಾಲಾ ಸಂಸತ್ - ಚುನಾವಣೆ ಏರ್ಪಡಿಸಿದ್ದು ಚುನಾವಣೆಯಲ್ಲಿ ಮುಖ್ಯ ಶಿಕ್ಷಕರು ಸಯೀದ್ ಇಷ್ರತ್ ಹಾಗೂ ಮುಖ್ಯ ಚುನಾವಣಾ ಅಧಿಕಾರಿಗಳಾಗಿ ಗೋಪಾಲ ಕೃಷ್ಣ , ಚುನಾವಣಾ ಅಧಿಕಾರಿಗಳಾಗಿ ಸತೀಶ್ ಸಿ.ಎಲ್, ಕಮಲಮ್ಮ ಹಾಗೂ ಶಾಲೆಯ ಎಲ್ಲಾ ಶಿಕ್ಷಕರು ಚುನಾವಣೆಯನ್ನು ಸುಗಮವಾಗಿ ನೆರವೇರಿಸಿ ಕೊಟ್ಟರು. ಚುನಾವಣೆಯಲ್ಲಿ ಮತಗಟ್ಟೆ ಚುನಾವಣಾಧಿಕಾರಿ,ಮತಗಟ್ಟೆ ಅಧಿಕಾರಿಗಳಾಗಿ ವಿದ್ಯಾರ್ಥಿಗಳು ನಡೆಸಿಕೊಟ್ಟರು.

ಶಾಲೆಯ ಎಲ್ಲಾ ವಿದ್ಯಾರ್ಥಿಗಳು ಚುನಾವಣೆಯಲ್ಲಿ ಭಾಗವಹಿಸಿ ಮತ ಚಲಾಯಿಸಿದರು. 18 ಅಭ್ಯರ್ಥಿಗಳು ಕಣದಲ್ಲಿದ್ದು, ಚುನಾವಣೆಯಲ್ಲಿ ಒಟ್ಟು 197 ಮತಗಳು ಚಲಾವಣೆಯಾಗಿದ್ದು, 2 ಮತಗಳು ತಿರಸ್ಕೃತಗೊಂಡು ಅದರಲ್ಲಿ ನಾಗೇಶ್ವರಿ 29 ಮತಗಳು ಪಡೆದು ಅದ್ನಾನ್ ಪಾಷಾ ವಿರುದ್ಧ 1 ಮತದ ಅಂತರದಿಂದ ಜಯಶೀಲರಾಗಿ ಅವರ ಅಭಿಮಾನಿಗಳು ಶುಭಾಶಯ ತಿಳಿಸಿದರು.

## ಪ್ರಯಾಣಿಕರ ತಂಗುದಾಣ ನಿರ್ಮಿಸಲು ಒತ್ತಾಯಿಸಿ ಪ್ರತಿಭಟನೆ

• ಉದಯವಾಹಿನಿ, ಕೆ.ಆರ್.ಪೇಟೆ

ತಾಲ್ಲೂಕಿನ ಅಗ್ರಹಾರಬಾಚಹಳ್ಳಿ ಗ್ರಾಮದ ಗೇಟ್‌ನಲ್ಲಿ ಕೆಶಿಫ್ ವತಿಯಿಂದ ನಿರ್ಮಿಸಲಾಗುತ್ತಿರುವ ಜಲಸೂರು-ಬೆಂಗಳೂರು ಹೆದ್ದಾರಿಯಲ್ಲಿ ಕೆಶಿಪ್ ವತಿಯಿಂದ ಪ್ರಯಾಣಿಕರ ಹೈಟೆಕ್ ಬಸ್ ತಂಗುದಾಣವನ್ನು ನಿರ್ಮಿಸಬೇಕು ಎಂದು ಆಗ್ರಹಿಸಿ ಅಗ್ರಹಾರಬಾಚಹಳ್ಳಿ ಗ್ರಾಮಸ್ಥರು ತಾಲ್ಲೂಕು ಕರ್ನಾಟಕ ರಕ್ಷಣಾ ವೇದಿಕೆಯ ಆಶ್ರಯದಲ್ಲಿ ಗ್ರಾಮದ ಗೇಟ್‌ನಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು. ತಾಲ್ಲೂಕು ಕರ್ನಾಟಕ ರಕ್ಷಣಾ ವೇದಿಕೆಯ ಅಧ್ಯಕ್ಷ ಅಗ್ರಹಾರಬಾಚಹಳ್ಳಿ ಶ್ರೀನಿವಾಸ್ ಗೌಡ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಗ್ರಾಮದ ನೂರಾರು ಮುಖಂಡರು, ಯುವಕರು, ವಿದ್ಯಾರ್ಥಿಗಳು ಹೆದ್ದಾರಿ ನಿರ್ಮಾಣಕ್ಕೂ ಮುನ್ನ ಗೇಟ್ ಬಳಿ ತಂಗುದಾಣವಿತ್ತು.


☛ ಉದಯವಾಹಿನಿ ಚಿತ್ರ

ಕಾಮಗಾರಿ ಸಂದರ್ಭ ಹಳೆ ತಂಗುದಾಣವನ್ನು ನಾಶಗೊಳಿಸಲಾಗಿದೆ. ನಾಶಗೊಳಿಸಿದ ಜಾಗದಲ್ಲಿ ಹೊಸದಾಗಿ ತಂಗುದಾಣ ನಿರ್ಮಾಣ ಮಾಡದಿರುವದರಿಂದ ಶಾಲಾ-ಕಾಲೇಜಿಗೆ ಹೋಗುವವರಿಗೆ ಪ್ರಯಾಣಿಕರಿಗೆ ತೊಂದರೆಯಾಗಿದೆ. ಕೂಡಲೇ ಅಗ್ರಹಾರಬಾಚಹಳ್ಳಿ ಗೇಟ್‌ನಲ್ಲಿ ಹೈಟೆಕ್ ಮಾದರಿಯ ಬಸ್ ನಿಲ್ದಾಣವನ್ನು ನಿರ್ಮಿಸಿ ಕೊಡಬೇಕು ಎಂದು ಕೆಶಿಫ್ ಅಧಿಕಾರಿಗಳನ್ನು ಒತ್ತಾಯ ಮಾಡಿದರು.

ಜುಲೈ 25ರೊಳಗೆ ಪ್ರಯಾಣಿಕರ ತಂಗುದಾಣ(ಬಸ್ ನಿಲ್ದಾಣ) ವನ್ನು ನಿರ್ಮಿಸಿಕೊಡಲು ಮುಂದಾಗಬೇಕು. ಇಲ್ಲದಿದ್ದಲ್ಲಿ ಕೆಶಿಫ್ ಕಚೇರಿಯ ಮುಂದೆ ಬೃಹತ್ ತಮಟೆ ಚಳವಳಿ ನಡೆಸಲಾಗುವುದು ಹಾಗೂ ಕೆಶಿಫ್ ಅಧಿಕಾರಿಗಳು ಮಾಡುತ್ತಿರುವ ಹೆದ್ದಾರಿ ಕಾಮಗಾರಿ ತಡೆದು ಬೃಹತ್ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

## ಪ್ರವಾಹಪೀಡಿತ ಪ್ರದೇಶಗಳಿಗೆ ಸಚಿವ ಭೋಸರಾಜು ಭೇಟಿ, ಪರಿಶೀಲನೆ

• ಉದಯವಾಹಿನಿ, ಮಡಿಕೇರಿ

ಕೊಡಗಿನಲ್ಲಿ ಮಳೆಯಿಂದ ಹಾನಿಯಾದ ಸ್ಥಳಗಳನ್ನು ಕೊಡಗು ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್.ಭೋಸರಾಜು ಅವರು ಶನಿವಾರ ವೀಕ್ಷಣೆ ಮಾಡಿದರು.

ಕಾವೇರಿ ನದಿ ತೀರದ ಸಿದ್ದಾಪುರದ ಕರಡಿಗೋಡು ನಿವಾಸಿಗಳನ್ನು ಭೇಟಿ ಮಾಡಿದ ಅವರು ಅಹವಾಲು ಆಲಿಸಿದರು. ಇದಕ್ಕೂ ಮುನ್ನ ಸಿದ್ದಾಪುರದ ಕಾಳಜಿ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ


☛ ಉದಯವಾಹಿನಿ ಚಿತ್ರ

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರಡಿಗೋಡಿನ ನದಿತೀರದ ನಿವಾಸಿಗಳನ್ನು ಮಾಲ್ದಾರೆ ಬಳಿ ಜಾಗ ಖರೀದಿಸಿ ಅಲ್ಲಿಗೆ ಸ್ಥಳಾಂತರ ಮಾಡಲಾಗುವುದು. ಇದಕ್ಕೆ ಬಹುತೇಕ ನಿವಾಸಿಗಳು ಒಪ್ಪಿಗೆ ಪತ್ರ ನೀಡಿದ್ದಾರೆ ಎಂದರು.

# ಜಲ ಜೀವನ್ ಕಾಮಗಾರಿ ಜಿಲ್ಲೆಯಲ್ಲಿ ವೇಗ ಪಡೆಯುತ್ತಿಲ್ಲ

## • ಕೆಲವು ಗ್ರಾಮಗಳಲ್ಲಿ ಗುತ್ತಿಗೆದಾರರು ಕಾಮಗಾರಿಗಳನ್ನು ಅರೆಬರೆಯಾಗಿ ನಡೆಸಿದ್ದಾರೆ ಎನ್ನುವ ಆರೋಪ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಪ್ರತಿ ಮನೆ ಮನೆಗೂ ನಲ್ಲಿ ಸಂಪರ್ಕ ಕಲ್ಪಿಸುವ ಜಲಜೀವನ್ ಮಿಷನ್ ಯೋಜನೆ ಜಿಲ್ಲೆಯಲ್ಲಿ ವೇಗ ಪಡೆಯುತ್ತಿಲ್ಲ. ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಅವರು ನಡೆಸುವ ಪ್ರಗತಿ ಪರಿಶೀಲನಾ ಸಭೆಗಳಲ್ಲಿ ಜಲ ಜೀವನ್ ಮಿಷನ್ ಯೋಜನೆಯ ವಿಚಾರವೂ ಪ್ರಮುಖವಾಗಿ ಚರ್ಚೆ ಆಗುತ್ತಿದೆ. ಜಿಲ್ಲೆಯಲ್ಲಿ ಜೆಜೆಎಂ ಕಾಮಗಾರಿಯು ಆಮೆಗತಿಯಲ್ಲಿದೆ ಎನ್ನುವುದಕ್ಕೆ ಕಾಮಗಾರಿಗಳು ಪೂರ್ಣವಾಗಿರುವುದೇ ಸಾಕ್ಷಿ. ಕೆಲವು ಗ್ರಾಮಗಳಲ್ಲಿ ಗುತ್ತಿಗೆದಾರರು ಕಾಮಗಾರಿಗಳನ್ನು ಅರೆ ಬರೆಯಾಗಿ ನಡೆಸಿದ್ದಾರೆ ಎನ್ನುವ ಆರೋಪಗಳು ಸಹ ಕೇಳಿ ಬರುತ್ತಿವೆ. ಹೀಗೆ ಪ್ರತಿ ಕುಟುಂಬಗಳಿಗೆ ನೀರಿನ ಸಂಪರ್ಕ ಕಲ್ಪಿಸಬೇಕಾದ ಮಹತ್ವದ ಯೋಜನೆ ಜಿಲ್ಲೆಯಲ್ಲಿ ತೆವಳುತ್ತ ಸಾಗಿದೆ.

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಜಲಜೀವನ್ ಮಿಷನ್‌ನಡಿ 1,640 ಕಾಮಗಾರಿಗಳ ಗುರಿಯನ್ನು ಹೊಂದಲಾಗಿದೆ. ಒಟ್ಟು 2.48 ಲಕ್ಷ ಮನೆಗಳಿಗೆ ನಲ್ಲಿ ಸಂಪರ್ಕಿಸಬೇಕಾದ ಗುರಿ ಇದೆ.

1,640 ಕಾಮಗಾರಿಗಳಿಗೂ ಆಡಳಿತಾತ್ಮಕ ಅನುಮೋದನೆ ದೊರೆತು ಟೆಂಡರ್ ಸಹ ಆಗಿದೆ. 1,594 ಕಾಮಗಾರಿಗಳಿಗೆ ಕಾರ್ಯಾದೇಶ ನೀಡಲಾಗಿದೆ. ಕಾರ್ಯಾದೇಶ ಪಡೆದಿರುವ ಕಾಮಗಾರಿಗಳ ಪೈಕಿ 1,222 ಕಾಮಗಾರಿಗಳು ಇನ್ನೂ ಆರಂಭವಾಗಬೇಕಿದೆ. 372 ಕಾಮಗಾರಿಗಳು ಆರಂಭವಾಗಿವೆ. ಈ ಪೈಕಿ 39 ಕಾಮಗಾರಿಗಳು ಪೂರ್ಣವಾಗಿವೆ.

ಜಿಲ್ಲೆಯ ಬಹುತೇಕ ಗ್ರಾಮಗಳಲ್ಲಿ ಜಲಜೀವನ ಮಿಷನ್ ಯೋಜನಾ ವೆಚ್ಚವು 1 ಕೋಟಿಯ ಒಳಗೆ ಇದ್ದರೆ 140ಕ್ಕೂ ಹೆಚ್ಚು ಗ್ರಾಮಗಳಲ್ಲಿ 1 ಕೋಟಿಗಿಂತ ಹೆಚ್ಚಿದೆ. ಹೀಗೆ ಜಿಲ್ಲೆಯಲ್ಲಿ ಜಲಜೀವನ್ ಮಿಷನ್ ಕಾಮಗಾರಿ ಆರಂಭವಾಗಿ ವರ್ಷ ಸಮೀಪಿಸುತ್ತಿದ್ದರೂ ಪೂರ್ಣವಾಗಿರುವುದು ಮಾತ್ರ 39 ಕಾಮಗಾರಿಗಳು ಮಾತ್ರ. ಜಲ ಜೀವನ್ ಮಿಷನ್ ಕಾಮಗಾರಿಗಾಗಿ ಹಳ್ಳಿಗಳಲ್ಲಿ ರಸ್ತೆಗಳನ್ನು ಅಗೆಯಲಾಗಿದೆ. ಹೀಗೆ ಅಗೆದ ರಸ್ತೆಗಳನ್ನು ಗುತ್ತಿಗೆದಾರರು ಸೂಕ್ತವಾಗಿ ಮುಚ್ಚಿಲ್ಲ. ಗುತ್ತಿಗೆದಾರರು ಕಾಮಗಾರಿಗಳಿಗೆ ವೇಗ ನೀಡದಿರುವುದು ಮತ್ತು ಅಧಿಕಾರಿಗಳ ನಿರ್ಲಕ್ಷ್ಯದ ಪರಿಣಾಮ ಜೆಜೆಎಂ ಕಾಮಗಾರಿಯ ವೇಗವಾಗಿ ನಡೆಯುತ್ತಿಲ್ಲ ಎನ್ನುವ ಆರೋಪಗಳು ವ್ಯಾಪಕವಾಗಿವೆ. 2023ರ ಆಗಸ್ಟ್‌ನಲ್ಲಿ ಜಲಜೀವನ್ ಮಿಷನ್ ಯೋಜನೆ ಅನುಷ್ಠಾನ ಸಂಬಂಧ ಜಿಲ್ಲೆಯಲ್ಲಿ ಎದುರಾಗಿರುವ ತೊಡಕುಗಳನ್ನು ನಿವಾರಿಸಲು ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಗುತ್ತಿಗೆದಾರರು ಹಾಗೂ ಅಧಿಕಾರಿಗಳ ಸಭೆಯನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ನಡೆಸಿದ್ದರು. ಸಭೆಯಲ್ಲಿ 150ಕ್ಕೂ ಹೆಚ್ಚು ಗುತ್ತಿಗೆದಾರರು ಭಾಗವಹಿಸಿದ್ದರು.

ಗ್ರಾಮೀಣ ಭಾಗದಲ್ಲಿ ಮನೆಗಳಿಗೆ ಕುಡಿಯುವ ನೀರು ಪೂರೈಸುವ ಜಲಜೀವನ್ ಮಿಷನ್ ಯೋಜನೆ ಜಿಲ್ಲೆಯಲ್ಲಿ ವಿಫಲ ಆಗಲು ಬಿಡುವುದಿಲ್ಲ. ಯೋಜನೆ ಯಶಸ್ವಿಗೆ ಸ್ಥಳೀಯರು, ಗುತ್ತಿಗೆದಾರರ ಸಹಕಾರ ಅಗತ್ಯ. 2024ರ ವೇಳೆಗೆ ಯೋಜನೆಯನ್ನು ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕಿದೆ. ಯೋಜನೆಯ ಅನುಷ್ಠಾನಕ್ಕೆ ಕಾಲಮಿತಿ ನಿಗದಿ ಪಡಿಸಬೇಕು. ಕಾರ್ಯಾದೇಶ ನೀಡಲು ವಿಳಂಬ ಮಾಡಬಾರದು. ಪೈಪ್‌ಗಳ ಗುಣಮಟ್ಟ ಪ್ರಮಾಣೀಕರಿಸಲು ಕಾಲ ವ್ಯಯ ಆಗಬಾರದು. ಕಾರ್ಯಾದೇಶ ನೀಡಿದ ದಿನದಿಂದ ಯೋಜನೆ ಫಲಾನುಭವಿಗೆ ತಲುಪುವವರೆಗೆ ಯಾವ ಕೆಲಸಕ್ಕೆ ಎಷ್ಟು ಸಮಯ ಅಗತ್ಯ ಎಂದು ಕಾಲಮಿತಿ ನಿಗದಿ ಪಡಿಸಬೇಕು. ಆ ಪ್ರಕಾರ ಯೋಜನೆ ಅನುಷ್ಠಾನ ಆಗಬೇಕು ಎಂದು ಸಭೆಯಲ್ಲಿ ಸಚಿವರು ಸೂಚಿಸಿದರು.


☛ ಉದಯವಾಹಿನಿ ಚಿತ್ರ

ಕೆಲವು ಗುತ್ತಿಗೆದಾರರು ಅರೆ ಬರೆಯಾಗಿ ಕೆಲಸ ಮಾಡಿದ್ದರೂ ಅವರ ಪೂರ್ಣ ಬಿಲ್ ಬಿಡುಗಡೆ ಮಾಡಲಾಗಿದೆ. ಕೆಲವರು ಕಾಮಗಾರಿ ಪೂರ್ಣಗೊಳಿಸಿದ್ದರೂ ಬಿಲ್ ಆಗಿಲ್ಲ ಎನ್ನುವ ದೂರುಗಳಿವೆ. ಕೆಲಸ ಕಡಿಮೆ ಆಗಿದ್ದರೂ ಬಿಲ್ ಬಿಡುಗಡೆ ಮಾಡಿದ್ದು ಹೇಗೆ? ಹೀಗೆ ಹಣ ಬಿಡುಗಡೆ ಮಾಡಿದವರಿಗೆ ನೋಟಿಸ್ ನೀಡಿ ಶಿಸ್ತು ಕ್ರಮಜರುಗಿಸಬೇಕು' ಎಂದು ಸಚಿವರು ಇಲಾಖೆ ಅಧಿಕಾರಿಗೆ ಸಭೆಯಲ್ಲಿ ನಿರ್ದೇಶನ ನೀಡಿದರು.

### ಯೋಜನೆಗೆ ಅಕ್ರಮದ ವಾಸನೆ

ಹೀಗೆ ಸೂಚಿಸಿ ವರ್ಷ ಸಮೀಪಿಸುತ್ತಿದೆ. ಆದರೆ ಬೆರಳೆಣಿಕೆಯ ಕಾಮಗಾರಿಗಳು ಮಾತ್ರ ಪೂರ್ಣವಾಗಿವೆ. ಕೆಲವು ಗುತ್ತಿಗೆದಾರರು ಎರಡು ಮೂರು ಕಾಮಗಾರಿಗಳನ್ನು ಪಡೆದಿದ್ದಾರೆ. ಈ ಕಾರಣದಿಂದಲೂ ವೇಗ ದೊರೆಯುತ್ತಿಲ್ಲ ಎನ್ನಲಾಗುತ್ತಿದೆ.ಹೀಗೆ ಜಿಲ್ಲೆಯಲ್ಲಿ ಮಹತ್ವದ ಯೋಜನೆಗೆ ಅಕ್ರಮದ ವಾಸನೆಯೂ ಬಡಿಯುತ್ತಿದೆ. ಇತ್ತೀಚೆಗೆ ನಡೆಸ ಕೆಡಿಪಿ ಸಭೆಯಲ್ಲಿಯೂ ಜಲ ಜೀವನ್ ಮಿಷನ್ ಕಾಮಗಾರಿಯ ಕುರಿತು ಚರ್ಚೆ ನಡೆಯಿತು.

ಗುತ್ತಿಗೆದಾರರ ಸಹಕಾರ ಅಗತ್ಯ

## ಮಿನಿ ನ್ಯೂಸ್

### ಚಲಿಸುತ್ತಿದ್ದ ರೈಲಿಗೆ ತಲೆ ಕೊಟ್ಟು ಹೆಡ್ ಕಾನ್‌ಸ್ಟೇಬಲ್ ಆತ್ಮಹತ್ಯೆ

• ಉದಯವಾಹಿನಿ ಗುಬ್ಬಿ



ಚಲಿಸುತಿದ್ದ ರೈಲಿಗೆ ತಲೆ ಕೊಟ್ಟು ಪೊಲೀಸ್ ಹೆಡ್ ಕಾನ್ಸ್ ಟೇಬಲ್ ಓರ್ವ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಜಿಲ್ಲೆಯ ತುಮಕೂರು ಜಿಲ್ಲೆಯ ಗುಬ್ಬಿ ರೈಲ್ವೆ ನಿಲ್ದಾಣದ ಸಮೀಪ ಶನಿವಾರ ನಡೆದಿದೆ. ಮೃತರನ್ನು ಶಿವಪ್ರಕಾಶ್ ಆರಾಧ್ಯ ಎಂದು ಗುರುತಿಸಲಾಗಿದೆ.

ಶಿವಪ್ರಕಾಶ್ ತಿಪಟೂರು ತಾಲ್ಲೂಕಿನ ಕಿಬ್ಬನಹಳ್ಳಿ ಪೊಲೀಸ್ ಠಾಣೆಯಲ್ಲಿ ಪೊಲೀಸ್ ಪೇದೆಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ. ಈ ಹಿಂದೆ ತುರುವೇಕೆರೆ ಪೊಲೀಸ್ ಠಾಣೆಯಲ್ಲೂ ಕೆಲಸ ಮಾಡಿದ್ದರು ಎನ್ನಲಾಗಿದೆ. ಆತ್ಮಹತ್ಯೆಗೆ ನಿಖರ ಕಾರಣ ತಿಳಿದುಬಂದಿಲ್ಲ. ಸ್ಥಳಕ್ಕೆ ಯಶವಂತಪುರ ರೈಲ್ವೆ ಹಾಗೂ ಗುಬ್ಬಿ ಪೊಲೀಸರು ಭೇಟಿ ನೀಡಿದ್ದು, ಈ ಸಂಬಂಧ ಪ್ರಕರಣ ದಾಖಲಾಗಿದ್ದು ತನಿಖೆಯನ್ನು ನಡೆಸಲಾಗುತ್ತಿದೆ.


☛ ಉದಯವಾಹಿನಿ ಚಿತ್ರ

ಕನಕಪುರ: ಇಂದು ಶ್ರೀ ದೇಗುಲ ಮಠದ ಹಿರಿಯ ವಿದ್ಯಾರ್ಥಿಗಳು ಮತ್ತು ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವರಾದ ವಿ ಸೋಮಣ್ಣನವರ ಜನ್ಮ ದಿನದ ಪ್ರಯುಕ್ತ ಶ್ರೀ ದೇಗುಲಮಠದ ಕಿರಿಯ ಪರಮಪೂಜ್ಯ ಶ್ರೀ ಶ್ರೀ ಚನ್ನಬಸವ ಮಹಾಸ್ವಾಮಿಗಳವರ ಆಶೀರ್ವದಿಸಿದರು.

### ಗುಂಡಿಟ್ಟು ಪತ್ನಿಯನ್ನೇ ಕೊಲೆಗೈದ ಪತಿ

• ಉದಯವಾಹಿನಿ ಕೊಡಗು

ಪತಿ ಮಹಾಶಯನೊಬ್ಬ ಗುಂಡು ಹಾರಿಸಿ ಪತ್ನಿಯನ್ನೇ ಬರ್ಬರವಾಗಿ ಕೊಲೆಗೈದಿರುವ ಘಟನೆ ಕೊಡಗು ಜಿಲ್ಲೆಯ ವಿರಾಜಪೇಟೆ ತಾಲ್ಲೂಕಿನ ಬೇಟೋಳಿ ಗ್ರಾಮದಲ್ಲಿ ನಡೆದಿದೆ.

ಪತಿ ನಾಯಕಂಡ ಬೋಪಣ್ಣ, ಪತ್ನಿ ಶಿಲ್ಪಾ (36)ಳನ್ನು ಗುಂಡಿಟ್ಟು ಕೊಂದಿದ್ದಾನೆ. ಪತ್ನಿ ಹತ್ಯೆ ಬಳಿಕ ಕೋವಿಯೊಂದಿಗೆ ಪೊಲೀಸರಿಗೆ ಶರಣಾಗಿದ್ದಾನೆ ಆರೋಪಿ. ವಿರಾಜಪೇಟೆ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ. ಆರೋಪಿ ತನ್ನ ಪತ್ನಿಯನ್ನು ಗುಂಡಿಟ್ಟು ಕೊಲ್ಲಲು ನಿಖರ ಕಾರಣ ತಿಳಿದುಬಂದಿಲ್ಲ.

### ಚೆಲುವಿನ ಚಿತ್ತಾರ ಚೋರನ ಜಲಪಾತ

• ಉದಯವಾಹಿನಿ ಸೋಮವಾರಪೇಟೆ

ತಾಲ್ಲೂಕಿನ ಐಗೂರು ಗ್ರಾಮದಲ್ಲಿ ಹರಿಯುವ ಚೋರನ ಹೊಳೆಯಲ್ಲಿ ಈಗ ಮುಂಗಾರಿನ ಆರ್ಭಟದಿಂದಾಗಿ ನೀರಿನ ಪ್ರಮಾಣ ಅಧಿಕವಿದ್ದು, ದೇವಾಲಯದ ಸಮೀಪದ ಬಂಡೆಕಲ್ಲುಗಳಿಂದ ಧುಮ್ಮಿಕ್ಕುವ ಚೋರನ ಜಲಪಾತ ದಾರಿಹೋಕರನ್ನೂ ಸೇರಿದಂತೆ ಪ್ರವಾಸಿಗರನ್ನು ಆಕರ್ಷಿಸುತ್ತಿದೆ.


☛ ಉದಯವಾಹಿನಿ ಚಿತ್ರ

ಸುತ್ತಲೂ ಕಾಫಿ ತೋಟ ಮತ್ತು ಭತ್ತದ ಗದ್ದೆಗಳ ನಡುವೆ ಇರುವ ಈ ಹೊಳೆಗೆ, ವರ್ಷವಿಡೀ ಸ್ಥಳೀಯರು ತೆರಳಿ ವಿಹರಿಸುತ್ತಾರೆ. ಆದರೆ, ಜಲಪಾತ ವೀಕ್ಷಣೆಗೆ ಸರಿಯಾದ ಸ್ಥಳವಿಲ್ಲದೆ, ವಿಶಾಲವಾದ ಸ್ಥಳದಲ್ಲಿ ಹರಿಯುವ ಸ್ಥಳದಲ್ಲಿ ದೂರದಿಂದಲೇ ನಿಂತು ನೋಡಬೇಕಿದೆ.

ಶಾಂತಳ್ಳಿ ಹೋಬಳಿಯಲ್ಲಿ ಜನ್ಮ ತಳೆಯುವ ಚೋರನ ಹೊಳೆ, ತಲ್ತಾರೆಶೆಟ್ಟಳ್ಳಿ, ಅಭಿಮಠ, ತಾಕೇರಿ, ಕಿರಗಂದೂರು, ಐಗೂರು, ಯಡವಾರೆ, ಗರಗಂದೂರಿನ ಮೂಲಕ ಹಾರಂಗಿ ಆಣೆಕಟ್ಟೆಯನ್ನು ಸೇರುತ್ತದೆ. ಹಾರಂಗಿ ಹೊಳೆಗೆ ಸೇರುವ ಸಂಗಮದ ಗರಗಂದೂರಿನಲ್ಲಿ ಒಂದು ಚಿಕ್ಕ ದ್ವೀಪವನ್ನು ಸೃಷ್ಟಿಸುತ್ತದೆ. ನೂರಾರು ಎಕರೆ ಕೃಷಿ ಭೂಮಿಗೆ ನೀರನ್ನು ಒದಗಿಸುವ ಇದು ಈ ಭಾಗದ ಪ್ರಮುಖ ಹೊಳೆಯಾಗಿದೆ.

### ಕಾರ್ಯಕರ್ತರಿಗೆ ಟಾಸ್ಕ್ ಕೊಟ್ಟ ಡಿಕೆಶಿ

• ಉದಯವಾಹಿನಿ ರಾಮನಗರ



ಬಿಜೆಪಿ-ಜೆಡಿಎಸ್ ಕಾರ್ಯಕರ್ತರನ್ನು ಶಿಕಾರಿ ಮಾಡಿ, ಒಬ್ಬ ಮುಖಂಡ ಕನಿಷ್ಠ 10 ಮಂದಿಯನ್ನು ಪಕ್ಷಕ್ಕೆ ಕರೆತನ್ನಿ ಎಂದು ಪಕ್ಷದ ಕಾರ್ಯಕರ್ತ ರಿಗೆ ಡಿಸಿಎಂ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಟಾಸ್ಕ್ ನೀಡಿದ್ದಾರೆ. ಈ ವೇಳೆ ಮಾತನಾಡಿದ ಡಿಕೆಶಿ, ಬಿಜೆಪಿ-ಜೆಡಿಎಸ್ ಕಾರ್ಯಕರ್ತರನ್ನ ಶಿಕಾರಿ ಮಾಡಿ.

ಒಬ್ಬೊಬ್ಬ ಮುಖಂಡ ಕನಿಷ್ಠ ಹತ್ತು ಮಂದಿಯನ್ನ ಪಕ್ಷಕ್ಕೆ ಕರೆತರಬೇಕು. ಬಿಜೆಪಿ-ಜೆಡಿಎಸ್ ಮೈತ್ರಿಯಿಂದ ಬೇಸತ್ತವರನ್ನ ಕಾಂಗ್ರೆಸ್‌ಗೆ ಕರೆತನ್ನಿ ಎಂದು ಸೂಚನೆ ನೀಡಿದ್ದಾರೆ. ನನಗೆ ಚನ್ನಪಟ್ಟಣದಲ್ಲಿ ನಿಲ್ಲಬೇಕೆಂಬ ಆಸೆ ಇದೆ. ಆದರೆ ಪಾರ್ಟಿಯವರು ಬೇಡ ಅಂತಿದ್ದಾರೆ. ನೀನು ಕೆಪಿಸಿಸಿ ಅಧ್ಯಕ್ಷ, ಕನಕಪುರ ಎಂಎಲ್‌ಎ ಇದ್ದೀಯ. ನೀನು ಮತ್ತೆ ನಿಲ್ಲೋದು ಬೇಡ ಎನ್ನುತ್ತಿದ್ದಾರೆ. ಚನ್ನಪಟ್ಟಣದಲ್ಲಿ ಅಭ್ಯರ್ಥಿ ಯಾರೇ ಆಗಲಿ, ಡಿಕೆಶಿನೇ ಅಭ್ಯರ್ಥಿ ಎಂದು ಚುನಾವಣೆಯಲ್ಲಿ ಪ್ರಚಾರ ಮಾಡಿ ಎಂದು ಕಾರ್ಯಕರ್ತರಿಗೆ ಡಿಕೆಶಿ ಸಲಹೆ ನೀಡಿದ್ದಾರೆ. ಚನ್ನಪಟ್ಟಣ ಉಪಚುನಾವಣಾ ಕಣ ರಂಗೇರಿದೆ. ಉಪಚುನಾವಣೆಗೆ ಕಾಂಗ್ರೆಸ್ ಪಕ್ಷ ಸದ್ದಿಲ್ಲದೇ ತಯಾರಿ ನಡೆಸುತ್ತಿದೆ. ಮೈತ್ರಿ ನಾಯಕರ ಒಳಜಗಳದ ಲಾಭ ಪಡೆಯಲು ಮುಂದಾಗಿರುವ ಕಾಂಗ್ರೆಸ್, ಸಾಲು ಸಾಲು ಸಭೆಗಳನ್ನ ನಡೆಸಿ ಪಕ್ಷ ಸೇರ್ಪಡೆ ಕಾರ್ಯಕ್ರಮಗಳನ್ನ ನಡೆಸುತ್ತಿದೆ.

### ಪಕ್ಷಿಧಾಮದಲ್ಲಿ ದೋಣಿ ವಿಹಾರಕ್ಕೆ ನಿರ್ಬಂಧ

• ಉದಯವಾಹಿನಿ ಮಂಡ್ಯ

ರಾಜ್ಯದಲ್ಲಿ ಮಳೆಯ ಅಬ್ಬರ ಮುಂದುವರೆದಿದ್ದು, ಜಲಾಶಯಗಳು ಭರ್ತಿಯಾಗಿರುವುದರಿಂದ ನದಿಗಳಿಗೆ ನೀರು ಬಿಡಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ನದಿ ತೀರಪ್ರದೇಶಗಳಲ್ಲಿ ಕಟ್ಟೆಚ್ಚರಕ್ಕೆ ಸೂಚಿಸಲಾಗಿದೆ.

ಇದೇ ರೀತಿ ಕೆ.ಆರ್.ಎಸ್ ಜಲಾಶಯದಿಂದ ಕಾವೇರಿ ನದಿಗೆ ನೀರು ಬಿಡಲಾಗುತ್ತಿರುವ ಹಿನ್ನೆಲೆಯಲ್ಲಿ ರಂಗನತಿಟ್ಟು ಪಕ್ಷಿಧಾಮದಲ್ಲಿ ದೋಣಿ ವಿಹಾರಕ್ಕೆ ನಿರ್ಬಂಧ ವಿಧಿಸಲಾಗಿದೆ.

ವೀಕೆಂಡ್ ಬೆನ್ನಲ್ಲೇ ರಂಗನತಿಟ್ಟು ಪಕ್ಷಿಧಾಮಕ್ಕೆ ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವ ಸಾಧ್ಯತೆ ಇದೆ. ಅಲ್ಲದೇ ಪ್ರವಾಸಿಗರು ಪಕ್ಷಿಧಾಮದಲ್ಲಿ ದೋಣಿ ವಿಹಾರಕ್ಕೆ ತೆರಳುವುದು ಸಾಮಾನ್ಯ. ಕೆ.ಆರ್.ಎಸ್.ನಿಂದ ಕಾವೇರಿ ನದಿಗೆ ನೀರು ಬಿಡಲಾಗುತ್ತಿರುವ ಹಿನ್ನೆಲೆಯಲ್ಲಿ ನದಿಯಲ್ಲಿ ನೀರಿನ ಪ್ರವಾಹ ಹೆಚ್ಚಾಗಲಿದೆ. ಈ ಹಿನ್ನೆಲೆಯಲ್ಲಿ ರಂಗನತಿಟ್ಟು ಪಕ್ಷಿಧಾಮದಲ್ಲಿ ಇಂದಿನಿಂದ ತಾತ್ಕಲಿಕವಾಗಿ ದೋಣಿ ವಿಹಾರ ನಿಷೇಧಿಸಲಾಗಿದೆ. ಮುಂದಿನ ಆದೇಶದವರೆಗೂ ದೋಣಿ ವಿಹಾರ ಬಂದ್ ಆಗಲಿದ್ದು, ಪ್ರವಾಸಿಗರಿಗೆ ರಂಗನತಿಟ್ಟು ವೀಕ್ಷಣೆಗೆ ಮಾತ್ರ ಅವಕಾಶ ನೀಡಲಾಗಿದೆ ಎಂದು ಮೈಸೂರು ವನ್ಯಜೀವಿ ವಿಭಾಗ ತಿಳಿದಿದೆ. ಕೆ.ಆರ್.ಎಸ್ ಸಂಪೂರ್ಣ ಭರ್ತಿಯಾಗಿದ್ದು, ಇಂದು ಕಾವೇರಿ ನದಿಗೆ 10 ಸಾವಿರ ಕ್ಯೂಸೆಕ್ ನೀರು ಬಿಡಲಾಗಿದೆ.

ಅಂತರಾಳದಿಂದ... EDITORIAL

# ಉತ್ತರ ಪ್ರದೇಶದಲ್ಲಿ ಹಿಟ್ಲರ್ ಆದೇಶ

ಸರಕಾರದಿಂದ ತಾವೇನು ನಿರೀಕ್ಷಿಸುತ್ತಿದ್ದೇವೆ ಎನ್ನುವುದನ್ನು ಲೋಕಸಭಾ ಚುನಾವಣೆಯಲ್ಲಿ ಉತ್ತರ ಪ್ರದೇಶದ ಜನರು ದೇಶಕ್ಕೆ ಕೇಳಿಸುವಂತೆ ಸ್ಪಷ್ಟವಾಗಿ ಹೇಳಿದ್ದರು. ಅಭಿವೃದ್ಧಿಯನ್ನು ಕಡೆಗಣಿಸಿ ಬುಲ್ಡೋಜರ್ ಮೂಲಕ ಜನರ ಮನ-ಮನೆಗಳನ್ನು ಧ್ವಂಸಗೊಳಿಸುವ ಆದಿತ್ಯನಾಥ್ ರಾಜಕಾರಣಕ್ಕೆ ಮರ್ಮಾಘಾತವನ್ನು ನೀಡಿತ್ತು ಚುನಾವಣೆಯ ಫಲಿತಾಂಶ. ಆದರೆ ಇದರಿಂದ ಆದಿತ್ಯನಾಥ್ ಪಾಠ ಕಲಿತಂತಿಲ್ಲ. ಅಥವಾ ಅವರಿಗೆ ದ್ವೇಷ ಮತ್ತು ಧ್ವಂಸ ಗೊಳಿಸುವ ರಾಜಕಾರಣಕ್ಕೆ ಹೊರತಾದ ಇನ್ನೊಂದು ರಾಜಕೀಯದ ಪರಿಚಯವೇ ಇದ್ದಂತಿಲ್ಲ. ಇದೇ ಸಂದರ್ಭದಲ್ಲಿ ರಾಮಮಂದಿರ ಸೋರುವ ಮೂಲಕ ರಾಷ್ಟ್ರಮಟ್ಟದಲ್ಲಿ ಸುದ್ದಿಯಾಗುತ್ತಿದೆ. ರಾಮಪಥ ಒಂದೆರಡು ಮಳೆಗೆ ಹೊಂಡಗಳಿಂದಾವೃತವಾಗಿದೆ. ಆದಿತ್ಯನಾಥ್‌ನ ನಕಲಿ ರಾಮರಾಜ್ಯದ ಬಣ್ಣ ಬಯಲಾಗಿದೆ. ಜನರ ಮೇಲೆ ಪ್ರಯೋಗಿಸಿದ ಬುಲ್ಡೋಜರ್ ಇದೀಗ ತನ್ನ ಕುರ್ಚಿಯನ್ನೇ ಬುಡಮೇಲುಗೊಳಿಸಲು ಯತ್ನಿಸುತ್ತಿರುವುದು ಅವರ ಗಮನಕ್ಕೆ ಬಂದಿದೆ. ಈಗಾಗಲೇ, ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿಗಳ ನಡುವೆ ತಿಕ್ಕಾಟಗಳು ಆರಂಭವಾಗಿವೆ. ದಿಲ್ಲಿ ವರಿಷ್ಠರು ಆದಿತ್ಯ ನಾಥ್‌ಗೆ ಪರ್ಯಾಯವಾಗಿ ಉಪಮುಖ್ಯಮಂತ್ರಿ ಕೇಶವ್ ಪ್ರಸಾದ್ ಮೌರ್ಯರನ್ನು ಮುಂದಿಡುವ ಪ್ರಯತ್ನ ನಡೆಸುತ್ತಿದ್ದಾರೆ. ತನ್ನ ಕುರ್ಚಿಯನ್ನು ಉಳಿಸಿಕೊಳ್ಳುವ ಭಾಗವಾಗಿ ಆದಿತ್ಯನಾಥ್‌ರಿಗೆ ಮತ್ತೆ ರಾಜ್ಯವನ್ನು ಧರ್ಮದ ಹೆಸರಿನಲ್ಲಿ ವಿಭಜಿಸುವುದಕ್ಕೆ ಹೊರತಾದ ಇನ್ನಾವ ದಾರಿಯೂ ಕಾಣುತ್ತಿಲ್ಲ. ಪರಿಣಾಮವಾಗಿ ಕನ್ವರ್ ಯಾತ್ರೆಯನ್ನು ತನ್ನ ಕ್ಷುದ್ರ ರಾಜಕಾರಣಕ್ಕೆ ಬಳಸಲು ಮುಂದಾಗಿದ್ದಾರೆ.ಕನ್ವರ್ ಯಾತ್ರೆ ಸಾಗುವ 250 ಕಿ. ಮೀ. ಸುದೀರ್ಘವಾದ ದಾರಿಯಲ್ಲಿ ಉದ್ದಕ್ಕೂ ಇರುವ ಎಲ್ಲ ಹೊಟೇಲ್‌ಗಳು, ಆಹಾರ ಮಾರಾಟದ ಅಂಗಡಿಗಳು ತಮ್ಮ ಮಾಲಕರು ಮತ್ತು ಸಿಬ್ಬಂದಿಯ ಹೆಸರಿನ ಪಟ್ಟಿಯನ್ನು ಸಾರ್ವಜನಿಕವಾಗಿ ಪ್ರದರ್ಶಿಸಬೇಕು ಎನ್ನುವ ಹೊಸ ಆದೇಶವನ್ನು ಮುಝಫ್ಫರ್ ನಗರ ಪೊಲೀಸರು ನೀಡಿದ್ದಾರೆ. ಈವರೆಗೆ ಯಾರು ಎಲ್ಲಿ ವ್ಯಾಪಾರ ಮಾಡಬೇಕು ಎನ್ನುವುದು ದೇವಳದ ಪರಿಸರಕ್ಕಷ್ಟೇ ಸೀಮಿತವಾಗಿರುತ್ತಿತ್ತು. ದೇವಸ್ಥಾನದ ಆವರಣದಲ್ಲಿ ಜಾತ್ರೆಯ ಸಂದರ್ಭದಲ್ಲಿ ನಿರ್ದಿಷ್ಟ ಸಮುದಾಯದ ಜನರು ವ್ಯಾಪಾರ ಮಾಡಬಾರದು, ಅಂಗಡಿಗಳನ್ನು ಇಡಬಾರದು ಎನ್ನುವ ದಾಂಧಲೆಗಳನ್ನು ಸಂಘಪರಿವಾರದ ಕಾರ್ಯಕರ್ತರು ಕರ್ನಾಟಕದಲ್ಲೂ ಮಾಡಿದ್ದಾರೆ. ಅವರ ಉದ್ದೇಶ, ದೇವಸ್ಥಾನ, ದರ್ಗಾ,ಮಸೀದಿ ಮೊದಲಾದ ಪ್ರದೇಶಗಳಲ್ಲಿ ಇರುವ ಹಿಂದೂ-ಮುಸ್ಲಿಮರ ನಡುವಿನ ಕೊಡು-ಕೊಳ್ಳುವಿಕೆಯನ್ನು ಸೌಹಾರ್ದವನ್ನು ಇಲ್ಲವಾಗಿಸುವುದು. ತಲೆತಲಾಂತರಗಳಿಂದ ಈ ವ್ಯಾಪಾರ, ಕೊಡುಕೊಳ್ಳುವಿಕೆಗಳು ಎರಡೂ ಧರ್ಮಗಳ ನಡುವಿನ ಸಂಬಂಧವನ್ನು ಗಟ್ಟಿಗೊಳಿಸುತ್ತಾ ಬಂದಿದೆ. ಬಿರುಕುಮೂಡಿಸುವುದಕ್ಕಾಗಿಯೇ ಜಾತ್ರೆಯಲ್ಲಿ ನಿರ್ದಿಷ್ಟ ಸಮುದಾಯದ ಜನರು ಅಂಗಡಿಗಳನ್ನು ಇಡಬಾರದು ಎಂದು ಸಂಘಪರಿವಾರ ಒತ್ತಾಯಿಸುತ್ತಾ ಬಂದಿದೆ. ಇದನ್ನು ಜನಸಾಮಾನ್ಯರೂ ಅರ್ಥ ಮಾಡಿಕೊಂಡಿದ್ದಾರೆ. ಉತ್ತರ ಪ್ರದೇಶದಲ್ಲಿ ಇದು ಇನ್ನೂ ಒಂದು ಹೆಜ್ಜೆ ಮುಂದೆ ಹೋಗಿದೆ. ಪೊಲೀಸರ ಆದೇಶದಂತೆ ಸುಮಾರು 250 ಕಿ.ಮೀ. ರಸ್ತೆ ಉದ್ದಕ್ಕೆ ಹೊಟೇಲು, ಅಂಗಡಿಗಳನ್ನು ಇಟ್ಟವರು ತಮ್ಮ ಹೊಟೇಲ್ ಮಾಲಕರು ಮತ್ತು ಸಿಬ್ಬಂದಿಯ ಹೆಸರನ್ನು ಪ್ರದರ್ಶಿಸಬೇಕು. ರಸ್ತೆಯಲ್ಲಿ ಸಾಗುವವರೆಲ್ಲರೂ ತಮ್ಮ ತಮ್ಮ ಹೆಸರುಗಳನ್ನು ಬಹಿರಂಗಪಡಿಸಬೇಕು ಎನ್ನುವ ಆದೇಶವನ್ನು ಸರಕಾರ ಪುಣ್ಯಕ್ಕೆ ಇನ್ನೂ ಹೊರಡಿಸಿಲ್ಲ. ಈ ಆದೇಶದ ಮೂಲಕ ಕಾನೂನುಸುವ್ಯವಸ್ಥೆ ಕಾಪಾಡುವುದು ಪೊಲೀಸರ ಉದ್ದೇಶವಲ್ಲ. ಬದಲಿಗೆ ನಿರ್ದಿಷ್ಟ ಸಮುದಾಯದ ವಿರುದ್ಧ ಜನರನ್ನು ಎತ್ತಿಕಟ್ಟುವುದು ಅವರ ಉದ್ದೇಶ ಎನ್ನುವುದು ಮೇಲ್ನೋಟಕ್ಕೆ ಗೊತ್ತಾಗಿ ಬಿಡುತ್ತದೆ. ಯಾತ್ರಿಕರ ವೇಷದಲ್ಲಿ ನಾಳೆ ದುಷ್ಕರ್ಮಿಗಳು ನಿರ್ದಿಷ್ಟ ಸಮುದಾಯದ ಅಂಗಡಿಗಳ ಮೇಲೆ ದಾಳಿ ಮಾಡುವುದಕ್ಕೆ ಪೊಲೀಸ್ ಇಲಾಖೆಯೇ ಈ ಮೂಲಕ ಅನುಕೂಲ ಮಾಡಿಕೊಡುತ್ತಿದೆ. ಇದರ ವಿರುದ್ಧ ವಿರೋಧ ಪಕ್ಷಗಳು ಮಾತ್ರವಲ್ಲ ಸಮಾಜದ ಬೇರೆ.ಬೇರೆ ವಲಯದ ಗಣ್ಯರಿಂದ ಹೇಳಿಕೆಗಳು ಹೊರ ಬಿದ್ದವು. ಇದೊಂದು ಸಾಮಾಜಿಕ ಅಪರಾಧ. ನ್ಯಾಯಾಲಯ ಸ್ವಯಂ ಪ್ರೇರಿತವಾಗಿ ಇದರ ವಿರುದ್ಧ ಪ್ರಕರಣದಾಖಲಿಸಬೇಕು ಎಂದು ಅಖಿಲೇಶ್ ಯಾದವ್ ಒತ್ತಾಯಿಸಿದ್ದಾರೆ. ಹಿಟ್ಲರ್‌ನ ಕಾಲದಲ್ಲಿಜರ್ಮನಿಯಲ್ಲೂ ಅಂಗಡಿ ಮತ್ತು ಮನೆಗಳ ಮೇಲೆ ನಿರ್ದಿಷ್ಟ ಗುರುತುಗಳನ್ನು ಹಾಕುತ್ತಿದ್ದರು. ಇದೊಂದು ಆಘಾತಕಾರಿ ಆದೇಶ ಎಂದು ಹಿರಿಯ ಲೇಖಕ, ಹಾಡು ರಚನೆಕಾರ ಜಾವೇದ್ ಅಖ್ತರ್ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ತೀವ್ರ ಟೀಕೆಗಳು ಬಂದ ಬಳಿಕ ಪೊಲೀಸರು ಈ ಆದೇಶದಲ್ಲಿ ಸಣ್ಣದೊಂದು ಮಾರ್ಪಾಡು ಮಾಡಿದರು. ಅಂದರೆ, ಅಂಗಡಿ ಮಾಲಕರು ತಮ್ಮ ಹೆಸರು ಪ್ರಕಟಿಸುವುದು ಐಚ್ಛಿಕ ಎಂದು ಹೇಳಿಕೆ ನೀಡಿದರು. ಆದರೆ ಮಧ್ಯ ಪ್ರವೇಶಿದ ಉತ್ತರ ಪ್ರದೇಶ ಮುಖ್ಯಮಂತ್ರಿ ಆದಿತ್ಯನಾಥ್, ಹೆಸರು ಪ್ರಕಟಿಸುವುದು ಕಡ್ಡಾಯ ಎಂದು ಮರು ಆದೇಶ ಹೊರಡಿಸಿದ್ದಾರೆ. 'ಯಾತ್ರಾರ್ಥಿಗಳ ಪಾವಿತ್ರ್ಯತೆಯನ್ನು ಕಾಪಾಡುವುದೇ ಇದರ ಉದ್ದೇಶ' ಎಂದು ತಮ್ಮ ಆದೇಶವನ್ನು ಸಮರ್ಥಿಸಿಕೊಂಡಿದ್ದಾರೆ.ಸಾಧಾರಣವಾಗಿ ಆಹಾರದ ಮಳಿಗೆಗಳು ತಮ್ಮ ತಮ್ಮ ಆಹಾರದ ಗುಣಮಟ್ಟಗಳ ಪ್ರಮಾಣ ಪತ್ರವನ್ನು ಪ್ರಕಟಿಸಬೇಕು ಎಂದು ಒತ್ತಾಯಿಸುವುದು ಕ್ರಮ. ಕಳಪೆ ಆಹಾರದ ವಿರುದ್ಧ ಕ್ರಮ ತೆಗೆದುಕೊಂಡು ಯಾತ್ರಾರ್ಥಿಗಳ ಆರೋಗ್ಯವನ್ನು ಕಾಪಾಡುವುದು ಸರಕಾರದ ಕರ್ತವ್ಯ. ಆದರೆ ಇಲ್ಲಿ ಅಂಗಡಿಗಳ ಮಾಲಕರ ಹೆಸರಿನ ಆಧಾರದಲ್ಲಿ ಆಹಾರದ ಗುಣಮಟ್ಟವನ್ನು ನಿರ್ಧರಿಸಲು ಮುಂದಾಗಿದೆ. ಸರಕಾರದ ಈ ಕ್ರಮವನ್ನು ವಿರೋಧ ಪಕ್ಷಗಳು ಮಾತ್ರವಲ್ಲ, ಸ್ವತಃ ಬಿಜೆಪಿಯೊಳಗಿರುವ ಕೆಲವು ನಾಯಕರೂ ಖಂಡಿಸಿದ್ದಾರೆ. ಮುಖ್ಯವಾಗಿ ಬಿಜೆಪಿ ಹಿರಿಯ ನಾಯಕ ಮುಖ್ತಾರ್ ಅಬ್ಬಾಸ್ ನಖ್ವಿ ಅವರು ತಮ್ಮ ಅಸಮಾಧಾನವನ್ನು ಹೊರಹಾಕಿದ್ದಾರೆ. ಇದು ಉತ್ತರ ಪ್ರದೇಶದಲ್ಲಿ ಜಾತಿ ಅಸ್ಪೃಶ್ಯತೆಗೂ ಕಾರಣವಾಗಬಹುದು ಎಂದು ಅವರು ಆತಂಕ ತೋಡಿಕೊಂಡಿದ್ದಾರೆ.

> ''ಯಾತ್ರಾರ್ಥಿಗಳು ರಸ್ತೆ ಬದಿಯ ತಿಂಡಿ, ಅಂಗಡಿಗಳಿಂದ ಆಹಾರ ಖರೀದಿಸುತ್ತಾರೆ. ಅವರು ಯಾವುದೇ ಗೊಂದಲಕ್ಕೆ ಒಳಗಾಗಬಾರದು ಎನ್ನುವ ದೃಷ್ಟಿಯಿಂದ ಈ ಆದೇಶವನ್ನು ಹೊರಡಿಸಲಾಗಿದೆ. ಮುಂದೆ ಯಾವುದೇ ಆರೋಪ, ಪ್ರತ್ಯಾರೋಪಗಳು ಬಾರದಂತೆ ಹಾಗೂ ಕಾನೂನು ಸುವ್ಯವಸ್ಥೆಗೆ ಧಕ್ಕೆ ಬರದಂತೆ ಈ ಕ್ರಮವನ್ನು ತೆಗೆದುಕೊಳ್ಳಲಾಗಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.

# ಮಹಾಭಾರತ

## ಸ್ತ್ರೀಪರ್ವ



• ಹಿಂದಿನ ಸಂಚಿಕೆಯಿಂದ

ಅದಕ್ಕೆ ಕೃಷ್ಣನು, ''ಹೌದು'' ಎಂದು ಉತ್ತರಿಸಿದಾಗ ಅಚ್ಚರಿಯಿಂದ ಪಾಂಡವರೆಲ್ಲರೂ ಕೃಷ್ಣನ ಕಡೆಗೆ ತಿರುಗಿದರು. ಯುದಿಷ್ಠಿರನು, ನಿನಗೂ ಗೊತ್ತಿತ್ತೆ ಕೃಷ್ಣ'' ಎಂದು ಕೇಳಿದ್ದಕ್ಕೂ, ''ಹೌದು'' ಎಂದೇ ಉತ್ತರ ಬಂದಿತು. ಇದಾದ ಮೇಲೆ ಯಾರೊಬ್ಬರಿಗೂ ಉಸಿರೆತ್ತಲಾಗಲಿಲ್ಲ ರಾಧೇಯನಿಗೆ ತಾನು ಸೂತಪುತ್ರನಲ್ಲ. ಕುಂತಿ ಸೂರ್ಯರ ಮಗ ಎಂದು ಗೊತ್ತಿತ್ತು; ಆದರೂ ತಮ್ಮಂದಿರು ತನ್ನನ್ನು ಸೂತಪುತ್ರನೆಂದು ಹಾಸ್ಯಮಾಡಲು ಅವಕಾಶಕೊಟ್ಟಿದ್ದ ವ್ಯರ್ಥ ಕ್ರೋಧದಿಂದ ಯುಧಿಷ್ಠಿರ ಹಣೆ ಹಣೆ ಚಚ್ಚಿಕೊಂಡ. ಅಯ್ಯೋ, ರಾಧೇಯ ಸತ್ತನೆಂದು ಕೇಳಿದ ಕೂಡಲೆ ಅವನು ಸತ್ತಿರುವುದು ಹೌದೋ ಅಲ್ಲವೋ ಎಂದು ನೋಡಿಬರಲು ರಣರಂಗಕ್ಕೆ ಹೋದೆ ಅವನು ನಿಜವಾಗಿಯೂ ಸತ್ತಿರುವುದನ್ನು ಕಂಡು ಖುಷಿಪಟ್ಟೆ ಅಮ್ಮಾ, ನಮ್ಮನ್ನು ಅಷ್ಟೊಂದು ಪ್ರೀತಿಸುತ್ತಿದ್ದ ನೀನು ನಮಗೆ ಹೇಗೆತಾನೆ ಇಂಥಾದ್ದು ಮಾಡಿಬಿಟ್ಟೆ'' ಈಗ ಯುಧಿಷ್ಠಿರ ನೇರವಾಗಿ ತಾಯಿಯ ಮುಖ ನೋಡಿದ. ಅವಳು ದುಃಖವನ್ನು ನೋಡಿದ ಅವನ ಹೃದಯ ತುಂಬಿ ಬಂತು. ಮುಂದೆ ಒಂದೂ ಮಾತನಾಡಲಿಲ್ಲ. ಅವಳು ಅನುಭವಿಸಿದ್ದು ಸಾಕು. ಯುಧಿಷ್ಠಿರನು ಗಂಗಾನದಿಗಿಳಿದ. ಕಣ್ಣೀರಿಂದಲೀ ತರ್ಪಣ ಕೊಡುತ್ತಿರುವಂತೆ ಕಾಣಿಸಿದ. ಈ ಹೊಸ ದುಃಖದಲ್ಲಿ ಅಭಿಮನ್ಯುವಿನ ಮರಣ, ದ್ರೌಪದಿಯ ಮಕ್ಕಳ ಮರಣ ಎಲ್ಲವೂ ಹಿಮ್ಮೆಟ್ಟಿದವು. ಅಣ್ಣನನ್ನೇ ಕೊಂದಿದ್ದರು ಅವರು. ಗಂಗಾತೀರದಿಂದ ಮರಳಿ ಬರುತ್ತಿದ್ದ ಪಾಂಡವರ ಮನಸ್ಸಿನಲ್ಲಿದ್ದದ್ದು ಇದೊಂದೇ ಯೋಚನೆ. ತರ್ಪಣ ಕೊಟ್ಟಾದಮೇಲೆ ಇಲ್ಲರೂ ನಗರಕ್ಕೆ ಹಿಂದಿರುಗಿದರು. ಗಾಂಧಾರಿ, ಕುಂತಿ, ದ್ರೌಪದಿ ಎಲ್ಲರೂ ಮಕ್ಕಳನ್ನು ಕಳೆದುಕೊಂಡವರೇ. ಜೊತೆಗೆ ಬಂದ ಕೃಷ್ಣನು ಅವರ ದುಃಖಕ್ಕೆ ಅವರನ್ನು ಬಿಟ್ಟು, ಸಾತ್ಯಕಿಯೊಂದಿಗೆ ನಾಲ್ಕು ಹೆಜ್ಜೆ ಹಿಂದೆಯೇ ನಡೆದುಕೊಂಡು ಬಂದ.

### ಶಾಂತಿಪರ್ವ

ಸೂತಕವೆಂದು ಒಂದು ತಿಂಗಳು ಅವರು ನಗರದಿಂದ ಹೊರಗೇ ಉಳಿಯಬೇಕಾಯಿತು. ಕರ್ಮಾಂತರಗಳು ಮುಗಿಯುವವರೆಗೂ ಅವರು ನಗರಪ್ರವೇಶ ಮಾಡುವಂತಿರಲಿಲ್ಲ. ಎಲ್ಲರೂ ಗಂಗಾತಟದಲ್ಲಿ ತಾತ್ಪೂರ್ತಿಕವಾಗಿ ಹಾಕಿದ ಗುಡಿಸಲುಗಳಲ್ಲಿ ವಾಸಿಸತೊಡಗಿದರು. ವ್ಯಾಸ ನಾರದ ಮೊದಲಾದ ಋಷಿಗಳು ಯುಧಿಷ್ಠಿರನನ್ನು ನೋಡುವುದಕ್ಕೆಂದು ಬಂದರು. ನಾರದನು, ''ಏಕೆ ಇಷ್ಟೊಂದು ದುಃಖದಲ್ಲಿ ಮುಳುಗಿಹೋಗಿದ್ದೀಯೆ ಕೃಷ್ಣನ ಕೃಪೆಯಿಂದ ಹಾಗೂ ತಮ್ಮಂದಿರ, ಪಾಂಚಾಲರ ಶೌರ್ಯದಿಂದ ಈಗ ನೀನು ಭೂಮಂಡಲಕ್ಕೇ ಒಡೆಯನಾಗಿದ್ದೀಯೆ. ನಿನ್ನ ಯಾತನೆಯ ವರ್ಷಗಳು ಕಳೆದವು. ನಿನ್ನ ಯಶಸ್ಸಿಗಾಗಿ ಅಭಿನಂದಿಸುತ್ತೇನೆ'' ಎಂದು ಹೇಳಿದೊಡನೆ ಯುಧಿಷ್ಠಿರನ ದುಃಖದ ಕಟ್ಟೆ ಒಡೆಯಿತು.

ಮುಂದುವರಿಯುವುದು...

# ಬಜೆಟ್‌ನಲ್ಲಿ ಕರ್ನಾಟಕಕ್ಕೆ ಹೊಸ ವಂದೇ ಭಾರತ್ ರೈಲು ಘೋಷಣೆ

## ■ ರಾಜ್ಯಕ್ಕೆ ಹೊಸ ವಂದೇ ಭಾರತ್ ರೈಲುಗಳನ್ನು ಘೋಷಣೆ ಮಾಡಬೇಕು ಎಂಬುದು ಬೇಡಿಕೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

**ವಂದೇ ಭಾರತ್ ರೈಲುಗಳು ಓಡಾಟ**

ಸೆಮಿ-ಹೈ ಸ್ಪೀಡ್ ರೈಲು ವಂದೇ ಭಾರತ್ ಎಕ್ಸ್‌ಪ್ರೆಸ್‌ಗೆ ಭಾರೀ ಬೇಡಿಕೆ ಇದೆ. ಕರ್ನಾಟಕದ ವಿವಿಧ ಮಾರ್ಗ ದಲ್ಲಿ ರೈಲು ಓಡಿಸಬೇಕು ಎಂದು ರೈಲ್ವೆ ಇಲಾಖೆಗೆ ಪ್ರಸ್ತಾವನೆ ಸಲ್ಲಿಕೆಯಾಗಿದೆ. ನಿರ್ಮಲಾ ಸೀತಾರಾಮನ್ ಮಂಡಿಸುವ ಬಜೆಟ್‌ನಲ್ಲಿ ಹೊಸ ರೈಲು ಘೋಷಣೆಯಾಗಲಿದೆಯೇ. ಹಣಕಾಸು ಸಚಿವೆ ನಿರ್ಮಲಾ ಸೀತಾ ರಾಮನ್ 2024-25ನೇ ಸಾಲಿನ ಪೂರ್ಣ ಪ್ರಮಾಣದ ಬಜೆಟ್ ಅನ್ನು ಜುಲೈ 23ರಂದು ಮಂಡಿಸಲಿದ್ದಾರೆ. ಸಾಮಾನ್ಯ ಬಜೆಟ್‌ನಲ್ಲಿಯೇ ರೈಲ್ವೆ ಬಜೆಟ್ ಸೇರಿಸಿ ಮಂಡನೆ ಮಾಡಲಾಗುತ್ತದೆ. ಆದ್ದರಿಂದ ಹೊಸ ರೈಲುಗಳ ಘೋಷಣೆ ಬಜೆಟ್‌ನಲ್ಲಿಯೇ ಆಗಬೇಕಿದೆ.

ಸದ್ಯ 5ಕ್ಕೂ ಅಧಿಕ ಮಾರ್ಗದಲ್ಲಿ ಕರ್ನಾಟಕದಲ್ಲಿ ವಂದೇ ಭಾರತ್ ರೈಲುಗಳು ಓಡುತ್ತಿವೆ. ನರೇಂದ್ರ ಮೋದಿ 3.0 ಸರ್ಕಾರದ ಪೂರ್ಣ ಪ್ರಮಾಣದ ಬಜೆಟ್‌ನಲ್ಲಿ ರಾಜ್ಯಕ್ಕೆ ಹೊಸ ವಂದೇ ಭಾರತ್ ರೈಲುಗಳನ್ನು ಘೋಷಣೆ ಮಾಡಬೇಕು ಎಂಬುದು ಬೇಡಿಕೆಯಾಗಿದೆ. ಕರ್ನಾಟಕದ ತುಮಕೂರು ಸಂಸದ ವಿ. ಸೋಮಣ್ಣ ರೈಲ್ವೆ ಖಾತೆ ಸಚಿವರು. ಆದ್ದರಿಂದ ಬಜೆಟ್ ಮೇಲೆ ಕರ್ನಾಟಕದ ಜನರ ನಿರೀಕ್ಷೆ ಹೆಚ್ಚಾಗಿಯೇ ಇದೆ. ಯಾವ-ಯಾವ ಮಾರ್ಗದಲ್ಲಿ ರೈಲು; ಕರ್ನಾಟಕದಲ್ಲಿ 10 ಮಾರ್ಗದಲ್ಲಿ ವಂದೇ ಭಾರತ್ ರೈಲುಗಳನ್ನು ಓಡಿಸಲು 19/7/2023ರಂದು ನಡೆದ ನೈಋತ್ಯ ರೈಲ್ವೆಯ ಸಭೆಯಲ್ಲಿ ಚರ್ಚೆ ನಡೆದಿತ್ತು. ಇವುಗಳಲ್ಲಿ ಕೆಲವು ಮಾರ್ಗದಲ್ಲಿ ರೈಲುಗಳ ಸಂಚಾರ ಆರಂಭವಾಗಿದೆ. ಆದರೆ ಇನ್ನೂ ಕೆಲವು ಮಾರ್ಗದಲ್ಲಿ ರೈಲಿನ ಸಂಚಾರ ಬಾಕಿ ಇದೆ.

ವಂದೇ ಭಾರತ್ ರೈಲು ಓಡಿಸಲು ಪ್ರಮುಖವಾಗಿ ಮೂಲ ಸೌಕರ್ಯ ಅಭಿವೃದ್ಧಿಗೊಳಿಸಬೇಕು. ಒಂದು ಬಾರಿ ರೈಲು ಸಂಚಾರ ನಡೆಸಿದ ಬಳಿಕ ಅದನ್ನು ಕಡ್ಡಾಯವಾಗಿ ನಿರ್ವಹಣೆ ಮಾಡಬೇಕಿದೆ. ಆದ್ದರಿಂದ ಮೂಲ ಸೌಕರ್ಯ ಇರುವ ಮಾರ್ಗದಲ್ಲಿ ಮಾತ್ರ ರೈಲುಗಳನ್ನು ಓಡಿಸಲು ಭಾರತೀಯ ರೈಲ್ವೆ ಒಪ್ಪಿಗೆ ನೀಡಲಿದೆ.

> ಭಾರತೀಯ ರೈಲ್ವೆ ಬಿಳಿ, ಕೇಸರಿ ಬಣ್ಣದ 16 ಮತ್ತು 8 ಬೋಗಿಯನ್ನು ಹೊಂದಿರುವ ವಂದೇ ಭಾರತ್ ರೈಲುಗಳನ್ನು ಓಡಿಸುತ್ತಿದೆ. ಚೆನ್ನೈನ ಇಂಟಿಗ್ರಲ್ ಕೋಚ್ ಫ್ಯಾಕ್ಟರಿಯಲ್ಲಿ ಈಗಾಗಲೇ ಹಲವು ಬೋಗಿಗಳನ್ನು ತಯಾರು ಮಾಡಿ, ರೈಲ್ವೆ ವಿಭಾಗಕ್ಕೆ ಹಂಚಿಕೆ ಮಾಡಲಾಗಿದೆ. ಮಾಹಿತಿಗಳ ಪ್ರಕಾರ ನೈಋತ್ಯ ರೈಲ್ವೆ ವಿಭಾಗಕ್ಕೆ 8 ಹೊಸ ವಂದೇ ಭಾರತ್ ರೈಲುಗಳು ಹಂಚಿಕೆಯಾಗಿದೆ.

ಬೆಂಗಳೂರು-ಬೆಳಗಾವಿ ಮಾರ್ಗದಲ್ಲಿ ವಂದೇ ಭಾರತ್ ರೈಲು ಓಡಿಸಬೇಕು ಎಂಬ ಬೇಡಿಕೆ ಇತ್ತು. ಇದಕ್ಕೆ ರೈಲ್ವೆ ಸಚಿವಾಲಯ ಒಪ್ಪಿಗೆ ನೀಡಿದೆ. 2023ರ ನವೆಂಬರ್‌ನಲ್ಲಿ ಬೆಂಗಳೂರು-ಬೆಳಗಾವಿ ನಡುವೆ ರೈಲುಗಳ ಪ್ರಾಯೋಗಿಕ ಸಂಚಾರ ಸಹ ಮುಗಿದಿದೆ. ಆದರೆ ವಂದೇ ಭಾರತ್ ರೈಲುಗಳ ಸಂಚಾರ ಇನ್ನೂ ಆರಂಭವಾಗಿಲ್ಲ. ಬಜೆಟ್‌ನಲ್ಲಿ ರೈಲು ಸಂಚಾರದ ದಿನಾಂಕ ಘೋಷಣೆಯಾಗುವ ನಿರೀಕ್ಷೆ ಇದೆ.

ಕೆಎಸ್‌ಆರ್ ಬೆಂಗಳೂರು-ಧಾರವಾಡ ವಯಾ ಹುಬ್ಬಳ್ಳಿ ರೈಲನ್ನು ಬೆಳಗಾವಿ ತನಕ ವಿಸ್ತರಣೆ ಮಾಡಲಾಗಿದೆ. ಬೆಳಗಾವಿಯ ಜನರು ಸಾಮಾಜಿಕ ಜಾಲತಾಣದ ಮೂಲಕ ಬೆಳಗಾವಿಗೆ ವಂದೇ ಭಾರತ್ ಸಂಚಾರ ಆರಂಭಿಸಿ ಎಂದು ಪದೇ ಪದೇ ಬೇಡಿಕೆ ಇಡುತ್ತಲೇ ಇದ್ದಾರೆ. ಆದ್ದರಿಂದ ಬಜೆಟ್‌ನಲ್ಲಿ ಈ ಕುರಿತು ಘೋಷಣೆ ನಿರೀಕ್ಷೆ ಮಾಡಲಾಗಿದೆ. ಬೆಂಗಳೂರು-ಮಧುರೈ ನಡುವೆ ಜೂನ್ 2024ರಲ್ಲಿಯೇ ವಂದೇ ಭಾರತ್ ಸಂಚಾರ ಆರಂಭವಾಗಲಿದೆ ಎಂದು ಅಂದಾಜಿಸಲಾಗಿತ್ತು. ಈ ಮಾರ್ಗದಲ್ಲಿ ವಂದೇ ಭಾರತ್ ರೈಲಿನ ಪ್ರಾಯೋಗಿಕ ಸಂಚಾರವೂ ಪೂರ್ಣಗೊಂಡಿದೆ. ಆದರೆ ರೈಲು ಸಂಚಾರದ ದಿನಾಂಕ ಘೋಷಣೆಯಾಗಿಲ್ಲ. ಬಜೆಟ್‌ನಲ್ಲಿ ಈ ಮಾರ್ಗದಲ್ಲಿ ಸಹ ವಂದೇ ಭಾರತ್ ಸಂಚಾರದ ದಿನಾಂಕ ಘೋಷಣೆ ಮಾಡಲಾಗುತ್ತದೆ ಎಂಬ ಸುದ್ದಿಗಳು ಹಬ್ಬಿದೆ.

> ಉಳಿದಂತೆ ಬೆಂಗಳೂರು-ಹೊಸಪೇಟೆ, ಬೆಂಗಳೂರು-ತಿರುಪತಿ, ಬೆಂಗಳೂರು-ಪುದುಚೇರಿ, ಬೆಂಗಳೂರು-ಶಿವಮೊಗ್ಗ, ಬೀದರ್-ಹುಬ್ಬಳ್ಳಿ ಮಾರ್ಗದಲ್ಲಿ ವಂದೇ ಭಾರತ್ ರೈಲು ಓಡಿಸಬೇಕು ಎಂಬುದು ಬೇಡಿಕೆಯಾಗಿದೆ. ಆದರೆ ಬಜೆಟ್‌ನಲ್ಲಿ ಯಾವ-ಯಾವ ಮಾರ್ಗದ ರೈಲು ಘೋಷಣೆಯಾಗಲಿದೆ ಎಂದು ಕಾದು ನೋಡಬೇಕಿದೆ.

# ಜನ ಸೇವೆಗೆ ಮೀಸಲಾಗಬೇಕೆ ವಿನಃ ಸ್ವಾರ್ಥ ಸಾಧನೆಗಲ್ಲ

• ಉದಯವಾಹಿನಿ, ಬೆಂಗಳೂರು

ಉದಯವಾಹಿನಿ ಚಿತ್ರ



ಕೆಎಎಸ್ ಪದವಿ ಎಂಬುದು ಉನ್ನತ ಅಧಿಕಾರವಾಗಿದ್ದು, ಅಧಿಕಾರಿ ವರ್ಗದ ಶ್ರಮ ಜನರ ಸೇವೆಗೆ ಮೀಸಲಾಗಬೇಕೆ ವಿನಃ ಸ್ವಾರ್ಥ ಸಾಧನೆಗೆ ಅಲ್ಲ, ನಿಮ್ಮಗಳ ಆತ್ಮಸಾಕ್ಷಿ ನಿಮಗೆ ದಾರಿ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಕಿವಿಮಾತು ಹೇಳಿದರು. ಬೆಂಗಳೂರಿನ ಐಎಎಸ್ ಅಸೋಷಿಯೇಷನ್‌ನಲ್ಲಿ ನಡೆದ 2020ನೇ ತಂಡದ ಕೆಎಎಸ್ ಅಧಿಕಾರಿಗಳ ತರಬೇತಿ ಶಿಬಿರದ ಕೊನೆಯ ದಿನದ ಉಪಾಂತ್ಯ ಸಮಾರಂಭದಲ್ಲಿ ಮಾತನಾಡಿದ ಅವರು, ರಾಜಕಾರಣಿಗಳ ಅಧಿಕಾರ ಐದು ವರ್ಷಕ್ಕೊಮ್ಮೆ ಬದಲಾಗುತ್ತದೆ.

ಹೀಗಾಗಿ ಎಲ್ಲಾ ಕಾಲದಲ್ಲೂ ಅಧಿಕಾರಿಗಳೇ ಶಾಶ್ವತ ಸರ್ಕಾರವಾಗಿದ್ದು, ಜನಪರವಾದ ಪ್ರಾಮಾಣಿಕ ಸೇವೆ ಸಲ್ಲಿಸುವುದೇ ಎಲ್ಲರ ಆದ್ಯತೆಯಾಗಲಿ. ನಿಮ್ಮೆಲ್ಲರ ಆತ್ಮಸಾಕ್ಷಿ ನಿಮಗೆ ದಾರಿ ದೀಪವಾಗಲಿ ಎಂದು ಆಶಿಸಿದರು. ಇಂದಿನ ದಿನಗಳಲ್ಲಿ ವ್ಯವಸ್ಥೆ ಸರಿಯಿಲ್ಲ ಎಂಬುದು ಎಲ್ಲರ ಬಾಯಿಂದಲೂ ಕೇಳಿಬರುವ ಸಾಮಾನ್ಯ ಉವಾಚವಾಗಿದೆ. ಕೆಲವು ಪ್ರಾಮಾಣಿಕ ಅಧಿಕಾರಿಗಳೂ ಹೀಗೆ ಅಸಮಾಧಾನ ಹೊರಹಾಕಿದ್ದನ್ನು ನಾನು ನೋಡಿದ್ದೇನೆ. ವ್ಯವಸ್ಥೆ ಸರಿಯಿಲ್ಲ ಎಂಬುದು ಭಾಗಶಃ ಸತ್ಯವೇ ಆದರೂ, ಈ ವ್ಯವಸ್ಥೆಯನ್ನು ಬದಲಿಸುವವರು ಯಾರು, ಹೇಗೆ ಎಂಬ ದೊಡ್ಡ ಪ್ರಶ್ನೆ ನಮ್ಮ ಮುಂದಿದೆ.

ಹೀಗಾಗಿ ಇಂದಿನ ಯುವ ಅಧಿಕಾರಿಗಳು ಸಾಧ್ಯವಾದಷ್ಟು ತಮ್ಮ ಕೆಲಸವನ್ನು ಪ್ರಾಮಾಣಿಕವಾಗಿ ಮಾಡುವ ಮೂಲಕ ಬದಲಾವಣೆಗೆ ನಾಂದಿ ಹಾಡಬೇಕು.

ಊರೆಲ್ಲಾ ಕೆಟ್ಟಿದೆ ಎಂದು ನಾವೂ ಕೆಡುವುದಕ್ಕಿಂತ ಒಳಿತಿನ ಕಡೆಗೆ ಹೆಜ್ಜೆ ಇಡುವುದು ಲೇಸು.

**ತರಬೇತಿ ಶಿಬಿರ ಉಪಾಂತ್ಯ ಸಮಾರಂಭ**

> ಬದಲಾಗಿ ಶಕ್ತಿ ತುಂಬುವುದಕ್ಕೆ. ಹೀಗಾಗಿ ಇಂದಿನ ಯುವ ಅಧಿಕಾರಿಗಳು 21ನೇ ಶತಮಾನದ ನವ ತಂತ್ರಜ್ಞಾನಗಳನ್ನು ತಮ್ಮ ಕೆಲಸಗಳಲ್ಲಿ ಅಳವಡಿಸಿಕೊಳ್ಳಬೇಕು. ಯಾವ ಪಕ್ಷ ಅಧಿಕಾರಕ್ಕೆ ಬಂದರೂ ಸಹ ಕರ್ನಾಟಕ ಸರ್ಕಾರಕ್ಕೆ ಒಳ್ಳೆಯ ಹೆಸರು ಬರುವಂತೆ ಕೆಲಸ ನಿರ್ವಹಿಸಬೇಕು ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಎಲ್ಲಾ ಅಧಿಕಾರಿಗಳಿಗೂ ಶುಭ ಕೋರಿದರು.
>
> -ಸಚಿವ ಕೃಷ್ಣ ಬೈರೇಗೌಡ

> ಯಾವ ಕೆಲಸವೂ ಮೇಲೂ ಇಲ್ಲ, ಕೀಳೂ ಇಲ್ಲ. ಆದರೆ, ಮಾಡುವ ಕೆಲಸವನ್ನು ಬದ್ಧತೆಯಿಂದ ಪ್ರಾಮಾಣಿಕವಾಗಿ ಮಾಡಬೇಕು. ತಾನೂ ಸಹ ಕೆಎಎಸ್ ಅಧಿಕಾರಿಯಾಗಬೇಕು ಎಂಬುದು ಲಕ್ಷಾಂತರ ಯುವಕರ ಆಸೆ-ಕನಸು. ಆದರೆ, ಇಂದು ಆ ಮಹತ್ವದ ಜವಾಬ್ದಾರಿಗೆ ಆಯ್ಕೆಯಾಗಿರುವುದು ಕೇವಲ ಬೆರಳೆಣಿಕೆಯಷ್ಟು ಜನ ಮಾತ್ರ. ಈ ಹುದ್ದೆ ಪಡೆಯುವುದಕ್ಕಾಗಿ ಎಲ್ಲರೂ ಸಾಕಷ್ಟು ಶ್ರಮವಹಿಸಿರುತ್ತೀರಿ. ಜನಪರ ಆಡಳಿತ ಹಾಗೂ ಸೇವೆಯ ಕಡೆಗೂ ಅಷ್ಟೇ ನಿಷ್ಠೆ-ಬದ್ಧತೆಯಿಂದ ಕೆಲಸ ಮಾಡಿ ಎಂದು ಮನವಿ ಮಾಡಿದರು.

ಬದಲಾವಣೆ ಎಂಬುದು ನಮ್ಮಿಂದ ಆರಂಭವಾಗಬೇಕು ಎಂದು ಅವರು ಮನವರಿಕೆ ಮಾಡಿಕೊಟ್ಟರು. ಕಂದಾಯ ಇಲಾಖೆ ಎಲ್ಲಾ ಇಲಾಖೆಗಳ ಮಾತೃ ಇಲಾಖೆ. ನಮ್ಮ ಮೇಲೆ ಸಾಕಷ್ಟು ಜವಾಬ್ದಾರಿ ಇದ್ದು, ಕಳೆದ ಒಂದು ವರ್ಷಗಳಿಂದ ನಾವು ಸಾಕಷ್ಟು ಸಮಸ್ಯೆಗಳನ್ನ ಬಗೆಹರಿಸಿದ್ದೇವೆ. ಆದರೂ, ಕೆಲವು ಅಧಿಕಾರಿಗಳು ಜಡ್ಡುಹಿಡಿದ ಹಳೆದ ಕೆಲಸ ವಿಧಾನಕ್ಕೆ ಜೋತು ಬಿದ್ದಿದ್ದಾರೆ. ಪರಿಣಾಮ ಜನರು ತಮ್ಮ ಕೆಲಸಗಳಿಗಾಗಿ ನಮ್ಮ ಕಚೇರಿಗಳನ್ನು ಅಲೆಯುವುದರಲ್ಲೇ ಅವರ ಸಮಯವೆಲ್ಲ ವ್ಯರ್ಥವಾಗುತ್ತಿದೆ, ಅಲೆದಲೆದು ಅವರು ಶಕ್ತಿಹೀನರಾಗುತ್ತಿದ್ದಾರೆ. ನಾವಿರುವುದು ಅವರ ಶಕ್ತಿಯನ್ನು ಹೀರುವುದಕ್ಕಲ್ಲ,

# ಆಷಾಡ ಮಾಸದ ಹುಣ್ಣಿಮೆಯ ದಿನ ಗುರು ಪೂರ್ಣಿಮಾ ಆಚರಣೆ



ವಿ.ಎಂ.ಎಸ್.ಗೋಪಿ

• ಉದಯವಾಹಿನಿ, ವಿಶೇಷ

ಗುರುಬ್ರಹ್ಮ ಗುರುವಿಷ್ಣು
ಗುರುದೇವೋ ಮಹೇಶ್ವರ
ಗುರುಸಾಕ್ಷಾತ್ ಪರಬ್ರಹ್ಮ
ತಸ್ಮ ಶ್ರೀ ಗುರುವೇ ನಮಃ ಈ ಸಾಲುಗಳೇ ಗುರುವಿನ ಮಹತ್ವವನ್ನು ಸಂಪೂರ್ಣವಾಗಿ ತಿಳಿಸಿಬಿಡುತ್ತವೆ.

ಎಲ್ಲಾ ಮಕ್ಕಳಿಗೂ ತಾಯಿ ತಂದೆಯೇ ಮೊದಲ ಗುರು. ಮನೆಯ ಮೊದಲ ಪಾಠ ಶಾಲೆ ತನ್ನ ಮಕ್ಕಳಿಗೆ ಮೊದಲನೆಯ ಶಿಕ್ಷಕಿ ತಾಯಿ. ಇಲ್ಲಿ ಗುರುವೇ ಎಲ್ಲವೂ, ಅವರಿಂದಲೇ ಎಲ್ಲವೂ ಅನ್ನುವುದು ಸ್ಪಷ್ಟವಾಗುತ್ತದೆ. ಗುರುವಿನ ಸ್ಥಾನ ತುಂಬಾ ಪವಿತ್ರವಾದದ್ದು, ಜವಬ್ದಾರಿಯುತವಾದದ್ದು. ಈ ಸಮಾಜಕ್ಕೆ ಉತ್ತಮ ನಾಗರಿಕರನ್ನು ಕೊಡುವ ಸೃಷ್ಟಿಕರ್ತರು ಗುರು.

ಉದಯವಾಹಿನಿ ಚಿತ್ರ




ಮನುಷ್ಯನಾದ ಮೇಲೆ ತನ್ನ ಜೀವನದಲ್ಲಿ ಏನನ್ನಾದರೂ ಸಾಧಿಸಬೇಕೆಂದುಕೊಂಡಿರುತ್ತಾರೆ. ಗುರಿ ಎಷ್ಟು ಮುಖ್ಯವೋ ಅಷ್ಟೇ ಮುಖ್ಯವಾದವರು ಗುರು. ಮುಂದೆ ಗುರಿ ಇರಬೇಕು ಹಿಂದೆ ಗುರು ಇರಬೇಕು' ಅನ್ನೋ ಗಾದೆ ಮಾತು ತುಂಬಾ ಅರ್ಥಪೂರ್ಣವಾಗಿದೆ. ವಿದ್ಯಾರ್ಥಿಗಳು ತಮ್ಮ ಗುರಿಯನ್ನು. ತಲುಪಬೇಕೆಂದರೆ ಗುರುವಿನ ಸಲಹೆ, ಸಹಕಾರ ಮತ್ತು ಮಾರ್ಗದರ್ಶನ ಇರಲೇಬೇಕು. ಗುರುಗಳ ಸಹಾಯದಿಂದ ಮಾತ್ರ ನಾವು ಅಂದುಕೊಂಡ ಗುರಿ ತಲುಪಬಹುದು. ಗುರುವೇಂದರೆ ಕೇವಲ ಶಿಕ್ಷಕರಲ್ಲ ಜೀವನದಲ್ಲಿ ಸರಿಯಾದದಾರಿ ತೋರುವ ಪ್ರತಿಯೊಬ್ಬರೂ ಗುರುಗಳೇ ಇಂತಹ ಎಲ್ಲಾ ಗುರುವೃಂದಕ್ಕೂ ಗುರು ಪೂರ್ಣಿಮೆಯ ಶುಭಾಶಯಗಳು.

# ನಿರೀಕ್ಷಣಾ ಜಾಮೀನು ಕೋರಿ ರಕ್ಷಿತ್ ಶೆಟ್ಟಿ ಅರ್ಜಿ ಸಲ್ಲಿಕೆ

• ಉದಯವಾಹಿನಿ, ಬೆಂಗಳೂರು



ಬ್ಯಾಚುಲರ್ಸ್ ಪಾರ್ಟಿ ಸಿನಿಮಾದಲ್ಲಿ 'ನ್ಯಾಯ ಎಲ್ಲಿದೆ' ಎಂಬ ಸಾಂಗನ್ನು ಅನಧಿಕೃತವಾಗಿ ಬಳಸಿದ್ದರಿಂದ ಕಾಪಿ ರೈಟ್ಸ್ ಉಲ್ಲಂಘನೆ ಮಾಡಿದ ಆರೋಪದಲ್ಲಿ ನಟ ರಕ್ಷಿತ್ ಶೆಟ್ಟಿ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿತ್ತು. ಈ ಕುರಿತಂತೆ ರಕ್ಷಿತ್ ಶೆಟ್ಟಿ ನಿರೀಕ್ಷಣಾ ಜಾಮೀನು ಕೋರಿ ಬೆಂಗಳೂರಿನ ಸೇಷನ್ಸ್ ಕೋರ್ಟಿಗೆ ಅರ್ಜಿ ಸಲ್ಲಿಸಿದ್ದಾರೆ.

ಈ ಒಂದು ಅರ್ಜಿ ವಿಚಾರಣೆ ನಡೆಸಿದ ಕೋರ್ಟ್ ಜುಲೈ 24ಕ್ಕೆ ಅರ್ಜಿ ವಿಚಾರಣೆ ಮುಂದೂಡಿದೆ. ಹೌದು ಕಾಪಿ ರೈಟ್ಸ್ ಉಲ್ಲಂಘನೆ ಆರೋಪದಲ್ಲಿ ಎಫ್‌ಐಆರ್ ಹಿನ್ನೆಲೆ ನಿರೀಕ್ಷಣಾ ಜಾಮೀನು ಕೋರಿ ನಟ ರಕ್ಷಿತ್ ಶೆಟ್ಟಿ ಅರ್ಜಿ ಸಲ್ಲಿಸಿದ್ದರು. ಬೆಂಗಳೂರಿನ ಸೆಷನ್ಸ್ ಕೋರ್ಟಿಗೆ ರಕ್ಷಿತ್ ಶೆಟ್ಟಿ ಅರ್ಜಿ ಸಲ್ಲಿಸಿದ್ದಾರೆ. ನ್ಯಾಯ ಎಲ್ಲಿದೆ ಸಾಂಗ್‌ಗೆ ಕಾಪಿರೈಟ್ಸ್ ಉಲ್ಲಂಘನೆ ಮಾಡಿರುವ ಆರೋಪ ಕೇಳಿಬಂದಿದೆ. ರಕ್ಷಿತ್ ಶೆಟ್ಟಿ ನಿರ್ದೇಶನದ ಪರಮಾವ ಸ್ಟುಡಿಯೋಸ್ ನಿರ್ಮಿಸಿರುವ ಬ್ಯಾಚುಲರ್ ಪಾರ್ಟಿ ಸಿನಿಮಾಗಾಗಿ ಅನಧಿಕೃತವಾಗಿ ನ್ಯಾಯ ಎಲ್ಲಿದೆ ಎಂಬ ಹಾಡನ್ನು ಬಳಸಿದ್ದರಿಂದ, ಎಂ ಆರ್ ಟಿ ಮ್ಯೂಸಿಕ್ ಸಂಸ್ಥೆಯ ನವೀನ್ ಕುಮಾರ್ ಯಶವಂತಪುರ ಠಾಣೆಯಲ್ಲಿ ದೂರು ಸಲ್ಲಿಸಿದ್ದರು. ಈ ವೇಳೆ ಪಬ್ಲಿಕ್ ಪ್ರೊಸೀಕ್ಯೂಟರ್ ರಕ್ಷಿತ್ ಶೆಟ್ಟಿ ಅರ್ಜಿಗೆ ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶ ಕೋರಿದರು. ವಾದ ಪ್ರತಿವಾದ ನಂತರ ವಿಚಾರಣೆಯನ್ನು ಜುಲೈ 24ಕ್ಕೆ ಮುಂದೂಡಿತು.

# ರೀಲ್ಸ್ ಪ್ರಿಯರಿಗೆ ಬಿಬಿಎಂಪಿ ಆಫರ್: ಡೆಂಗ್ಯೂ ಬಗ್ಗೆ ಜಾಗೃತಿ

• ಉದಯವಾಹಿನಿ, ಬೆಂಗಳೂರು




ಉದಯವಾಹಿನಿ ಚಿತ್ರ

ರೀಲ್ಸ್ ಪ್ರಿಯರಿಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆರೋಗ್ಯ ಇಲಾಖೆ ಭರ್ಜರಿ ಆಫರ್ ಕೊಟ್ಟಿದೆ. ಡೆಂಗ್ಯೂ ಕುರಿತು ಜಾಗೃತಿ ಮೂಡಿಸುವ ರೀಲ್ಸ್ ಮಾಡಿ ಬಹುಮಾನ ಗೆಲ್ಲಿ ಎಂದು ಸಾರ್ವಜನಿಕ ಪ್ರಕಟಣೆ ಹೊರಡಿಸಿದೆ.

ರಾಜ್ಯಾದ್ಯಂತ ಹಾಗೂ ಬೆಂಗಳೂರಲ್ಲಿ ಡೆಂಗ್ಯೂ ಸೋಂಕು ಮತ್ತು ಸಾವು ಪ್ರಕರಣಗಳು ಹೆಚ್ಚಾಗುತ್ತಿವೆ.

ಈ ಬಗ್ಗೆ ಜನರಲ್ಲಿ ಅರಿವು ಮೂಡಿಸಲು ಬಿಬಿಎಂಪಿ ಆರೋಗ್ಯ ಇಲಾಖೆ ಹೊಸ ಪ್ರಯತ್ನ ಮಾಡಿದೆ. ರೀಲ್ಸ್ ಮೂಲಕ ಡೆಂಗ್ಯೂ ವಾರಿಯರ್ ಆಗಲು ಬಿಬಿಎಂಪಿ ಸಾರ್ವಜನಿಕರಿಗೆ ಅವಕಾಶ ಕಲ್ಪಿಸಿದೆ. ಸೋಷಿಯಲ್ ಮೀಡಿಯಾದಲ್ಲಿ ಡೆಂಗ್ಯೂ ಕುರಿತು ರೀಲ್ಸ್ ವೀಡಿಯೋಗಳನ್ನು ಬಿಬಿಎಂಪಿ ಆಹ್ವಾನಿಸಿದೆ. ಡೆಂಗ್ಯೂ ಬಗ್ಗೆ ಜಾಗೃತಿ ಮೂಡಿಸುವ ರೀಲ್ಸ್ ಮಾಡಿದವರಿಗೆ ಬಹುಮಾನ ನೀಡಲಾಗುವುದು. ಮೊದಲ ಐದು ಉತ್ತಮ ರೀಲ್ಸ್‌ಗೆ 25,000 ರೂ. ಬಹುಮಾನ ನೀಡಲಾಗುವುದು. ದ್ವಿತೀಯ ಬಹುಮಾನಕ್ಕೆ ಆಯ್ಕೆಯಾಗುವ ಐವರಿಗೆ ತಲಾ 10 ಸಾವಿರ ರೂ. ಬಹುಮಾನ ನೀಡುವುದಾಗಿ ಬಿಬಿಎಂಪಿ ಪ್ರಕಟಣೆಯಲ್ಲಿ ತಿಳಿಸಿದೆ. ಉತ್ತಮ ರೀತಿಯಲ್ಲಿ ಹೆಚ್ಚು ವಿದ್ಯಾರ್ಥಿಗಳ ಮೂಲಕ ರೀಲ್ಸ್ ಮಾಡಿಸುವ ಶಾಲೆಗೆ ಬರೋಬ್ಬರಿ 1 ಲಕ್ಷ ಬಹುಮಾನ ನೀಡುವುದಾಗಿ ಬಿಬಿಎಂಪಿ ತಿಳಿಸಿದೆ. ಅಲ್ಲದೇ ಮಕ್ಕಳಿಗೆ ಜಾಗೃತಿ ಮೂಡಿಸುವ ವೀಡಿಯೋ ಮಾಡಲು ಉತ್ತೇಜಿಸುವ ಶಿಕ್ಷಕರಿಗೂ 35 ಸಾವಿರ ಬಹುಮಾನ ನೀಡುವುದಾಗಿ ತಿಳಿಸಿದೆ.

> ಡೆಂಗ್ಯೂ ಬಗ್ಗೆ ಜಾಗೃತಿ ಮೂಡಿಸುವ ರೀಲ್ಸ್ ಮಾಡಿ ಅದನ್ನು ಬಿಬಿಎಂಪಿ ಆರೋಗ್ಯ ಇಲಾಖೆಗೆ ಫೇಸ್‌ಬುಕ್ ಮತ್ತು ಎಕ್ಸ್ ಖಾತೆಗೆ ಟ್ಯಾಗ್ ಮಾಡಬೇಕು. ಡೆಂಗ್ಯೂ ಬಗ್ಗೆ ಹೆಚ್ಚಿನ ಮಾಹಿತಿಯೊಂದಿಗೆ ಹೆಚ್ಚು ವೀಕ್ಷಣೆ ಪಡೆಯುವ ರೀಲ್ಸ್‌ಗಳು ತಕ್ಕಂತೆ ಬಹುಮಾನ ನೀಡಲಾಗುವುದು ಎಂದು ತಿಳಿಸಿದೆ. ರೀಲ್ಸ್ ಹಂಚಿಕೊಳ್ಳುವ ಪ್ರತಿಯೊಬ್ಬರಿಗೂ ಡೆಂಗ್ಯೂ ವಾರಿಯರ್ ಎಂಬ ಪಟ್ಟವನ್ನು ಪಾಲಿಕೆ ಆರೋಗ್ಯ ವಿಭಾಗ ನೀಡಲಿದೆ

# ಜನರು ಡಿಜಿಟಲ್ ಬಜೆಟ್ ಪ್ರತಿ ಪಡೆಯುವುದು ಹೇಗೆ

## ■ 2024ರ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟ ಗೆಲುವು

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಪ್ರಧಾನಿ ನರೇಂದ್ರ ಮೋದಿ 3.0 ಸರ್ಕಾರದ ಪೂರ್ಣ ಪ್ರಮಾಣದ ಬಜೆಟ್ 2024-25ನೇ ಸಾಲಿನ ಬಜೆಟ್ ಜುಲೈ 23ರ' ಮಂಡನೆಯಾಗಲಿದೆ. ಹಣ ಕಾಸು ಸಚಿವರಾದ ನಿರ್ಮಲಾ ಸೀತಾರಾಮನ್ ಬಜೆಟ್ ಮಂಡಿಸಲಿದ್ದಾರೆ. 2024ರ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟ ಗೆಲುವು ಸಾಧಿಸಿ, ಸರ್ಕಾರ ರಚನೆ ಮಾಡಿದ ಬಳಿಕ 2024-25ನೇ ಸಾಲಿನ ಪೂರ್ಣ ಪ್ರಮಾಣದ ಬಜೆಟ್ ಮಂಡಿಸಲಾಗುತ್ತಿದೆ.

ಮೋದಿ ಸರ್ಕಾರದ 2.0 ಮಧ್ಯಂತರ ಬಜೆಟ್ 2024 ಫೆಬ್ರವರಿ 1 ರಂದು ಮಂಡಿಸಲಾಗಿತ್ತು. ಬಜೆಟ್ ಮಂಡನೆಯ ಅಂತಿ ಮ ಹಂತವಾದ ಹಲ್ವಾ ಸಮಾರಂಭ ಜುಲೈ 16ರಂದು ದೆಹಲಿಯಲ್ಲಿ ನಡೆದಿದೆ. ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಮತ್ತು ಕೇಂದ್ರ ಹಣಕಾಸು ಖಾತೆ ಸಹಾಯಕ ಸಚಿವ ಪಂಕಜ್ ಚೌಧರಿ ಅವರು ಉಪಸ್ಥಿತರಿದ್ದರು. ನರೇಂದ್ರ ಮೋದಿ ಸರ್ಕಾರ ಬಜೆಟ್ ಮಂಡನೆಯಲ್ಲಿ ಹಲವಾರು ಬದಲಾವಣೆ ಯನ್ನು ತಂದಿದೆ. ಸಾಮಾನ್ಯ ಬಜೆಟ್, ರೈಲ್ವೆ ಬಜೆಟ್ ಒಟ್ಟಿಗೆ ಮಂಡಿಸಲಾಗುತ್ತದೆ. ಡಿಜಿಟಲ್ ರೂಪದಲ್ಲಿ ಬಜೆಟ್ ಅನ್ನು ತಯಾರು ಮಾಡಿ, ಅದನ್ನು ಲೋಕಸಭೆಯಲ್ಲಿ ಹಣಕಾಸು ಸಚಿವರು ಓದುತ್ತಾರೆ.

ಡಿಜಿಟಲ್ ಬಜೆಟ್ ಪ್ರತಿ ಪಡೆಯುವುದು ಹೇಗೆ: ಕೇಂದ್ರ ಬಜೆಟ್ ತಯಾರಿಯಲ್ಲಿ ತೊಡಗಿರುವ ಅಧಿಕಾರಿಗಳ ಲಾಕ್-ಇನ್ ಪ್ರಕ್ರಿಯೆ ಪ್ರಾರಂಭವಾಗುವ ಮೊದಲು, ಪ್ರತಿವರ್ಷ ಸಾಂಪ್ರದಾಯಿಕ ಹಲ್ವಾ ಸಮಾರಂಭ ನಡೆಸಲಾಗುತ್ತದೆ.

**ಸೇವೆಗಳ ಮೂಲಕ ದಾಖಲೆ**

> ಕಳೆದ 10 ವರ್ಷಗಳಲ್ಲಿ ಎಲ್ಲರಿಗೂ ವಸತಿ, ಹರ್ ಘರ್ ಜಲ್, ಎಲ್ಲರಿಗೂ ವಿದ್ಯುತ್, ಎಲ್ಲರಿಗೂ ಅಡುಗೆ ಅನಿಲ, ಬ್ಯಾಂಕ್ ಖಾತೆಗಳು ಮತ್ತು ಎಲ್ಲರಿಗೂ ಹಣಕಾಸು ಸೇವೆಗಳ ಮೂಲಕ ದಾಖಲೆ ಸಮಯದಲ್ಲಿ ಪ್ರತಿ ಮನೆ ಮತ್ತು ವ್ಯಕ್ತಿಯನ್ನು ತಲುಪಿದ್ದೇವೆ ಎಂದು ಹೇಳಿದ್ದರು.

> ಫೆಬ್ರವರಿಯಲ್ಲಿ ಮಂಡಿಸಿದ ಮಧ್ಯಂತರ ಬಜೆಟ್‌ನಲ್ಲಿ ನಿರ್ಮಲಾ ಸೀತಾರಾಮನ್, ಪ್ರಧಾನಿ ನರೇಂದ್ರ ಮೋದಿ 4 ಪ್ರಮುಖ ವಿಚಾರಗಳ ಕುರಿತು ಗಮನಹರಿಸಿದ್ದಾರೆ. ಬಡವರು, ಮಹಿಳೆರು, ಯುವಕರು ಮತ್ತು ರೈತರ ಅಗತ್ಯತೆಗಳು, ಆಕಾಂಕ್ಷೆಗಳು ಮತ್ತು ಅವರ ಕಲ್ಯಾಣವು ಸರ್ಕಾರದ ಆದ್ಯತೆಯಾಗಿದೆ. ಇವರೆಲ್ಲ ಪ್ರಗತಿ ಹೊಂದಿದಾಗ ದೇಶವು ಪ್ರಗತಿಯಾಗುತ್ತದೆ ಎಂದು ಹೇಳಿದ್ದರು.

ಈಗಾಗಲೇ ಬಜೆಟ್ ಮುದ್ರಣ ಕಾರ್ಯ ಆರಂಭವಾಗಿದ್ದು, 2024-25ನೇ ಸಾಲಿನ ಪೂರ್ಣ ಪ್ರಮಾಣದ ಬಜೆಟ್ ಜುಲೈ 23ರಂದು ಮಂಡನೆ ಯಾಗಲಿದೆ. ಬಜೆಟ್‌ನ ಆದಾಯ, ಖರ್ಚು, ಅನುದಾನದ ಬೇಡಿಕೆ, ಅನುದಾನ ಹಂಚಿಕೆ ಸೇರಿದಂತೆ ಬಜೆಟ್‌ಗೆ ಸಂಬಂಧಿಸಿದ ಎಲ್ಲಾ ದಾಖಲೆಗಳು 'ಕೇಂದ್ರ ಬಜೆಟ್ ಮೊಬೈಲ್ ಅಪ್ಲಿಕೇಶನ್'ನಲ್ಲಿ ಲಭ್ಯವಿರುತ್ತವೆ. ಸಂಸದರು ಮತ್ತು ಸಾರ್ವಜನಿಕರು ಡಿಜಿಟಲ್ ರೂಪದಲ್ಲಿ ಲಭ್ಯವಿರುವ ಈ ದಾಖಲೆಗಳನ್ನು ಸುಲಭವಾಗಿ ಪಡೆಯಬಹುದಾಗಿದೆ. ಈ ಅಪ್ಲಿಕೇಶನ್‌ನಲ್ಲಿ ದ್ವಿ-ಭಾಷೆಗಳಲ್ಲಿ(ಇಂಗ್ಲಿಷ್ ಮತ್ತು ಹಿಂದಿ) ಹಾಗೂ ಆಂಡ್ರಾಯ್ಡ್ ಮತ್ತು ಐಓಎಸ್ ವೇದಿಕೆಗಳಲ್ಲಿ ಬಜೆಟ್‌ನ ಪ್ರತಿ ಲಭ್ಯವಿರುತ್ತದೆ. ಈ ಅಪ್ಲಿಕೇಶನ್ ಅನ್ನು ಜನರು ಕೇಂದ್ರ ಬಜೆಟ್ ವೆಬ್ ಪೋರ್ಟಲ್ (https://www.indiabudget.gov.in)ನಿಂದ ಸಹ ಡೌನ್‌ಲೋಡ್ ಮಾಡಿಕೊಳ್ಳಬಹುದು. ಜುಲೈ 23ರ ಸಂಸತ್ತಿನಲ್ಲಿ ಕೇಂದ್ರ ಹಣಕಾಸು ಸಚಿವರು ಬಜೆಟ್ ಭಾಷಣವನ್ನು ಪೂರ್ಣಗೊಳಿಸಿದ ನಂತರ ಬಜೆಟ್ ದಾಖಲೆಗಳು ಮೊಬೈಲ್ ಅಪ್ಲಿಕೇಶನ್‌ನಲ್ಲಿ ಲಭ್ಯವಿರುತ್ತವೆ. ಜನರು ಉಚಿತವಾಗಿ ಡೌನ್‌ಲೋಡ್ ಮಾಡಿಕೊಂಡು ಅವುಗಳನ್ನು ಓದಬಹುದು.

> ಈಗ 2024ರ ಲೋಕಸಭೆ ಚುನಾವಣೆ ಮುಕ್ತಾಯಗೊಂಡಿದೆ. ಬಿಜೆಪಿ ನಿರೀಕ್ಷೆ ಮಾಡಿದಷ್ಟು ಸ್ಥಾನ ಸಿಕ್ಕಿಲ್ಲ. ಆದರೆ ಎನ್‌ಡಿಎ ಮೈತ್ರಿಕೂಟ 3ನೇ ಬಾರಿಗೆ ಅಧಿಕಾರಕ್ಕೆ ಬಂದಿದೆ. ಆದ್ದರಿಂದ ಬಜೆಟ್‌ನಲ್ಲಿ ಜನರಿಗೆ ಯಾವ-ಯಾವ ಹೊಸ ಘೋಷಣೆಗಳನ್ನು ಮಾಡಲಾಗುತ್ತದೆ ಎಂದು ಕಾದು ನೋಡಬೇಕಿದೆ.

ಹಲ್ವಾ ಸಮಾರಂಭದ ಬಳಿಕ ಕೇಂದ್ರ ಹಣಕಾಸು ಸಚಿವರು ಬಜೆಟ್ ಮುದ್ರಣಾಲಯಕ್ಕೆ ಭೇಟಿ ನೀಡಿ ಸಿದ್ಧತೆಗಳನ್ನು ಪರಿಶೀಲಿಸಿದರು, ಸಂಬಂಧಪಟ್ಟ ಅಧಿಕಾರಿಗಳಿಗೆ ಶುಭ ಹಾರೈಸಿದರು. ಬಜೆಟ್ ಮುದ್ರಣ, ಅಪ್ಲಿಕೇಶನ್‌ಗೆ ಹಾಕುವ ಕಾರ್ಯ ಅಧಿಕಾರಿಗಳ ಉಸ್ತುವಾರಿ ಯಲ್ಲಿ ನಡೆಯಲಿದ್ದು, ಬಜೆಟ್‌ನಲ್ಲಿ ಏನು ಅಡಗಿದೆ ಎಂಬುದು ತಿಳಿಯಲಿದೆ.

# ಕಲುಷಿತ ನೀರು ಸೇವಿಸಿ 50ಕ್ಕೂ ಹೆಚ್ಚು ಮಂದಿ ಅಸ್ವಸ್ಥ

## ಗ್ರಾ.ಪಂ ವೈಫಲ್ಯ..ಕ್ರಮಕ್ಕೆಗೊಳ್ಳದೇ ಮೌನವಹಿಸಿದ ಅಧಿಕಾರಿಗಳು, ಮೂರನೇ ಬಾರಿ ಘಟನೆ.. ನಿಲ್ಲದ ವಾಂತಿ ಭೇದಿ..

• ಉದಯವಾಹಿನಿ, ಯಾದಗಿರಿ



ಉದಯವಾಹಿನಿ ಚಿತ್ರ

ಕಲುಷಿತ ನೀರು ಸೇವಿಸಿ 50ಕ್ಕೂ ಹೆಚ್ಚು ಜನರು ಅಸ್ವಸ್ಥರಾಗಿ ಆಸ್ಪತ್ರೆಗೆ ದಾಖಲಾಗುತ್ತಿರುವ ಘಟನೆ ಜಿಲ್ಲೆಯ ಹುಣಸಗಿ ತಾಲ್ಲೂಕಿನ ಮುದನೂರು ಗ್ರಾಮದಲ್ಲಿ ಶುಕ್ರವಾರ ನಡೆದಿದೆ. ಇಬ್ಬರು ಮಕ್ಕಳು, ಮಹಿಳೆಯರು ಸೇರಿದಂತೆ 52 ಮಂದಿ ಸದ್ಯ ಕೆಂಭಾವಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಚಿಕಿತ್ಸೆ ಪಡೆಯುತ್ತಿದ್ದು ಯಾವುದೇ ಭಯಪಡುವ ಅಗತ್ಯವಿಲ್ಲ ಎಂದು ವೈದ್ಯರು ತಿಳಿಸಿದ್ದಾರೆ.

ಮುದನೂರು ಗ್ರಾಮದ ಜನತಾ ಕಾಲೋನಿಯ ನಿವಾಸಿಗಳು ಕಾಲುವೆ ಪಕ್ಕದ ಕೊಳವೆಬಾವಿಯ ನೀರು ಸೇವನೆ ಮಾಡಿದ ಪರಿಣಾಮ ಈ ಘಟನೆ ಸಂಭವಿಸಿದೆ ಎನ್ನಲಾಗಿದೆ. ಇದಕ್ಕೆ ಗ್ರಾ.ಪಂ ಅಧಿಕಾರಿಗಳ ನಿರ್ಲಕ್ಷ್ಯದ ಆರೋಪ ಕೇಳಿಬಂದಿದೆ. ಆದರೆ, ಈ ಘಟನೆಗೆ ಕಾರಣ ತಿಳಿದು ಬಂದಿಲ್ಲ. ಜನರಿಗೆ ವಾಂತಿ ಭೇದಿ ಉಂಟಾಗುತ್ತಿದ್ದಂತೆ ಕೆಲವರು ಗ್ರಾಮದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದರೆ, ಇನ್ನೂ ಕೆಲವು ಜನ ಕೆಂಭಾವಿ ಸಮುದಾಯ ಆರೋಗ್ಯ ಕೇಂದ್ರಕ್ಕೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ.

**ಆಸ್ಪತ್ರೆಯತ್ತ ಅಧಿಕಾರಿಗಳ ದಂಡು:** ಅಸ್ವಸ್ಥರು ಆಸ್ಪತ್ರೆಗೆ ದಾಖಲಾಗುತ್ತಿರುವ ಮಾಹಿತಿ ತಿಳಿಯುತ್ತಿದ್ದಂತೆ ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ, ಡಿಎಚ್ ಒ ಡಾ.ಪ್ರಭುಲಿಂಗ ಮಾನಕರ್, ಸುರಪುರ, ಹುಣಸಗಿ ತಾಲೂಕು ಮಟ್ಟದ ಅಧಿಕಾರಿಗಳು ಆಸ್ಪತ್ರೆಗೆ ದೌಡಾಯಿಸಿ ದಾಖಲಾದ ಎಲ್ಲ ರೋಗಿಗಳ ಆರೋಗ್ಯ ವಿಚಾರಿಸಿ, ಸೂಕ್ತ ಚಿಕಿತ್ಸೆ ನೀಡುವಂತೆ ಸಿಬ್ಬಂದಿಗೆ ತಾಕೀತು ಮಾಡಿದರು. ಸುರಪುರ ತಹಶೀಲ್ದಾರ ವಿಜಯಕುಮಾರ, ಹುಣಸಗಿ ತಹಶೀಲ್ದಾರ ಬಸಲಿಂಗಪ್ಪ ನಾಯ್ಕೋಡಿ, ಇಒ ಬಸವರಾಜ ಸ್ವಾಮಿ, ಡಾ.ಟಿಎಚ್ ಒ ಆರ್.ವಿ. ನಾಯಕ, ವೈದ್ಯಾಧಿಕಾರಿ ಡಾ.ಗಿರೀಶ ಕುಲಕರ್ಣಿ, ಡಾ.ಸಿದ್ದು ನ್ಯಾಮಗೊಂಡ, ಡಾ.ಪ್ರಿಯಾಂಕಾ ಪಾಟೀಲ್, ಸುರಪುರ ಶಾಸಕರ ಸಹೋದರ ಸುಶಾಂತ ನಾಯಕ, ಮಾಜಿ ಶಾಸಕರಾದ ನರಸಿಂಹ ನಾಯಕ(ರಾಜುಗೌಡ ) ಅವರ ಸಹೋದರ ಬಬ್ಲುಗೌಡ ಭೇಟಿ ನೀಡಿ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

**ಯಾವುದೇ ಭಯಪಡುವ ಅಗತ್ಯವಿಲ್ಲ**

**ಕಲುಷಿತ ನೀರು ಸೇವನೆಯೇ ಕಾರಣ...?**

ಜನತಾ ಕಾಲೋನಿಯ ನಿವಾಸಿಗಳಿಗೆ ವಾಂತಿ ಭೇದಿ ಉಂಟಾಗಲು ಕಾರಣ ಏನು ಎಂಬುದು ಪತ್ತೆಯಾಗಬೇಕಿದೆ. ನೀರು ಪೂರೈಸುವ ಕೊಳವೆ ಬಾವಿ ಕೃಷ್ಣಾ ಕಾಲುವೆಯ ಪಕ್ಕದಲ್ಲಿಯೇ ಇದೆ. ನಿನ್ನೆ ಕಾಲುವೆಗೆ ನೀರು ಬಿಟ್ಟದ್ದರಿಂದ ಕಲುಷಿತ ನೀರು ಕೊಳವೆ ಬಾವಿಯಲ್ಲಿ ಕೂಡಿ ವಾಂತಿ ಭೇದಿ ಆಗಿದೆ ಎಂಬುದು ಅಲ್ಲಿನ ಜನರ ಹೇಳಿಕೆಯಾಗಿದೆ. ಆರೋಗ್ಯ ಇಲಾಖೆ ನೀರನ್ನು ತಪಾಸಣೆಗೆ ಕಳುಹಿಸಿದೆ. ವರದಿ ಬಂದ ನಂತರವಷ್ಟೇ ಘಟನೆಗೆ ಕಾರಣ ತಿಳಿದು ಬರಲಿದೆ ಎಂದು ಆರೋಗ್ಯ ಅಧಿಕಾರಿಗಳು ತಿಳಿಸಿದ್ದಾರೆ.

ಕಾಲುವೆಗೆ ಗುರುವಾರ ನೀರು ಬಂದಿದ್ದು, ಗ್ರಾಮದ ಜನತಾ ಕಾಲೋನಿಯ ನಿವಾಸಿಗಳು ದಿನನಿತ್ಯ ಸೇವಿಸುವ ಕೊಳವೆ ಬಾವಿಯಲ್ಲಿ ಕಾಲುವೆ ನೀರು ಮಿಶ್ರಣವಾದ ಪರಿಣಾಮ ಈ ಘಟನೆ ಸಂಭವಿಸಿದ್ದು, ಮುನ್ನೆಚ್ಚರಿಕೆ ಕ್ರಮವಾಗಿ ಕಾಯಿಸಿ ಆರಿಸಿದ ನೀರು ಕುಡಿಯುವಂತೆ ಕೋರಲಾಗಿದೆ.
-ಬಸವರಾಜಸ್ವಾಮಿ ಹಿರೇಮಠ ತಾಪಂ ಇಒ, ಹುಣಸಗಿ

**ಉದಯ ವಾಹಿನಿ ಹೈಲೆಟ್ಸ್**

- ಕಲುಷಿತ ನೀರು ಸೇವನೆ ಹೆಚ್ಚಿದ ವಾಂತಿ ಬೇದಿ
- ಮುದನೂರ ಗ್ರಾಮ ಪಂಚಾಯಿತಿಯಲ್ಲಿ ಘಟನೆ .
- ಎಷ್ಟೋ ಅರಿವು ಕಾರ್ಯಕ್ರಮ ಮಾಡಿದ್ರೂ ಜಿಲ್ಲೆಯಲ್ಲಿ ನಿಲ್ಲದ ವಾಂತಿ ಬೇದಿ.
- ಗ್ರಾ.ಪಂ. ಪಿಡಿಓ ನಿರ್ಲಕ್ಷದಿಂದ ಜನ್ರ ಜೀವಕ್ಕೆ ಕುತ್ತು.
- ಕುಡಿಯಲು ಯೋಗ್ಯವಿಲ್ಲದ ನೀರು ಸೇವಿಸಿ ಆಸ್ಪತ್ರೆಗೆ ದಾಖಲಾಗುತ್ತಿರುವ ಜನ್ರು.

# ಡೆಂಗ್ಯೂ, ಮಲೇರಿಯಾ ಮುಂಜಾಗ್ರತಾ ಜನಜಾಗೃತಿ ಸಭೆ

• ಉದಯವಾಹಿನಿಚಿಂಚೋಳಿ


ಉದಯವಾಹಿನಿ ಚಿತ್ರ

ಸಾರ್ವಜನಿಕರು ಡೆಂಗ್ಯೂ,ಮಲೇರಿಯಾ ಇತರೆ ಸಾಂಕ್ರಾಮಿಕ ರೋಗಗಳಿಗೆ ಭಯಪಡುವ ಅವಶ್ಯಕತೆಯಿಲ್ಲ ಮುಂಜಾಗ್ರತಾ ಕ್ರಮಕ್ಕೆಗೊಳ್ಳಬೇಕು ಎಂದು ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ ಹೇಳಿದರು.

ಪಟ್ಟಣದ ಪುರಸಭೆ ವ್ಯಾಪ್ತಿಯ ವಾರ್ಡ್ ನಂಬರ್ 2,3,4,5,6,ಮತ್ತು 9,10,11ಮತ್ತು 13ರಲ್ಲಿ ಪುರಸಭೆ ಮತ್ತು ಕಂದಾಯ ಇಲಾಖೆ ಹಾಗೂ ಆರೋಗ್ಯ ಇಲಾಖೆ ವತಿಯಿಂದ ಡೆಂಗ್ಯೂ ಮತ್ತು ಮಲೇರಿಯಾ ಇತರೆ ಸಾಂಕ್ರಾಮಿಕ ರೋಗಗಳು ಹರಡದಂತೆ ತಡೆಗಟ್ಟಲು ಮುಂಜಾಗೃತಾ ಕ್ರಮದ ಬಗ್ಗೆ ಜನ ಜಾಗೃತಿ ಕಾ ರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮನೆಗಳಲ್ಲಿ ನೀರು ತುಂಬಿರುವ ಬ್ಯಾರಲ್ ಮತ್ತು ತೊಟ್ಟೆ,ಹಾಗೂ ಟೈರ್, ಹೂವಿನ ಕುಂಡಗಳಲ್ಲಿ ಮನೆಯ ಸುತ್ತಮುತ್ತ ನಿಂತಿರುವ ನೀರಿನಲ್ಲಿ ಈಡಿಸ್ ಎಂಬ ಸೂಳ್ಳೆ ಉತ್ಪತಿಯಾಗುತ್ತದೆ ಇದರಿಂದ ಸಂಕ್ರಾಮಿಕ ರೋಗ ಡೆಂಗ್ಯೂ ಮಲೇರಿಯಾ ರೋಗ ಹರಡುವ ಸಾಧ್ಯತೆ ಇರುತ್ತದೆ ಸಾರ್ವಜನಿಕರು ಎಚ್ಚೇತ್ತುಕೊಂಡು ನೀರು ನಿಲ್ಲದಂತೆ, ಬ್ಯಾರಲ್ ಮನೆಯಲ್ಲಿ ತುಂಬಿರುವ ನೀರಿನ ಮೇಲೆ ತಪ್ಪದೆ ಮುಚ್ಚಬೇಕು ಹಾಗೂ ಜಾಗೃತೆ ವಹಿಸಬೇಕು ಎಂದರು. ಟಿಹೆಚ್ಓ ಡಾ.ಮಹ್ಮದ್ ಗಫಾರ, ಪುರಸಭೆ ಸದಸ್ಯರಾದ ಜಗನ್ನಾಥ ಗುತ್ತೇದಾರ, ಜಗದೇವಿ ಶಂಕರ ಗಡಂತಿ, ರೂಪಕಲಾ ಕಟ್ಟಿಮನಿ, ಶಶಿ ಕಳಸ್ಕರ, ಹಾದಿ ಸಾಬ, ಸಂತೋಷ ಗಡಂತಿ,ರವಿಕಾಂತ ಹೊಸಬಾಯಿ ಸೇರಿದಂತೆ ಅನೇಕರಿದ್ದರು.

ವಾರಕ್ಕೆ ಎರಡು ದಿನ ಪ್ರತಿ ವಾರ್ಡ್ ಗಳಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮ ಮತ್ತು ಸ್ವಚ್ಚತಾ ಕಾರ್ಯ ಕ್ರಮ ಹಮ್ಮಿಕೊಳ್ಳಲಾಗಿದೆ ಪುರಸಭೆ ವ್ಯಾಪ್ತಿಯ ಸಾರ್ವಜನಿಕರು ಜಾಗೃತಾ ವಹಿಸಿಕೊಳ್ಳಬೇಕು ಮನೆಯಲ್ಲಿ ನೀರು ತುಂಬಿಕೊಳ್ಳುವ ವಸ್ತೂಗಳು ವಾರಕ್ಕೆ ಮೂರು ದಿನ ಸ್ವಚ್ಚತೆಗೊಳಿಸಬೇಕು
- ಕಾಶಿನಾಥ ಧನ್ನಿ, ಪುರಸಭೆ ಮುಖ್ಯಾಧಿಕಾರಿ

# ಹದಗೆಟ್ಟ ಬಳಗಾನೂರ ಜವಳಗೇರಾ ರಸ್ತೆ

• ವೀರೇಶ್ ಹೊಸಳ್ಳಿ.
• ಉದಯವಾಹಿನಿ, ಸಿಂಧನೂರು


ಉದಯವಾಹಿನಿ ಚಿತ್ರ

ಸಿಂಧನೂರಿಗೆ ಸಂಪರ್ಕ ಹೊಂದಿರುವ ಜವಳಗೇರಾ ಮತ್ತು ಬಳಗಾನೂರ ರಸ್ತೆ ಕಳೆದ ಮೂರು ವರ್ಷದ ಹಿಂದೆ ಜವಳಗೇರಾ ಹತ್ತಿರದ ಎಸ್ಎಚ್ ಸಿಂಧನೂರು ರಸ್ತೆ ಸಂಪರ್ಕದ ರಸ್ತೆಯಿಂದ ಜಂಗಮರ ಹಟ್ಟಿವರೆಗೆ ನಾಲ್ಕು ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿರುವ ರಸ್ತೆ ವರ್ಷ ಕಳೆಯುವಷ್ಟರಲ್ಲಿ ಕಳಪೆಯಾಗಿದ್ದು.

ಸರ್ಕಾರದಿಂದ ಸಾವಿರಾರು ಕೋಟಿ ರೂ. ಅಭಿವೃದ್ಧಿ ಕಾಮಗಾರಿಗಳಿಗೆ ಖರ್ಚು ಮಾಡುತ್ತದೆ ಗುತ್ತಿಗೆದಾರರು ಜೊತೆ ಅಧಿಕಾರಿಗಳು ಶ್ಯಾಮಲಾಯಾಗಿ ಕಳಪೆ ಕಾಮಗಾರಿ ಮಾಡಿದ್ದುದರಿಂದ. ವರ್ಷದಲ್ಲಿ ಮೂರು ಬಾರಿ ಡಾಂಬರೀಕರಣ ಕಾಮ ಗಾರಿ ಕಿತ್ತು ಹೋಗಿರುವ ಹಿನ್ನೆಲೆಯಲ್ಲಿ ನಿರ್ವಹಣೆಯ ನೆಪದಲ್ಲಿ ಮತ್ತೊಮ್ಮೆ ಲಕ್ಷಾಂತರ ರೂಪಾಯಿ ವೆಚ್ಚದಲ್ಲಿ ತೇಪೆ ಕೆಲಸವನ್ನು ಮಾಡುತ್ತಿದ್ದಾರೆ. ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

ಇಂತಹಾ ಅವೈಜ್ಞಾನಿಕ ರಸ್ತೆ ಕಾಮಗಾರಿ ಮಾಡಿ ಕೈತೊಳಕೊಂಡ ಮೇಲೆ ತದನಂತರದಲ್ಲಿ ತೇಪೆ ಕೆಲಸ ಮಾಡಿದ ಕಾಮಗಾರಿ ಕೂಡ ತಿಂಗಳು ಕಳೆಯುವಷ್ಟರಲ್ಲಿ ಸಂಪೂರ್ಣ ಕಿತ್ತು ಹೋಗಿದ್ದು.

ಇದರ ಬಗ್ಗೆ ಮಸ್ಕಿ ಹಾಗೂ ಸಿಂಧನೂರು ಜನ ಪ್ರತಿನಿಧಿಗಳು ಹಾಗೂ ಅಧಿಕಾರಿಗಳು ನಿರ್ಲಕ್ಷ್ಯ ಧೋರಣೆ ಮುಂದುವರೆದಿದ್ದು. ಇದನ್ನರಿತ ಮೇಲೆ ಲೋಕೋಪಯೋಗಿ ಇಲಾಖೆಯು ಇದೇ ರಸ್ತೆಗೆ ಈಗ ಮತ್ತೊಮ್ಮೆ ರಸ್ತೆ ನಿರ್ವಹಣೆ ನೆಪಮಾಡಿ 40 ಲಕ್ಷಕ್ಕೂ ಅಧಿಕ ಮೊತ್ತದ ಅನುದಾನ ಬಿಡುಗಡೆ ಮಾಡಿದ್ದು. ಆದರೂ ಪ್ರಸ್ತುತ ಕಾಮಗಾರಿ ಅರೇಬರೀ ತಗ್ಗು ದಿನ್ನೆಗಳಿಗೆ ಕಂಕರ್ ಹಾಕಿ ಮೆಟ್ಟಲಂಗ್ ಹಾಗೇ ಬಿಟ್ಟು ಖೊಟ್ಟಿ ದಾಖಲೆ ಸೃಷ್ಟಿಸಿ ಬಿಲ್ ಎತ್ತುವಳಿ ಮಾಡಿಕೊಂಡಿರುವ ಘಟನೆ ಬೆಳಕಿಗೆ ಬಂದಿದ್ದು.

ಇವರು ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳ ಮೇಲೆ ಮತ್ತು ಕಳಪೆ ಕಾಮಗಾರಿ ಮಾಡಿದ ಗುತ್ತೇದಾರರ ಮೇಲೆ ನಿರ್ಧಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಪದೇ ಪದೇ ಈ ರಸ್ತೆ ಗಳ ವರ್ಷದಲ್ಲಿ ಎರಡು ಮೂರು ಬಾರಿ ರಸ್ತೆ ನಿರ್ವಹಣೆ ನೆಪಮಾಡಿ ಸುಮಾರು ಕೋಟಿ ಗಟ್ಟಲೆ ಹಣವನ್ನು ಕೊಳ್ಳೆ ಹೊಡೆಯುವ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳ ಮತ್ತು ಗುತ್ತಿಗೆದಾರರ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕು.

ಕಳಪೆ ಕಾಮಗಾರಿ ಮಾಡಿದ ಗುತ್ತೇದಾರರೊಂದಿಗೆ ಪರ್ಸೇಂಟೇಜ್ ಪಡೆದ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳ ಮೇಲೆ ಮೇಲಾಧಿಕಾರಿಗಳು ಯಾವ ಕ್ರಮ ಕೈಗೊಳ್ಳುತ್ತಾರೂ ಕಾದು ನೋಡಬೇಕಾಗಿದೆ

# ಕಸ ವಿಲೇವಾರಿ ವಾಹನಕ್ಕೆ ಲೋಡರ್ಸ್ ಕೊರತೆ

• ಉದಯವಾಹಿನಿ, ಹೊನ್ನಾಳಿ


ಉದಯವಾಹಿನಿ ಚಿತ್ರ

ಮನೆಮನೆಯಿಂದ ಕಸ ಸಂಗ್ರಹಿಸುವ ವಾಹನಗಳಿಗೆ ಲೋಡರ್ಸ್ ಕೊರತೆ ಇರುವ ಕಾರಣ ಜನರು ಹಸಿ ಕಸ, ಒಣ ಕಸ ಬೇರ್ಪಡಿಸಿದರೂ ಒಟ್ಟಿಗೇ ಸುರಿಯಬೇಕಾದ ಪರಿಸ್ಥಿತಿ ಪಟ್ಟಣದಲ್ಲಿ ನಿರ್ಮಾಣವಾಗಿದೆ. ಘನ ತ್ಯಾಜ್ಯ ನಿರ್ವಹಣೆ ನಿಯಮದ ಪ್ರಕಾರ ಹಸಿ ಕಸ, ಒಣ ಕಸ, ಎಲೆಕ್ಟ್ರಾನಿಕ್ ವೇಸ್ಟ್, ಸ್ಯಾನಿಟರಿ ವೇಸ್ಟ್ ಎಂದು ಮನೆಗಳಲ್ಲಿಯೇ ವಿಂಗಡಿಸಿ ಸಂಗ್ರಹಿಸಲು ಬರುವ ವಾಹನಗಳಿಗೆ ನೀಡಬೇಕು.

ಸದ್ಯ ಪಟ್ಟಣದಲ್ಲಿ ಕಸ ಸಂಗ್ರಹಿಸಲು ಬರುವ ವಾಹನಗಳಲ್ಲಿ ಚಾಲಕರಿರುತ್ತಾರೆಯೇ ಹೊರತು, ಕಸವನ್ನು ಜನರಿಂದ ಪಡೆದುಕೊಂಡು ಕಸವನ್ನು ಬೇರ್ಪಡಿಸಿರುವಂತೆಯೇ ಬೇರೆ ಬೇರೆಯಾಗಿ ಸುರುವಿಕೊಳ್ಳಲು ಲೋಡರ್ಸ್ ಇಲ್ಲ. ಹಾಗಾಗಿ ಜನರು ಕಸವನ್ನು ಬೇರ್ಪಡಿಸಿದ್ದರೂ ಒಟ್ಟಿಗೇ ಹಾಕಬೇಕಾದ ಅನಿವಾರ್ಯತೆ ಇದೆ.

ಈ ಬಗ್ಗೆ ವಾಹನ ಚಾಲಕನನ್ನು ಪ್ರಶ್ನಿಸಿದರೆ, 'ಲೋಡರ್ಸ್‌ಗಳು ಇಲ್ಲ. ವಾಹನವನ್ನೂ ಚಲಾಯಿಸಿಕೊಂಡು ಕಸವನ್ನೂ ನಾನೇ ಪ್ರತ್ಯೇಕವಾಗಿ ಸಂಗ್ರಹಿಸಲು ಆಗುವುದಿಲ್ಲ' ಎನ್ನುತ್ತಾರೆ. ಹೀಗಾಗಿ ಪುರಸಭೆ ವ್ಯಾಪ್ತಿಯಲ್ಲಿ ನಿಯಮದ ಉದ್ದೇಶ ಮಣ್ಣು ಪಾಲಾಗಿದೆ.

ವಾಹನಗಳಲ್ಲಿ ಕೆಲವರು ಮುಸುರಿಯಂತಹ ದ್ರವರೂಪದ ತ್ಯಾಜ್ಯವನ್ನು ಸುರಿದು ಹೋಗುತ್ತಿದ್ದು, ವಾಹನಗಳಿಂದ ಸೋರಿಕೆಯಾಗಿ ರಸ್ತೆಯುದ್ದಕ್ಕೂ ಹರಡುತ್ತಿದೆ. ಇದರಿಂದ ಗಬ್ಬು ವಾಸನೆ ಉಂಟಾಗಿ ರಸ್ತೆಯಲ್ಲಿ ಸಂಚರಿಸುವವರಿಗೆ ತೊಂದರೆಯಾಗಿದೆ. ಲೋಡರ್ಸ್ ವಾಹನಗಳ ಜೊತೆಗೆ ಇದ್ದರೆ ಈ ಸಮಸ್ಯೆಗೆ ಪರಿಹಾರ ಸಿಗಲಿದೆ
-ಮಂಜುಳಾ, ದುರ್ಗಿಗುಡಿ ನಿವಾಸಿ

# ಸಾಲ ವಸೂಲಾತಿಯಲ್ಲಿ ಶೇ.75 ರಷ್ಟು ಸಾಧನೆ: ಸಲೀಮ್ ಪಾಷಾ

• ಉದಯವಾಹಿನಿ, ಮಾನ್ವಿ

ಪಟ್ಟಣದ ಪಿಕಾರ್ಡ್ ಬ್ಯಾಂಕ್ 2023–24ನೇ ಸಾಲಿನ ಸಾಲ ವಸೂಲಾತಿಯಲ್ಲಿ ಶೇ 75 ರಷ್ಟು ಪ್ರಗತಿ ಸಾಧಿಸಿದೆ ಎಂದು ಬ್ಯಾಂಕಿನ ಅಧ್ಯಕ್ಷ ಸಲೀಮ್ ಪಾಷಾ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಿಕಾರ್ಡ್ ಬ್ಯಾಂಕ್ ಕಳೆದ 63 ವರ್ಷಗಳಿಂದ ರೈತರ ಅಭಿವೃದ್ಧಿಗಾಗಿ ಶ್ರಮಿಸುತ್ತಿದೆ. ನಾನು ಪಿಕಾರ್ಡ್ ಬ್ಯಾಂಕಿನ ಅಧ್ಯಕ್ಷನಾಗಿ ಅಧಿಕಾರವಹಿಸಿಕೊಂಡ ನಂತರ ಐದು ವರ್ಷಗಳಲ್ಲಿ ಬ್ಯಾಂಕಿನ ಅಭಿವೃದ್ಧಿಗಾಗಿ ಸಾಕಷ್ಟು ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ. ಸಚಿವ ಎನ್.ಎಸ್.ಬೋಸರಾಜು ಹಾಗೂ ಶಾಸಕ ಜಿ.ಹಂಪಯ್ಯ ನಾಯಕ ಅವರ ಮಾರ್ಗದರ್ಶನ, ಬ್ಯಾಂಕಿನ ನಿರ್ದೇಶಕರು, ಅಧಿಕಾರಿಗಳು ಹಾಗೂ ಸಿಬ್ಬಂದಿ ಸಹಕಾರದಿಂದ ಬ್ಯಾಂಕಿನ ಸಾಲ ವಸೂಲಾತಿಯಲ್ಲಿ 2021–22 ರಲ್ಲಿ ಶೇ 28.07, 2022–23ರಲ್ಲಿ ಶೇ 32.26 ಹಾಗೂ 2023–24ನೇ ಸಾಲಿನಲ್ಲಿ ಶೇ 75.82ರಷ್ಟು ಪ್ರಗತಿ ಸಾಧಿಸಿದ್ದು, ಬ್ಯಾಂಕಿನ ಸದಸ್ಯರಿಗೆ 90 ಲಕ್ಷ ಸಾಲಹಂಚಿಕೆ ಮಾಡಲಾಗಿದೆ' ಎಂದು ತಿಳಿಸಿದರು. ಮುಖಂಡ ಸುಂದರ್ ಕಪಗಲ್ ಉಪಸ್ಥಿತರಿದ್ದರು.

# ಸಿಎಂ ಗೊಡ್ಡು ಬೆದರಿಕೆಗೆ ಹೆದರುವುದಿಲ್ಲ ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರ ಗುಡುಗು

• ಉದಯವಾಹಿನಿ, ಬಳ್ಳಾರಿ


ಉದಯವಾಹಿನಿ ಚಿತ್ರ

ಬಿಜೆಪಿ ಸರ್ಕಾರದ ಆಡಳಿತ ಅವಧಿಯಲ್ಲಿ ಆಗಿರುವ ನಡೆದಿರುವ ಭ್ರಷ್ಟಾಚಾರದ ದಾಖಲೆಗಳನ್ನು ಸಂಗ್ರಹಿಸುತ್ತೇವೆ ಅವರ ಕಾಲದಲ್ಲಿ ಅತಿ ಹೆಚ್ಚು ಭ್ರಷ್ಟಾಚಾರವಾಗಿದೆ ಅವರ ಮೇಲೆ ಸಹ ತನಿಖೆಯನ್ನು ನಡೆಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ ಆದರೆ ಅವರ ಗೋಡ್ಡು ಬೆದರಿಕೆಗೆ ಬಿಜೆಪಿ ಜಗ್ಗುವುದಿಲ್ಲ ಎಂದು ಭಾರತೀಯ ಜನತಾ ಪಕ್ಷದ ರಾಜ್ಯ ಅಧ್ಯಕ್ಷರಾದ ಬಿ ವೈ ವಿಜಯೇಂದ್ರ ಗುಡುಗಿದ್ದಾರೆ.

ಅವರು ಶನಿವಾರ ಜಿಲ್ಲೆಯ ಸಂಡೂರು ತಾಲ್ಲೂಕಿನ ತಾರನಗರದ ವಂಡರ್ ವ್ಯಾಲಿ ರೆಸಾರ್ಟ ನಲ್ಲಿ ಹಮ್ಮಿಕೊಂಡಿದ್ದ ಜಿಲ್ಲೆಯ ಬಿಜೆಪಿ ವಿಶೇಷ ಕಾರ್ಯಕಾರಿಣಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿ, ಕಾಂಗ್ರೆಸ್ ಸರ್ಕಾರ ಈ ರೀತಿಯ ಹೇಳಿಕೆಯನ್ನು ನೀಡಿ ವಿರೋಧ ಪಕ್ಷ ನಾಯಕರ ಬಾಯಿ ಮುಚ್ಚಿಸುವ ಗೊಡ್ಡು ಬೆದರಿಕೆಯಾಗಿದೆ ಇದಕ್ಕೆ ಬಿಜೆಪಿ ಸೊಪ್ಪು ಹಾಕುವುದಿಲ್ಲ, ಈ ರೀತಿಯ ಹೇಳಿಕೆಯಿಂದ ಸರ್ಕಾರದಲ್ಲಿ ನಡೆದ ಭ್ರಷ್ಟಾಚಾರವನ್ನು ವಿಷಯಾಂತರ ಮಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಜಿಲ್ಲಾಧ್ಯಕ್ಷರಾದ ಅನಿಲ್ ಕುಮಾರ್, ಚಿತ್ರದುರ್ಗ ಸಂಸದರಾದ ಗೋವಿಂದ ಕಾರಜೋಳ, ವಿಧಾನ ಪರಿಷತ್ ಸದಸ್ಯರಾದ ರವಿಕುಮಾರ್, ನವೀನ್, ಮಾಜಿ ಶಾಸಕರಾದ ಸೋಮಶೇಖರ್ ರೆಡ್ಡಿ, ಮಾಜಿ ಸಂಸದರಾದ ದೇವೇಂದ್ರಪ್ಪ, ಮುಖಂಡರಾದ ಚಂದ್ರಶೇಖರ ಹಲಗೇರಿ, ಪಕ್ಷದ ಹಿರಿಯ ಮುಖಂಡರು ಪ್ರಧಾನ ಕಾರ್ಯದರ್ಶಿಗಳು, ಮಂಡಲದ ಅಧ್ಯಕ್ಷರುಗಳು, ಪದಾಧಿಕಾರಿಗಳು, ಎಲ್ಲಾ ಮೋರ್ಚಾದ ಜಿಲ್ಲಾಧ್ಯಕ್ಷರುಗಳು ಮತ್ತು ಪದಾಧಿಕಾರಿಗಳು ಈ ವಿಶೇಷ ಕಾರ್ಯಕಾರಿಣಿ ಸಭೆಯಲ್ಲಿ ಭಾಗವಹಿಸಿದರು.

# ಪಡಿತರ ವಿತರಣೆಗೆ ಕಾಡುತ್ತಿರುವ ಸರ್ವರ್ ಸಮಸ್ಯೆ ಬಗೆಹರಿಸುವಂತೆ ಒತ್ತಾಯ

• ಅರಸೀಕೆರೆ ಉದಯವಾಹಿನಿ



ಈ ತಿಂಗಳಲ್ಲಿ ಪಡಿತರ ವಿತರಣೆಗೆ ಸರ್ವರ್ ಸಮಸ್ಯೆ ತೀವ್ರ ಗತಿಯಲ್ಲಿ ತೊಂದರೆ ನೀಡುತ್ತಿದ್ದು ಪಡಿತರ ವಿತರಕರಿಗೂ ಮತ್ತು ಪಡಿತರ ಪಡೆಯುವ ಕಾಡುದಾರರಿಗೂ ಸಹ ತೊಂದರೆ ಉಂಟಾಗಿದ್ದು ತಮ್ಮ ದಿನಗೂಲಿಯನ್ನು ಬಿಟ್ಟು ನ್ಯಾಯ ಬೆಲೆ ಅಂಗಡಿಗಳ ಮುಂದೆ ಪಡಿತರ ಕಾ ಡುದಾರರು ಸಾಲುಗಟ್ಟಿ ನಿಲ್ಲುತ್ತಿರುವುದು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ.

ಈ ವಿಚಾರದಲ್ಲಿ ರಾಜ್ಯ ಪಡಿತರ ವಿತರಕರ ಸಂಘದ ರಾಜ್ಯಾಧ್ಯಕ್ಷರಾದ ಕೃಷ್ಣಪ್ಪರವರು ಮುಖ್ಯಮಂತ್ರಿ ಸಿದ್ದರಾಮಯ್ಯ, ಆಹಾರ ಸಚಿವರಾದ ಕೆಎಚ್ ಮುನಿ ಯಪ್ಪ, ಆಹಾರ ಇಲಾಖೆ ಆಯುಕ್ತರಿಗೂ ಮನವಿ ನೀಡುತ್ತಿದ್ದರು ಸರ್ವ ಸಮಸ್ಯೆ ಬಗೆಹರಿಯದೆ ತೊಂದರೆ ಉಂಟಾಗುತ್ತಿದೆ ಎಂದು ಅರಸೀಕೆರೆ ತಾಲ್ಲೂಕು ಪಡಿತರ ವಿತರಕರ ಸಂಘದ ಅಧ್ಯಕ್ಷ ವೇದಮೂರ್ತಿ ತಿಳಿಸಿದ್ದಾರೆ.

ಇದೇ ರೀತಿ ಮುಂದುವರೆದಲ್ಲಿ ಇಲಾಖೆ ಉನ್ನತ ಮಟ್ಟದ ಅಧಿಕಾರಿಗಳು ಸರ್ವರ್ ಸಮಸ್ಯೆ ಬಗ್ಗೆ ಹರಿಯುವವರೆಗೂ ಚೆಕ್ ಲಿಸ್ಟ್ ಮುಖಾಂತರ ಪಡಿತರ ವಿತರಣೆಗೆ ಅವಕಾಶ ಕಲ್ಪಿಸಬೇಕಾಗಿ ಅರಸೀಕೆರೆ ತಾಲ್ಲೂಕು ಪಡಿತರ ವಿತರಕರ ಸಂಘದ ಪರವಾಗಿ ತಾಲ್ಲೂಕ ಅಧ್ಯಕ್ಷರಾದ ವೇದಮೂರ್ತಿ ಅಧಿಕಾರಿಗಳಲ್ಲಿ ಮನವಿ ಮಾಡಿದ್ದಾರೆ.

ಕಳೆದ ಮಾರ್ಚ್ ತಿಂಗಳಿಂದ ಇಲ್ಲಿಯವರೆಗೆ ಪಡಿತರ ವಿತರಕರಿಗೆ ಕಮಿಷನ್ ಸಹ ನೀಡಿರುವುದಿಲ್ಲ ಕಮಿಷನ್ ಮತ್ತು ಬಾಕಿ ಇರುವ ಈಕೆ ವೈ ಸಿ ಹಣವನ್ನು ಸಹ ಕೂಡಲೇ ಬಿಡುಗಡೆಗೊಳಿಸಿ ಪಡಿತರ ವಿತರಕರ ಸಂಕಷ್ಟಕ್ಕೆ ಸಂಬಂಧ ಪಟ್ಟ ಇಲಾಖೆ ಅಧಿಕಾರಿಗಳು ಸ್ಪಂದಿಸಬೇಕೆಂದು ಅರಸೀಕೆರೆ ಪಡಿತರ ವಿತರಕರ ಸಂಘದ ಅಧ್ಯಕ್ಷರಾದ ವೇದಮೂರ್ತಿ ಮತ್ತು ಸಂಘದ ಪದಾಧಿಕಾರಿಗಳು ಮನವಿ ಮಾಡಿದ್ದಾರೆ

# ಮುಂಗಡ ಬಾಡಿಗೆ ಪಾವತಿ: ತನಿಖೆಗೆ ಆಗ್ರಹ

• ಉದಯವಾಹಿನಿ, ಗದಗ


ಉದಯವಾಹಿನಿ ಚಿತ್ರ

ನಗರದ ಕ್ಲಾಥ್ ಮಾರ್ಕೆಟ್ ಹಾಗೂ ಗ್ರೇನ್ ಮಾರ್ಕೆಟ್‌ನಲ್ಲಿರುವ ವಾಣಿಜ್ಯ ಮಳಿಗೆಗಳ ಬಾಡಿಗೆದಾರರು ಮುಂದಿನ ಐದು ವರ್ಷಗಳ ಅವಧಿಗೆ ಮುಂಗಡವಾಗಿ ಬಾಡಿಗೆ ತುಂಬಿರುವುದರ ಹಿಂದೆ ಭ್ರಷ್ಟಾಚಾರ ನಡೆದಿರುವ ಅನುಮಾನ ಇದ್ದು, ಕಾಣದ ಕೈಗಳ ಕೈವಾಡ ಇದೆ.

ಆದಕಾರಣ, ಈ ಬಗ್ಗೆ ಲೋಕಾಯುಕ್ತದಲ್ಲಿ ಪ್ರಕರಣ ದಾಖಲಿಸಿ ತನಿಖೆಗೆ ಒಳಪಡಿಸಬೇಕು ಎಂದು ನಗರಸಭೆ ಸದಸ್ಯರು ಒತ್ತಾಯಿಸಿದರು.

ನಗರಸಭೆ ಅಧ್ಯಕ್ಷೆ ಉಷಾ ದಾಸರ ಅಧ್ಯಕ್ಷತೆಯಲ್ಲಿ ನಡೆದ 15ನೇ ಹಣಕಾಸು ಆಯೋಗದ ಅನುದಾನ ಕುರಿತಾದ ವಿಶೇಷ ಸಾಮಾನ್ಯ ಸಭೆಯಲ್ಲಿ ಆಡಳಿತ ಹಾಗೂ ವಿರೋಧ ಪಕ್ಷದ ಹಲವು ಸದಸ್ಯರು ಈ ಬಗ್ಗೆ ತೀವ್ರ ವಿರೋಧ ವ್ಯಕ್ತಪಡಿಸಿದರು.

ವಿರೋಧ ಪಕ್ಷದ ನಾಯಕ ಎಲ್.ಡಿ.ಚಂದಾವರಿ ಮಾತನಾಡಿ, 'ಕ್ಲಾಥ್ ಮಾರ್ಕೆಟ್ ಹಾಗೂ ಗ್ರೇನ್ ಮಾರ್ಕೆಟ್‌ನ ಮಳಿಗೆಗಳ ಲೀಸ್ ಅವಧಿ ವಿಸ್ತರಿಸಿಲ್ಲ, ನವೀಕರಣವೂ ಆಗಿಲ್ಲ.

ಮೇಲಾಗಿ ಈ ಬಗ್ಗೆ ಪ್ರಕರಣ ನ್ಯಾಯಾಲಯದಲ್ಲಿದ್ದಾಗಲೂ ಲೀಸ್ ಅಥವಾ ಬಾಡಿಗೆದಾರರು ಮುಂದಿನ ಐದು ವರ್ಷಗಳ ಅವಧಿಯ ಬಾಡಿಗೆ ಕಟ್ಟಿದ್ದು ಏಕೆ' ಎಂದು ಪ್ರಶ್ನಿಸಿದರು.

ನಗರಸಭೆಯ ಆಡಳಿತದ ಗಮನಕ್ಕೆ ತರದೇ ಐದು ವರ್ಷಗಳ ಬಾಡಿಗೆಯನ್ನು ಮುಂಗಡವಾಗಿ ಭರಿಸಿರುವುದು ಗಂಭೀರ ಲೋಪ. ತಕ್ಷಣವೇ ಹಣವನ್ನು ಎಲ್ಲರಿಗೂ ಮರಳಿಸಬೇಕು' ಎಂದು ಒತ್ತಾಯಿಸಿದರು.

ಇದಕ್ಕೆ ಕಾಂಗ್ರೆಸ್‌ನ ಹಿರಿಯ ಸದಸ್ಯ ಕೃಷ್ಣ ಪರಾಪೂರ, ಜೆ.ಎಂ. ನಮಾಜಿ ಧ್ವನಿ ಗೂಡಿಸಿ, 'ಈ ಅಕ್ರಮದಲ್ಲಿ ಭಾಗಿಯಾಗಿರುವ ಎಲ್ಲರ ಮೇಲೆಯೂ ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕು' ಎಂದು ಆಗ್ರಹಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಪ್ರಭಾರ ಪೌರಾಯುಕ್ತ ಪ್ರಶಾಂತ ವರಗಪ್ಪನವರ, 'ಮುಂಗಡವಾಗಿ ಬಾಡಿಗೆ ಹಣ ಪಾವತಿಸಿರುವುದಕ್ಕೆ ಸಂಬಂಧಿಸಿದಂತೆ ಕಾನೂನು ತಜ್ಞರ ಸಲಹೆ ಪಡೆದು, ಮುಂದಿನ ಕ್ರಮ ಕೈಗೊಳ್ಳಲಾಗುವುದು'
- ನಗರಸಭೆ ಸದಸ್ಯರು

# ದಶಕಗಳಿಂದ ಬೀಡುಬಿಟ್ಟಿರುವ ತಹಶೀಲ್ದಾರ್ ಕಚೇರಿ ಸಿಬ್ಬಂದಿ

## ಸಿಬ್ಬಂದಿಯ ನಿರ್ಲಕ್ಷ್ಯ ಮನೋಭಾವದಿಂದಾಗಿ ಸಾರ್ವಜನಿಕರು ತಮ್ಮ ಕೆಲಸ– ಕಾರ್ಯಗಳಿಗೆ ನಿತ್ಯ ಅಲೆಯಬೇಕಾದ ದುಃಸ್ಥಿತಿ

• ಉದಯವಾಹಿನಿ, ಜಗಳೂರು


ಉದಯವಾಹಿನಿ ಚಿತ್ರ

ತಾಲ್ಲೂಕು ಆಡಳಿತದ 'ಶಕ್ತಿ ಕೇಂದ್ರ' ಎನಿಸಿರುವ ಇಲ್ಲಿನ ತಹಶೀಲ್ದಾರ್ ಕಚೇರಿಯ ವಿವಿಧ ವಿಭಾಗಗಳಲ್ಲಿ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿ ಹತ್ತಾರು ವರ್ಷಗಳಿಂದ ಇಲ್ಲೇ ಬೀಡು ಬಿಟ್ಟಿದ್ದು, ಆಡಳಿತ ಜಡ್ಡುಗಟ್ಟಿ ಹೋಗಿದೆ. ಸಿಬ್ಬಂದಿಯ ನಿರ್ಲಕ್ಷ್ಯ ಮನೋಭಾವದಿಂದಾಗಿ ಸಾರ್ವಜನಿಕರು ತಮ್ಮ ಕೆಲಸ– ಕಾರ್ಯಗಳಿಗೆ ನಿತ್ಯ ಅಲೆಯಬೇಕಾದ ದುಃಸ್ಥಿತಿ ಇದೆ.

ಸಾರ್ವಜನಿಕ ದಾಖಲೆ ವಿಭಾಗ, ಭೂಮಾಪನ ಇಲಾಖೆ, ಆರ್.ಆರ್.ಟಿ, ಭೂಮಿ ವಿಭಾಗದ ಸಿಬ್ಬಂದಿ ಹಾ ಗೂ ಗ್ರಾಮ ಲೆಕ್ಕಾಧಿಕಾರಿಗಳು ಸೇರಿ ಇಲ್ಲಿನ ಬಹುತೇಕ ಸಿ ಬ್ಬಂದಿ 10–15 ವರ್ಷಗಳಿಂದ ಇಲ್ಲಿಯೇ ಬೀಡುಬಿಟ್ಟಿದ್ದಾರೆ. ಸುದೀರ್ಘ ಅವಧಿಯಿಂದ ಇಲ್ಲೇ ಕೆಲಸ ಮಾಡಿರುವುದರಿಂದ 'ಪ್ರಭಾವಿ'ಗಳಾಗಿರುವ ಸಿಬ್ಬಂದಿಯನ್ನು ಪ್ರಶ್ನಿಸುವವರೇ ಇಲ್ಲದಂತಾಗಿದೆ ಎಂಬುದು ಜನರ ದೂರು.

ತಹಶೀಲ್ದಾರ್ ಕಚೇರಿಯ ಬಹುತೇಕ ಸಿಬ್ಬಂದಿ ನಿತ್ಯವೂ ದಾವಣಗೆರೆ ಮತ್ತು ಚಿತ್ರದುರ್ಗದಿಂದ ಬರುತಾರೆ. ಬೆಳಿಗ್ಗೆ 11 ಗಂಟೆಯ ನಂತರ ಒಬ್ಬೊಬ್ಬರಾಗಿ ಕಚೇರಿಗೆ ಆಗಮಿಸುತ್ತಾರೆ. ಮಧ್ಯಾಹ್ನ 1 ಗಂಟೆ ವೇಳೆಗಾಗಲೇ ಊಟಕ್ಕೆ ತೆರಳುತ್ತಾರೆ. 4 ಗಂಟೆಗೆ ಊರಿಗೆ ಮರಳುವ ತರಾತುರಿಯಲ್ಲಿರುತ್ತಾರೆ. ಕೆಲಸದ ಬಗ್ಗೆ ನಿರ್ಲಕ್ಯ ತೋರುತ್ತಿದ್ದು, ತೀವ್ರ ಸಮಸ್ಯೆಯಾಗಿದೆ ಎಂದು ಸಾರ್ವಜನಿಕರು ಆರೋಪಿಸಿದ್ದಾರೆ.

ಇಲ್ಲಿನ ತಹಶೀಲ್ದಾರ್ ಕಚೇರಿ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ ಕುರ್ಚಿಯಲ್ಲಿ ಕುಳಿತುಕೊಳ್ಳುವುದೆಂದರೆ ಅಲರ್ಜಿ. ಎಲ್ಲಾ ವಿಭಾಗಗಳಲ್ಲಿ ಅರ್ಧಕ್ಕರ್ಧ ಸಿಬ್ಬಂದಿಯ ಕುರ್ಚಿಗಳು ಖಾಲಿ ಇರುತ್ತವೆ.

ಅವರು ಯಾವಾಗ ಬರುತ್ತಾರೋ, ಯಾವಾಗ ವಾಪಸ್ ಹೋಗುತ್ತಾರೋ ತಿಳಿಯುವುದಿಲ್ಲ. 10–15 ವರ್ಷಗಳಿಂದ ಬಹುತೇಕ ಸಿ ಬ್ಬಂದಿ ಇಲ್ಲೇ ಠಿಕಾಣಿ ಹೂಡಿದ್ದಾರೆ. ಅಧೀನ ಸಿಬ್ಬಂದಿಯನ್ನು ನಿಯಂತ್ರಿಸಬೇಕಾದ ತಹಶೀಲ್ದಾರರೇ ಕಚೇರಿಯಲ್ಲಿ ಸರಿಯಾಗಿ ಇರುವುದಿಲ್ಲ. ದಿನದಲ್ಲಿ ಒಂದೆರೆಡು ಬಾರಿ ಮಾತ್ರ ಕಚೇರಿಯಲ್ಲಿ ಕಾಣಸಿಕೊಳ್ಳುವ ತಹಶೀಲ್ದಾರ್, ಸದಾ ಹೊರಗೆ ಇರುತ್ತಾರೆ. ಸಿಬ್ಬಂದಿಯನ್ನು ಕೇಳಿದರೆ ಸಾಹೇಬರು ಫೀಲ್ಡಿಗೆ ಹೋಗಿದ್ದಾರೆ ಎಂದು ಹೇಳುತ್ತಾರೆ. ನಿತ್ಯ ಹಳ್ಳಿಗಳಿಂದ ಬರುವವರು ಅಹವಾಲು ಕೇಳುವವರಿಲ್ಲದೇ ಬರಿಗೈಲಿ ಹಿಂದಿರುಗುತ್ತಿದ್ದಾರೆ' ಎಂದು ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಘಟಕದ ಮಾಜಿ ಅಧ್ಯಕ್ಷ ಜಿ.ಎಚ್. ಹಜರತ್ ಆಲಿ ದೂರಿದರು. ಸಾರ್ವಜನಿಕ ದಾಖಲೆ ಕೊಠಡಿ ಉಸ್ತುವಾರಿ ನೋಡಿಕೊಳ್ಳುವ ಸಿಬ್ಬಂದಿಯೊಬ್ಬರು 14 ವರ್ಷಗಳಿಂದ ಇಲ್ಲೇ ಬೀಡುಬಿಟ್ಟಿದ್ದು, ಹಳೆಯ ಪಹಣಿ, ಮ್ಯುಟೇಷನ್ ಮುಂತಾದ ಭೂ ದಾಖಲೆಗಳನ್ನು ಕೊಡಲು ರೈತರಿಂದ ದುಪ್ಪಟ್ಟು ಹಣ ವಸೂಲಿ ಮಾಡುತ್ತಾರೆ. ಪವನ ಯಂತ್ರ ಮತ್ತು ಸೋಲಾರ್ ಕಂಪನಿಗಳಿಗೆ ಮೂಲ ದಾಖಲೆಗಳ ಕಡತಗಳನ್ನು ಹೊರಗೆ ಕೊಟ್ಟು ಕಳುಹಿಸುತ್ತಾರೆ ಎಂಬ ದೂರಿನ ಹಿನ್ನೆಲೆಯಲ್ಲಿ ಎರಡು ವರ್ಷದ ಹಿಂದೆ ಜಿಲ್ಲಾಧಿಕಾರಿಯವರು ಅವರನ್ನು ಹೊನ್ನಾಳಿಗೆ ವರ್ಗಾ ಮಾಡಿದ್ದರು.

ಆದರೆ, ಪ್ರಭಾವ ಬೀರಿ ಮತ್ತೆ ಇಲ್ಲಿಗೇ ವರ್ಗಾ ಆಗಿ ಬಂದಿದ್ದರು. ಆದರೂ ಅವರಿಗೆ ದಾಖಲೆ ಕೊಠಡಿ ಉ ಸ್ತುವಾರಿ ನೀಡಿರಲಿಲ್ಲ. ಆದರೆ, ಈಗಿನ ತಹಶೀಲ್ದಾರ್ ಅವರು ಮತ್ತೆ ಒತ್ತಡಕ್ಕೆ ಮಣಿದು ಕಳಂ ಕಿತ ಸಿಬ್ಬಂದಿಗೆ ದಾಖಲೆ ಕೊಠಡಿ ಉಸ್ತುವಾರಿ ನೀಡಿದ್ದಾರೆ' ಎಂದು ಆರೋಪಿಸಿದರು.

ಒಂದೇ ಸ್ಥಳದಲ್ಲಿ 5 ವರ್ಷ ಮೀರಿ ಸೇವೆಯಲ್ಲಿದ್ದಲ್ಲಿ ಯಾವುದೇ ದೂರುಗಳಿದ್ದಲ್ಲಿ ಅಂತಹ ಅಧಿಕಾರಿಗಳು ಮತ್ತು ಸಿಬ್ಬಂದಿ ಬಗ್ಗೆ ವಿವರವಾದ ವರದಿ ಸಲ್ಲಿಸಿ ಎಂದು ರಾಜ್ಯ ಸರ್ಕಾರದ ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಕಟಾರಿಯ ಆದೇಶಿಸಿದ್ದಾರೆ. ಇಲ್ಲಿನ ತಹಶೀಲ್ದಾರ್ ಕಚೇರಿಯಲ್ಲಿ 5 ವರ್ಷಕ್ಕೂ ಮೀರಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿ ಕುರಿತು ಸರ್ಕಾರಕ್ಕೆ ವಿವರವಾದ ವರದಿ ಕಳುಹಿಸಲಾಗಿದೆ
-ಕಲೀಂ ಉಲ್ಲಾ, ತಹಶೀಲ್ದಾರ್

**ಜಗಳೂರಿನ ತಹಶೀಲ್ದಾರ್ ಕಚೇರಿಯಲ್ಲಿ ಮಧ್ಯಾಹ್ನ 12 ಗಂಟೆ ವೇಳೆಗೆ ಸಿಬ್ಬಂದಿ ಕುರ್ಚಿಗಳು ಖಾಲಿಯಾಗಿರುವುದು ಜಗಳೂರು ತಾಲ್ಲೂಕು ಆಡಳಿತದ ಶಕ್ತಿ ಕೇಂದ್ರವಾಗಿರುವ ಮಿನಿ ವಿದಾನಸೌಧ 5 ವರ್ಷ ಮೀರಿದ ಸಿಬ್ಬಂದಿ ವಿವರ ಕೇಳಿದ ಸರ್ಕಾರ ಅಧಿಕಾರಿಗಳು ಜನರ ಸಮಸ್ಯೆಗಳಿಗೆ ಗುಣಾತ್ಮಕವಾಗಿ ಸ್ಪಂದಿಸಬೇಕು. ಕಚೇರಿಯಲ್ಲಿ ಜನರಿಗೆ ಲಭ್ಯರಾಗಬೇಕು. ನಿರ್ಲಕ್ಷ್ಯ ತೋರುವ ಅಧಿಕಾರಿಗಳು ಮತ್ತು ಇತರ ಸಿಬ್ಬಂದಿ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು.**

## ಮಿನಿ ನ್ಯೂಸ್

### ಬೀದಿಬದಿ ವ್ಯಾಪಾರಿಗಳಿಗೆ ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

• ಉದಯವಾಹಿನಿ ಅರಸೀಕೆರೆ



2024 25ನೇ ಸಾಲಿನ ಅರಸೀಕೆರೆ ನಗರಸಭಾ ವ್ಯಾಪ್ತಿಯಲ್ಲಿ ಬೀ ದಿಬದಿ ವ್ಯಾಪಾರ ನಡೆಸಿ ಜೀವನ ನಿರ್ವಹಣೆ ನಡೆಸುತ್ತಿರುವ ಕುಟುಂಬಗಳಿಗೆ ಪ್ರಸ್ತುತ ಈ ಸಾಲಿನಲ್ಲಿ ಮೂರು ನೂರಕ್ಕೂ ಹೆಚ್ಚು ಬೀದಿಬದಿ ವ್ಯಾಪಾರಿಗಳ ಸಮೀಕ್ಷೆಯನ್ನು ಅರಸೀಕೆರೆ ನಗರಸಭಾ ವ್ಯಾಪ್ತಿಯಿಂದ ನಡೆಸಲಾಗುತ್ತಿದ್ದು ಡೇ ನಲಮ್ ಅಭಿಯಾನದಡಿ ಪಿಎಂ ಸ್ವನಿಧಿ ಯೋಜನೆಯಡಿ ಸಾಲ ಸೌಲಭ್ಯ ಮತ್ತು ಬೀದಿ ಬದಿ ವ್ಯಾಪಾರಿಗಳಿಗೆ ಗುರುತಿನ ಚೀಟಿ ಸಹ ನೀಡಲಾಗುತ್ತದೆ ಆದ್ದರಿಂದ ಹೊಸದಾಗಿ ಸೇರ ಬಯಸುವ ಬೀದಿಬದಿ ವ್ಯಾಪಾರಿಗಳು ದಿನಾಂಕ 31 7 20 24ರ ಸಂಜೆ ಐದು ಗಂಟೆ ಒಳಗಾಗಿ ನಗರಸಭೆಗೆ ಭೇಟಿ ನೀಡಿ ನೋಂದಣಿಗಾಗಿ ಅರ್ಜಿ ಸಲ್ಲಿಸ ಬಹುದಾಗಿರುತ್ತದೆ ಆದ್ದರಿಂದ ಈ ಸರ್ಕಾರದ ಯೋಜನೆಯ ಉಪಯೋಗ ಪಡೆದುಕೊಂಡು ತಮ್ಮ ಆರ್ಥಿಕ ಸಬಲತೆಯನ್ನು ವೃದ್ಧಿಸಿಕೊಳ್ಳಬೇಕಾಗಿ ಅರಸೀಕೆರೆ ನಗರಸಭಾ ಪೌರಾಯುಕ್ತಾರಾದ ಎಚ್ ಟಿ ಕೃಷ್ಣಮೂರ್ತಿ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

### ಸೊಳ್ಳೆಗಳು ನಿಂತ ನೀರಿನಲ್ಲಿ ಸಂತಾನೋತ್ಪತ್ತಿಗಾಗಿ ಮೊಟ್ಟೆ ಇಡುತ್ತೆ, ಸ್ವಚ್ಛತೆ ಕಾಪಾಡಿ

• ಉದಯವಾಹಿನಿ, ಚಿಂಚೋಳಿ



ಸೊಳ್ಳೆಗಳು ಅದರ ಸಂತಾನೋತ್ಪತ್ತಿಗಾಗಿ ನಿಂತ ನೀರಿನಲ್ಲಿ ಕನಿಷ್ಠ 2000 ಮೊಟ್ಟೆಗಳು ಇಡುತ್ತದೆ ಅದಕಾರಣ ಸಾರ್ವಜನಿಕರು ಮನೆಯ ಸುತ್ತಮುತ್ತ ಮತ್ತು ಮನೆಗಳಲ್ಲಿ ಮನೆಯ ಮಹಡಿ ಮೇಲೆ ನೀರು ನಿಲ್ಲದಂತೆ ಸ್ವಚ್ಚತೆ ಕಾಪಾಡಿಕೊಳ್ಳಬೇಕು ಎಂದು ಟಿಹೆಚ್ಓ ಡಾ.ಮಹ್ಮದ್ ಗಫಾರ ತಿಳಿಸಿದ್ದಾರೆ.

ಪ್ರತಿ ಶುಕ್ರವಾರ ನಗರ ಸೇರಿದಂತೆ ಗ್ರಾಮೀಣ ಪ್ರದೇಶ ಈಡಿಸ್ ಲಾರ್ವಾ ಸಮೀಕ್ಷೆ ಹಾಗೂ ಸೋರ್ಸ ರಿಡಕ್ಷನ್ ಚಟುವಟಿಕೆ ನಡೆಸಲಾಗುತ್ತಿದೆ, ಈಡಿಸ್ ಈಜಿಪ್ಟಾ ಸೊಳ್ಳೆಗಳು ತಮ್ಮ ಮೊಟ್ಟೆಗಳನ್ನು ಶುದ್ಧ ಹಾಗೂ ನಿಂತ ನೀರಿನಲ್ಲಿ ಇಡುತ್ತದೆ ವಾರದಲ್ಲೇ ಅದಕ್ಕೆ ರೆಕ್ಕೆ ಬಂದು ಜನರಿಗೆ ಕಚ್ಚುಲು ಸಿದ್ದವಾಗುತ್ತೆ ತಡೆಗಟ್ಟಲು ವಾರಕ್ಕೊಮ್ಮೆ ಆರೋಗ್ಯ ಇಲಾಖೆ ವತಿಯಿಂದ ಈಡಿಸ್ ಲಾರ್ವಾ ಸರ್ವೆ ಮತ್ತು ಸೋರ್ಸ ರಿಡಕ್ಷನ್ ಚಟುವಟಿಕೆ ಕೈಗೊಳ್ಳಲಾಗಿದ್ದು ಗ್ರಾಮೀಣ ಪ್ರದೇಶದಲ್ಲಿ ಆಶಾ ಕಾರ್ಯಕರ್ತೆಯರು ಮನೆ ಮನೆಗೆ ಭೇಟಿ ನೀಡಿ ಸಮೀಕ್ಷೆ ಮಾಡಿ ಸೊಳ್ಳೆ ಉತ್ಪತ್ತಿ ತಾಣಗಳನ್ನು ನಿರ್ಮೂಲನೆ ಮಾಡುತ್ತಾರೆ ಎಂದು ಪತ್ರಿಕಾ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

### ಮಂಗಳೂರು-ಮಡಗಾಂವ್ ಜಂಕ್ಷನ್ ನಡುವೆ ವಿಶೇಷ ರೈಲು

• ಉದಯವಾಹಿನಿ, ಮಂಗಳೂರು

ಮಡಗಾಂವ್ ಹಾಗೂ ಮಂಗಳೂರು ಜಂಕ್ಷನ್ ನಡುವೆ ಟಿಕೆಟ್ ಕಾಯ್ದಿರಿಸುವಿಕೆಗೆ ಅವಕಾಶ ಇಲ್ಲದ ವಿಶೇಷ ಮೆಮು ರೈಲು ಸೇವೆಯನ್ನು ಕೊಂಕಣ ರೈಲ್ವೆಯು ಮೂರು ದಿನಗಳ ಕಾಲ ಒದಗಿಸಲಿದೆ. ಈ ವಿಶೇಷ ರೈಲು ಜುಲೈ 20 (ಶನಿವಾರ), 21(ಭಾನುವಾರ) ಹಾಗೂ, 22ರಂದು (ಸೋಮವಾರ) ಈ ಎರಡು ಜಂಕ್ಷನ್ ಗಳ ನಡುವೆ ಸಂಚರಿಸಲಿದೆ.

ಬೆಳಗ್ಗೆ 6:00 ಮಡಗಾಂವ್ ಜಂಕ್ಷನ್ ನಿಂದ ಹೊರಡುವ ಮೆಮು ರೈಲು ಮಧ್ಯಾಹ್ನ 12:15ಕ್ಕೆ ಮಂಗಳೂರು ಜಂಕ್ಷನ್ ತಲುಪಲಿದೆ. ಮಧ್ಯಾಹ್ನ 12:40ಕ್ಕೆ ಮಂಗಳೂರು ಜಂಕ್ಷನ್ ನಿಂದ ಹೊರಡುವ ರೈಲು ಸಂಜೆ 7:00 ಕ್ಕೆ ಮಡಗಾಂವ್ ಜಂಕ್ಷನ್ ತಲುಪಲಿದೆ. ಈ ರೈಲು ಕಾನಕೋಣ, ಕಾರವಾರ, ಹರ್ವಾಡ, ಅಂಕೋಲಾ, ಗೋಕರ್ಣ ರೋಡ್, ಮಿರ್ಜಾನ್, ಕುಮಟಾ, ಹೊನ್ನಾವರ, ಮಂಕಿ, ಮುರ್ಡೇಶ್ವರ, ಭಟ್ಕಳ, ಶಿರೂರು, ಮೂಕಾಂಬಿಕಾ ರೋಡ್ ಬೈಂದೂರು, ಬಿಜೂರು, ಸೇನಾಪುರ, ಕುಂದಾಪುರ, ಬಾರ್ಕೂರು, ಉಡುಪಿ, ಮೂಲ್ಕಿ, ಸುರತ್ಕಲ್, ತೋಕೂರು ನಿಲ್ದಾಣಗಳಲ್ಲಿ ನಿಲುಗಡೆ ಇರುತ್ತದೆ ಎಂದು ಕೊಂಕಣ ರೈಲ್ವೆಯ ಪ್ರಕಟಣೆ ತಿಳಿಸಿದೆ.

### ಎಂ11 ಕಂಪನಿಯಿಂದ ಮಾಲಿನ್ಯ ಹೋರಾಟಗಾರರಿಗೆ ಪ್ರವೇಶ ನಿರಾಕರಣೆ

• ಉದಯವಾಹಿನಿ, ಪಡುಬಿದ್ರಿ

ನಂದಿಕೂರು ಪರಿಸರದಲ್ಲಿ ಕಾರ್ಯಾರಂಭಗೊಂಡಿರುವ ಬಯೋಡೀಸೆಲ್ ಉತ್ಪಾದನಾ ಘಟಕ ಎಂ11 ಕಂಪನಿಯಿಂದ ಮಾಲಿನ್ಯ ಉಂಟಾಗುತ್ತಿದೆ ಎಂಬ ಸ್ಥಳೀಯರ ಆರೋಪದ ಮೇರೆಗೆ ಪಲಿಮಾರು ಗ್ರಾಮ ಪಂಚಾಯಿತಿಯ ವಿಶೇಷ ಗ್ರಾಮಸಭೆಯ ನಿ ರ್ಣಯದಂತೆ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು ಭೇಟಿ ನೀಡಿ ಸ್ಥಳೀಯರ ಅಹವಾಲು ಸ್ವೀಕರಿಸಿದರು.

ಮಾಲಿನ್ಯಕ್ಕೆ ಸಂಬಂಧಿಸಿ ಜಿಲ್ಲಾ ಪರಿಸರ ಮಾಲಿನ್ಯ ನಿಯಂತ್ರಣ ಅಧಿಕಾರಿಗೆ, ಕಂಪನಿ ಸುತ್ತಮುತ್ತಲ ಪರಿಸರದಲ್ಲಿನ ತಾಂಬೊಟ್ಟು ಬಳಿಯ ದೊಡ್ಡಣ್ಣ ಶೆಟ್ಟಿ ಮನೆಯ ಪಕ್ಕದ ತೋಡು, ಶ್ಯಾಮರಾಯ್ ಆಚಾರ್ಯ ಶೆಟ್ಟಿ ಗುಡ್ಡೆ ಬಳಿಯ ತೋಡುವಿನಲ್ಲಿ ಬರುವ ನೀರಿನ ಬಗ್ಗೆ ಸ್ಥಳೀಯರು ಮಾಹಿತಿ ನೀಡಿದರು.

### ಒಂದು ಎಕರೆಗಿಂತ ಕಡಿಮೆ ಪ್ರದೇಶದ ಏಕವಿನ್ಯಾಸ ಅನುಮೋದನೆ

• ಉದಯವಾಹಿನಿ, ಉಡುಪಿ

ಸ್ಥಳೀಯ ಯೋಜನೆ ಪ್ರದೇಶದ ಹೊರಭಾಗದಲ್ಲಿರುವ ಒಂದು ಎಕರೆಗಿಂತ ಕಡಿಮೆ ಪ್ರದೇಶ ಮತ್ತು ಏಕ ನಿವೇಶನ ವಸತಿ ಹಾಗೂ ವಸತಿಯೇತರರಿಗೆ ಭೂ ಪರಿವರ್ತಿತ ಜಮೀನುಗಳಲ್ಲಿನ ವಿನ್ಯಾಸ ಅನುಮೋದನೆಯನ್ನು ಈ ಹಿಂದಿನಂತೆ ಸಂಬಂಧಿಸಿದ ತಾಲ್ಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿಗಳಲ್ಲಿಯೇ ಪಡೆಯಲು ಆದೇಶ ನೀಡುವಂತೆ ನಗರಾಭಿವೃದ್ಧಿ ಸಚಿವ ಬಿ.ಎಸ್. ಸುರೇಶ್ ಅವರಿಗೆ ಕರಾವಳಿ ಭಾಗದ ಶಾಸಕರು ಮನವಿ ಮಾಡಿದ್ದಾರೆ.

ಗ್ರಾಮೀಣ ಭಾಗದಲ್ಲಿ ಮನೆ ನಿರ್ಮಾಣದ ಪೂರ್ವದಲ್ಲಿ ಏಕ ವಿನ್ಯಾಸ ಅನುಮೋದನೆಯನ್ನು ನಗರ ಮತ್ತು ಗ್ರಾಮಾಂತರ ಇಲಾಖೆಯಿಂದ ಪಡೆದುಕೊಳ್ಳಬೇಕು ಎನ್ನುವ ಆದೇಶವಾಗಿದ್ದು ಇದರಿಂದ ಜನರು ಸಂಕಷ್ಟ ಎದುರಿಸುತ್ತಿದ್ದಾರೆ ಎಂದು ಶಾಸಕರು ಸಚಿವರಿಗೆ ತಿಳಿಸಿದರು. ನಗರ ಮತ್ತು ಗ್ರಾಮಾಂತರ ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ಇದ್ದು, ಗ್ರಾಮೀಣ ಭಾಗದ ಜನರು ಜಿಲ್ಲಾ ಕೇಂದ್ರಕ್ಕೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಸಾಯಂಕಾಲ | 04:30 ರಿಂದ 06:00 |
| ಗುಳಿಕ ಕಾಲ | ಮಧ್ಯಾಹ್ನ | 03:00 ರಿಂದ 04:30 |
| ಯಮಗಂಡ ಕಾಲ | ಮಧ್ಯಾಹ್ನ | 12:00 ರಿಂದ 01:30 |

**ಮೇಷ** ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ಹಣದ ಚಲನೆ ದಿನವಿಡೀ ಮುಂದುವರಿಯುತ್ತದೆ ಮತ್ತು ದಿನದ ಅಂತ್ಯದ ನಂತರ ನೀವು ಉಳಿಸಲು ಸಾಧ್ಯವಾಗುತ್ತದೆ.

**ವೃಷಭ** ನೀವು ಕುಟುಂಬದ ಸದಸ್ಯರು ಮತ್ತು ಸ್ನೇಹಿತರ ಜೊತೆ ಕಳೆಯಲು ಸಾಕಷ್ಟು ಸಮಯ ಸಿಗುತ್ತದೆ. ಇವತ್ತು ಡೇಟ್‌ಗೆ ಹೋದಲ್ಲಿ ವಿವಾದಾತ್ಮಕ ವಿಷಯಗಳನ್ನು ಕೆದಕುವುದನ್ನು ತಪ್ಪಿಸಿ.

**ಮಿಥುನ** ಪ್ರತಿಯೊಬ್ಬರೂ ಇಂದು ನಿಮ್ಮ ಸ್ನೇಹಿತರಾಗಯಸುತ್ತಾರೆ ಮತ್ತು ನಿಮಗೆ ಇದರಿಂದ ಸಂತೋಷವೆನಿಸುತ್ತದೆ. ನಿಮ್ಮ ಪ್ರೀತಿ ಸಂಗಾತಿಯ ಒಂದು ಹೊಸ ಅದ್ಭುತ ಭಾಗವನ್ನು ನೀವಿಂದು ನೋಡಬಹುದು.

**ಕರ್ಕಾಟಕ** ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮ ಸುತ್ತಮುತ್ತಲಿನ ಪರಿಸರವನ್ನು ಬೆಳಗಿಸುತ್ತದೆ. ಕೆಲವರಿಗೆ ಹೊಸ ಪ್ರಣಯ ನಿಮ್ಮ ಚೈತನ್ಯವನ್ನು ಪ್ರೇರೇಪಿಸಬಹುದು ಹಾಗೂ ನಿಮ್ಮನ್ನು ಹರ್ಷಚಿತ್ತರಾಗಿರಿಸಬಹುದು.

**ಸಿಂಹ** ಹಳೆಯ ಸ್ನೇಹಿತರ ಜೊತೆಗಿನ ಒಂದು ಪುನರ್ಮಿಲನ ನಿಮ್ಮನ್ನು ಚೇತೋಹಾರಿಯಾಗಿರಿಸುತ್ತದೆ. ನಿಮ್ಮ ಹಣವನ್ನು ಉಳಿಸಲು ನೀವು ಇಂದು ನಿಮ್ಮ ಮನೆಯ ಜನರೊಂದಿಗೆ ಮಾತನಾಡಬೇಕು.

**ಕನ್ಯಾ** ನಿಮ್ಮ ಮನಸ್ಸು ಇತ್ತೀಚಿನ ಘಟನೆಗಳಿಂದ ತೊಂದರೆಗೊಳಗಾಗುತ್ತದೆ. ಧ್ಯಾನ ಮತ್ತು ಯೋಗ ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳಿಗೆ ಪ್ರಯೋಜನಕಾರಿ ಎಂದು ಸಾಬೀತಾಗುತ್ತದೆ.

**ತುಲಾ** ಪ್ರೇಮಿಗಳು ಕುಟುಂಬದ ಭಾವನೆಗಳ ಬಗ್ಗೆ ತುಂಬ ಕಾಳಜಿ ಹೊಂದಿರುತ್ತಾರೆ. ಈ ರಾಶಿ ಚಕ್ರದ ಜನರು ಇಂದು ತಮ್ಮ ಸಹೋದರ-ಸಹೋದರಿಯರೊಂದಿಗೆ ಮನೆಯಲ್ಲಿ ಯಾವುದೇ ಚಲನ ಚಿತ್ರ ಅಥವಾ ಮ್ಯಾಚ್ ನೋಡಬಹುದು.

**ವೃಶ್ಚಿಕ** ಜೊತೆಗಿರುವವರ ಜೊತೆ ವಾದವಿವಾದಕ್ಕೆ ತೊಡಗಬೇಡಿ. ಯಾವುದೇ ಭಿನ್ನಾಭಿಪ್ರಾಯದ ವಿಷಯಗಳಿದ್ದಲ್ಲಿ – ಸೌಹಾರ್ದತೆಯಿಂದ ಬಗೆಹರಿಸಿಕೊಳ್ಳಿ. ಇಂದು ನೈಸರ್ಗಿಕ ಸೌಂದರ್ಯದಿಂದ ವಿಸ್ಮಯಗೊಳ್ಳುವ ಸಾಧ್ಯತೆಯಿದೆ.

**ಧನಸ್ಸು** ನಿಮ್ಮ ಸಂಗಾತಿ ನಿಮ್ಮ ಒತ್ತಡದ ಕಾರ್ಯಬಾಹುಳ್ಯದಿಂದಾಗಿ ನಿಮ್ಮ ನಿಷ್ಠೆಯ ಮೇಲೆ ಅನುಮಾನ ಪಡಬಹುದು, ಆದರೆ ದಿನದ ಕೊನೆಯಲ್ಲಿ ಅವರು ಅದನ್ನು ಅರ್ಥಮಾಡಿಕೊಳ್ಳುತ್ತಾರೆ ಮತ್ತು ನಿಮ್ಮನ್ನು ಆಲಂಗಿಸುತ್ತಾರೆ.

**ಮಕರ** ನಿಮ್ಮ ದೈಹಿಕ ಬಲವನ್ನು ನಿರ್ವಹಿಸಲು ನೀವು ಕ್ರೀಡೆಯಲ್ಲಿ ಸಮಯ ಕಳೆಯುವ ಸಾಧ್ಯತೆಗಳಿವೆ. ತನ್ನ ಹಣವನ್ನು ಹೇಗೆ ಸಂಗ್ರಹಿಸುವುದು ಎಂಬ ಈ ಕೌಶಲ್ಯವನ್ನು ಇಂದು ನೀವು ಕಲಿಯಬಹುದು.

**ಕುಂಭ** ಒಬ್ಬ ಆಧ್ಯಾತ್ಮಿಕ ವ್ಯಕ್ತಿ ಆಶೀರ್ವಾದ ಮಾಡುತ್ತಾರೆ ಮತ್ತು ಮನಸ್ಸಿನ ಶಾಂತಿ ತರುತ್ತಾರೆ. ವಿವಾಹಿತ ಜನರು ಇಂದು ತಮ್ಮ ಮಕ್ಕಳ ಶಿಕ್ಷಣದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ.

**ಮೀನ** ಇಂದು ನಿಮ್ಮ ವ್ಯಕ್ತಿತ್ವ ಒಂದು ಸುಗಂಧದಂತೆ ಕೆಲಸ ಮಾಡುತ್ತದೆ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ.

# ಸಿಎಂ ಸಿದ್ದರಾಮಯ್ಯ ಪಾಪದ ಕೊಡ ತುಂಬಿದೆ: ವಿಜಯೇಂದ್ರ

## ಹಿಂದುಳಿದ ವರ್ಗದವರು ವಿಶ್ವಾಸವಿಟ್ಟು ನಿಮಗೆ 136 ಸ್ಥಾನ ನೀಡಿದರು, ಅವರಿಗೆ ಅನ್ಯಾಯ ಮಾಡಿದ್ದೀರಿ

• ಉದಯವಾಹಿನಿ ಸಂಡೂರು

ವಾಲ್ಮೀಕಿ ನಿಗಮದಲ್ಲಿನ ಹಗರಣದ ಬಗ್ಗೆ ಪ್ರಶ್ನೆ ಮಾಡಿದರೆ, ಬಿಜೆಪಿ ಅವಧಿಯ ಹಗರಣಗಳನ್ನು ತನಿಖೆ ಮಾಡುವುದಾಗಿ ಸಿದ್ದರಾಮಯ್ಯ ಹೇಳುತ್ತಾರೆ. ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ಮೀಸಲಿಟ್ಟ ಹಣ ಲೂಟಿ ಮಾಡಿದ ಮುಖ್ಯಮಂತ್ರಿಗಳ ಪಾಪದ ಕೊಡ ತುಂಬಿದೆ' ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ ವಿಜಯೇಂದ್ರ ವಾಗ್ದಾಳಿ ನಡೆಸಿದರು.

ಸಂಡೂರಿನಲ್ಲಿ ನಡೆದ ವಿಶೇಷ ಕಾರ್ಯಕಾರಿಣಿಯಲ್ಲಿ ಮಾತನಾಡಿದ ಅವರು, ಪರಿಶಿಷ್ಟ ಪಂಗಡದ ಅಭಿವೃದ್ಧಿಗೆ ಮೀಸಲಿಟ್ಟ ಹಣವನ್ನು ಚುನಾವಣೆಯಲ್ಲಿ ಹೆಂಡ ಖರೀದಿಗೆ ಬಳಸಲಾಗಿದೆ ಎಂದು ಜಾರಿ ನಿರ್ದೇಶನಾಲಯವೇ ಹೇಳಿದೆ. ಆರಂಭದಲ್ಲಿ ಹಗರಣಕ್ಕೂ ಸರ್ಕಾರಕ್ಕೂ ಸಂಬಂಧವೇ ಇಲ್ಲ ಎಂದರು. ಆದರೆ, ವಿಧಾನಮಂಡಲದಲ್ಲಿ ನಿಲುವಳಿ ಸೂಚನೆ ಮಂಡಿಸಿದಾಗ ಹಗರಣ ಆಗಿದೆ ಎಂದು ಒಪ್ಪಿಕೊಂಡರು. ಅಧಿಕಾರಿಗಳು ಹಗರಣ ಮಾಡಿದ್ದಾರೆ ಎಂದರು. ಅಧಿಕಾರಿಗಳೇ ಮಾಡಿದ್ದರೂ ಒಂದೋ ಮುಖ್ಯಮಂತ್ರಿ ಒಪ್ಪಿಗೆ ಕೊಟ್ಟಿರಬೇಕು, ಇಲ್ಲವೇ ಅವರ ಬೇಜವಾಬ್ದಾರಿತನದಿಂದ ಹಗರಣ ಆಗಿರಬೇಕು. ಏನೇ ಆಗಿರಲಿ, ಮುಖ್ಯಮಂತ್ರಿ ಸಿದ್ದರಾಯ್ಯ ರಾಜೀನಾಮೆ ನೀಡಲೇಬೇಕು. ಇದರಿಂದ ತಪ್ಪಿಸಿಕೊಳ್ಳಲಾಗದು' ಎಂದು ಅವರು ವಾಗ್ದಾಳಿ ನಡೆಸಿದರು.

> ರಾಜ್ಯದಲ್ಲಿ ಇರುವುದು ಜನವಿರೋಧಿ, ಪರಿಶಿಷ್ಟಜಾತಿ, ಪಂಗಡಗಳ ವಿರೋಧಿ ಸರ್ಕಾರ. ಹಿಂದುಳಿದ ವರ್ಗಗಳ ವಿರೋಧಿ ಸರ್ಕಾರ. ಇದು ರಾಜ್ಯಕ್ಕೆ ಅಂಟಿದ ಶಾಪ. ಬಡವರು, ರೈತರು ಕಣ್ಣೀರು ಹಾಕುತ್ತಿದ್ದಾರೆ. ಭಗವಂತ ನಿಮಗೆ ಒಳ್ಳೆಯದು ಮಾಡುವುದಿಲ್ಲ. ನೀವು ನೆಮ್ಮದಿಯಿಂದ ಇರಲು ಸಾಧ್ಯವಿಲ್ಲ. ಮುಖ್ಯಮಂತ್ರಿ ಸ್ಥಾನಕ್ಕೆ ನೀವು ರಾಜೀನಾಮೆ ನೀಡುವ ದಿನ ಹತ್ತಿರ ಬಂದಿದೆ' ಎಂದು ಅವರು ಸಿದ್ದರಾಮಯ್ಯ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. -ವಿಜಯೇಂದ್ರ

ಇಷ್ಟು ದೊಡ್ಡ ಹಗರಣದಲ್ಲಿ ಸರ್ಕಾರವೇ ಭಾಗಿಯಾಗಿದ್ದರೂ, ಬಿಜೆಪಿ ಸರ್ಕಾರದ ಹಿಂದಿನ ಹಗರಣ ತನಿಖೆ ಮಾಡುತ್ತೇವೆ ಎಂದು ದಮಿಕಿ ಹಾಕುತ್ತಿದ್ದೀರಿ. ಮುಖ್ಯಮಂತ್ರಿಗಳೇ ನಿಮ್ಮ ಪಾಪದ ಕೊಡ ತುಂಬಿದೆ. ರಾಜ್ಯದ ಪರಿಶಿಷ್ಟ ಜಾತಿ, ಪಂಗಡ, ಹಿಂದುಳಿದ ವರ್ಗದವರು ವಿಶ್ವಾಸವಿಟ್ಟು ನಿಮಗೆ 136 ಸ್ಥಾನ ನೀಡಿದರು. ಅವರಿಗೆ ಅನ್ಯಾಯ ಮಾಡಿದ್ದೀರಿ. ಕಳೆದ 14 ತಿಂಗಳಲ್ಲಿ ಹಲವು ಹಗರಣ ನಡೆದಿದೆ. ಮೈಸೂರಿನ ಮೂಡಾ ಹಗರಣ ಬಯಲಿಗೆಳೆದ ಆರ್‌ಟಿಐ ಕಾರ್ಯಕರ್ತರಿಗೆ ಕಿರುಕುಳ ನೀಡುತ್ತಿದ್ದರೀ' ಎಂದು ಅವರು ಆರೋಪಿಸಿದರು.


ಉದಯವಾಹಿನಿ ಚಿತ್ರ

**ಒಗ್ಗಟ್ಟಿನಿಂದ ಹೋರಾಡಬೇಕು**

ಸಂಡೂರು ವಿಧಾನಸಭಾ ಕ್ಷೇತ್ರದಲ್ಲಿ ನಡೆಯುವ ಉಪ ಚುನಾವಣೆಯಲ್ಲಿ ಪಕ್ಷದಿಂದ ಯಾರೇ ಅಭ್ಯರ್ಥಿಯಾದರೂ, ಕಾರ್ಯಕರ್ತರೆಲ್ಲರೂ ಒಮ್ಮನಸಿನಿಂದ ದುಡಿಯಬೇಕು. ಮೋದಿಯೇ ಅಭ್ಯರ್ಥಿಯೆಂದು ಭಾವಿಸಿ ದುಡಿಯಬೇಕು ಎಂದು ಮನವಿ ಮಾಡಿದರು. ಜತೆಗೆ, ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆಯಲ್ಲೂ ಒಗ್ಗಟ್ಟಿನಿಂದ ಹೋರಾಡಬೇಕು ಎಂದು ಸಲಹೆ ನೀಡಿದರು.

**ಹಿಂದುಳಿದ ವರ್ಗಗಳ ವಿರೋಧಿ ಸರ್ಕಾರ**

ರಾಜ್ಯದಲ್ಲಿ ಡೆಂಗಿ ಪ್ರಕರಣ ಹೆಚ್ಚಾಗಿದೆ. ಆರೋಗ್ಯ ಸಚಿವ ಎಸಿ ಕೊಠಡಿಯಲ್ಲಿ ಕುಳಿತು ಡೆಂಗಿ ಪ್ರಕರಣ ಕಡಿಮೆ ಮಾಡುವುದಾಗಿ ಹೇಳುತ್ತಿದ್ದಾರೆ. ಮಳೆಯಿಂದಾಗಿ ಅಪಾರ ಹಾನಿಯಾಗಿದೆ. ಬೆಳೆ ನಾಶವಾಗಿದೆ. ಪರಿಶಿಷ್ಟ ಜಾತಿ/ ಪಂಗಡಗಳ ನಿಧಿಯ 26 ಸಾವಿರ ಕೋಟಿ ಹಣ ಗ್ಯಾರೆಂಟಿಗೆ ವರ್ಗಾವಣೆಯಾಗಿದೆ. ಆ ಜನರಿಗೆ ಅನ್ಯಾಯವಾಗಿದೆ. ಮುಖ್ಯಮಂತ್ರಿ ಸ್ಥಾನದಲ್ಲಿ ಕುಳಿತುಕೊಳ್ಳಲು ಸಿದ್ದರಾಮಯ್ಯ ನೈತಿಕತೆ ಕಳೆದುಕೊಂಡಿದ್ದಾರೆ.

ಪರಿಶಿಷ್ಟರ ಹಣ ಲೂಟಿ ಮಾಡಿದ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿ ಇರಬರದು' ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಸಚಿವ ಬಿ. ನಾಗೇಂದ್ರ ಮನೆ ಮೇಲೆ ಇಡಿ ದಾಳಿಯಾದರೆ ಐವರು ಸಚಿವರು ಪತ್ರಿಕಾಗೋಷ್ಠಿ ನಡೆಸಿ ಬಿಜೆಪಿ ವಿರುದ್ಧ ಆರೋಪಗಳನ್ನು ಮಾಡಿದರು. ಇಡಿ ಬಿಜೆಪಿ ಕೈಗೊಂಬೆ ಎಂದರು. ಮುಖ್ಯಮಂತ್ರಿ ಹೆಸರು ಹೇಳಲು ಒತ್ತಾಯಿಸುತ್ತಿದ್ದಾರೆ ಎಂದು ಆರೋಪಿಸಿದರು. ಅದನ್ನು ಮುಖ್ಯಮಂತ್ರಿಯೂ ವಿಧಾನಸಭೆಯಲ್ಲಿ ಉಲ್ಲೇಖಿಸುತ್ತಾರೆ. ಹಗರಣದ ವಿಚಾರವಾಗಿ ಸದನದಲ್ಲಿ ಮುಖ್ಯಮಂತ್ರಿಯನ್ನು ನಾವು ಪ್ರಶ್ನೆ ಮಾಡುತ್ತಿದ್ದರೆ ಅವರು ತಡವರಿಸಿದರು. ಅವರ ಪರವಾಗಿ ಯಾವ ಶಾಸಕರೂ ಬೆಂಬಲವಾಗಿ ನಿಲ್ಲಲಿಲ್ಲ. ಆಡಳಿತ ಪಕ್ಷದ ಶಾಸಕರೇ ಸಿದ್ದರಾಮಯ್ಯ ಆತಂಕ ನೋಡಿ ಗಲಿಬಿಲಿಯಾದರು' ಎಂದು ವಿಜಯೇಂದ್ರ ಗೇಲಿ ಮಾಡಿದರು. ರಾಜ್ಯದಲ್ಲಿ 14 ತಿಂಗಳಲ್ಲಿ ಭಾರಿ ಭ್ರಷ್ಟಾಚಾರದ ಆಗಿದೆ. ಬಿಜೆಪಿಯವರು ಸುಮ್ಮನೆ ಕೂರುವುದಿಲ್ಲ ಎಂದು ಮುಖ್ಯಮಂತ್ರಿಗೆ ಮನವರಿಕೆಯಾಗಿದೆ. ಹೀಗಾಗಿ ಮುಖ್ಯಮಂತ್ರಿ ಆತಂಕದಲ್ಲಿದ್ದಾರೆ' ಎಂದು ಅವರು ವ್ಯಂಗ್ಯವಾಡಿದರು.

# ಸಿಬ್ಬಂದಿಗಳಿಗೆ ವಸತಿ ಗೃಹಗಳನ್ನು ನಿರ್ಮಾಣ ಮಾಡಿಕೊಡಬೇಕು

• ಉದಯವಾಹಿನಿ ಕೆಂಭಾವಿ

ಪಟ್ಟಣದಲ್ಲಿನ ಪೋಲಿಸ ಠಾಣೆಯನ್ನು ಮೇಲ್ದರ್ಜೆಗೇರಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕು. ಸಿಬ್ಬಂದಿಗಳಿಗೆ ವಸತಿ ಗೃಹಗಳನ್ನು ನಿರ್ಮಾಣ ಮಾಡಿಕೊಡಬೇಕು ಎಂದು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಸಂಚಾಲಕ ಮಂಜುನಾಥ ಕೊಂಬಿನ್ ಆಗ್ರಹಿಸಿದ್ದಾರೆ.

ಈ ಕುರಿತು ಉಪ ತಹಸೀಲ್ದಾರ ಮೂಲಕ ಗೃಹ ಸಚಿವ ಡಾ.ಪರಮೇಶ್ವರ ಅವರಿಗೆ ಮನವಿ ಸಲ್ಲಿಸಿರುವ ಅವರು, ಕೆಂಭಾವಿ ಪಟ್ಟಣದಲ್ಲಿರುವ ಪೊಲೀಸ್ ಠಾಣೆಯು ತಾಲ್ಲೂಕಿನಲ್ಲಿಯೇ ಅತ್ಯಂತ ಹಳೆಯ ಠಾಣೆಯಾಗಿದೆ. ಇಲ್ಲಿ ಕನಿಷ್ಠ 45 ಸಿಬ್ಬಂಗಳು ಕಾರ್ಯನಿರ್ವಹಿಸುತ್ತಿದ್ದಾರೆ. ಈ ಪೊಲೀಸ್ ಠಾಣೆಯು ಕನಿಷ್ಠ 65–70 ಗ್ರಾಮಗಳನ್ನು ಒಳಗೊಂಡಿದೆ. ಇದರಿಂದ ಪೋಲಿಸ್ ಠಾಣೆ ಕೆಲಸ ಕಾರ್ಯಗಳು ಹೆಚ್ಚಾಗಿದೆ. ಈ ಪೊಲೀಸ್ ಠಾಣೆಯನ್ನು ಮೇಲ್ದರ್ಜೆಗೇರಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕು ಹಾಗೂ ಸದ್ಯ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಸಾಕಷ್ಟು ವಸತಿ ಗೃಹಗಳು ಇಲ್ಲದಿರುವುದರಿಂದ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಅನುಗುಣವಾಗಿ ಪೊಲೀಸ್ ವಸತಿ ಗೃಹಗಳನ್ನು ನಿರ್ಮಿಸಲು ಕ್ರಮಕ್ಕೆಗೊಳ್ಳಬೇಕು ಎಂದು ಅವರು ಪತ್ರಲ್ಲಿ ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಬಸವರಾಜ ಕಟ್ಟಮನಿ, ಶಿವಶರಣ ಯಾಳಗಿ,ಶಿವಪ್ಪ ಕಂಬಾರ, ಕಟ್ಟಿಮನಿ, ನಬಿರಸೂಲ ಮಡಿವಾಳಪ್ಪ ನದಾಫ್ ,ಶಿವಾನಂದ ದೇವರಮನಿ, ಹಣಮಂತ ಬೊಮ್ಮನಹಳ್ಳಿ, ಸಿದ್ದಾರ್ಥ ಮಾಳಳ್ಳಿಕರ್, ಸೂಗಪ್ಪ ನಗನೂರ, ಬಸವರಾಜ ಇಂಗಳಗಿ, ವಿಜಯಕುಮಾರ, ತಿಮ್ಮಣ್ಣ ಹೊಸಗೇರಿ, ರಮೇಶ ಬಡಿಗೇರ, ಮಂಜುನಾಥ ಜಲಪೂರ, ರವಿ ನಾಗರೆಡ್ಡಿ, ರಾಜು ನಾಗರೆಡ್ಡಿ ಸೇರಿ, ಅನೇಕರಿದ್ದರು.

# ಜನಸ್ಪಂದನ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಿ

• ಉದಯವಾಹಿನಿ ಜೇವರ್ಗಿ

ತಾಲ್ಲೂಕಿನ ಸೊನ್ನ ಗ್ರಾಮದ ಶ್ರೀ ಸಿದ್ದಲಿಂಗೇಶ್ವರ ವಿರಕ್ತ ಮಠದ ಆವರಣದಲ್ಲಿ ತಾಲ್ಲೂಕ ಆಡಳಿತ ವತಿಯಿಂದ ದಂಡಾಧಿಕಾರಿ ಮಲ್ಲಣ್ಣ ಯಲಗೊಡ ಅಧ್ಯಕ್ಷತೆಯಲ್ಲಿ ಜನಸ್ಪಂದನ ಕಾರ್ಯಕ್ರಮ ಜರಗಿತು.

**ಸುಧೀಂದ್ರ ಇಚೇರಿ :-** ಮೂರು ಪಂಚಾಯಿತಿ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಸಂಚರಿಸಲು ಸರಿಯಾದ ರಸ್ತೆಯ ಅವಸ್ಥೆ ಇರುವುದಿಲ್ಲ ಕೂಡಲೇ ರಸ್ತೆ ದುರಸ್ತಿ ಮಾಡಬೇಕು ಎಂದು ದಂಡಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಅದೇ ರೀತಿಯಾಗಿ ಡೆಂಗ್ಯೂ ಮಲೇರಿಯಾ ಹರಡುತ್ತಿರುವ ಹಿನ್ನಲೆಯಲ್ಲಿ ಸಾರ್ವಜನಿಕರಿಗೆ ಸುರಕ್ಷಿತ ಬಗ್ಗೆ ಜಾಗ್ರತಿ ಮೂಡಿಸಬೇಕು ಎಂದು ಆರೋಗ್ಯ ಸಿಬ್ಬಂದಿಗಳಿಗೆ ಮನವಿ ಮಾಡಿಕೊಂಡರು. ದಂಡಾಧಿಕಾರಿ ಮಲ್ಲಣ್ಣ ಯಲಗೋಡ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು. ಮೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಸಾರ್ವಜನಿಕರು ತಮ್ಮ ಗ್ರಾಮ ಪಂಚಾಯಿತಿಯ ಸಮಸ್ಯೆಗಳು ಮತ್ತು ಗ್ರಾಮದ ಸಮಸ್ಯೆಗಳು ನಮ್ಮ ತಾಲ್ಲೂಕ ಮಟ್ಟದ ಎಲ್ಲಾ ಇಲಾಖೆ ಅಧಿಕಾರಿಗಳಿಗೆ ತಿಳಿಸಬೇಕು.


ಉದಯವಾಹಿನಿ ಚಿತ್ರ

**ಜನರ ಸಮಸ್ಯೆಗಳ ಆಲಿಸಿದ ದಂಡಾಧಿಕಾರಿ ಯಲಗೋಡ**

ಕೆಲವೊಂದು ಸಮಸ್ಯೆಗಳು ಮನವಿ ತೆಗೆದುಕೊಂಡು ಅದಕ್ಕೆ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಲಾಯಿತು. ಒಟ್ಟಿನಲ್ಲಿ ವೃದ್ಯಪವೇತನ ಹಾಗೂ ಗೃಹಲಕ್ಷ್ಮಿ ಅಂಗವಿಕಲರ ಪಿಂಚಣಿ ಕುರಿತು ಹವಾಲುಗಳು ಸ್ವೀಕರಿಸಲಾಯಿತು.

> ಸರ್ಕಾರದ ಯೋಜನೆಗಳು ಮತ್ತು ಸಾರ್ವಜನಿಕರಿಗೆ ಸಮಸ್ಯೆಗಳಿಗೆ ಸ್ಪಂದಿಸಲು ತಾಲ್ಲೂಕ ಆಡಳಿತವೇ ನಿಮ್ಮ ಬಳಿಯೇ ಬಂದು ಸಮಸ್ಯೆಗಳನ್ನು ಬಗೆಹರಿಸುವಂತಹ ಕೆಲಸ ಸರ್ಕಾರ ಮಾಡುತ್ತಿದೆ ಇದರ ಸದುಪಯೋಗ ಪಡೆದುಕೊಳ್ಳಬೇಕು
> -ಡಾ. ಶಿವಾನಂದ ಮಹಾಸ್ವಾಮಿ ಸೊನ್ನ ವಿರಕ್ತ ಮಠ

ಕೆಲವೊಂದು ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಸಂಬಂಧಪಟ್ಟ ಅಧಿಕಾರಿಗಳು ಕರಿಸಿ ಪರಿಹಾರ ನೀಡಲಾಯಿತು. ಪಡಿತರ ಚಿಟ್ಟಿಗೆ ಹಣ ಜಮಾ ಆಗದೇ ಇದ್ದವರು ಬ್ಯಾಂಕ್ ಖಾತೆಗೆ ಹೋಗಿ ಚೆಕ್ ಮಾಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

# ದಂಡಾವತಿ ನದಿಗೆ ಬಾಗಿನ ಅರ್ಪಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಸೊರಬ

ಕಳೆದ ಕೆಲವು ದಿನಗಳಿಂದ ಧಾರಾಕಾರ ಮಳೆ ಸುರಿಯುತ್ತಿದ್ದು, ಕೆರೆ, ಕಟ್ಟೆಗಳು ತುಂಬಿ ಹರಿಯುತ್ತಿವೆ. ಅದರಂತೆ ತಾಲ್ಲೂಕಿನ ಜೀವನದಿಯಾದ ದಂಡಾವತಿ ನದಿಯು ಸಹ ತುಂಬಿ ಹರಿಯುತ್ತಿರುವ ಹಿನ್ನೆಲೆಯಲ್ಲಿ ಸೊರಬ ಪಟ್ಟಣದ ಅಕ್ಕನ ಬಳಗದ ವತಿಯಿಂದ ದಂಡಾವತಿ ನದಿಗೆ ಬಾಗಿನ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ರೇಣುಕಮ್ಮ ಗೌಳಿ, ಜಯಮಾಲ ಅಣ್ಣಾಜಿಗೌಡ, ಸುನಿತಾ ಲಿಂಗರಾಜ, ಮಾನಸ, ಲತಾ ಮಹೇಶ, ರೇಖಾ ಜಗದೀಶ, ಪುಷ್ಪಾ, ಶಾಂತ, ಶಿವಲೀಲ, ಸವಿತಾ ನಾಗರಾಜ, ಪೂರ್ಣಿಮಾ ಶಿವಯೋಗಿ, ಸುಧಾ ಮತ್ತಿತರರು ಇದ್ದರು.

# ಮನೆ ಗೋಡೆ ಕುಸಿದು ನಾಲ್ವರಿಗೆ ಗಾಯ

• ಉದಯವಾಹಿನಿ ಶಿಕಾರಿಪುರ


ಉದಯವಾಹಿನಿ ಚಿತ್ರ

ತಾಲ್ಲೂಕಿನ ಕಪ್ಪನಹಳ್ಳಿ ಗ್ರಾಮದಲ್ಲಿ ಶುಕ್ರವಾರ ರಾತ್ರಿ ಮನೆ ಗೋಡೆ ಕುಸಿದು ನಾಲ್ವರಿಗೆ ಗಾಯಗಳಾಗಿವೆ. ರಾತ್ರಿ ಸುರಿದ ಮಳೆಗೆ ಕಪ್ಪನಹಳ್ಳಿ ಗ್ರಾಮದ ನಿವಾಸಿ ಶಿವಮೂರ್ತಿ ಮನೆ ಗೋಡೆ ಕುಸಿದಿದೆ. ರಾತ್ರಿ ಸಂದರ್ಭದಲ್ಲಿ ಕುಟುಂಬದವರೆಲ್ಲರೂ ಮಲಗಿದ ಸಂದರ್ಭದಲ್ಲಿ ಮನೆ ಕುಸಿದಿದೆ. ತಂದೆ ಶಿವಮೂರ್ತಿ(40) ತಾಯಿ ಚೇತನಾ(35),ಮಕ್ಕಳಾದ ಯುವರಾಜ(13) ಕೃಷ್ಣ(11) ಗಾಯಗೊಂಡಿದ್ದಾರೆ. ತಕ್ಷಣ ಗ್ರಾಮಸ್ಥರು ಗೋಡೆ ಕುಸಿದ ಮಣ್ಣನ್ನು ತೆಗೆದು ಗಾಯಾಳುಗಳನ್ನು ಪಟ್ಟಣದ ಸರ್ಕಾರಿ ಆಸ್ಪತ್ರೆಗೆ ರವಾನಿಸಿದ್ದಾರೆ. ನಂತರ ಹೆಚ್ಚಿನ ಚಿಕಿತ್ಸೆಗಾಗಿ ಶಿವಮೊಗ್ಗ ಮೆಗ್ಗಾನ್ ಆಸ್ಪತ್ರೆಗೆ ರವಾನಿಸಲಾಗಿದೆ. ಇದೇ ರೀತಿ ನಾಗರಾಜಪ್ಪ ಮನೆ ಗೋಡೆ ಕುಸಿದಿದೆ. ಆದರೆ ಮನೆಯಲ್ಲಿ ಯಾರು ಇರಲಿಲ್ಲ.

# ನಿರಂತರ ಮಳೆ: ತರಕಾರಿಗೆ ತಗ್ಗಿದ ಬೇಡಿಕೆ

• ಉದಯವಾಹಿನಿ ದಾವಣಗೆರೆ


ಉದಯವಾಹಿನಿ ಚಿತ್ರ

ಜಿಲ್ಲೆಯಲ್ಲಿ ಕೆಲ ದಿನಗಳಿಂದ ನಿರಂತರವಾಗಿ ತುಂತುರು ಮಳೆ ಸುರಿಯುತ್ತಿರುವುದರಿಂದ ಶೀತ ವಾತಾವರಣ ಹೆಚ್ಚುತ್ತಿದೆ. ಇದರಿಂದಾಗಿ ತರಕಾರಿಗೆ ಬೇಡಿಕೆ ಕಡಿಮೆಯಾಗಿದ್ದು, ದರ ಕುಸಿತ ಕಂಡಿದೆ. ನಗರದ ಕೆ.ಆರ್. ಮಾರುಕಟ್ಟೆಯಲ್ಲಿ ಶುಕ್ರವಾರ ಬಹುತೇಕ ತರಕಾರಿಗಳ ದರ ಕೆ.ಜಿ.ಗೆ 40 ರಿಂದ 60ರ ಆಸುಪಾಸಿನಲ್ಲಿತ್ತು.ತುಂತುರು ಮಳೆಯಿಂದಾಗಿ ಮಾರುಕಟ್ಟೆಗೆ ತರಕಾರಿ ಆವಕ ಹೆಚ್ಚಿದ್ದು, ನಿರೀಕ್ಷಿತ ಪ್ರಮಾಣದಲ್ಲಿ ಬಿಕರಿಯಾಗುತ್ತಿಲ್ಲ.

ಮೂರ್ನಾಲ್ಕು ದಿನಗಳ ಹಿಂದೆ ಕೆ.ಜಿ.ಗೆ 70ರಿಂದ 80 ಇದ್ದ ಹಸಿಮೆಣಸಿನ ಕಾಯಿ ದರ ಕೊಂಚ ತಗ್ಗಿದ್ದು, 40 ರಿಂದ 60 ರಂತೆ ಮಾರಾಟವಾಗುತ್ತಿದೆ. 40 ರಿಂದ 50 ಇದ್ದ ಟೊಮೆಟೊ ಬೆಲೆ 60 ರಿಂದ 70 ರಂತೆ ಬಿಕರಿಯಾಗುತ್ತಿದೆ. ಸದ್ಯ ಮಾರುಕಟ್ಟೆಯಲ್ಲಿ ಟೊಮೆಟೊ, ಹಸಿಮೆಣಸಿನಕಾಯಿ ತರಕಾರಿಗಳ ದರದಲ್ಲಿ ನಿತ್ಯವೂ ಏರಿಳಿತ ಕಾಣುತ್ತಿವೆ.

ಮಾರುಕಟ್ಟೆಗೆ ಹೆಚ್ಚಿನ ಪ್ರಮಾಣದಲ್ಲಿ ತರಕಾರಿ ಬರುತ್ತಿದೆ. ಆದರೆ, ನಿರಂತರ ಮಳೆಯಿಂದಾಗಿ ಗ್ರಾಹಕರು ಮಾರುಕಟ್ಟೆಯತ್ತ ಸುಳಿಯುತ್ತಿಲ್ಲ. ತಮಿಳುನಾಡು, ಮಹಾರಾಷ್ಟ್ರ ರಾಜ್ಯಗಳಿಗೆ ಇಲ್ಲಿಂದ ರಫ್ತಾಗುತ್ತಿರುವ ಕಾರಣಕ್ಕೆ ಟೊಮೆಟೊಗೆ ಮಾತ್ರ ಬೇಡಿಕೆ ಇದೆ. ಉಳಿದಂತೆ ಯಾವುದೇ ತರಕಾರಿಗಳಿಗೆ ಹೆಚ್ಚಿನ ಬೇಡಿಕೆ ಇಲ್ಲ' ಎಂದು ತರಕಾರಿ ಸಗಟು ವ್ಯಾಪಾರಿ ಶೀಲಮ್ಮ ತಿಳಿಸಿದರು.

# ಬಡಾವಣೆಗಳಿಗೆ ಇಲ್ಲ ಸ್ವಚ್ಚತಾ ಭಾಗ್ಯ: ಸಾಂಕ್ರಾಮಿಕ ರೋಗದ ಭೀತಿ

• ಉದಯವಾಹಿನಿ ಮೊಳಕಾಲ್ಮುರು

ಪಟ್ಟಣದಲ್ಲಿ ಸ್ವಚ್ಚತೆ ಕೊರತೆ ಹೆಚ್ಚುತ್ತಿರುವ ಪರಿಣಾಮ ಸೊಳ್ಳೆ, ನೊಣಗಳ ಹಾವಳಿ ತೀವ್ರವಾಗಿ ಸಾಂಕ್ರಾಮಿಕ ರೋಗಗಳು ಹರಡುವ ಆತಂಕ ಎದುರಾಗಿದೆ.

ಹಲವು ವರ್ಷಗಳಿಂದಲೂ ರಾಯದುರ್ಗ ರಸ್ತೆಯಲ್ಲಿರುವ ಬನ್ನಿ ಮಹಾಂಕಾಳಿ ಬಡಾ ವಣೆ, ಪಲ್ಲಳ್ಳಿ ತಿಮ್ಮಪ್ಪ ಬಡಾವಣೆ, ಕೋಟೆ ಬಡಾವಣೆ, ಅಂಬೇಡ್ಕರ್ ಬಡಾವಣೆ, ಮುಬಾಕರ್ ಮೊಹಲ್ಲಾ, ಸರ್ಕಾರಿ ಆಸ್ಪತ್ರೆ ರಸ್ತೆ, ಶ್ರೀನಿವಾಸನಾಯಕ ಬಡಾವಣೆ ಯಲ್ಲಿ ಸ್ವಚ್ಚತೆ ಕೊರತೆ ಬಗ್ಗೆ ಸಾಕಷ್ಟು ದೂರುಗಳು ಕೇಳಿಬಂದಿದೆ. ಇಲ್ಲಿಯ ವ್ಯವಸ್ಥೆ ಸರಿಪಡಿಸುವಂತೆ ಹಲವು ಬಾರಿ ಜನರು ಪ್ರತಿಭಟನೆ ಮಾಡಿದ್ದಾರೆ. ಆದರೂ ಸಮಸ್ಯೆ ಯಥಾ ರೀತಿಯಲ್ಲಿ ಇದೆ ಎನ್ನುವುದು ನಿವಾಸಿಗಳ ಆರೋಪ.


ಉದಯವಾಹಿನಿ ಚಿತ್ರ

**ರೋಗಗಳು ಹರಡುವ ಆತಂಕ**

ಎನ್‌ಎಂಎಸ್ ಬಡಾವಣೆಯಲ್ಲಿ ರಸ್ತೆಗಳು ಸರಿಯಿಲ್ಲ. ಚರಂಡಿಗಳನ್ನು ನೆಲಮಟ್ಟಕ್ಕಿಂತ ಕೆಳಗೆ ಅವೈಜ್ಞಾನಿಕವಾಗಿ ಮತ್ತು ಕಿರಿದಾಗಿ ನಿರ್ಮಿಸಲಾಗಿದೆ. ಈ ಚರಂಡಿಗಳು ನೀರು ಹರಿಯದೇ ಹೂಳು ತುಂಬಿಕೊಂಡು ಸೊಳ್ಳೆ ಉತ್ಪತ್ತಿ ತಾಣವಾಗಿ ಪರಿಣಮಿಸಿ, ಹಂದಿಗಳು, ನಾಯಿಗಳು, ಬಿಡಾಡಿ ದನಗಳ ಆಶ್ರಯ ತಾಣವಾಗಿವೆ. ಇದರಿಂದ ಸೊಳ್ಳೆ ಸಂಖ್ಯೆ ಹೆಚ್ಚಳವಾಗಿ ಜನರು ಪದೇಪದೇ ಅನಾರೋಗ್ಯಕ್ಕೆ ಈಡಾಗುವಂತಾಗಿದೆ ಎಂಬುದು ನಿವಾಸಿ ಶ್ರೀನಿವಾಸ್ ದೂರು.

ಸಿಬ್ಬಂದಿ ಸಮಯಕ್ಕೆ ಸರಿಯಾಗಿ ಸ್ವಚ್ಚತೆ ಮಾಡುತ್ತಿಲ್ಲ, ಪಟ್ಟಣ ಪಂಚಾಯಿತಿ ಅಧ್ಯಕ್ಷ, ಉಪಾಧ್ಯಕ್ಷರ ಅವಧಿ ಮುಗಿದು ಹೊಸಬರ ನೇಮಕವಾಗಿಲ್ಲ. ಇದು ಸಹ ಕೆಲವು ತಾಂತ್ರಿಕ ಸಮಸ್ಯೆಗಳಿಗೆ ಎಡೆ ಮಾಡಿಕೊಟ್ಟಿದೆ ಎಂದು ಅವರು ಹೇಳಿದರು.

# ಗುರುವಿನ ಗುಲಾಮನಾಗುವ ತನಕ ದೊರೆಯದಣ್ಣ ಮುಕ್ತಿ

• ಉದಯವಾಹಿನಿ ಜೇವರ್ಗಿ

ಪಟ್ಟಣದ ನೂರಂದೇಶ್ವರ ಶಿಕ್ಷಣ ಸಂಸ್ಥೆಯಲ್ಲಿ ಗುರು ಪೂರ್ಣಿಮೆ ಅಂಗವಾಗಿ ಯೆಲಗೋಡ ಹಾಗೂ ಮೋರಟಗಿಯ ನೂರಂದೇಶ್ವರ ಮಠದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ಗುರುಲಿಂಗದೇವ ಸ್ವಾಮಿಗಳಿಗೆ ಸಂಸ್ಥೆ ವತಿಯಿಂದ ವಿಶೇಷ ಪಾದ ಪೂಜೆ ಮಾಡಿ ಎಲ್ಲಾ ಸಿಬ್ಬಂದಿಗಳು ಆಶೀರ್ವಾದ ಪಡೆದರು.

ಗುರುಪೂರ್ಣಿಮೆ ಉದ್ದೇಶಿಸಿ ಶ್ರೀಗಳು ಮಾತನಾಡಿದರು ಸಮಸ್ತ ಭಕ್ತ ಕೋಟಿಗೆ ಗುರುಪೂರ್ಣಿಮೆಯ ಶುಭಾಶಯಗಳು ತಿಳಿಸಿದರು. ಪ್ರತಿಯೊಬ್ಬರ ಜೀವನದಲ್ಲಿ ಗುರು ಮುಖ್ಯ ಗುರು ಇಲ್ಲದೆ ಗುರಿ ಮುಟ್ಟಲು ಸಾಧ್ಯವಿಲ್ಲ. ಅದಕ್ಕಾಗಿ ಒಳ್ಳೆಯ ಗುರುಗಳನ್ನು ಆರಿಸಿಕೊಂಡು ಒಳ್ಳೆ ಮಾರ್ಗದಲ್ಲಿ ನಡೆದು ಗುರಿ ತಲುಪಿಸುವದೇ ಗುರುವಿನ ಶಕ್ತಿಯಾಗಿದೆ. ಗುರುವಿನ ಗುಲಾಮನಾಗುವ ತನಕ ದೊರೆಯದಣ್ಣ ಮುಕುತಿ ಎಂಬಂತೆ ಪ್ರತಿಯೊಬ್ಬರೂ ಗುರುವಿನ ಸೇವೆ ಮಾಡಿ ತಮ್ಮ ಜೀವನ ಸಾರ್ಥಕ ಪಡಿಸಿಕೊಳ್ಳಬೇಕು ಎಂದು ಹೇಳಿದರು. ಗುರು ಆದವನಿಗೂ ಕೂಡ ಗುರುಗಳು ಇರುತ್ತಾರೆ. ಗುರುವಿನ ಗುಲಾಮನಾಗಿ ಜೀವನದಲ್ಲಿ ಸದ್ಗತೆ ಕಾಣುತ್ತಾರೆ ಅದಕ್ಕಾಗಿ ಗುರುವಿನಲ್ಲಿ ಭಕ್ತಿ ಶ್ರದ್ಧೆಯಿಂದ ಸೇವೆ ಮಾಡಿದರೆ ಮುಕ್ತಿ ದಡ ಸೇರಿಸುತ್ತಾನೆ ಎಂದರು. ಈ ಸಂದರ್ಭದಲ್ಲಿ ಎಸಿ ಅರವಾಳ್, ವೆಂಕಟರಾವ್ ಮುಜುಂದರ್, ಮಹಾದೇವಯ್ಯ ಹಿರೇಮಠ, ಹಣಮಂತರಾಯ, ಬಿಕೆ ನಾಯಕ್, ಸಂಜೀವ್ ಕುಮಾರ್, ಸಂಸ್ಥೆ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

# ಜಲಪಾತಗಳ ಬಳಿ ಸೆಲ್ಫಿಗೆ ನಿಷೇಧ, ತುರ್ತು ನೆರವಿಗೆ 112ಗೆ ಕರೆಗೆ ಸೂಚನೆ

• ಉದಯವಾಹಿನಿ ಶಿವಮೊಗ್ಗ

ಭಾರೀ ಮಳೆಯಿಂದ ಶಿವಮೊಗ್ಗ ಜಿಲ್ಲೆಯ ನದಿ, ಹಳ್ಳ-ಕೊಳ್ಳ ಉಕ್ಕಿ ಹರಿಯುತ್ತಿವೆ. ಜಲಪಾತಗಳು ಮೈದುಂಬಿವೆ. ಅಪಾಯಕ್ಕೂ ಆಹ್ವಾನ ನೀಡುತ್ತಿವೆ. ಹೀಗಾಗಿ ನದಿಯೊಳಗೆ ಈಜಾಡುವುದು, ಜಲಪಾತಗಳ ಕೆಳಗೆ ಇಳಿಯುವುದು ಹಾಗೂ ಸೆಲ್ಫಿ ತೆಗೆದುಕೊಳ್ಳುವುದನ್ನು ಪೊಲೀಸ್ ಇಲಾಖೆ ನಿಷೇಧಿಸಿದೆ.

ಹೊಸನಗರ ತಾಲ್ಲೂಕಿನ ಹಿಂಡ್ಲುಮನೆ ಫಾಲ್ಸ್, ತಲಾಸಿ ಅಬ್ಬಿ ಫಾಲ್ಸ್, ತೀರ್ಥಹಳ್ಳಿ ಬಳಿ ತುಂಗಾ ನದಿಗೆ ಇಳಿಯುವುದನ್ನು ಮಳೆಯ ತೀವ್ರತೆ ಹಾಗೂ ನದಿಯ ಪ್ರವಾಹ ಕಡಿಮೆ ಆಗುವವರೆಗೂ ನಿಷೇಧಿಸಲಾಗಿದೆ. ಪೊಲೀಸ್ ಇಲಾಖೆಯಿಂದ ಸಾರ್ವಜನಿಕರಿಗೆ ಆ ಪ್ರದೇಶಗಳ ಸಮೀಪ ಸೂಚನಾ ಫಲಕಗಳ ಹಾಕಲಾಗಿದೆ.



ಉದಯವಾಹಿನಿ ಚಿತ್ರ

ಅಕಸ್ಮಾತ್ ನದಿ, ಜಲಪಾತಗಳ ಬಳಿ ತೊಂದರೆಗೆ ಸಿಲುಕಿದಲ್ಲಿ ತುರ್ತು ಕರೆ ಸಂಖ್ಯೆ 112 ಗೆ ಕರೆ ಮಾಡಲು ತಿಳಿಸಲಾಗಿದೆ.

# ಹೈನುಗಾರಿಕೆಗಾಗಿ ಸಾಲ ಪಡೆದವರಿಗೆ ಶೇ.6ರ ಬಡ್ಡಿ ಸಹಾಯಧನ

• ಉದಯವಾಹಿನಿ ಶಿವಮೊಗ್ಗ

ಪಶುಪಾಲನಾ ಮತ್ತು ಪಶುವೈದ್ಯಕಿಯ ಸೇವಾ ಇಲಾಖೆಯು 2024-25ನೇ ಸಾಲಿನಲ್ಲಿ ರೈತ ಮಹಿಳೆಯರಲ್ಲಿ ಹೈನುಗಾರಿಕೆಯನ್ನು ಪ್ರೋತ್ಸಾಹಿಸಲು ಹಸು/ಎಮ್ಮೆ ಖರೀದಿಗೆ ಪಡೆಯುವ ಸಾಲವನ್ನು ಸಕಾಲದಲ್ಲಿ ಮರುಪಾವತಿ ಮಾಡಿದರೆ ರಾಜ್ಯ ಸರ್ಕಾರದಿಂದ ಶೇ. 6ರ ಬಡ್ಡಿ ಸಹಾಯಧನ ನೀಡಲಾಗುವುದು. ಈ ಸಾಲಿನಲ್ಲಿ ಹೈನುಗಾರಿಕೆಗಾಗಿ ವಿವಿಧ ಬ್ಯಾಂಕ್‌ಗಳಲ್ಲಿ ಸಾಲ ಪಡೆಯುವ ಪ್ರತಿ ಫಲಾನುವಿಗಳಿಗೆ ಗರಿಷ್ಟ ರೂ. 65,000/- ಸಾಲದ ಮೊತ್ತಕ್ಕೆ ಶೇ. 6ರ ಬಡ್ಡಿ ಸಹಾಯಧನ ನೀಡಲಾಗುತ್ತಿದ್ದು, ರೈತ ಮಹಿಳೆಯರು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳುವಂತೆ ಪಶುಪಾಲನಾ ಇಲಾಖೆಯ ಉಪನಿರ್ದೇಶಕ ಡಾ. ಬಾಬು ರತ್ನ ಎ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹೆಚ್ಚಿನ ಮಾಹಿತಿಯನ್ನು ಆಯಾ ತಾಲ್ಲೂಕು ಮುಖ್ಯ ಪಶುವೈದ್ಯಾಧಿಕಾರಿಗಳನ್ನು ಹಾಗೂ ಹತ್ತಿರದ ಪಶು ವೈದ್ಯಕೀಯ ಸಂಸ್ಥೆಗಳನ್ನು ಸಂಪರ್ಕಿಸುವುದು.

# ಇದ್ದೂ ಇಲ್ಲದಂತಿರುವ ಜಿಲ್ಲಾ ತಾಯಿ-ಮಕ್ಕಳ ಆಸ್ಪತ್ರೆ

## ಆಸ್ಪತ್ರೆಯ ಬಹುತೇಕ ಕೊಠಡಿಗಳು ಖಾಲಿ ಉಳಿದಿದ್ದು ಗರ್ಭಿಣಿಯರು ಹೆರಿಗೆಗೆ ಖಾಸಗಿ ಆಸ್ಪತ್ರೆಗಳನ್ನೇ ಅವಲಂಬಿಸುವಂತಾಗಿದೆ

• ಉದಯವಾಹಿನಿ, ಚಿತ್ರದುರ್ಗ

ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಹೈಟೆಕ್ ಕಟ್ಟಡದಂತಿರುವ ತಾಯಿ- ಮಕ್ಕಳ ಆಸ್ಪತ್ರೆಯ ಸ್ಥಿತಿ 'ಮೇಲೆ ಥಳುಕು ಒಳಗೆಲ್ಲಾ ಹುಳುಕು' ಎಂಬ ಮಾತಿನಂತಾಗಿದೆ. ಆಸ್ಪತ್ರೆಯ ಬಹುತೇಕ ಕೊಠಡಿಗಳು ಖಾಲಿ ಉಳಿದಿದ್ದು ಗರ್ಭಿಣಿಯರು ಹೆರಿಗೆಗೆ ಖಾಸಗಿ ಆಸ್ಪತ್ರೆಗಳನ್ನೇ ಅವಲಂಬಿಸುವಂತಾಗಿದೆ.

ಆಸ್ಪತ್ರೆ ಆವರಣದಲ್ಲಿ ಕಿಷ್ಕಿಂದೆಯಂತಿದ್ದ ಹೆರಿಗೆ ವಿಭಾಗವನ್ನು ಮೇಲ್ದರ್ಜೆಗೇರಿಸುವ ಉದ್ದೇಶದಿಂದ ಎರಡೂವರೆ ವರ್ಷಗಳ ಹಿಂದೆಯೇ ಹೊಸದಾಗಿ ತಾಯಿ- ಮಕ್ಕಳ ಆಸ್ಪತ್ರೆ ನಿರ್ಮಾಣ ಮಾಡಲಾಗಿತ್ತು. ಉಪ ಕಾರಾಗೃಹವಿದ್ದ ಜಾಗದಲ್ಲಿ 'ಜಿ ಪ್ಲಸ್-3' ಮಹಡಿಯ ಕಟ್ಟಡ ನಿರ್ಮಾಣ ಮಾಡಲಾಗಿತ್ತು. 100 ಹಾಸಿಗೆ ಸಾಮರ್ಥ್ಯದ ಹೆರಿಗೆ ಆಸ್ಪತ್ರೆಯನ್ನು 250 ಹಾಸಿಗೆ ಸಾಮರ್ಥ್ಯಕ್ಕೆ ಏರಿಸುವುದು ಹೊಸ ಕಟ್ಟಡದ ಮುಖ್ಯ ಉದ್ದೇಶವಾಗಿತ್ತು.

ಆದರೆ, ತಾಯಿ- ಮಕ್ಕಳ ಸುಸಜ್ಜಿತ ಆಸ್ಪತ್ರೆ ಕಾಮಗಾರಿ ಪೂರ್ಣಗೊಂಡಿದ್ದರೂ ಈಗಲೂ 100 ಹಾಸಿಗೆ ಸಾಮರ್ಥ್ಯದಲ್ಲೇ ಮುಂದವರಿಸುತ್ತಿರುವ ಕಾರಣ ಆಸ್ಪತ್ರೆ ಇದ್ದೂ ಇಲ್ಲದಂತಾಗಿದೆ. ಜಿಲ್ಲೆಯಲ್ಲಿ ವರ್ಷಕ್ಕೆ 30,000ಕ್ಕೂ ಹೆಚ್ಚು ಹೆರಿಗೆಗಳಾಗುತ್ತವೆ. ಆದರೆ, ತಾಯಿ- ಮಕ್ಕಳ ಆಸ್ಪತ್ರೆಯಲ್ಲಿ ಮಾಸಿಕ ಹೆರಿಗೆಗಳ ಸಂಖ್ಯೆ 600 ಮೀರುತ್ತಿಲ್ಲ. ಹೀಗಾಗಿ ಬಹುತೇಕ ಗರ್ಭಿಣಿಯರು ಹೆರಿಗೆಗಾಗಿ ಖಾಸಗಿ ನರ್ಸಿಂಗ್ ಹೋಂಗಳಿಗೆ ತೆರಳುತ್ತಿದ್ದಾರೆ. ಆಸ್ಪತ್ರೆ ಕಾಮಗಾರಿ ಪೂರ್ಣಗೊಂಡ ತಕ್ಷಣವೇ ಕೋವಿಡ್ ಆರಂಭವಾಯಿತು.

**ತಾಯಿ-ಮಕ್ಕಳ ಆಸ್ಪತ್ರೆ ಮೇಲೆ ಹೊರೆ**

ಇಡೀ ಕಟ್ಟಡವನ್ನು ಕೋವಿಡ್ ಆಸ್ಪತ್ರೆಯನ್ನಾಗಿ ಬಳಕೆ ಮಾಡಿಕೊಳ್ಳಲಾಯಿತು. ನಂತರ ಅದನ್ನು ತಾಯಿ- ಮಕ್ಕಳ ಆಸ್ಪತ್ರೆಯನ್ನಾಗಿ ಬಳಸಿಕೊಳ್ಳಲಾಯಿತಾದರೂ ಅದಕ್ಕೆ ಉದ್ಘಾಟನೆ ಭಾಗ್ಯ ಇರಲಿಲ್ಲ. ಲೋಕಸಭಾ ಚುನಾವಣೆ ಆರಂಭಕ್ಕೂ ಮೊದಲು ಆಸ್ಪತ್ರೆಗೆ ಚಾಲನೆ ನೀಡಲಾಯಿತು.

ಆಸ್ಪತ್ರೆ ಹೊಸದಾಗಿ ಉದ್ಘಾಟನೆಯಾಗಿ 6 ತಿಂಗಳಾಗುತ್ತಿದ್ದರೂ ತಾಯಿ- ಮಕ್ಕಳ ಆಸ್ಪತ್ರೆಯನ್ನಾಗಿ ಸಂಪೂರ್ಣವಾಗಿ ಬಳಸಿಕೊಳ್ಳಲು ಸಾಧ್ಯವಾಗಿಲ್ಲ. ತಳ ಮಹಡಿಯಲ್ಲಿ ಹೊರರೋಗಿಗಳ ವಿಭಾಗ, ವೈದ್ಯರ ಕೊಠಡಿಗಳಿವೆ. ಕೆಲ ಕೊಠಡಿಗಳು ಖಾಲಿ ಉಳಿದಿದ್ದು ಸರಿಯಾಗಿ ಬಳಕೆಯಾಗಿಲ್ಲ. ಮೊದಲ ಮಹಡಿಯಲ್ಲಿ ಸಾಮಾನ್ಯ ವಾರ್ಡ್, ವಿಶೇಷ ವಾರ್ಡ್‌ಗಳಿವೆ. 2ನೇ ಮಹಡಿಗೆ ಏರಿದರೆ ಅಲ್ಲಿ ಆಸ್ಪತ್ರೆಯ ಒಂದು ಭಾಗವನ್ನಷ್ಟೇ ಬಳಸಿಕೊಳ್ಳಲಾಗಿದೆ. ಉಳಿದ ಇನ್ನೊಂದು ಭಾಗ ಸಂಪೂರ್ಣ ಖಾಲಿ ಉಳಿದಿದೆ. ಪೀಠೋಪಕರಣಗಳಾಗಲಿ, ಹಾಸಿಗೆಯನ್ನಾಗಲಿ ಹಾಕಿಲ್ಲ. ಕೊಠಡಿಗಳಲ್ಲಿ ಬೆಳಕೂ ಕೂಡ ಇಲ್ಲ ಕಾರಣ ಅಲ್ಲಿ ಸದಾ ಕತ್ತಲೆ ಕವಿದಿರುತ್ತದೆ. ತಾಯಿ- ಮಕ್ಕಳ ಆಸ್ಪತ್ರೆಯ 3ನೇ ಮಹಡಿ ಕೂಡ ಸಂಪೂರ್ಣ ಖಾಲಿ ಉಳಿದಿದೆ. ಅಲ್ಲಿಯ 5 ಕೊಠಡಿಗಳನ್ನು ನರ್ಸಿಂಗ್ ಕಾಲೇಜಿಗೆ ತಾತ್ಕಾಲಿಕವಾಗಿ ಬಿಟ್ಟುಕೊಡಲಾಗಿದೆ. ಕಟ್ಟಡವನ್ನು ಸಂಪೂರ್ಣ ತಾಯಿ- ಮಕ್ಕಳ ಆಸ್ಪತ್ರೆಯಾಗಿ ಬಳಸುವ ಉದ್ದೇಶವೇ ವಿಫಲವಾಗಿದ್ದು ರೋಗಿಗಳು ಆಕ್ರೋಶ ವ್ಯಕ್ತಪಡಿಸುತ್ತಾರೆ.

ಹೆರಿಗೆಗಾಗಿ ಬರುವ ಗರ್ಭಿಣಿಯರನ್ನು ಸಲ್ಲದ ನೆಪ ಹೇಳಿ ಖಾಸಗಿ ಆಸ್ಪತ್ರೆಗಳಿಗೆ ಕಳುಹಿಸುತ್ತಾರೆ. ಹಲವು ಸಂದರ್ಭಗಳಲ್ಲಿ ಹಾಸಿಗೆ ಇಲ್ಲ ಎಂದೇ ಹೇಳಿ ಕಳುಹಿಸುತ್ತಾರೆ.

ತಾಯಿ- ಮಕ್ಕಳ ಆಸ್ಪತ್ರೆಯ 2 ಮಹಡಿಗಳು ಖಾಲಿ ಉಳಿದಿದ್ದರೂ ಅದನ್ನು ಸರಿಯಾಗಿ ಉಪಯೋಗಿಸಿಕೊಳ್ಳುತ್ತಿಲ್ಲ' ಎಂದು ಹೆರಿಗೆಗೆ ಬಂದಿದ್ದ ತಾಯಿಯ ಸಂಬಂಧಿಯೊಬ್ಬರು ಅಸಮಾಧಾನ ವ್ಯಕ್ತಪಡಿಸಿದರು. ತಳ ಹಾಗೂ ಮೊದಲ ಮಹಡಿಯಲ್ಲಿ ಮಾತ್ರ ತಾಯಿ- ಮಕ್ಕಳ ಆಸ್ಪತ್ರೆ ನಡೆಯುತ್ತಿದೆ. ಹೊರಗಡೆಯಿಂದ ಸುಸಜ್ಜಿತ ಆಸ್ಪತ್ರೆಯಂತೆ ಕಂಡರೂ ವಾಸ್ತವವಾಗಿ ಸರಿಯಾಗಿ ಬಳಕೆ ಮಾಡಿಕೊಳ್ಳುತ್ತಿಲ್ಲ. ಆಧುನಿಕ ಸೌಲಭ್ಯಗಳೂ ದೊರೆಯುತ್ತಿಲ್ಲ ಎಂದು ರೋಗಿಗಳ ಸಂಬಂಧಿಕರು ಆರೋಪಿಸುತ್ತಾರೆ.


ಉದಯವಾಹಿನಿ ಚಿತ್ರ

> ಹಿಂದೆ ಒಂದು ಹಾಸಿಗೆಯಲ್ಲಿ ಇಬ್ಬರು ತಾಯಂದಿರನ್ನು ಮಲಗಿಸುತ್ತಿದ್ದರು, ಈ ಕುರಿತ ಸುದ್ದಿ ರಾಜ್ಯದಾದ್ಯಂತ ಆಕ್ರೋಶಕ್ಕೆ ಗುರಿಯಾಗಿತ್ತು. ಇದನ್ನು ಮನಗಂಡು ತಾಯಿ- ಮಕ್ಕಳ ಆಸ್ಪತ್ರೆ ನಿರ್ಮಾಣ ಮಾಡಲಾಯಿತು. ಆದರೆ ಕಟ್ಟಡವನ್ನು ಸಮರ್ಪಕವಾಗಿ ಬಳಸಿಕೊಳ್ಳುವಲ್ಲಿ ಜಿಲ್ಲಾಸ್ಪತ್ರೆ ವಿಫಲವಾಗಿದೆ
> -ಶಫಿಉಲ್ಲಾ ಜನಶಕ್ತಿ ಸಂಘಟನೆಯ ಮುಖಂಡ

**ಸಿಬ್ಬಂದಿ ಕೊರತೆ ವೈದ್ಯರು ಹಾಗೂ ತಂತ್ರಜ್ಞರ ಕೊರತೆ**

ಕಾಡುತ್ತಿದೆ ಸಿಬ್ಬಂದಿ ಕೊರತೆ 'ವೈದ್ಯರು ಹಾಗೂ ತಂತ್ರಜ್ಞರ ಕೊರತೆಯಿಂದಾಗಿ ತಾಯಿ- ಮಕ್ಕಳ ಆಸ್ಪತ್ರೆಯ ಮೇಲ್ಮಹಡಿಗಳನ್ನು ಬಳಸಿಕೊಳ್ಳಲು ಸಾಧ್ಯವಾಗಿಲ್ಲ. ಈಗ ನೇಮಕಾತಿ ಪ್ರಕ್ರಿಯೆ ಮುಗಿಯುತ್ತಿದ್ದು 10 ದಿನಗಳಲ್ಲಿ ಆಸ್ಪತ್ರೆಯನ್ನು ಸದ್ಬಳಕೆ ಮಾಡಿಕೊಳ್ಳಲಾಗುವುದು' ಎಂದು ಜಿಲ್ಲಾ ಸರ್ಜನ್ ಡಾ.ರವೀಂದ್ರ ಹೇಳಿದರು. 'ಹೆರಿಗೆಯಾದ ಮೇಲೆ ಬಾಣಂತಿಯರು ಆಸ್ಪತ್ರೆಯಿಂದ ಬಿಡುಗಡೆ ಹೊಂದಲು ಹಿಂಜರಿಯುತ್ತಿದ್ದಾರೆ. ಮನೆಗೆ ಹೋದರೆ ಸಂಪ್ರದಾಯದಂತೆ ಹೊರಗೆ ಇರಿಸುತ್ತಾರೆ ಎಂಬ ಭಯವೂ ಅವರನ್ನು ಕಾಡುತ್ತಿದೆ. ಹೀಗಾಗಿ ತಾಯಿ- ಮಕ್ಕಳ ಆಸ್ಪತ್ರೆ ಮೇಲೆ ಹೊರೆಯಾಗುತ್ತಿದೆ' ಎಂದರು.

ಉದಯ ವಾಹಿನಿ

ದೇಶ/ವಿದೇಶ

ಭಾನುವಾರ
21 ಜುಲೈ 2024



# ಜೆಎನ್‌ಯುಗೆ ಮೋದಿ ಸರ್ಕಾರದಿಂದಲೇ ಬಂಪರ್ ಅನುದಾನ

● 2016ರಿಂದ 2022–23ರವರೆಗೆ ಜೆಎನ್‌ಯುಗೆ 3,030 ಕೋಟಿ ರೂ. ಸಬ್ಸಿಡಿ ಒದಗಿಸಿದ ಸರ್ಕಾರ




ಎಫ್‌ಐಆರ್ ಕೂಡ ಅಧಿಕ

**ಹೊಸದಿಲ್ಲಿ:** ಎಡಪಂಥೀಯರ ಜಾಗ ಎಂದೇ ಆರೋಪಿಸಲಾಗುತ್ತಿರುವ ದಿಲ್ಲಿಯ ಜವಹರಲಾಲ್ ನೆಹರೂ ವಿಶ್ವವಿದ್ಯಾಲಯ (ಜೆಎನ್‌ಯು) ಸದಾ ಒಂದಿಲ್ಲೊಂದು ವಿವಾದಗಳಿಂದ ಸದ್ದು ಮಾಡುತ್ತಿರುತ್ತದೆ. 2016ರಲ್ಲಿ ವಿದ್ಯಾರ್ಥಿ ಸಂಘಟನೆಯ ನಾಯಕರಾಗಿದ್ದ ಕನ್ನಯ್ಯಾ ಕುಮಾರ್ ಮತ್ತು ಉಮರ್ ಖಾಲೀದ್ ಮುಂತಾದವರು ಪ್ರತಿಭಟನೆಗಳು ರಾಷ್ಟ್ರಮಟ್ಟದಲ್ಲಿ ಸಂಚಲನ ಮೂಡಿಸಿದ್ದವು. ಹೀಗಾಗಿ ಬಿಜೆಪಿ ಬೆಂಬಲಿಗರು ಜೆಎನ್‌ಯುವನ್ನು ಕಟುವಾಗಿ ಟೀಕಿಸುತ್ತಿರುತ್ತಾರೆ. ಆದರೆ, ಎನ್‌ಡಿಎ ಸರ್ಕಾರದ ಆಡಳಿತದಲ್ಲಿ ಜೆಎನ್‌ಯುಗೆ ನೀಡಲಾಗುತ್ತಿರುವ ಅನುದಾನದ ಮೊತ್ತದಲ್ಲಿ ಗಣನೀಯ ಏರಿಕೆ ಕಂಡುಬಂದಿದೆ. ಜತೆಗೆ ಅಲ್ಲಿ ದಾಖಲಾಗುತ್ತಿರುವ ಪ್ರಕರಣಗಳ ಸಂಖ್ಯೆಯಲ್ಲಿಯೂ ಹೆಚ್ಚಳವಾಗಿದೆ.

ಪುಣೆಯ ಮಾಹಿತಿ ಹಕ್ಕು ಕಾರ್ಯಕರ್ತರೊಬ್ಬರು ಆರ್‌ಟಿಐ ಅಡಿ ಸಲ್ಲಿಸಿದ್ದ ಅರ್ಜಿಗೆ ಬಂದಿರುವ ಉತ್ತರವು ಈ ಮಾಹಿತಿ ನೀಡಿದೆ. ಜೆಎನ್‌ಯುಗೆ ಅತಿ ದೊಡ್ಡ ಪಾಲಿನ ಅನುದಾನ ದೊರಕಿರುವುದು ಕಂಡುಬಂದಿದೆ. ಪ್ರಧಾನಿ ನರೇಂದ್ರ ಮೋದಿ ಅವರ ಅವಧಿಯಲ್ಲಿ ಹಾಗೂ ಕಳೆದ ಒಂದು ದಶಕದಲ್ಲಿ ಜೆಎನ್‌ಯುಗೆ ಒದಗಿಸಲಾದ ಸಬ್ಸಿಡಿಗಳ ವಿವರ ಒದಗಿಸುವಂತೆ ಆರ್‌ಟಿಐ ಕಾರ್ಯಕರ್ತ ಪ್ರಫುಲ್ ಸರ್ದಾ ಅವರು ಕೋರಿದ್ದರು.

ಆರ್‌ಟಿಐ ಅರ್ಜಿಗೆ ಬಂದಿರುವ ಪ್ರತಿಕ್ರಿಯೆ ಪ್ರಕಾರ, 2004–05 ರಿಂದ 2024–15ರ ನಡುವೆ ಜೆಎನ್‌ಯುಗೆ ಒಟ್ಟು 2,055 ಕೋಟಿ ರೂ ಸಬ್ಸಿಡಿ ಬಂದಿತ್ತು. ಆದರೆ, ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ಅಸ್ತಿತ್ವಕ್ಕೆ ಬಂದ ಬಳಿಕ, 2015–16 ರಿಂದ 2022–23ರ ಅವಧಿಯಲ್ಲಿ ಸಬ್ಸಿಡಿ ಮೊತ್ತವು 3,030 ಕೋಟಿ ರೂ.ಗೆ ಏರಿಕೆ ಕಂಡಿದೆ. ಅಂದರೆ, ಹಿಂದಿನ ದಶಕಕ್ಕೆ ಹೋಲಿಸಿದರೆ ಮೋದಿ ಸರ್ಕಾರದ ಅವಧಿಯಲ್ಲಿ ಜೆಎನ್‌ಯು 1.5 ಪಟ್ಟು ಅಧಿಕ ಮೊತ್ತದ ಅನುದಾನ ಪಡೆದಿದೆ.

ಈ ಎಫ್‌ಐಆರ್‌ಗಳ ವಿವರಗಳನ್ನು ಪಡೆಯಲು ಪ್ರಫುಲ್ ಸರ್ದಾ ಪ್ರಯತ್ನಿಸಿದ್ದರೂ, ಅದು ಫಲ ನೀಡಿಲ್ಲ. ಆರ್‌ಟಿಐ ಮೂಲಕ ಮಾಹಿತಿ ಪಡೆಯುವಾಗ ವಿಳಂಬ ಹಾಗೂ ಅಪೂರ್ಣ ಪ್ರತಿಕ್ರಿಯೆಗಳ ಸವಾಲು ಎದುರಿಸಬೇಕಾಗುತ್ತದೆ ಎಂದು ಅವರು ಹೇಳಿದ್ದಾರೆ.

2016ರಲ್ಲಿ ಜೆಎನ್‌ಯು ಇತಿಹಾಸದಲ್ಲಿಯೇ ಜೆಎನ್‌ಯು ಆಡಳಿತವು ಮೊದಲ ಎಫ್‌ಐಆರ್ ದಾಖಲಿಸಿತ್ತು. ಅಲ್ಲಿಂದ ಒಟ್ಟು 35 ಪ್ರಕರಣಗಳನ್ನು ದಾಖಲಿಸಿದೆ. ಅವರು ಎಫ್‌ಐಆರ್ ದಾಖಲಾದವರ ಹೆಸರು ಅಥವಾ ಜನರ ಸಂಖ್ಯೆಯ ವಿವರ ನೀಡಿಲ್ಲ. ಅನೇಕ ವಿವರಗಳಿಗೆ ಕಾಯಲಾಗುತ್ತಿದೆ. ಈ ಬಾರಿಯಾದರೂ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ತಡಮಾಡದೆ ಸೂಕ್ತ ರೀತಿಯಲ್ಲಿ ವಿವರ ನೀಡುತ್ತಾರೆ ಎಂದು ಆಶಿಸುತ್ತೇನೆ ಎಂದು ತಿಳಿಸಿದ್ದಾರೆ.

ಸರ್ಕಾರವು ಮತ್ತಷ್ಟು ರಾಷ್ಟ್ರೀಯ ವಿವಿಗಳನ್ನು ಸ್ಥಾಪಿಸಬೇಕು ಹಾಗೂ ಹಾಲಿ ಇರುವ ವಿವಿಗಳಿಗೆ ಹೆಚ್ಚಿನ ನೆರವು ಒದಗಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

### 35 ಎಫ್‌ಐಆರ್‌ಗಳು

**ಇತ್ತೀಚಿನ ದಿನಗಳಲ್ಲಿ ಜೆಎನ್‌ಯುದಲ್ಲಿ ವಿದ್ಯಾರ್ಥಿಗಳ ಸಂಘರ್ಷ, ಪ್ರತಿಭಟನೆಗಳಂತಹ ಘಟನೆಗಳು ಹೆಚ್ಚು ವರದಿಯಾಗುತ್ತಿವೆ. ವಿಶೇಷವೆಂದರೆ 2016ಕ್ಕೂ ಮುನ್ನ ಜೆಎನ್‌ಯು ವಿದ್ಯಾರ್ಥಿಗಳ ವಿರುದ್ಧ ಯಾವುದೇ ಎಫ್‌ಐಆರ್ ದಾಖಲಾಗಿರಲಿಲ್ಲ. ಆದರೆ ಅದರಿಂದ ಈಚೆಗೆ, ಜೆಎನ್‌ಯು ಆಡಳಿತವು ತನ್ನದೇ ವಿದ್ಯಾರ್ಥಿಗಳ ಮೇಲೆ 35 ಎಫ್‌ಐಆರ್‌ಗಳನ್ನು ದಾಖಲಿಸಿದೆ ಎಂದು ಆರ್‌ಟಿಐ ಮಾಹಿತಿ ತಿಳಿಸಿದೆ.**

**ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ದಿಲ್ಲಿಯ ಜವಹರಲಾಲ್ ನೆಹರು ವಿಶ್ವವಿದ್ಯಾಲಯಕ್ಕೆ ಈ ಹಿಂದೆಂದಿಗಿಂತಲೂ ಅಧಿಕ ಪ್ರಮಾಣದ ಅನುದಾನ ದೊರಕಿದೆ ಎನ್ನುವುದು ಮಾಹಿತಿ ಹಕ್ಕು ಕಾಯ್ದೆ ಅಡಿ ಪಡೆದ ಮಾಹಿತಿಯಿಂದ ಬಹಿರಂಗವಾಗಿದೆ. ಆದರೆ 2016ರಿಂದ ಈಚೆಗೆ ಅಲ್ಲಿ 35 ಎಫ್‌ಐಆರ್‌ಗಳು ಕೂಡ ದಾಖಲಾಗಿವೆ.**

# ಬಾಂಗ್ಲಾ ಹಿಂಸಾಚಾರದಲ್ಲಿ 105 ಮಂದಿ ಬಲಿ

**ಢಾಕಾ:** ಬಾಂಗ್ಲಾದೇಶದಲ್ಲಿ ಹಲವು ವಾರಗಳಿಂದ ನಡೆಯುತ್ತಿರುವ ಪ್ರತಿಭಟನೆಗಳು ಹಿಂಸಾತ್ಮಕ ಸ್ವರೂಪ ಪಡೆದಿದ್ದು, ಇದೀಗ ಉಲ್ಬಣಿಸಿದ್ದು, ಅಲ್ಲಿರುವ ಸುಮಾರು 300 ಭಾರತೀಯ ವಿದ್ಯಾರ್ಥಿಗಳು ಸ್ವದೇಶಕ್ಕೆ ಮರಳಿದ್ದಾರೆ. ಹಿಂಸಾಚಾರದಲ್ಲಿ 105 ಮಂದಿ ಮೃತಪಟ್ಟಿದ್ದಾರೆ. ದೇಶವಿಡೀ ಕರ್ಫ್ಯೂ ಹಾಕಲಾಗಿದೆ.

ಸುಮಾರು 300ಕ್ಕೂ ಹೆಚ್ಚು ವಿದ್ಯಾರ್ಥಿಗಳು ಈಶಾನ್ಯ ಗಡಿ ದಾಟಿ ತವರಿಗೆ ತಲುಪಿದ್ದಾರೆ. ಮಾಹಿತಿ ಪ್ರಕಾರ, ಬಾಂಗ್ಲಾದೇಶದಲ್ಲಿ 15 ಸಾವಿರ ಮಂದಿ ಭಾರತೀಯರು ಇದ್ದಾರೆ ಎಂದು ಹೇಳಲಾಗಿದೆ. ಬಂದವರಲ್ಲಿ ಬಹುತೇಕರು ಎಂಬಿಬಿಎಸ್ ವ್ಯಾಸಂಗಕ್ಕೆ ತೆರಳಿದ್ದರು. ಅಲ್ಲದೇ ಉತ್ತರ ಪ್ರದೇಶ, ಹರಿಯಾಣ, ಮೇಘಾಲಯ ಮತ್ತು ಜಮ್ಮು ಮತ್ತು ಕಾಶ್ಮೀರ ಮೂಲದವರೇ ಹೆಚ್ಚಿನ ಸಂಖ್ಯೆಯಲ್ಲಿದ್ದರು ಎಂದು ವರದಿಯಾಗಿದೆ.

ಸರ್ಕಾರಿ ಉದ್ಯೋಗಗಳಲ್ಲಿ ಮೀಸಲಾತಿ ವ್ಯವಸ್ಥೆಯಲ್ಲಿ ಸುಧಾರಣೆಗೆ ಒತ್ತಾಯಿಸಿ ಹಲವಾರು ದಿನಗಳಿಂದ ನಡೆಯುತ್ತಿರುವ ಪ್ರತಿಭಟನೆ ಹಿಂಸಾಸ್ವರೂಪ ಪಡೆದಿದ್ದು, ಸಾವು–ನೋವಿಗೆ ಕಾರಣವಾಗಿದೆ. ಕನಿಷ್ಠ ಮೂರು ವಾರಗಳಿಂದ ನಡೆಯುತ್ತಿರುವ ಪ್ರತಿಭಟನೆಗಳು ಕಳೆದ ಸೋಮವಾರ ಢಾಕಾ ವಿಶ್ವವಿದ್ಯಾಲಯದಲ್ಲಿ ಹಿಂಸಾಚಾರ ನಡೆದಾಗ ಉಲ್ಬಣಗೊಂಡಿತು. ಮರುದಿನ ಆರು ಜನರು ಸಾವನ್ನಪ್ಪಿದ್ದರು, ನಂತರ ದೇಶಾದ್ಯಂತ ವಿಶ್ವವಿದ್ಯಾಲಯಗಳನ್ನು ಮುಚ್ಚಲು ಸರ್ಕಾರವು ಆದೇಶ ನೀಡಿತು.



ಭಾರತಕ್ಕೆ ಹಿಂದಿರುಗಿದ ಅನೇಕ ವಿದ್ಯಾರ್ಥಿಗಳು ಎಂಬಿಬಿಎಸ್ ಪದವಿಯನ್ನು ಪಡೆಯುತ್ತಿದ್ದರು ಮತ್ತು ಹೆಚ್ಚಿನ ವಿದ್ಯಾರ್ಥಿಗಳು ಉತ್ತರ ಪ್ರದೇಶ, ಹರಿಯಾಣ, ಮೇಘಾಲಯ ಮತ್ತು ಜಮ್ಮು ಮತ್ತು ಕಾಶ್ಮೀರದಿಂದ ಬಂದವರಾಗಿದ್ದಾರೆ. ವಿದ್ಯಾರ್ಥಿಗಳು ಮರಳಲು ಎರಡು ಪ್ರಮುಖ ಮಾರ್ಗಗಳಾದ ತ್ರಿಪುರಾದ ಅಗರ್ತಲಾ ಬಳಿಯ ಅಖೌರಾದಲ್ಲಿರುವ ಅಂತರಾಷ್ಟ್ರೀಯ ಭೂ ಬಂದರು ಮತ್ತು ಮೇಘಾಲಯದ ದೌಕಿಯಲ್ಲಿರುವ ಅಂತರರಾಷ್ಟ್ರೀಯ ಭೂ ಬಂದರು ಬಳಸಲಾಗಿದೆ. ಭಾರತೀಯ ವಿದ್ಯಾರ್ಥಿಗಳು ಪರಿಸ್ಥಿತಿ ಶಮನಗೊಳ್ಳಲು ಎದುರು ನೋಡುತ್ತಿದ್ದರು. ಆದರೆ ಅಂತಿಮವಾಗಿ ಬಾಂಗ್ಲಾದೇಶವನ್ನು ತಾತ್ಕಾಲಿಕವಾಗಿ ತೊರೆಯಲು ನಿರ್ಧರಿಸಿದರು. ಏಕೆಂದರೆ ಇಂಟರ್ನೆಟ್ ಸಂಪೂರ್ಣವಾಗಿ ಸ್ಥಗಿತಗೊಂಡಿದ್ದು, ದೂರವಾಣಿ ಸೇವೆಗಳು ಸಹ ತೀವ್ರವಾಗಿ ಪರಿಣಾಮ ಬೀರಿದೆ.

ಈ ಹಿನ್ನೆಲೆ ಮುನ್ನೆಚ್ಚರಿಕಾ ಕ್ರಮವಾಗಿ ಭಾರತೀಯ ವಿದ್ಯಾರ್ಥಿಗಳು ತವರಿಗೆ ವಾಪಸ್ ಆಗಿದ್ದಾರೆ.

### ಹಿಂಸಾಚಾರಕ್ಕೆ ಕಾರಣವೇನು?

**ಬಾಂಗ್ಲಾದೇಶದಲ್ಲಿ ಪ್ರಸ್ತುತ ಕೋಟಾ ವ್ಯವಸ್ಥೆ ಪ್ರಕಾರ ಸರ್ಕಾರಿ ಉದ್ಯೋಗಗಳಲ್ಲಿ ಶೇ.56 ಕಾಯ್ದಿರಿಸಲಾಗಿದೆ. ಇದರಲ್ಲಿ 1971ರ ವಿಮೋಚನಾ ಸ್ವಾತಂತ್ರ್ಯ ಹೋರಾಟಗಾರರ ಕುಟುಂಬದವರಿಗೆ ಶೇ.30, ಹಿಂದುಳಿದ ಜಿಲ್ಲೆಗಳವರಿಗೆ ಶೇ.10, ಮಹಿಳೆಯರಿಗೆ ಶೇ.10, ಜನಾಂಗೀಯ ಅಲ್ಪಸಂಖ್ಯಾತರಿಗೆ ಶೇ.5, ಅಂಗವಿಕಲರಿಗೆ ಶೇ.1 ಮೀಸಲಾತಿ ಕಲ್ಪಿಸಲಾಗಿದೆ. ವಿಮೋಚನಾ ಹೋರಾಟದ ಕುಟುಂಬಸ್ಥರಿಗೆ ಕಲ್ಪಿಸಿರುವ ಶೇ.30 ಮೀಸಲಾತಿ ರದ್ದು ಪಡಿಸಬೇಕು ಎಂದು ಆಗ್ರಹಿಸಿ ಪ್ರತಿಭಟನೆ ನಡೆಸುತ್ತಿದ್ದರು. ಈ ಬೇಡಿಕೆಯನ್ನು ಪ್ರಧಾನಿಗಳು ತಿರಸ್ಕರಿಸಿದ್ದರಿಂದ ಪ್ರತಿಭಟನೆ ಹಿಂಸಾಚಾರಕ್ಕೆ ತಿರುಗಿದೆ. ಏತನ್ಮಧ್ಯೆ, ಭಾರತ ಸರ್ಕಾರ ನಿನ್ನೆ ಬಾಂಗ್ಲಾದೇಶದಲ್ಲಿ ನಡೆಯುತ್ತಿರುವ ವಿದ್ಯಾರ್ಥಿಗಳ ಪ್ರತಿಭಟನೆಯನ್ನು ಢಾಕಾದ ಆಂತರಿಕ ವಿಷಯ ಎಂದು ಬಣ್ಣಿಸಿದೆ. ಆದರೆ ಅಲ್ಲಿ ವಾಸಿಸುವ 15,000 ಭಾರತೀಯರ ಸುರಕ್ಷತೆಗಾಗಿ ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ ಎಂದು ಹೇಳಿದೆ.**

## 2 ಕೋಟಿ ಮೌಲ್ಯದ ಡ್ರಗ್ಸ್ ಪ್ರಕರಣದಲ್ಲಿ ನೈಜೀರಿಯನ್ ಮಹಿಳೆ ಬಂಧನ

**ಥಾಣೆ:** ನಲವತ್ತು ವರ್ಷದ ನೈಜೀರಿಯಾ ಮಹಿಳೆಯ ಬಂಧನದೊಂದಿಗೆ, ನವಿ ಮುಂಬೈನಿಂದ 2 ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ಮೆಫೆಡ್ರೋನ್ ವಶಪಡಿಸಿಕೊಂಡ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಇದುವರೆಗೆ ಮೂವರನ್ನು ಬಂಧಿಸಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಜುಲೈ 16 ರಂದು, ಪೊಲೀಸರು ನವಿ ಮುಂಬೈನ ವಾಶಿಯಿಂದ ಇಬ್ಬರನ್ನು ಬಂಧಿಸಿ 1.04 ಕಿಲೋಗ್ರಾಂಗಳಷ್ಟು ಮೆಫೆಡ್ರೋನ್ ಅನ್ನು ವಶಪಡಿಸಿಕೊಂಡಿದ್ದರು. ಅವರ ವಿರುದ್ಧ ನಾರ್ಕೋಟಿಕ್ ಡ್ರಗ್ ಮತ್ತು ಸೈಕೋಟ್ರೋಪಿಕ್ ಸಬ್‌ಸ್ಟೆನ್ಸ್ (ಎನ್‌ಡಿಪಿಎಸ) ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿದೆ ಎಂದು ನವಿ ಮುಂಬೈ ಪೊಲೀಸ್ ಅಪರಾಧ ವಿಭಾಗದ ಆಂಟಿ ನಾರ್ಕೋಟಿಕ್ ಸೆಲ್ (ಎಎನ್‌ಸಿ) ಹಿರಿಯ ಇನ್ಸ್‌ಪೆಕ್ಟರ್ ನೀರಜ್ ಚೌಧರಿ ತಿಳಿಸಿದ್ದಾರೆ.

ಪಾಲ್ಘರ್ ಜಿಲ್ಲೆಯ ನೈಗಾಂವ್‌ನಲ್ಲಿ ನೆಲೆಸಿರುವ ನೈಜೀರಿಯಾದ ಮಹಿಳೆಯೊಬ್ಬರಿಂದ ಕಳ್ಳಸಾಗಾಣಿಕೆಯನ್ನು ಸಂಗ್ರಹಿಸಿರುವುದಾಗಿ ಆರೋಪಿಗಳಿಬ್ಬರು ಪೊಲೀಸರಿಗೆ ವಿಚಾರಣೆ ವೇಳೆ ತಿಳಿಸಿದ್ದಾರೆ. ನಂತರ ಎಎನ್‌ಸಿ ತಂಡ ಅಲ್ಲಿ ಬಲೆ ಬೀಸಿ ಮಹಿಳೆಯನ್ನು ಬಂಧಿಸಿ ಆಕೆಯಿಂದ 86.40 ಲಕ್ಷ ಮೌಲ್ಯದ 432 ಗ್ರಾಂ ವಶಪಡಿಸಿಕೊಂಡಿದ್ದಾರೆ ಎಂದು ಅವರು ಹೇಳಿದರು. ಮೂವರಿಂದ ವಶಪಡಿಸಿಕೊಂಡ ಒಟ್ಟು ಮೆಫಿಡ್ರೋನ್ ಮೌಲ್ಯ 2.87 ಕೋಟಿ ರೂಪಾಯಿ ಎಂದು ಪೊಲೀಸರು ತಿಳಿಸಿದ್ದಾರೆ.

## ಮಿನಿ ನ್ಯೂಸ್

### ಮೊಹರಂ ಗಲಾಟೆ: 15 ಜನರ ಬಂಧನ

**ಬಹ್ರೈಚ್:** ಮೊಹರಂನಲ್ಲಿ ನಿಷೇಧಿತ ಪ್ರದೇಶಗಳಲ್ಲಿ ಧಾರ್ಮಿಕ ಮೆರವಣಿಗೆಗಳನ್ನು ನಡೆಸುವುದು, ಹರಿತವಾದ ಆಯುಧಗಳನ್ನು ಝುಳಪಿಸಿರುವುದು ಮತ್ತು ಕೋಮು ಶಾಂತಿ ಕದಡುವ ಮೂರು ಪ್ರಕರಣಗಳಿಗೆ ಸಂಬಂಧಿಸಿದಂತೆ ಉತ್ತರ ಪ್ರದೇಶ ಪೊಲೀಸರು ಇಲ್ಲಿಯವರೆಗೆ 15 ಜನರನ್ನು ಬಂಧಿಸಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಮೊಹರಂ ದಿನದಂದು, ಪಯಾಗ್‌ಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮೈದಾನದಲ್ಲಿ ಹಾದುಹೋಗದಂತೆ ತಡೆಯುವ ಗುಂಪಿನ ಮೇಲೆ ತಾಜಿಯಾವನ್ನು ಹೊತ್ತಿದ್ದ ಕೆಲವರು ದಾಳಿ ಮಾಡಿಪೊರೆ ಎಂದು ವರದಿಯಾಗಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ವೃಂದಾ ಶುಕ್ಲಾ ತಿಳಿಸಿದ್ದಾರೆ. ಈ ಸಂಬಂಧ ಎಫ್‌ಐಆರ್ ದಾಖಲಿಸಲಾಗಿದ್ದು, ಪೊಲೀಸರು 11 ಮಂದಿಯನ್ನು ಬಂಧಿಸಿದ್ದಾರೆ ಎಂದು ಅವರು ಹೇಳಿದರು. ನಿಷೇಧಿತ ಪ್ರದೇಶದಲ್ಲಿ ಧಾರ್ಮಿಕ ಮೆರವಣಿಗೆ ನಡೆಸಲು ಯತ್ನಿಸಿದ ಕೆಲವರ ವಿರುದ್ಧ ನನ್ಪಾರಾ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಮತ್ತೊಂದು ಎಫ್‌ಐಆರ್ ದಾಖಲಾಗಿದೆ. ಈ ಪ್ರಕರಣದಲ್ಲಿ ಮೂವರನ್ನು ಬಂಧಿಸಲಾಗಿದೆ ಎಂದು ಶುಕ್ಲಾ ತಿಳಿಸಿದ್ದಾರೆ. ಕೆಲವರು ಬಹಿರಂಗವಾಗಿ ಹರಿತವಾದ ಕತ್ತಿಗಳನ್ನು ಝುಳಪಿಸುತ್ತಿರುವುದಕ್ಕೆ ಸಂಬಂಧಿಸಿದಂತೆ ಮತ್ತೊಂದು ಎಫ್‌ಐಆರ್ ದಾಖಲಾಗಿದ್ದು, ಈ ಪ್ರಕರಣದಲ್ಲಿ ಅಬು ತಾಲಿಬ್ ಎಂಬ ಒಬ್ಬ ವ್ಯಕ್ತಿಯನ್ನು ಪೊಲೀಸರು ಬಂಧಿಸಿದ್ದಾರೆ.

### ನಿರಾಶ್ರಿತರ ಕೇಂದ್ರಗಳ ಮೇಲೆ ಇಸ್ರೇಲ್ ವೈಮಾನಿಕ ದಾಳಿ: 13 ಸಾವು

**ದೀರ್ ಅಲ್-ಬಲಾಹ್:** ಕೈರೋದಲ್ಲಿ ಕದನವಿರಾಮ ಕುರಿತಾದ ಮಾತುಕತೆಗಳು ಪ್ರಗತಿಯಲ್ಲಿರುವಾಗಲೇ, ಕೇಂದ್ರ ಗಾಜಾದಲ್ಲಿ ನಿರಾಶ್ರಿತರ ಕೇಂದ್ರಗಳ ಮೇಲೆ ಇಸ್ರೇಲ್ ಪಡೆಗಳು ದಾಳಿ ನಡೆಸಿದ್ದು, 13 ಜನ ಪ್ಯಾಲೆಸ್ಟೀನಿಯರು ಮೃತಪಟ್ಟಿದ್ದಾರೆ. 'ನುಸ್ಸೆರತ್, ಬುರ್ರೈಜಿಯಲ್ಲಿರುವ ನಿರಾಶ್ರಿತರ ಕೇಂದ್ರಗಳ ಮೇಲೆ ದಾಳಿ ನಡೆದಿದ್ದು, ಮೃತಪಟ್ಟ ಮಕ್ಕಳು–ಮಹಿಳೆಯರು ಸೇರಿದಂತೆ 13 ಜನರ ದೇಹಗಳನ್ನು ಸ್ಥಳೀಯ ಆಸ್ಪತ್ರೆಯ ಶವಾಗಾರದಲ್ಲಿ ಇರಿಸಲಾಗಿದೆ' ಎಂದು ಪಾಲೆಸ್ಟೀನ್‌ನ ಆರೋಗ್ಯ ಅಧಿಕಾರಿಗಳು ತಿಳಿಸಿದ್ದಾರೆ.

'ಗುರುವಾರ ಸಂಜೆ ನುಸ್ಸೆರತ್‌ನಲ್ಲಿ ನಡೆದ ದಾಳಿಯೊಂದರಲ್ಲಿ ತುಂಬು ಗರ್ಭಿಣಿಯೊಬ್ಬರು ಮೃತಪಟ್ಟಿದ್ದರು. ಆದರೆ ಅವರ ಹೊಟ್ಟೆಯಲ್ಲಿದ್ದ ಮಗುವನ್ನು ರಕ್ಷಿಸಲಾಗಿದೆ' ಎಂದು ವೈದ್ಯರು ತಿಳಿಸಿದ್ದಾರೆ.

### ಕುವೈತ್‌ನಲ್ಲಿ ಕೇರಳ ಮೂಲದ ಒಂದೇ ಕುಟುಂಬದ ನಾಲ್ವರು ಸಾವು

**ಕೇರಳ:** ಮನೆಯಲ್ಲಿ ಸಂಭವಿಸಿದ ಅಗ್ನಿ ಅವಘಡದಲ್ಲಿ ಭಾರತ ಮೂಲದ ಒಂದೇ ಕುಟುಂಬದ ನಾಲ್ವರು ಮೃತಪಟ್ಟಿರುವ ಘಟನೆ ಕುವೈತ್‌ನಲ್ಲಿ ಸಂಭವಿಸಿದೆ. ಮೃತರನ್ನು ಕೇರಳದ ಮ್ಯಾಥ್ ಮುಜಾಕಲ್ ಹಾಗೂ ಅವರ ಪತ್ನಿ ಮತ್ತು ಇಬ್ಬರು ಗಂಡು ಮಕ್ಕಳು ಎಂದು ಗುರುತಿಸಲಾಗಿದೆ. ಮ್ಯಾಥ ಅವರು ಉದ್ಯೋಗಕ್ಕಾಗಿ ಕುವೈತ್‌ನ ಅಬ್ಬಾಸಿಯಾದಲ್ಲಿ ಕಳೆದ 15 ವರ್ಷದಿಂದ ಕುಟುಂಬದೊಂದಿಗೆ ನೆಲೆಸಿದ್ದರು. ಅವರು ಮಲಗುವ ಕೋಣೆಯಲ್ಲಿ ಸಂಭವಿಸಿದ ಎ.ಸಿ ಯಂತ್ರದ ಶಾರ್ಟ್ ಸರ್ಕ್ಯೂಟ್‌ನಿಂದ ಅಗ್ನಿ ದುರಂತ ಸಂಭವಿಸಿದೆ ಎಂದು ಕುಟುಂಬದವರು ತಿಳಿಸಿದ್ದಾರೆ. ಮೃತದೇಹಗಳನ್ನು ಭಾರತಕ್ಕೆ ಯಾವಾಗ ತರಲಾಗುತ್ತದೆ ಎಂಬ ಮಾಹಿತಿ ನಮಗೆ ಇನ್ನೂ ಸಿಕ್ಕಿಲ್ಲ ಎಂದು ಅವರು ತಿಳಿಸಿದ್ದಾರೆ.

ಕೊಚ್ಚಿ ಬಳಿ ನೆಡುಂಬಸ್ಸರಿ ಮೂಲದವರಾದ ಮ್ಯಾಥ್ಯ ಮುಜಾಕಲ್ ತಾಯಿ ಹಾಗೂ ಮೂವರು ಸಹೋದರಿಯರನ್ನು ಅಗಲಿದ್ದಾರೆ. ಕಳೆದ ಗುರುವಾರವಷ್ಟೇ ಅವರು ತಮ್ಮ ಮಕ್ಕಳು ಹಾಗೂ ಪತ್ನಿ ಜೊತೆ ರಜೆ ಮುಗಿಸಿಕೊಂಡು ಕುವೈತ್‌ಗೆ ತೆರಳಿದ್ದರು.

# ಮೋದಿಯನ್ನು ಅಭಿನಂದಿಸಿದ ಮಸ್ಕ್



**ವಾಷಿಂಗ್ಟನ್:** ಸೋಷಿಯಲ್ ಮೀಡಿಯಾ ಪ್ಲಾಟ್ ಫಾರ್ಮ್ ಎಕ್ಸ್ ಸಿಇಒ ಮತ್ತು ಬಿಲಿಯನೇರ್ ಎಲೋನ್ ಮಸ್ಕ್ ಅವರು ಎಕ್ಸ್ ಪ್ಲಾಟ್ ಫಾರ್ಮ್‌ನಲ್ಲಿ ಹೆಚ್ಚು ಬೆಂಬಲಿಗರನ್ನು ಹೊಂದಿರುವ ಪ್ರಧಾನಿ ನರೇಂದ್ರ ಮೋದಿ ಅವರನ್ನು ಅಭಿನಂದಿಸಿದ್ದಾರೆ. ಅತಿ ಹೆಚ್ಚು ಅನುಸರಿಸುವ ವಿಶ್ವನಾಯಕರಾಗಿದ್ದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಅಭಿನಂದನೆಗಳು ಎಂದು ಎಲೋನ್ ಮಸ್ಕ್ ಎಕ್ಸ್‌ನಲ್ಲಿ ಬರೆದುಕೊಂಡಿದ್ದಾರೆ.

ಕಳೆದವಾರ, ಎಕ್ಸ್ ನಲ್ಲಿ ಪಿಎಂ ಮೋದಿ ಅವರ ಅನುಯಾಯಿಗಳು 100 ಮಿಲಿಯನ್ ತಲುಪಿದರು, ಮಾಜಿ ಯುಎಸ್ ಅಧ್ಯಕ್ಷ ಬರಾಕ್ ಒಬಾಮಾ ನಂತರ ಅವರು ಎರಡನೇ ಅತಿ ಹೆಚ್ಚು ಅನುಸರಿಸಿದ ವಿಶ್ವ ರಾಜಕಾರಣಿಯಾಗಿದ್ದಾರೆ.

ಒಬಾಮಾ ಎಕ್ಸ್‌ನಲ್ಲಿ 131 ಮಿಲಿಯನ್‌ಗಿಂತಲೂ ಹೆಚ್ಚು ಅನುಯಾಯಿಗಳನ್ನು ಹೊಂದಿದ್ದಾರೆ. 2024ರ ಚುನಾವಣೆಗಳಿಗೆ ರಿಪಬ್ಲಿಕನ್ ಅಧ್ಯಕ್ಷೀಯ ಅಭ್ಯರ್ಥಿ, ಯುಎಸ್ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ 87 ಮಿಲಿಯನ್ ಅನುಯಾಯಿಗಳೊಂದಿಗೆ ಮೂರನೇ ಸ್ಥಾನದಲ್ಲಿದ್ದಾರೆ. 38 ದಶಲಕ್ಷಕ್ಕೂ ಹೆಚ್ಚು ಅನುಯಾಯಿಗಳೊಂದಿಗೆ, ಯುಎಸ್ ಅಧ್ಯಕ್ಷ ಜೋ ಬಿಡನ್ ನಾಲ್ಕನೇ ಸ್ಥಾನದಲ್ಲಿದ್ದಾರೆ, ನಂತರ ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಹಿಲರಿ ಕ್ಲಿಂಟನ್ ಇದ್ದಾರೆ. ಟೆಸ್ಲಾ ಸಿಇಒ ಹಾಗೂ ಎಕ್ಸ್ ಮಾಲೀಕರಾಗಿರುವ ಎಲೋನ್ ಮಸ್ಕ್ ಅವರು 190 ಮಿಲಿಯನ್‌ಗಿಂತಲೂ ಹೆಚ್ಚು ಅನುಯಾಯಿಗಳೊಂದಿಗೆ ಅಗ್ರ ಸ್ಥಾನದಲ್ಲಿದ್ದಾರೆ.

ಎಕ್ಸ್‌ನಲ್ಲಿ 112 ಮಿಲಿಯನ್‌ಗಿಂತಲೂ ಹೆಚ್ಚು ಅನುಯಾಯಿಗಳೊಂದಿಗೆ, ಸ್ಟಾರ್ ಪೋರ್ಚುಗಲ್ ಕ್ರಿಸ್ಟಿಯಾನೋ ರೊನಾಲ್ಡೊ ಮೂರನೇ ಸ್ಥಾನದಲ್ಲಿದ್ದಾರೆ, ಕೆನಡಾದ ಸಂಗೀತಗಾರ ಜಸ್ಟಿನ್ ಬೈಬರ್ ಮತ್ತು ಬಾರ್ಬಡಿಯನ್ ಗಾಯಕ ರಿಹಾನ್ನಾ ನಂತರದ ಸ್ಥಾನದಲ್ಲಿದ್ದಾರೆ.

# ಅಣುಬಾಂಬ್ ತಯಾರಿಸುತ್ತಿದೆಯಂತೆ ಇರಾನ್



**ಆಸ್ಪೆನ್:** ಇರಾನ್ ಪರಮಾಣು ಬಾಂಬ್ ಪಡೆಯುವ ಬಗ್ಗೆ ಹೆಚ್ಚು ಮಾತನಾಡುತ್ತಿದೆ ಮತ್ತು ಇಸ್ರೇಲ್ ಮತ್ತು ಅದರ ಮಿತ್ರರಾಷ್ಟ್ರಗಳು ಇಸ್ರೇಲ್ ಅನ್ನು ಗುರಿಯಾಗಿಸಿಕೊಂಡು ಇರಾನಿನ ವಾಯುದಾಳಿಗಳ ಸುರಿಮಳೆಗೈದ ಏಪ್ರಿಲ್‌ನಿಂದ ಶಾಸ್ತ್ರಸದ ಪ್ರಮುಖ ಅಂಶವನ್ನು ಅಭಿವೃದ್ಧಿಪಡಿಸುವಲ್ಲಿ ದಾಪುಗಾಲು ಹಾಕಿದೆ ಎಂದು ಎರಡು ಉನ್ನತ ಬಿಡೆನ್ ಆಡಳಿತ ಅಧಿಕಾರಿಗಳು ತಿಳಿಸಿದ್ದಾರೆ. ವಿದೇಶಾಂಗ ಕಾರ್ಯದರ್ಶಿ ಆಂಟೋನಿ ಬ್ಲಿಂಕೆನ್ ಮತ್ತು ರಾಷ್ಟ್ರೀಯ ಭದ್ರತಾ ಸಲಹೆಗಾರ ಜೇಕ್ ಸುಲ್ಲಿವಾಮ್, ಕೊಲೊರಾಡೋದಲ್ಲಿ ಭದ್ರತಾ ವೇದಿಕೆಯ ಸಂದರ್ಭದಲ್ಲಿ ಪ್ರತ್ಯೇಕ ಪ್ಯಾನೆಲ್‌ಗಳಲ್ಲಿ ಮಾತನಾಡುತ್ತಾ, ಇರಾನ್ ತನ್ನ ಪರಮಾಣು ಕಾರ್ಯಕ್ರಮದ ನಿಜವಾದ ಆಯುಧೀಕರಣವನ್ನು ಮುಂದುವರಿಸಲು ನಿರ್ಧಾರ ತೆಗೆದುಕೊಂಡಿರುವ ಯಾವುದೇ ಚಿಹ್ನೆಗಳನ್ನು ಯುನೈಟೆಡ್ ಸ್ಟೇಟ್ಸ್ ಸೂಕ್ಷ್ಮವಾಗಿ ಗಮನಿಸುತ್ತಿದೆ ಎಂದು ಹೇಳಿದರು.

ಆದಾಗ್ಯೂ, ಇರಾನ್ ಸರಿಸಲು ನಿರ್ಧಾರವನ್ನು ನಾನು ನೋಡಿಲ್ಲ ಎಂದು ಸುಲ್ಲಿವಾನ್ ಹೇಳಿದರು, ಅದು ಇದೀಗ ಪರಮಾಣು ಬಾಂಬ್ ಅನ್ನು ಅಭಿವೃದ್ಧಿಪಡಿಸಲು ನಿರ್ಧರಿಸಿದೆ ಎಂದು ಸಂಕೇತಿಸುತ್ತದೆ ಎಂದಿದ್ದಾರೆ.

ಟ್ರಂಪ್ ಆಡಳಿತವು 2015 ರ ಒಪ್ಪಂದದೊಂದಿಗೆ ಯುಎಸ್ ಸಹಕಾರವನ್ನು ಕೊನೆಗೊಳಿಸಿದ ನಂತರ ಇರಾನ್ ತನ್ನ ಪರಮಾಣು ಕಾರ್ಯಕ್ರಮದ ಪ್ರಗತಿಯನ್ನು ಪುನರಾರಂಭಿಸಿತು, ಇದು ಕಾರ್ಯಕ್ರಮದ ಕಠಿಣ ಮೇಲ್ವಿಚಾರಣೆಯನ್ನು ಅನುಮತಿಸಲು ಪ್ರತಿಯಾಗಿ ನಿರ್ಬಂಧಗಳಿಂದ ಇರಾನ್ ಪರಿಹಾರವನ್ನು ನೀಡಿತು. ತನ್ನ ಪರಮಾಣು ಕಾರ್ಯಕ್ರಮವು ನಾಗರಿಕ ಉದ್ದೇಶಗಳಿಗಾಗಿ ಎಂದು ಇರಾನ್ ಹೇಳುತ್ತದೆ.

ಇರಾನ್‌ನ ಸರ್ವೋಚ್ಚ ನಾಯಕ ಅಲಿ ಖಮೇನಿಯು ಪರಮಾಣು ಅಸವನ್ನು ಅಭಿವೃದ್ಧಿಪಡಿಸಲು ಇರಾನಿನ ವಿಜ್ಞಾನಿಗಳಿಗೆ ಯಾವುದೇ ಅಂತಿಮ ಅವಕಾಶವನ್ನು ನೀಡುವುದನ್ನು ದೀರ್ಘಕಾಲ ತಡೆಹಿಡಿದಿದ್ದಾರೆ ಎಂದು ಯುಎಸ್ ಮತ್ತು ಅಂತರರಾಷ್ಟ್ರೀಯ ಸಮುದಾಯದ ಇತರರು ನಂಬಿದ್ದಾರೆ.

**ಅವರು ಆ ರಸ್ತೆಯಲ್ಲಿ ಚಲಿಸಲು ಪ್ರಾರಂಭಿಸಿದರೆ, ಅವರು ಯುನೈಟೆಡ್ ಸ್ಟೇಟ್ಸ್‌ನೊಂದಿಗೆ ನಿಜವಾದ ಸಮಸ್ಯೆಯನ್ನು ಕಂಡುಕೊಳ್ಳುತ್ತಾರೆ ಎಂದು ಸುಲ್ಲಿವಾನ್ ಆಸ್ಪೆನ್ ಸೆಕ್ಯುರಿಟಿ ಫೋರಮ್‌ನಲ್ಲಿ ಹೇಳಿದರು, ಇದು ಅಮೆರಿಕ ನೀತಿ ನಿರೂಪಕರು, ಪತ್ರಕರ್ತರು ಮತ್ತು ಇತರರನ್ನು ಸೆಳೆಯುತ್ತದೆ.**

# ಟ್ರಂಪ್ ಸಭೆಯಲ್ಲಿ ಸಿಖ್ ಪ್ರಾರ್ಥನೆಗೆ ಖಂಡನೆ



**ವಾಷಿಂಗ್ಟನ್:** ಪಕ್ಷದ ಅಧ್ಯಕ್ಷೀಯ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಅವರ ಸಮ್ಮುಖದಲ್ಲಿ ರಿಪಬ್ಲಿಕನ್ ರಾಷ್ಟ್ರೀಯ ಸಮಿತಿಯ ಮಹಿಳೆ ಹರ್ಮೀತ್ ಧಿಲ್ಲೋನ್ ಮಾಡಿದ ಸಿಖ್ ಪ್ರಾರ್ಥನೆ ಅರ್ದಾಸ್ ಪಠಣ ಸ್ವೀಕಾರಾರ್ಹವಲ್ಲ ಎಂದು ಭಾರತೀಯ-ಅಮೆರಿಕನ್ ಕಾಂಗ್ರೆಸ್ಸಿಗ ರಾಜಾ ಕೃಷ್ಣಮೂರ್ತಿ ಅಭಿಪ್ರಾಯಪಟ್ಟಿದ್ದಾರೆ. ಕಳೆದ ಸೋಮವಾರ ಆರಂಭವಾದ ನಾಲ್ಕು ದಿನಗಳ ರಿಪಬ್ಲಿಕನ್ ರಾಷ್ಟ್ರೀಯ ಸಮಾವೇಶದಲ್ಲಿ ರಿಪಬ್ಲಿಕನ್ ಪಕ್ಷದ ನಾಯಕ ಮತ್ತು ನಾಗರಿಕ ಹಕ್ಕುಗಳ ವಕೀಲ ಧಿಲ್ಲೋನ್ ಪ್ರಾರ್ಥನೆಗಳನ್ನು ಪಠಿಸಿದರು.

ಪೆನ್ಸಿಲ್ವೇನಿಯಾದಲ್ಲಿ ಪ್ರಚಾರ ರ್‍ಯಾಲಿಯಲ್ಲಿ ಮಾಜಿ ಅಧ್ಯಕ್ಷರ ಮೇಲೆ ಬಂದೂಕುಧಾರಿಯೊಬ್ಬ ಗುಂಡು ಹಾರಿಸಿದ ನಂತರ ಮೊದಲ ಬಾರಿಗೆ ಟ್ರಂಪ್ ಅವರನ್ನು ಹೀರೋನಂತೆ ಸ್ವಾಗತಿಸಲು ಮಿಲ್ವಾಕಿಯಲ್ಲಿ ನಡೆದ ಸಮಾರಂಭದಲ್ಲಿ ಪ್ರತಿನಿಧಿಗಳು ಮತ್ತು ಅಧಿಕಾರಿಗಳು ಜಮಾಯಿಸಿದ್ದರು.

ಆಕೆಯ ಅರ್ದಾಸ್ ವಾಚನದ ನಂತರ, ಸಾಮಾಜಿಕ ಮಾಧ್ಯಮದಲ್ಲಿ ಟ್ರೋಲ್ ಮಾಡಲ್ಪಟ್ಟರು, ಅವರಲ್ಲಿ ಹೆಚ್ಚಿನವರು ಅವರ ಪಕ್ಷದ ಬೆಂಬಲದ ನೆಲೆಯಿಂದ ಕಾಣಿಸಿಕೊಂಡರು. ಸೋಮವಾರ ರಾತ್ರಿ ರಿಪಬ್ಲಿಕನ್ ರಾಷ್ಟ್ರೀಯ ಸಮಿತಿಯ ಮಹಿಳೆ ಹರ್ಮೀತ್ ಧಿಲ್ಲೋನ್ ಅವರ ಸಿಖ್ ಪ್ರಾರ್ಥನೆಗೆ ಖಂಡನೀಯ, ಜನಾಂಗೀಯ ಪ್ರತಿಕ್ರಿಯೆಯು ಸಂಪೂರ್ಣವಾಗಿ ಸ್ವೀಕಾರಾರ್ಹವಲ್ಲ ಎಂದು ರಾಜಾ ಕೃಷ್ಣಮೂರ್ತಿ ಹೇಳಿದ್ದಾರೆ. ಅಮೆರಿಕದಲ್ಲಿ ಜನಾಂಗ ಅಥವಾ ಧರ್ಮದ ಆಧಾರದ ಮೇಲೆ ತಾರತಮ್ಯಕ್ಕೆ ಯಾವುದೇ ಸ್ಥಾನವಿಲ್ಲ, ಮತ್ತು ಅದು ಸಂಭವಿಸಿದಾಗ ಡೆಮೋಕ್ರಾಟ್ ಮತ್ತು ರಿಪಬ್ಲಿಕನ್ನರು ಬಲವಾಗಿ ಖಂಡಿಸಬೇಕು ಎಂದು ಅವರು ಹೇಳಿದರು.

ನ್ಯೂಸ್ ಔಟ್ಲೆಟ್ ಮದರ್ ಜೋನ್ಸ್ ಅವರುಧಿಲ್ಲೋನ್ ಅವರ ಪ್ರಾರ್ಥನೆಯು ಕ್ರಿಶ್ಚಿಯನ್ ಟ್ವಿಟರ್‌ನ ಬಲಭಾಗದ ಮೂಲೆಗಳಲ್ಲಿ ಬೆಂಕಿಯ ಬಿರುಗಾಳಿಯನ್ನು ಹುಟ್ಟುಹಾಕಿತು ಎಂದು ವರದಿ ಮಾಡಿದೆ.

> **ನಾವು ಯಾವುದೇ ಹೊಸ ಪ್ರಯತ್ನದ ಮೊದಲು ಅರ್ದಾಸ್ (ಸಿಖ್ ಪ್ರಾರ್ಥನೆ) ಅನ್ನು ಪಠಿಸುತ್ತೇವೆ, ದೇವರಿಗೆ ಕೃತಜ್ಞತೆ ಸಲ್ಲಿಸುತ್ತೇವೆ ಮತ್ತು ಅವರ ರಕ್ಷಣೆ ಮತ್ತು ನಮ್ರತೆ, ಸತ್ಯ, ಧೈರ್ಯ, ಸೇವೆ ಮತ್ತು ಎಲ್ಲರಿಗೂ ನ್ಯಾಯದ ಮೌಲ್ಯಗಳನ್ನು ಎತ್ತಿಹಿಡಿಯಲು ಸಹಾಯವನ್ನು ಕೇಳುತ್ತೇವೆ ಹೀಗಾಗಿ ನಾನು ಪ್ರಾರ್ಥನೆ ಸಲ್ಲಿಸಿದ್ದೇನೆ**
>
> **-ಧಿಲ್ಲೋನ್**

# ವಿದ್ಯಾರ್ಥಿನಿ ಮೇಲೆ ಅತ್ಯಾಚಾರ ಪ್ರಕರಣ : ಮರಣದಂಡನೆ ಶಿಕ್ಷೆಗೆ ಸುಪ್ರೀಂ ತಡೆ



**ನವದೆಹಲಿ:** ಕೇರಳದಲ್ಲಿ 30 ವರ್ಷದ ಕಾನೂನು ವಿದ್ಯಾರ್ಥಿನಿ ಮೇಲೆ ಅತ್ಯಾಚಾರ ಎಸಗಿ ಕೊಲೆಗೈದ ಪ್ರಕರಣದಲ್ಲಿ ಅಪರಾಧಿಯೊಬ್ಬನಿಗೆ ವಿಧಿಸಲಾಗಿದ್ದ ಮರಣದಂಡನೆ ಶಿಕ್ಷೆಗೆ ಸುಪ್ರೀಂಕೋರ್ಟ್ ತಡೆ ನೀಡಿದೆ. 2016ರ ಮೇ 20ರಂದು ಕೇರಳ ಹೈಕೋರ್ಟ್ ತನ್ನ ತೀರ್ಪನ್ನು ಎತ್ತಿಹಿಡಿದ, ವಿಚಾರಣಾ ನ್ಯಾಯಾಲಯವು ಅವರಿಗೆ ನೀಡಿದ್ದ ಮರಣ ದಂಡನೆಯನ್ನು ಖಚಿತಪಡಿಸಿದ ತೀರ್ಪನ್ನು ಪ್ರಶ್ನಿಸಿ ಅಪರಾಧಿ ಸಲ್ಲಿಸಿದ್ದ ಅರ್ಜಿ ವಿಚಾರಣೆಯ ಸಂದರ್ಭದಲ್ಲಿ ನ್ಯಾಯಮೂರ್ತಿ ಬಿ.ಆರ್.ಗವಾಯಿ ನೇತೃತ್ವದ ಪೀಠವು ಈ ಆದೇಶ ನೀಡಿದೆ. ಮರಣದಂಡನೆಯು ಪ್ರಸ್ತುತ ಮೇಲ್ಮನವಿಯ ವಿಚಾರಣೆ ಮತ್ತು ಅಂತಿಮ ತೀರ್ಪಿಗೆ ಬದ್ಧವಾಗಿರುತ್ತದೆ ಎಂದು ನ್ಯಾಯ ಮೂರ್ತಿಗಳಾದ ಸಂಜಯ್ ಕರೋಲ್ ಮತ್ತು ಕೆ.ವಿ.ವಿಶ್ವನಾಥನ್ ಅವರನ್ನೊಳಗೊಂಡ ನ್ಯಾಯಪೀಠವು ಜು.16ರಂದು ನೀಡಿದ ತನ್ನ ಆದೇಶದಲ್ಲಿ ತಿಳಿಸಿದೆ. 2016ರ ಎಪ್ರಿಲ್‌ನಲ್ಲಿ ಘಟನೆ ನಡೆದಾಗ 22 ವರ್ಷ ವಯಸ್ಸಿನ ವಲಸೆ ಕಾರ್ಮಿಕ ಮುಹಮ್ಮದ್ ಅಮೀರ್-ಉಲ್-ಇಸ್ಲಾಂ ಅವರಿಗೆ ವಿಧಿಸಿದ್ದ ಮರಣದಂಡನೆಯನ್ನು ಹೈಕೋರ್ಟ್ ಎತ್ತಿಹಿಡಿದಿತ್ತು. ಸತ್ಯಗಳು ಆಳವಾಗಿ ಗೊಂದಲ ಉಂಟುಮಾಡುತ್ತದೆ. ಮಾನವ ಘನತೆ ಮತ್ತು ಜೀವನದ ಪವಿತ್ರತೆಯ ಉಲ್ಲಂಘನೆಯನ್ನು ಪ್ರತಿನಿಧಿಸುತ್ತದೆ, ಏಕೆಂದರೆ ಅಮಾನವೀಯ ರೀತಿಯಲ್ಲಿ ಅತ್ಯಾಚಾರ ಎಸಗಿದ ನಂತರ, ಬಲಿಪಶುವನ್ನು ಸಹ ಭೀಕರವಾಗಿ ಕೊಲ್ಲಲಾಗಿದೆ ಎಂಬುದನ್ನು ನ್ಯಾಯಾಲಯ ಗಮನಿಸಿದೆ.

ಪ್ರಾಸಿಕ್ಯೂಷನ್ ಪ್ರಕಾರ ಅಪರಾಧಿಯು ತನ್ನ ಮೇಲೆ ಅತ್ಯಾಚಾರ ಮಾಡುವ ಉದ್ದೇಶದಿಂದ ಎಪ್ರಿಲ್ 28, 2016 ರಂದು ಸಂತ್ರಸ್ತೆಯ ಮನೆಗೆ ನುಗ್ಗಿದ್ದನು. ಇದನ್ನು ವಿರೋಧಿಸಿದಾಗ ಅಪರಾಧಿಯೂ ವಿದ್ಯಾರ್ಥಿನ ಮೇಲೆ ಚಾಕುವಿನಿಂದ ದಾಳಿ ಮಾಡಿ ತೀವ್ರವಾಗಿ ಗಾಯಗೊಳಿಸಿದ್ದನು.ಅಪರಾಧಿ ಮರುದಿನ ತನ್ನ ತವರು ರಾಜ್ಯ ಅಸ್ಸಾಂಗೆ ಪರಾರಿಯಾಗಿದ್ದನು. ಜೂನ್ 2016 ರಲ್ಲಿ ಬಂಧಿಸಲಾಯಿತು ಎಂದು ಪ್ರಾಸಿಕ್ಯೂಷನ್ ಹೇಳಿದೆ. ಮೂಲ ಪ್ರಕರಣದ ದಾಖಲೆಯನ್ನು ವಿಚಾರಣಾ ನ್ಯಾಯಾಲಯ ಮತ್ತು ಉಚ್ಚನ್ಯಾಯಾಲಯದಿಂದ ಸಮನ್ಸ್ ಮಾಡುವಂತೆ ತನ್ನ ಆದೇಶದಲ್ಲಿ, ಸುಪ್ರೀಂ ಕೋರ್ಟ್ ಹೇಳಿದೆ. ಮೇಲ್ಮನವಿದಾರರಿಗೆ ಸಂಬಂಧಿಸಿದ ಎಲ್ಲಾ ಪರೀಕ್ಷಾಧಿಕಾರಿಗಳ ವರದಿಗಳನ್ನು 8 ವಾರಗಳಲ್ಲಿ ರಾಜ್ಯವು ತನ್ನ ಮುಂದೆ ಇಡಬೇಕು ಎಂದು ಪೀಠವು ನಿರ್ದೇಶಿಸಿದೆ. ಇತರ ನಿರ್ದೇಶನಗಳನ್ನು ನೀಡುವುದರ ಜೊತೆಗೆ, ಜೈಲಿನಲ್ಲಿ ಮೇಲ್ಮನವಿದಾರರು ನಿರ್ವಹಿಸಿದ ಕೆಲಸದ ಸ್ವರೂಪ ಮತ್ತು ಅವರ ನಡವಳಿಕೆ ಮತ್ತು ನಡವಳಿಕೆಗೆ ಸಂಬಂಧಿಸಿದಂತೆ ವರದಿಯನ್ನು ಎಂಟು ವಾರಗಳಲ್ಲಿ ಜೈಲು ಅಧಿಕ್ಷಕರು, ಕೇಂದ್ರ ಕಾರಾಗೃಹ ಮತ್ತು ಸುಧಾರಣಾ ಗೃಹ, ವಿಯ್ಯೂರ್ ಅವರು ಸಲ್ಲಿಸಬೇಕು ಎಂದು ಅದು ಹೇಳಿದೆ. ಅಪೀಲುದಾರರ ಮಾನಸಿಕ ಮೌಲ್ಯಮಾಪನವನ್ನು ಕೈಗೊಳ್ಳುವ ಉದ್ದೇಶಕ್ಕಾಗಿ ತ್ರಿಶೂರ್ ಸರ್ಕಾರಿ ವೈದ್ಯಕೀಯ ಕಾಲೇಜು, ಸೂಕ್ತ ತಂಡವನ್ನು ರಚಿಸುತ್ತದೆ ಎಂದು ಅದು ಹೇಳಿದೆ, ಮೌಲ್ಯಮಾಪನದ ವರದಿಯನ್ನು ಎಂಟು ವಾರಗಳಲ್ಲಿ ಅದರ ಮುಂದೆ ಸಲ್ಲಿಸಬೇಕು.

**12 ವಾರಗಳ ನಂತರ ಮುಂದಿನ ವಿಚಾರಣೆಗೆ ಸುಪ್ರೀಂ ಕೋರ್ಟ್ ಪ್ರಕರಣವನ್ನು ಮುಂದೂಡಿದೆ. ಪ್ರಕರಣದ ವಿಚಾರಣೆಯನ್ನು ಕೈಬಿಡುವ ಮುನ್ನ, ಪ್ರಕರಣದ ಆರೋಪಿಗಳಿಗೆ ಮರಣದಂಡನೆ ವಿಧಿಸುವ ಅಂತಿಮ ಶಿಕ್ಷೆಯನ್ನು ನಾವು ಭಾರವಾದ ಹೃದಯದಿಂದ ಎತ್ತಿಹಿಡಿಯಬೇಕು ಎಂಬುದನ್ನು ಗಮನಿಸಬೇಕು ಎಂದು ಹೈಕೋರ್ಟ್ ತನ್ನ ತೀರ್ಪಿನಲ್ಲಿ ಹೇಳಿತ್ತು.**

# ಪುರಿ ಜಗನ್ನಾಥ ದೇವಸ್ಥಾನದ ರತ್ನ ಭಂಡಾರದಲ್ಲಿ ಪುರಾತನ ಖಡ್ಗ, ಭರ್ಜಿಗಳು ಪತ್ತೆ

● ಒಡಿಶಾದ ಪುರಿ ಜಗನ್ನಾಥ ದೇವಸ್ಥಾನದ ರತ್ನ ಭಂಡಾರದ ನವೀಕರಣ, ದುರಸ್ತಿ ಕಾರ್ಯ



ಬೆಳಕು ಚೆಲ್ಲುವ ವಸ್ತುಗಳು

**ಭುವನೇಶ್ವರ:** ಒಡಿಶಾದ ಪುರಿ ಜಗನ್ನಾಥ ದೇವಸ್ಥಾನದ ರತ್ನ ಭಂಡಾರದಲ್ಲಿ ಅನೇಕ ಮೌಲ್ಯಯುತ ವಸ್ತುಗಳನ್ನು ಇರಿಸಿರುವುದು ಬೆಳಕಿಗೆ ಬರುತ್ತಿವೆ. ಗುರುವಾರ ವಸ್ತುಗಳ ಸ್ಥಳಾಂತರದ ವೇಳೆ ಯುದ್ಧಗಳಲ್ಲಿ ಬಳಸಿದ ಖಡ್ಗಗಳು ಮತ್ತು ಈಟಿಗಳಂತಹ ಶತಮಾನಗಳಷ್ಟು ಹಳೆಯದಾದ ಅನೇಕ ಸಾಮಗ್ರಿಗಳು ಪತ್ತೆಯಾಗಿವೆ. ಯುದ್ಧಗಳಲ್ಲಿ ಗೆಲುವು ಸಾಧಿಸಿದ ಬಳಿಕ ದೇವಸ್ಥಾನಕ್ಕೆ ಅರಸರು ಭಾರಿ ಪ್ರಮಾಣದ ಚಿನ್ನಾಭರಣ ಹಾಗೂ ಇತರೆ ವಸ್ತುಗಳನ್ನು ಉಡುಗೊರೆಯಾಗಿ ನೀಡುತ್ತಿದ್ದರು ಎಂಬ ನಂಬಿಕೆಯನ್ನು ಇದು ಬಲಪಡಿಸಿದೆ.

ರತ್ನ ಭಂಡಾರದಿಂದ ಜುಲೈ 14ರಂದು ಕೆಲವು ಅಮೂಲ್ಯ ವಸ್ತುಗಳನ್ನು ಸ್ಥಳಾಂತರ ಮಾಡುವಾಗ ಕೆಲವು ಪುರಾತನ ವಿಗ್ರಹಗಳು ದೊರಕಿದ್ದವು. ಗುರುವಾರ ಒಳ ಕೊಠಡಿಯೊಳಗೆ ಕೆಲವು ಖಡ್ಗಗಳು ಮತ್ತು ಈಟಿಗಳು ಕಂಡುಬಂದಿವೆ. ಈ ಆಯುಧಗಳು ಬಹಳ ತೂಕದ್ದಾಗಿದ್ದು, ಕಪ್ಪುಗಟ್ಟಿವೆ ಎಂದು ರತ್ನ ಭಂಡಾರ ಪ್ರವೇಶಿಸಿದ 11 ಸದಸ್ಯರ ಸಮಿತಿಯ ಒಬ್ಬರು ತಿಳಿಸಿದ್ದಾರೆ. 46 ವರ್ಷಗಳಿಂದ ಬಾಗಿಲು ಮುಚ್ಚಿದ್ದ ರತ್ನ ಭಂಡಾರವನ್ನು ನವೀಕರಣ ಹಾಗೂ ದುರಸ್ತಿಗಾಗಿ ಜುಲೈ 14ರಂದು ರಾಜ್ಯ ಸರ್ಕಾರವು ಮತ್ತೆ ತೆರೆದಿತ್ತು. ಸುದ್ದಿಗಾರರ ಜತೆ ಮಾತನಾಡಿದ ರತ್ನ ಭಂಡಾರ ಮೇಲ್ವಿಚಾರಣಾ ಸಮಿತಿಯ ಅಧ್ಯಕ್ಷ ಬಿಸ್ವಜಿತ್ ರಾತ್, ಭಂಡಾರದ ಒಳಗೆ ದೊರಕಿರುವ ವಸ್ತುಗಳನ್ನು ತಾತ್ಕಾಲಿಕ ಸ್ಟ್ರಾಂಗ್ ರೂಮ್‌ನಲ್ಲಿ ನಾವು ಬಹಳ ಜಾಗರೂಕತೆಯಿಂದ ಮುಚ್ಚಿ ಭದ್ರವಾಗಿ ಇರಿಸಿದ್ದೇವೆ ಎಂದು ಹೇಳಿದ್ದಾರೆ.

ಒಡಿಶಾ ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿಯಾಗಿರುವ ಬಿಸ್ವಜಿತ್ ರಾತ್, ಆಯುಧಗಳು ಯಾವ ಕಾಲದ್ದು ಹಾಗೂ ಅವುಗಳ ಸಂಖ್ಯೆ ಎಷ್ಟಿದೆ ಎಂಬಂತಹ ವಿವರಗಳನ್ನು ನೀಡಿಲ್ಲ. 12ನೇ ಶತಮಾನದ ದೇವಸ್ಥಾನದಲ್ಲಿ ಕಂಡುಬಂದಿರುವ ಆಯುಧಗಳು ಈ ಹಿಂದೆ ಒಡಿಶಾ ಭಾಗವನ್ನು ಆಳಿದ ರಾಜರಿಗೂ ದೇವಾಲಯಕ್ಕೂ ಇರುವ ನಂಟು ಹಾಗೂ ಶತಮಾನಗಳಿಂದ ಸಂಗ್ರಹಿಸಲಾಗಿದೆ ಎನ್ನಲಾಗಿರುವ ಖಜಾನೆಗಳ ಮೇಲೆ ಬೆಳಕು ಚೆಲ್ಲುತ್ತದೆ.

ಜಗನ್ನಾಥ ದೇವಸ್ಥಾನದ ಮೇಲೆ ಇತಿಹಾಸದಲ್ಲಿ 18 ಬಾರಿ ಆಕ್ರಮಣ ನಡೆದಿದ್ದು ವಸ್ತುಗಳನ್ನು ದೋಚಲಾಗಿದೆ. ದಾಳಿಕೋರರ ಪಾಲಿಗೆ ದೇವಸ್ಥಾನವು ಸಂಪತ್ತಿನ ಭಾರಿ ದೊಡ್ಡ ಮೂಲವಾಗಿತ್ತು. ದೇವಸ್ಥಾನವನ್ನು ರಕ್ಷಿಸಲು ಆಗಿನ ಅರಸರು ರತ್ನ ಭಂಡಾರದ ಒಳಗೆ ಪುರಾತನ ಆಯುಧಗಳನ್ನು ಇರಿಸಿರಬಹುದು ಎಂದು ದೇವಸ್ಥಾನದ ಪರಿಚಾರಕ ಶ್ಯಾಮ ಮಹಾಪಾತ್ರಾ ತಿಳಿಸಿದ್ದಾರೆ.

**ಅಧ್ಯಯನ ನಡೆಸಲು ಒತ್ತಾಯ:** ಪತ್ತೆಯಾದ ಆಯುಧಗಳು ಮತ್ತು ಇತರೆ ಸಾಮಗ್ರಿಗಳನ್ನು ಸೂಕ್ತ ರೀತಿಯಲ್ಲಿ ಅಧ್ಯಯನಕ್ಕೆ ಒಳಪಡಿಸಬೇಕು ಎಂದು ಇತಿಹಾಸಕಾರರು ಹಾಗೂ ಪಾರಂಪರಿಕ ಸಂಶೋಧಕರು ಒತ್ತಾಯಿಸಿದ್ದಾರೆ. ಯಾವ ಸಮಯದಲ್ಲಿ ಈ ಆಯುಧಗಳನ್ನು ಬಳಸುತ್ತಿದ್ದರು ಎಂಬುದನ್ನು ಅಧ್ಯಯನಕ್ಕೆ ಒಳಪಡಿಸಲು ಪ್ರಮುಖ ಪುರತತ್ವ ತಜ್ಞರನ್ನು ಬಳಸಿಕೊಳ್ಳಬೇಕು ಎಂದು ಸರ್ಕಾರಕ್ಕೆ ಬೇಡಿಕೆ ಇರಿಸಿದ್ದಾರೆ. ಇವು ಐತಿಹಾಸಿಕ ಮಹತ್ವವುಳ್ಳ ಬಹಳ ಅಪರೂಪದ ಸಾಮಗ್ರಿಗಳಾಗಿವೆ. ಇವುಗಳನ್ನು ಸಮರ್ಪಕವಾಗಿ ಸಂರಕ್ಷಿಸಬೇಕು ಹಾಗೂ ಮ್ಯೂಸಿಯಂನಲ್ಲಿ ಪ್ರದರ್ಶಿಸಬೇಕು ಎಂದು ಇತಿಹಾಸಕಾರ ಸಾಜಿವ್ ಮಿಶ್ರಾ ಹೇಳಿದ್ದಾರೆ.

### ನಿರಂತರ ಆಕ್ರಮಣ

**1190ರ ವೇಳೆ ಪೂರ್ವ ಗಂಗಾ ರಾಜವಂಶದ ಅನಂತವರ್ಮನ್ ಚೋಡಗಂಗಾದೇವ ಅವರು ದೇವಸ್ಥಾನ ನಿರ್ಮಾಣ ಮಾಡಿದ್ದರು ಎಂದು ಶ್ರೀ ಜಗನ್ನಾಥ ದೇವಸ್ಥಾನ ಆಡಳಿತ ಮಂಡಳಿ ಮೂಲಗಳು ತಿಳಿಸಿವೆ. 214 ಅಡಿ ಎತ್ತರದ ದೇಗುಲವು 10.7 ಎಕರೆ ಪ್ರದೇಶದಲ್ಲಿ ಹರಡಿದ್ದು, ಇದರ ಆವರಣದಲ್ಲಿ 95 ಇತರೆ ಸಣ್ಣ ದೇವಸ್ಥಾನಗಳಿವೆ.**

**ಸಾಕಷ್ಟು ಪುರಾತನ, ಅತ್ಯಮೂಲ್ಯ ವಸ್ತುಗಳನ್ನು ಇರಿಸಿಕೊಂಡಿರುವ ಒಡಿಶಾದ ಪುರಿ ಜಗನ್ನಾಥ ದೇಗುಲದಲ್ಲಿನ ರತ್ನ ಭಂಡಾರ ಸಾಕಷ್ಟು ಕುತೂಹಲ ಕೆರಳಿಸಿದೆ. ರತ್ನ ಭಂಡಾರದ ಕೊಠಡಿಯ ಒಳಗೆ ಸುರಂಗ ಮಾರ್ಗ ಇರುವ ಶಂಕೆ ವ್ಯಕ್ತವಾಗಿದೆ. ಈ ನಡುವೆ ಖಜಾನೆಯಲ್ಲಿ ಯುದ್ಧಗಳಲ್ಲಿ ಬಳಸುತ್ತಿದ್ದ ಖಡ್ಗಗಳು, ಭರ್ಜಿಗಳಂತಹ ಆಯುಧಗಳು ಪತ್ತೆಯಾಗಿವೆ. ಇವುಗಳ ಕಾಲಮಾನ ಯಾವುದಿರಬಹುದು ಎನ್ನುವ ಬಗ್ಗೆ ಚರ್ಚೆ ನಡೆಯುತ್ತಿದೆ.**

## ಅಮೆರಿಕ ಅಧ್ಯಕ್ಷನಾದರೆ ರಷ್ಯಾ-ಉಕ್ರೇನ್ ಯುದ್ಧ ನಿಲ್ಲಿಸುವೆ: ಡೊನಾಲ್ಡ್ ಟ್ರಂಪ್

**ವಾಷಿಂಗ್ಟನ್:** ನವೆಂಬರ್‌ನಲ್ಲಿ ನಡೆಯುವ ಚುನಾವಣೆಯಲ್ಲಿ ಗೆದ್ದು, ಅಮೆರಿಕ ಅಧ್ಯಕ್ಷನಾದಲ್ಲಿ ರಷ್ಯಾ–ಉಕ್ರೇನ್ ಯುದ್ಧ ನಿಲ್ಲಿಸುವುದಾಗಿ ಅಧ್ಯಕ್ಷ ಸ್ಥಾನದ ರಿಪಬ್ಲಿಕನ್ ಪಕ್ಷದ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಅವರು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝುಲೆನ್‌ಸ್ಕಿ ಅವರಿಗೆ ಭರವಸೆ ನೀಡಿದ್ದಾರೆ. ರಿಪಬ್ಲಿಕನ್ ಪಕ್ಷದ ಅಧ್ಯಕ್ಷೀಯ ಸ್ಥಾನಕ್ಕೆ ನಾಮನಿರ್ದೇಶನಗೊಂಡಿರುವ ಡೊನಾಲ್ಡ್ ಟ್ರಂಪ್ ಅವರನ್ನು ಅಭಿನಂದಿಸಲು ಝುಲೆನ್‌ಸ್ಕಿ ದೂರವಾಣಿ ಕರೆ ಮಾಡಿದ್ದರು. ಝುಲೆನ್ ಅವರೊಂದಿಗೆ ಮಾತುಕತೆ ನಡೆಸಿದ ಕುರಿತು ಅವರು ಸಾಮಾಜಿಕ ಜಾಲತಾಣ 'ಟ್ರೂತ್ ಸೋಷಿಯಲ್'ನಲ್ಲಿ ಪೋಸ್ಟ್ ಮಾಡಿದ್ದಾರೆ.



'ನಾನು ಅಮೆರಿಕದ ಮುಂದಿನ ಅಧ್ಯಕ್ಷನಾಗಿ ಆಯ್ಕೆಯಾದಲ್ಲಿ ಜಗತ್ತಿನಲ್ಲಿ ಶಾಂತಿ ಸ್ಥಾಪಿಸುತ್ತೇನೆ. ಹಲವಾರು ಮುಗ್ಧ ಜನರು ಜೀವ ಕಳೆದುಕೊಳ್ಳಲು ಕಾರಣವಾದ ಯುದ್ಧವನ್ನು ಕೊನೆಗೊಳಿಸುತ್ತೇನೆ ಎಂಬುದಾಗಿ ಝುಲೆನ್‌ಸ್ಕಿ ಅವರಿಗೆ ವಾಗ್ದಾನ ಮಾಡಿದೆ' ಎಂದೂ ಅವರು ಬರೆದುಕೊಂಡಿದ್ದಾರೆ.

ಅಧ್ಯಕ್ಷೀಯ ಸ್ಥಾನದ ಅಭ್ಯರ್ಥಿಯಾಗಿ ರಿಪಬ್ಲಿಕನ್ ಪಕ್ಷದಿಂದ ನಾಮನಿರ್ದೇಶನಗೊಂಡ ನಂತರ, ಟ್ರಂಪ್ ಅವರು ವಿದೇಶಿ ನಾಯಕರೊಂದಿಗೆ ಇದೇ ಮೊದಲ ಬಾರಿಗೆ ಮಾತನಾಡಿದ್ದಾರೆ. ಹೀಗಾಗಿ, ಈ ಮಾತುಕತೆಗೆ ಮಹತ್ವ ಬಂದಿದೆ.

# ಸೂರ್ಯ ಮುಂದಿವೆ ಸಾಲು ಸಾಲು ಸವಾಲುಗಳು

## ಲಂಕಾ ಪ್ರವಾಸದಲ್ಲಿ ನಾಯಕ



ಭಾರತದ ಶ್ರೀಲಂಕಾ ಪ್ರವಾಸಕ್ಕೆ ಬಿಸಿಸಿಐ ಈಗಾಗಲೇ ತಂಡವನ್ನು ಪ್ರಕಟಿಸಿದೆ. ವೇಳಾಪಟ್ಟಿಯ ಪ್ರಕಾರ ಟೀಂ ಇಂಡಿಯಾ ಕೆಲವೇ ದಿನಗಳಲ್ಲಿ ಲಂಕಾಗೆ ಹಾರಲಿದೆ. ಟಿ20 ಸರಣಿಯೊಂದಿಗೆ ಪ್ರವಾಸ ಆರಂಭವಾಗಲಿದ್ದು, ನೂತನ ನಾಯಕನಾಗಿ ಆಯ್ಕೆಯಾಗಿರುವ ಸೂರ್ಯಕುಮಾರ್ ಯಾದವ್‌ಗೆ ಈ ಪ್ರವಾಸ ಅತ್ಯಂತ ಮಹತ್ವದ್ದಾಗಿದೆ.

ಭಾರತಕ್ಕೆ ಟಿ20 ವಿಶ್ವಕಪ್ ಗೆಲ್ಲಿಸಿಕೊಟ್ಟ ರೋಹಿತ್ ಶರ್ಮಾ ಅವರ ಸ್ಥಾನವನ್ನು ತುಂಬುವುದು ಸೂರ್ಯನಿಗೆ ಸುಲಭದ ಕೆಲಸವಲ್ಲ. ಅದರೊಂದಿಗೆ ಟಿ20 ತಂಡದ ನಾಯಕತ್ವದ ರೇಸ್‌ನಲ್ಲಿರುವ ತಂಡದ ಇತರ ಆಟಗಾರರನ್ನು ಸಂತೈಸಿಕೊಂಡು ತಂಡವನ್ನು ಮುನ್ನಡೆಸುವ ದೊಡ್ಡ ಜವಬ್ದಾರಿಯು ಸೂರ್ಯನ ಮೇಲಿದೆ. ಇದೆಲ್ಲದರ ಹೊರತಾಗಿಯೂ ನಾಯಕನಾಗಿ ಸೂರ್ಯನಿಗೆ ಲಂಕಾ ಪ್ರವಾಸದಲ್ಲಿ ಈ ಮೂರು ಕಠಿಣ ಸವಾಲುಗಳು ಎದುರಾಗಿವೆ.

ನಾಯಕನಾಗಿ ಸೂರ್ಯನಿಗೆ ಮೊದಲ ಸವಾಲೆಂದರೆ, 33 ವರ್ಷದ ಸೂರ್ಯಕುಮಾರ್‌ಗೆ ದೊಡ್ಡ ಟೂರ್ನಿಗಳಲ್ಲಿ ತಂಡವನ್ನು ಮುನ್ನಡೆಸಿದ ಅನುಭವವಿಲ್ಲ. ಸೂರ್ಯ ಇದುವರೆಗೆ ಕೇವಲ 7 ಟಿ20 ಪಂದ್ಯಗಳಲ್ಲಿ ಮಾತ್ರ ನಾಯಕತ್ವ ನಿರ್ವಹಿಸಿದ್ದಾರೆ. ಇದರಲ್ಲಿ ಐದು ಪಂದ್ಯಗಳನ್ನು ಗೆಲ್ಲಿಸಿಕೊಡುವಲ್ಲಿ ಯಶಸ್ವಿಯಾಗಿದ್ದಾರೆ.

ಸೂರ್ಯ ನಾಯಕತ್ವದಲ್ಲಿ ತಂಡವು ತವರಿನ ಸರಣಿಯಲ್ಲಿ ಆಸ್ಟ್ರೇಲಿಯಾವನ್ನು 4-1 ಅಂತರದಿಂದ ಸೋಲಿಸಿತ್ತು. ಇದರ ನಂತರ, ದಕ್ಷಿಣ ಆಫ್ರಿಕಾ ಪ್ರವಾಸದಲ್ಲಿ, ಟಿ20 ಸರಣಿಯನ್ನು 1-1 ರಿಂದ ಸಮಬಲಗೊಳಿಸಿತ್ತು. ಸದ್ಯ ನಾಯಕನಾಗಿ ಸೂರ್ಯ ಯಶಸ್ವಿಯಾಗಿದ್ದರೂ, ಇನ್ನು ಆರು ತಿಂಗಳಲ್ಲಿ ಅವರ ಮೇಲೆ ಇಟ್ಟಿರುವ ನಂಬಿಕೆಯನ್ನು ಎಷ್ಟರ ಮಟ್ಟಿಗೆ ಉಳಿಸಿಕೊಳ್ಳಲು ಸಾಧ್ಯವಾಗಿದೆ ಎಂಬುದು ಗೊತ್ತಾಗಲಿದೆ.

ಸೂರ್ಯನ ಎರಡನೇ ಸವಾಲೆಂದರೆ, ರೋಹಿತ್ ಶರ್ಮಾ ಸ್ಥಾನವನ್ನು ತುಂಬುವುದು. ರೋಹಿತ್ ಶರ್ಮಾ ನಾಯಕನಾಗಿ ಚಾಣಾಕ್ಷತನ ತೋರುವುದರ ಜೊತೆಗೆ ಡ್ರೆಸ್ಸಿಂಗ್ ರೂಮ್‌ನಲ್ಲಿ ವಾತಾವರಣವನ್ನು ಆಹ್ಲಾದಕರವಾಗಿಡುವುದರಲ್ಲಿ ನಿಸ್ಸೀಮರಾಗಿದ್ದರು. ಇದೀಗ ತಂಡದಲ್ಲಿ ನಾಯಕತ್ವಕ್ಕಾಗಿ ಹಪಹಪಿಸುತ್ತಿರುವ ಆಟಗಾರರ ನಡುವೆ ಸೂರ್ಯ ಯಾವ ರೀತಿಯಾಗಿ ತಂಡವನ್ನು ಮುನ್ನಡೆಸುತ್ತಾರೆ ಎಂಬುದು ದೊಡ್ಡ ಪ್ರಶ್ನೆಯಾಗಿದೆ.

ಮೂರನೇ ಸವಾಲೆಂದರೆ... ಸೂರ್ಯ ಮಧ್ಯಮ ಕ್ರಮಾಂಕದ ಬ್ಯಾಟರ್ ಆಗಿ ತಂಡವನ್ನು ಗೆಲುವಿನತ್ತ ಕೊಂಡೊಯ್ಯುವ ಮಹತ್ವದ ಕೆಲಸದ ಜೊತೆಗೆ ಇದೀಗ ನಾಯಕನಾಗಿಯೂ ತಂಡವನ್ನು ಮುನ್ನಡೆಸಬೇಕಿದೆ. ಎಲ್ಲಾ ಆಟಗಾರರ ಪ್ರದರ್ಶನವನ್ನು ಉತ್ತಮಗೊಳಿಸುವುದರ ಜೊತೆಗೆ ತನ್ನ ಆಟವನ್ನು ಸುಧಾರಿಸುವುದು ಸೂರ್ಯಕುಮಾರ್ ಮೇಲಿರುವ ದೊಡ್ಡ ಜವಬ್ದಾರಿಯಾಗಿದೆ. ನಾಯಕನಾಗಿ ಇದುವರೆಗೆ ಆಡಿರುವ 7 ಪಂದ್ಯಗಳಲ್ಲಿ ಸೂರ್ಯ ಒಬ್ಬ ಬ್ಯಾಟರ್ ಆಗಿ ಉತ್ತಮ ಪ್ರದರ್ಶನವನ್ನು ನೀಡಿದ್ದಾರೆ. ಈ 7 ಪಂದ್ಯಗಳಲ್ಲಿ ಸೂರ್ಯ, 42.85 ಸರಾಸರಿಯಲ್ಲಿ ಒಂದು ಶತಕ ಮತ್ತು ಎರಡು ಅರ್ಧ ಶತಕಗಳೊಂದಿಗೆ ಒಟ್ಟು 300 ರನ್ ಗಳಿಸಿದ್ದಾರೆ. ಇದೀಗ ಪೂರ್ಣ ಪ್ರಮಾಣದ ನಾಯಕತ್ವದ ಜವಾಬ್ದಾರಿಯನ್ನು ವಹಿಸಿಕೊಂಡ ನಂತರ ಯಾದವ್ ತಮ್ಮ ಫಾರ್ಮ್ ಅನ್ನು ಯಾವ ರೀತಿ ಮುಂದುವರೆಸುತ್ತಾರೆ ಎಂಬುದನ್ನು ಕಾದುನೋಡಬೇಕಿದೆ.

# ಉದ್ದೇಶಪೂರ್ವಕವಾಗಿಯೇ ಕೊಹ್ಲಿ ವಿರುದ್ಧ ವಿವಾದಾತ್ಮಕ ಹೇಳಿಕೆ ನೀಡುತ್ತಾರೆ



2023 ರ ಏಕದಿನ ವಿಶ್ವಕಪ್ ವೇಳೆ ಗಾಯಕ್ಕೆ ತುತ್ತಾಗಿ ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದ ಟೀಂ ಇಂಡಿಯಾದ ವೇಗದ ಬೌಲರ್ ಮೊಹಮ್ಮದ್ ಶಮಿ ಪ್ರಸ್ತುತ ಚೇತರಿಕೆಯ ಹಾದಿಯಲ್ಲಿದ್ದಾರೆ. ಶಮಿ ನೆಟ್ಸ್‌ನಲ್ಲಿ ಬೌಲಿಂಗ್ ಮಾಡುತ್ತಿರುವ ವಿಡಿಯೋ ಸದ್ಯ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿದೆ. ಬೇಗ ಚೇತರಿಸಿಕೊಂಡು ತಂಡವನ್ನು ಕೂಡಿಕೊಳ್ಳುವ ಇರಾದೆಯಲ್ಲಿರುವ ಮೊಹಮ್ಮದ್ ಶಮಿ, ವಿರಾಟ್ ಕೊಹ್ಲಿ ವಿರುದ್ಧ ವಿವಾದಾತ್ಮಕ ಹೇಳಿಕೆ ನೀಡುವ ಮಾಜಿ ಕ್ರಿಕೆಟಿಗರ ಹಾಗೂ ಟೀಕಾಕಾರರ ಬಾಯಿ ಮುಚ್ಚಿಸುವ ಕೆಲಸ ಮಾಡಿದ್ದಾರೆ. ರಾತ್ರೋರಾತ್ರಿ ತಮ್ಮ ಹೆಸರನ್ನು ಮುನ್ನಲೆಗೆ ತರುವ ಉದ್ದೇಶದಿಂದ ಕೆಲವರು ಈ ರೀತಿ ಮಾಡುತ್ತಾರೆ ಎಂದು ಶಮಿ ಹೇಳಿದ್ದಾರೆ.

**ಅಮಿತ್ ಮಿಶ್ರಾ ಸ್ಫೋಟಕ ಹೇಳಿಕೆ**

ಶುಭಂಕರ್ ಮಿಶ್ರಾ ಅವರ ಪೋಡ್‌ಕಾಸ್ಟ್‌ನಲ್ಲಿ ಮಾತನಾಡಿದ ಮೊಹಮ್ಮದ್ ಶಮಿ, ಪ್ರತಿ ದಿನ ಕೆಲವು ಮಾಜಿ ಕ್ರಿಕೆಟಿಗರು ವಿರಾಟ್ ಕೊಹ್ಲಿ ಬಗ್ಗೆ ತಮ್ಮ ಅಭಿಪ್ರಾಯವನ್ನು ಹಂಚಿಕೊಳ್ಳುತ್ತಲೇ ಇರುತ್ತಾರೆ. ಅದರಲ್ಲಿ ಕೆಲವರು ಕೊಹ್ಲಿಯ ಒಳ್ಳೆಯತನದ ಬಗ್ಗೆ ಮಾತನಾಡಿದರೆ, ಮತ್ತೆ ಕೆಲವರು ಅವರ ವಿರುದ್ಧ ಹೇಳಿಕೆಗಳನ್ನು ನೀಡುತ್ತಾರೆ ಎಂದಿದ್ದಾರೆ. ವಾಸ್ತವವಾಗಿ ಇತ್ತೀಚೆಗಷ್ಟೇ ಭಾರತದ ಲೆಜೆಂಡರಿ ಲೆಗ್ ಸ್ಪಿನ್ನರ್ ಅಮಿತ್ ಮಿಶ್ರಾ, 'ಹಣ ಮತ್ತು ಖ್ಯಾತಿ ಪಡೆದ ನಂತರ ಕೊಹ್ಲಿ ಬದಲಾಗಿದ್ದಾರೆ' ಎಂದು ಹೇಳಿದ್ದರು. ಭಾರತೀಯ ಕ್ರಿಕೆಟ್‌ನಲ್ಲಿ ಧೋನಿ, ಕಪಿಲ್ ದೇವ್ ಮತ್ತು ಸಚಿನ್ ಅವರಿಗೆ ಸಿಗುವ ಗೌರವ ಎಂದಿಗೂ ಕೊಹ್ಲಿಗೆ ಸಿಗುವುದಿಲ್ಲ ಎಂದಿದ್ದರು. ಮಿಶ್ರಾ ಅವರ ಈ ಹೇಳಿಕೆ ಸಖತ್ ವೈರಲ್ ಆಗಿತ್ತು. ಮಿಶ್ರಾಗೂ ಮುನ್ನ ಹಲವು ಅನುಭವಿಗಳು ವಿರಾಟ್ ವಿರುದ್ಧ ಹೇಳಿಕೆ ನೀಡಿದ್ದಾರೆ. ಇದೀಗ ಮೊಹಮ್ಮದ್ ಶಮಿ ಈ ಬಗ್ಗೆ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

**ಉದ್ದೇಶಪೂರ್ವಕವಾಗಿ ಹಾಗೆ ಮಾಡುತ್ತಾರೆ**

ಈ ವಿಷಯದ ಬಗ್ಗೆ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿರುವ ಶಮಿ, 'ಅನೇಕ ಮಾಜಿ ಕ್ರಿಕೆಟಿಗರು ಕೊಹ್ಲಿ ವಿರುದ್ಧ ಏನಾದರೂ ಹೇಳಿದಾಗ ಮರುದಿನ ಪತ್ರಿಕೆಗಳ ಮೊದಲ ಪುಟದಲ್ಲಿ ತಮ್ಮ ಹೆಸರು ಕಾಣಿಸಿಕೊಳ್ಳುತ್ತದೆ ಎಂಬುದನ್ನು ತಿಳಿದಿದ್ದಾರೆ. ಆದ್ದರಿಂದ ಅವರು ಉದ್ದೇಶಪೂರ್ವಕವಾಗಿ ಹಾಗೆ ಮಾಡುತ್ತಾರೆ' ಎಂದು ಹೇಳುವ ಮೂಲಕ ವಿರಾಟ್ ವಿರುದ್ಧ ಮಾತನಾಡಿದವರಿಗೆ ತಕ್ಕ ಉತ್ತರ ನೀಡಿದ್ದಾರೆ.

**ವಿರಾಟ್ ಜೊತೆ ಶಮಿ ಬಾಂಧವ್ಯ ಹೇಗಿದೆ**

ಇನ್ನು ವಿರಾಟ್ ಕೊಹ್ಲಿ ಜೊತೆಗಿನ ಬಾಂಧವ್ಯದ ಬಗ್ಗೆ ಮಾತನಾಡಿದ ಶಮಿ, 'ನಮ್ಮಿಬ್ಬರ ಒಡನಾಟ ತುಂಬಾ ಚೆನ್ನಾಗಿದೆ. ವಿರಾಟ್ ಕೊಹ್ಲಿ ನೆಟ್ಸ್‌ನಲ್ಲಿ ನನ್ನ ಬೌಲಿಂಗ್ ಅನ್ನು ಇಷ್ಟಪಡುತ್ತಾರೆ. ನಾವು ನೆಟ್ಸ್‌ನಲ್ಲಿ ಪರಸ್ಪರ ಸವಾಲು ಹಾಕುತ್ತೇವೆ, ಇದು ಖುಷಿ ನೀಡುತ್ತದೆ ಮತ್ತು ಇದು ನಮ್ಮ ಸ್ನೇಹ ಮತ್ತು ಬಾಂಧವ್ಯವನ್ನು ತೋರಿಸುತ್ತದೆ. ಅಲ್ಲದೆ, ವಿರಾಟ್ ಕೊಹ್ಲಿ ಮತ್ತು ಇಶಾಂತ್ ಶರ್ಮಾ ನನ್ನ ಇಬ್ಬರು ಉತ್ತಮ ಸ್ನೇಹಿತರು. ನಾನು ಇಂಜುರಿಯಿಂದ ಬಳಲುತ್ತಿರುವಾಗಲೆಲ್ಲ ಕೊಹ್ಲಿ ನನಗೆ ಫೋನ್ ಮಾಡಿ ವಿಚಾರಿಸುತ್ತಿರುತ್ತಾರೆ ಎಂದು ಶಮಿ ಹೇಳಿದ್ದಾರೆ.

# ಟೀಂ ಇಂಡಿಯಾದ ಬ್ಯಾಟಿಂಗ್, ಫೀಲ್ಡಿಂಗ್, ಬೌಲಿಂಗ್ ಕೋಚ್ ಯಾರು ಇವರ ಆಯ್ಕೆ ಖಚಿತ





2024ರ ಟಿ20 ವಿಶ್ವಕಪ್ ಫೈನಲ್ ಪಂದ್ಯದೊಂದಿಗೆ ರಾಹುಲ್ ದ್ರಾವಿಡ್ ಅಧಿಕಾರಾವಧಿ ಕೊನೆಗೊಂಡಿತು. ಇದಾದ ನಂತರ ಬಿಸಿಸಿಐ ಸಂದರ್ಶನ ನಡೆಸಿ ಗೌತಮ್ ಗಂಭೀರ್ ಅವರಿಗೆ ಈ ಹುದ್ದೆಯ ಜವಾಬ್ದಾರಿಯನ್ನು ಹಸ್ತಾಂತರಿಸಿದೆ. ಟೀಂ ಇಂಡಿಯಾದ ಮುಖ್ಯ ಕೋಚ್ ಜೊತೆಗೆ ಬ್ಯಾಟಿಂಗ್, ಬೌಲಿಂಗ್ ಮತ್ತು ಫೀಲ್ಡಿಂಗ್ ಕೋಚ್ ಅವಧಿಯೂ ಕೊನೆಗೊಂಡಿತ್ತು. ಹೀಗಿರುವಾಗ ಗೌತಮ್ ಗಂಭೀರ್ ಅವರ ಕೋಚಿಂಗ್ ಸ್ಟಾಫ್ ನಲ್ಲಿ ಯಾರೆಲ್ಲಾ ಇರುತ್ತಾರೆ ಎಂಬ ಚರ್ಚೆ ಕಳೆದ ಹಲವು ದಿನಗಳಿಂದ ನಡೆಯುತ್ತಿದ್ದು, ಅದರ ಚಿತ್ರಣ ಈಗ ಬಹುತೇಕ ನಿಚ್ಚಳವಾಗಿದೆ.

**ಫೀಲ್ಡಿಂಗ್ ಕೋಚ್ ಯಾರು**

ಇದುವರೆಗೂ ಟೀಂ ಇಂಡಿಯಾದ ಫೀಲ್ಡಿಂಗ್ ಕೋಚ್ ಆಗಿದ್ದ ಟಿ ದಿಲೀಪ್ ಅವರ ಅವಧಿ ಮತ್ತೆ ವಿಸ್ತರಣೆಯಾಗುವುದು ಖಚಿತ ಎಂದು ಪರಿಗಣಿಸಲಾಗಿದೆ. ಟಿ ದಿಲೀಪ್ ಅವರು ಫೀಲ್ಡಿಂಗ್ ಕೋಚ್ ಆಗಿ ಡ್ರೆಸ್ಸಿಂಗ್ ರೂಮ್‌ನಲ್ಲಿ ಉತ್ತಮ ವಾತಾವರಣ ಸೃಷ್ಟಿಸಿದ್ದಾರೆ. ಆಟಗಾರರೊಂದಿಗಿನ ಅವರ ಬಾಂಧವ್ಯವನ್ನು ನೋಡಿದರೆ, ಟಿ ದಿಲೀಪ್ ಅವರು ಟೀಂ ಇಂಡಿಯಾದ ಮುಂದಿನ ಫೀಲ್ಡಿಂಗ್ ಕೋಚ್ ಆಗಿ ಕಾರ್ಯನಿರ್ವಹಿಸಲಿದ್ದಾರೆ ಎಂದು ಹೇಳಲಾಗುತ್ತಿದೆ. ಟಿ ದಿಲೀಪ್ ಕೂಡ ಸೋಮವಾರ ಭಾರತ ತಂಡದೊಂದಿಗೆ ಕೊಲಂಬೊಗೆ ತೆರಳಲಿದ್ದಾರೆ.

**ಬೌಲಿಂಗ್ ಕೋಚ್ ಯಾರು**

ಹೊಸ ಬೌಲಿಂಗ್ ಕೋಚ್ ಬಗ್ಗೆ ಚಿತ್ರಣ ಇನ್ನೂ ಸ್ಪಷ್ಟವಾಗಿಲ್ಲ. ಈ ರೇಸ್‌ನಲ್ಲಿ ದಕ್ಷಿಣ ಆಫ್ರಿಕಾದ ಬೌಲರ್ ಮೋರ್ನೆ ಮೋರ್ಕೆಲ್ ಹೆಸರು ಮುಂಚೂಣಿಯಲ್ಲಿದ್ದು, ಬಹುಶಃ ಅವರ ಹೆಸರೇ ಫೈನಲ್ ಆಗಬಹುದು ಎನ್ನಲಾಗುತ್ತಿದೆ. ಇನ್ನು 1ರಿಂದ 2 ದಿನಗಳಲ್ಲಿ ನೂತನ ಬೌಲಿಂಗ್ ಕೋಚ್ ಬಗ್ಗೆ ಇರುವ ಎಲ್ಲಾ ಅನುಮಾನಗಳೂ ನಿವಾರಣೆಯಾಗಲಿವೆ. ಮೋರ್ನೆ ಮೋರ್ಕೆಲ್ ಅವರು ಗೌತಮ್ ಗಂಭೀರ್ ಅವರೊಂದಿಗೆ ಲಕ್ನೋ ಸೂಪರ್ ಜೈಂಟ್ಸ್ ತಂಡದಲ್ಲಿ 2 ವರ್ಷಗಳ ಕಾಲ ಕೆಲಸ ಮಾಡಿದ್ದಾರೆ.

**ಸಹಾಯಕ ಕೋಚ್ ಯಾರು**

ಕ್ರಿಕ್‌ಬಜ್‌ನ ವರದಿಯ ಪ್ರಕಾರ, ಅಭಿಷೇಕ್ ನಾಯರ್ ಮತ್ತು ರಿಯಾನ್ ಟೆನ್ ಡೋಸ್ಚೇಟ್ ಇಬ್ಬರನ್ನೂ ಟೀಂ ಇಂಡಿಯಾ ಮುಖ್ಯ ಕೋಚ್ ಗೌತಮ್ ಗಂಭೀರ್‌ಗೆ ಸಹಾಯಕರಾಗಿ ಆಯ್ಕೆ ಮಾಡಲಾಗುತ್ತದೆ. ಗೌತಮ್ ಗಂಭೀರ್ ಹೊರತಾಗಿ, ಅಭಿಷೇಕ್ ನಾಯರ್ ಕೂಡ ಐಪಿಎಲ್‌ನಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ತಂಡದಲ್ಲಿ ಕೆಲಸ ಮಾಡಿದ್ದಾರೆ. ಅವರ ಮಾರ್ಗದರ್ಶನದಲ್ಲಿ ವರುಣ್ ಚಕ್ರವರ್ತಿ ಮತ್ತು ವೆಂಕಟೇಶ್ ಅಯ್ಯರ್ ಅವರಂತಹ ಆಟಗಾರರು ಕಳೆದ ಐಪಿಎಲ್‌ನಲ್ಲಿ ನೈಟ್ ರೈಡರ್ಸ್ ಪರ ಅದ್ಭುತ ಪ್ರದರ್ಶನ ನೀಡಿದ್ದರು.

# ವಿರಾಟ್ ಕೊಹ್ಲಿಗೆ ಸ್ಪಷ್ಟ ಸಂದೇಶ ರವಾನಿಸಿದ ಗಂಭೀರ್



2027ರ ಏಕದಿನ ವಿಶ್ವಕಪ್‌ಗಾಗಿ ಹೊಸ ತಂಡವನ್ನು ಕಟ್ಟಲು ಗೌತಮ್ ಗಂಭೀರ್ ಬಿಸಿಸಿಐ ಮುಂದೆ ಬೇಡಿಕೆಯಿಟ್ಟಿದ್ದಾರೆ. ಈ ಬೇಡಿಕೆಗೆ ಬಿಸಿಸಿಐ ಕಡೆಯಿಂದಲೂ ಗ್ರೀನ್ ಸಿಗ್ನಲ್ ಸಿಕ್ಕಿದೆ. ಹೀಗಾಗಿ 2025ರ ಚಾಂಪಿಯನ್ಸ್ ಟ್ರೋಫಿ ಬಳಿಕ ಟೀಮ್ ಇಂಡಿಯಾದಲ್ಲಿ ಮಹತ್ವದ ಬದಲಾವಣೆಯಾಗುವ ಸಾಧ್ಯತೆಯಿದೆ.

ಅದರಂತೆ ರೋಹಿತ್ ಶರ್ಮಾ ಹಾಗೂ ವಿರಾಟ್ ಕೊಹ್ಲಿಯ ಏಕದಿನ ಕೆರಿಯರ್ ಅಂತ್ಯಗೊಂಡರೂ ಅಚ್ಚರಿಪಡಬೇಕಿಲ್ಲ. ಶ್ರೀಲಂಕಾ ವಿರುದ್ಧದ ಸರಣಿಗೆ ಭಾರತ ತಂಡವನ್ನು ಪ್ರಕಟಿಸಲಾಗಿದೆ. 15 ಸದಸ್ಯರ ಏಕದಿನ ತಂಡವನ್ನು ರೋಹಿತ್ ಶರ್ಮಾ ಮುನ್ನಡೆಸಿದರೆ, ಟಿ20 ತಂಡಕ್ಕೆ ಸೂರ್ಯಕುಮಾರ್ ಯಾದವ್ ನಾಯಕನಾಗಿ ಆಯ್ಕೆಯಾಗಿದ್ದಾರೆ.

ಇನ್ನು ಉಭಯ ತಂಡಗಳ ಉಪನಾಯಕನಾಗಿ ಕಾಣಿಸಿಕೊಂಡಿರುವುದು ಶುಭ್‌ಮನ್ ಗಿಲ್. ಇಲ್ಲಿ ಉಪನಾಯಕನ ಸ್ಥಾನಕ್ಕೆ 24 ವರ್ಷದ ಶುಭ್‌ಮನ್ ಗಿಲ್ ಅವರ ಆಯ್ಕೆಯು ಎಲ್ಲಾರ ಅಚ್ಚರಿಗೆ ಕಾರಣವಾಗಿದೆ. ಆದರೆ ಇಂತಹದೊಂದು ಅಚ್ಚರಿಯ ಹಿಂದಿರುವ ವ್ಯಕ್ತಿ ಟೀಮ್ ಇಂಡಿಯಾದ ನೂತನ ಕೋಚ್ ಗೌತಮ್ ಗಂಭೀರ್.

ಈ ಒಂದು ಆಯ್ಕೆಯ ಮೂಲಕ ಗೌತಮ್ ಗಂಭೀರ್ ಟೀಮ್ ಇಂಡಿಯಾದ ಹಿರಿಯ ಆಟಗಾರರಿಗೆ ಸ್ಪಷ್ಟ ಸಂದೇಶ ರವಾನಿಸಿದ್ದಾರೆ ಎಂದು ವಿಶ್ಲೇಷಿಸಲಾಗುತ್ತಿದೆ. ಏಕೆಂದರೆ ಮುಂಬರುವ ಚಾಂಪಿಯನ್ಸ್ ಟ್ರೋಫಿ ಬಳಿಕ ರೋಹಿತ್ ಶರ್ಮಾ ಏಕದಿನ ತಂಡದ ನಾಯಕತ್ವಕ್ಕೆ ರಾಜೀನಾಮೆ ನೀಡುವುದು ಬಹುತೇಕ ಖಚಿತ. ಅಂದರೆ ಚಾಂಪಿಯನ್ಸ್ ಟ್ರೋಫಿ ಬಳಿಕ ರೋಹಿತ್ ಶರ್ಮಾ ಮತ್ತೆ ಏಕದಿನ ತಂಡದಲ್ಲಿ ಕಾಣಿಸಿಕೊಳ್ಳುವ ಸಾಧ್ಯತೆಯಿಲ್ಲ. ಆದರೆ ವಿರಾಟ್ ಕೊಹ್ಲಿಯ ನಡೆಯೇನು ಎಂಬುದೇ ಕುತೂಹಲ. ಅದಕ್ಕೂ ಮುನ್ನವೇ ಕೊಹ್ಲಿಗೆ ಸ್ಪಷ್ಟ ಸಂದೇಶ ರವಾನಿಸಲು ಗಂಭೀರ್ ಇಲ್ಲಿ ಗಿಲ್ ಅವರನ್ನು ಉಪನಾಯಕನಾಗಿ ಆಯ್ಕೆ ಮಾಡಿದ್ದಾರೆ ಎನ್ನಲಾಗುತ್ತಿದೆ.

ಏಕೆಂದರೆ ಗೌತಮ್ ಗಂಭೀರ್ ಏಕದಿನ ಕ್ರಿಕೆಟ್‌ಗಾಗಿ ಹೊಸ ತಂಡವನ್ನು ಕಟ್ಟುವ ಇರಾದೆಯಲ್ಲಿದ್ದಾರೆ. 2027 ಏಕದಿನ ವಿಶ್ವಕಪ್ ಅನ್ನು ಮುಂದಿಟ್ಟುಕೊಂಡು ಗೌತಮ್ ಭರ್ಜರಿ ಪ್ಲ್ಯಾನ್ ರೂಪಿಸುತ್ತಿದ್ದಾರೆ. ಅಂದರೆ ಮುಂದಿನ 2 ವರ್ಷದೊಳಗೆ ಗಂಭೀರ್ ಯುವ ಪಡೆಯನ್ನೊಳಗೊಂಡ ಏಕದಿನ ತಂಡವನ್ನು ರೂಪಿಸುವುದು ಸ್ಪಷ್ಟ.

ಇದೇ ಕಾರಣಕ್ಕಾಗಿ ಹಿರಿಯ ಆಟಗಾರರಾದ ಕೆಎಲ್ ರಾಹುಲ್, ಶ್ರೇಯಸ್ ಅಯ್ಯರ್, ಹಾರ್ದಿಕ್ ಪಾಂಡ್ಯ, ಸೂರ್ಯಕುಮಾರ್ ಯಾದವ್ ಅವರನ್ನೆಲ್ಲಾ ಹೊರಗಿಟ್ಟು 24 ವರ್ಷದ ಶುಭ್‌ಮನ್ ಗಿಲ್‌ಗೆ ಉಪನಾಯಕತ್ವ ನೀಡಿರುವುದು.

# ಮದುವೆ ಬಗ್ಗೆ ಮೌನ ಮುರಿದ ಶ್ರದ್ಧಾ ಕಪೂರ್



'ಆಶಿಕಿ 2 ಬೆಡಗಿ ಶ್ರದ್ಧಾ ಕಪೂರ್ 'ಸ್ತ್ರಿ-2' ಸಿನಿಮಾದಲ್ಲಿ ರಾಜ್‌ಕುಮಾರ್ ರಾವ್‌ಗೆ ನಾಯಕಿಯಾಗಿದ್ದಾರೆ. ಈ ಚಿತ್ರದ ಪ್ರಚಾರ ಕಾರ್ಯದಲ್ಲಿ ಬ್ಯುಸಿಯಾಗಿದ್ದಾರೆ. ಈ ವೇಳೆ, ಮದುವೆ ಬಗ್ಗೆ ನಟಿ ಮೌನ ಮುರಿದಿದ್ದಾರೆ.

ಯಶಸ್ಸಿಗಾಗಿ ಎದುರು ನೋಡ್ತಿರುವ ಶ್ರದ್ಧಾ ಕಪೂರ್ ಸದ್ಯ ಸ್ತ್ರಿ ಪಾರ್ಟ್ 2 ಸಿನಿಮಾದ ಪ್ರಮೋಷನ್‌ನಲ್ಲಿ ನಿರತರಾಗಿದ್ದಾರೆ. ಪ್ರಚಾರದ ವೇಳೆ, ಮದುವೆ ಕುರಿತು ಎದುರಾದ ಪ್ರಶ್ನೆಗೆ ಜಾಣತನದಿಂದ ಶ್ರದ್ಧಾ ಉತ್ತರಿಸಿದ್ದಾರೆ. ಆಕೆ ಸ್ತ್ರಿ, ಆಕೆಗೆ ಇಷ್ಟ ಬಂದಾಗ ಮದುಮಗಳು ಆಗುತ್ತಾಳೆ ಎಂದು ನಟಿ ಉತ್ತರಿಸಿದ್ದಾರೆ.

ಇನ್ನೂ ಶ್ರದ್ಧಾ ಹೆಸರು ಪ್ರಸ್ತುತ ರಾಹುಲ್ ಮೋದಿ ಜೊತೆ ಕೇಳಿ ಬರುತ್ತಿದೆ. ಇಬ್ಬರ ಕುರಿತು ಡೇಟಿಂಗ್ ಸುದ್ದಿ ಹಬ್ಬಿದೆ. ಅದಕ್ಕೆ ಪೂರಕವೆಂಬಂತೆ, ಅಂಬಾನಿ ಮಗನ ವಿವಾಹ ಪೂರ್ವ ಕಾರ್ಯಕ್ರಮದಲ್ಲಿ ಜೊತೆಯಾಗಿ ಕಾಣಿಸಿಕೊಂಡಿದ್ದರು. ಹಾಗಾಗಿ ಶೀಘ್ರದಲ್ಲಿಯೇ ಮದುವೆ ಆಗಲಿದ್ದಾರೆ ಎನ್ನಲಾಗಿದೆ.

ಅಂದಹಾಗೆ, 2018ರಲ್ಲಿ 'ಸ್ತ್ರಿ' ಮೊದಲ ಭಾಗ ರಿಲೀಸ್ ಆಗಿ ಸಕ್ಸಸ್ ಕಂಡಿತ್ತು. ಈಗ 'ಸ್ತ್ರಿ 2' ಸಿನಿಮಾ ಇದೇ ಆಗಸ್ಟ್ 15ಕ್ಕೆ ರಿಲೀಸ್ ಆಗಲಿದೆ.

# ಕೃಷ್ಣಂ ಪ್ರಣಯ ಸಖಿ ಆಗಸ್ಟ್ 15ರಂದು ತೆರೆಗೆ!



ತ್ರಿಶೂಲ್ ಎಂಟರ್ಟೈನ್ಮೆಂಟ್ ಲಾಂಛನದಲ್ಲಿ ಪ್ರಶಾಂತ್ ಜಿ ರುದ್ರಪ್ಪ ನಿರ್ಮಿಸಿರುವ, ಶ್ರೀನಿವಾಸರಾಜು ನಿರ್ದೇಶನದ ಹಾಗೂ ಗೋಲ್ಡನ್ ಸ್ಟಾರ್ ಗಣೇಶ್ ನಾಯಕರಾಗಿ ನಟಿಸಿರುವ ''ಕೃಷ್ಣಂ ಪ್ರಣಯ ಸಖಿ'' ಚಿತ್ರದ ಎರಡು ಹಾಡುಗಳು ಬಿಡುಗಡೆಯಾಗಿದ್ದು, ಎರಡೂ ಹಾಡುಗಳು ಪ್ರೇಕ್ಷಕರ ಮನ ಗೆದ್ದಿದೆ. ಆಗಸ್ಟ್ ಹದಿನೈದರಂದು ಬಹು ನಿರೀಕ್ಷಿತ ಈ ಚಿತ್ರ ಬಿಡುಗಡೆಯಾಗಲಿದೆ. ಚಿತ್ರದ ಕುರಿತು ಹೆಚ್ಚಿನ ಮಾಹಿತಿ ನೀಡಲು ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಚಿತ್ರತಂಡದ ಸದಸ್ಯರು ಮಾತನಾಡಿದರು.

''ದಂಡುಪಾಳ್ಯ'' ಚಿತ್ರದ ನಿರ್ದೇಶಕ ಶ್ರೀನಿವಾಸರಾಜು ಅವರು ಚಿತ್ರದ ಕಥೆ ಹೇಳಲು ಬರುತ್ತಿದ್ದಾರೆ ಎಂದಾಗ, ಅವರು ನನ್ನ ಜಾನರ್ ಬದಲಾಯಿಸುವ ಕಥೆ ಮಾಡಿರಬಹುದು ಅಂದುಕೊಂಡೆ. ಆದರೆ ಆರಂಭದಲ್ಲೇ ಅವರು ಎಂಟು ನಾಯಕಿಯರು ಎಂದಾಗ, ಓ ಇದು ನನ್ನ ಜಾನರ್ ನ ಚಿತ್ರ ಅನಿಸಿತು. ''ಕೃಷ್ಣಂ ಪ್ರಣಯ ಸಖಿ'' ಉತ್ತಮ ಕಥಾಹಂದರ ಹೊಂದಿರುವ ಚಿತ್ರ. ಕನ್ನಡ ಚಿತ್ರರಂಗದ ಹಿರಿಯ ನಟರೊಂದಿಗೆ ಈ ಚಿತ್ರದಲ್ಲಿ ನಟಿಸಿದ್ದು ಸಂತೋಷವಾಯಿತು. ನೋಡುಗರಿಗೂ ಈ ಚಿತ್ರ ಇಷ್ಟವಾಗುತ್ತದೆ. ಅಂತಹ ಉತ್ತಮ ಚಿತ್ರ ಮಾಡಿದ್ದಾರೆ ಶ್ರೀನಿವಾಸರಾಜು. ಪ್ರಶಾಂತ್ ಅದ್ದೂರಿಯಾಗಿ ನಿರ್ಮಾಣ ಮಾಡಿದ್ದಾರೆ. ''ಕೃಷ್ಣಂ ಪ್ರಣಯ ಸಖಿ'' ನನ್ನ ಈವರೆಗಿನ ವೃತ್ತಿಜೀವನದ ಬಿಗ್ ಬಜೆಟ್ ನ ಚಿತ್ರ. ಆಗಸ್ಟ್ 15 ರಂದು ನಮ್ಮ ಚಿತ್ರ ಬಿಡುಗಡೆಯಾಗುತ್ತಿದೆ. ನೋಡಿ ಪ್ರೋತ್ಸಾಹಿಸಿ ಎಂದರು ಗೋಲ್ಡನ್ ಸ್ಟಾರ್ ಗಣೇಶ್.

ಇದು ಗಣೇಶ್ ಅವರಿಗೆ ಸೂಕ್ತವಾದ ಕಥೆ. ಅವರ ಹಾಗೂ ಚಿತ್ರದಲ್ಲಿ ನಟಿಸಿರುವ ಎಲ್ಲಾ ಕಲಾವಿದರ ಅಭಿನಯ ಉತ್ತಮವಾಗಿ ಮೂಡಿಬಂದಿದೆ. ತಂತ್ರಜ್ಞರ ಕಾರ್ಯವೈಖರಿ ಕೂಡ ಚೆನ್ನಾಗಿದೆ. ಅರ್ಜುನ್ ಜನ್ಯ ಸಂಗೀತ ನೀಡಿರುವ ಆರು ಹಾಡುಗಳು ಈ ಚಿತ್ರದಲ್ಲಿದ್ದು, ಎರಡು ಹಾಡುಗಳು ಈಗಾಗಲೇ ಆನಂದ್ ಆಡಿಯೋ ಮೂಲಕ ಬಿಡುಗಡೆಯಾಗಿದೆ. ಇತ್ತೀಚಿಗೆ ಬಿಡುಗಡೆಯಾದ ''ಚಿನ್ನಮ್ಮ'' ಹಾಡಂತೂ ಈಗಾಗಲೇ ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗಿದೆ.

# ಪ್ರೀ ಕ್ಲೈಮ್ಯಾಕ್ಸ್ ಶೂಟಿಂಗ್‌ನಲ್ಲಿ ಸಂಜು ವೆಡ್ಸ್ ಗೀತಾ



ನಿರ್ದೇಶಕ ನಾಗಶೇಖರ್ ಸಾರಥ್ಯದ 'ಸಂಜು ವೆಡ್ಸ್ ಗೀತಾ-2' ಪ್ರಾರಂಭದಿಂದಲೂ ದೊಡ್ಡ ಮಟ್ಟದಲ್ಲಿ ಸದ್ದು ಮಾಡುತ್ತಿದೆ. ಸಂಜು ಹಾಗೂ ಗೀತಾರ ನವೀನ ಪ್ರೇಮಕಥೆಯನ್ನು ರೇಶ್ಮೆ ಬೆಳೆಯುವ ರೈತರ ಹೋರಾಟದ ಹಿನ್ನೆಲೆ ಇಟ್ಟುಕೊಂಡು ನಾಗಶೇಖರ್ ಹೇಳಹೊರಟಿದ್ದಾರೆ. ಈ ಚಿತ್ರದಲ್ಲಿ ಶ್ರೀನಗರ ಕಿಟ್ಟಿ ಜೊತೆ ರಮ್ಯಾ ಬದಲು ರಚಿತಾರಾಮ್ ಎಂಟ್ರಿಯಾಗಿದ್ದಾರೆ. ಈ ಚಿತ್ರದ ಪ್ರೀ ಕ್ಲೈಮ್ಯಾಕ್ಸ್ ದೃಶ್ಯದ ಚಿತ್ರೀಕರಣ ನಿನ್ನೆ ಕಂಠೀರವ ಸ್ಟುಡಿಯೋದಲ್ಲಿ ನಡೆದಿತ್ತು. ಅಲ್ಲಿ ನಾಯಕ ಶ್ರೀನಗರ ಕಿಟ್ಟಿ ಒಬ್ಬ ಸೈನಿಕನ ಗೆಟಪ್ ನಲ್ಲಿದ್ದರು. ಜರ್ಮನ್ ಸೈನಿಕರ ವಿರುದ್ಧ ಸೆಣಸಾಟ ನಡೆಸಿ ಅವರ ಹಿಡಿತದಿಂದ ರಾಣಿಯನ್ನು ಬಿಡಿಸಿಕೊಂಡು ಬರುವ ಸನ್ನಿವೇಶವದು. ಆ ದೃಶ್ಯವನ್ನು ಗ್ರೀನ್ ಮ್ಯಾಟ್ ನಲ್ಲಿ ಚಿತ್ರೀಕರಿಸಲಾಗುತ್ತಿತ್ತು.

ರೇಶ್ಮೆ ನೂಲಿಗೆ ಉತ್ತಮ ಬೆಲೆ ಸಿಗಬೇಕೆಂದು ಹೋರಾಡುವ ನಮ್ಮ ಮಣ್ಣಿನ ಪ್ರೇಮಿಗಳ ಪ್ರೇಮಕಾವ್ಯವನ್ನು ನಾಗಶೇಖರ್ ಈ ಚಿತ್ರದಲ್ಲಿ ಹೇಳಹೊರಟಿದ್ದಾರೆ. ನಟಿ ರಾಗಿಣಿ ಜೋಡಿಯಾಗಿ ಕಾಣಿಸಿಕೊಳ್ಳುತ್ತಿರುವ ನಟ ಚೇತನ್ ಚಂದ್ರ ಕೂಡ ಈ ಸಂದರ್ಭದಲ್ಲಿ ಹಾಜರಿದ್ದರು. ಈ ಸಂದರ್ಭದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ನಾಗಶೇಖರ್, ಈಗಾಗಲೇ ಚಿತ್ರದ ಬಹುತೇಕ ಚಿತ್ರೀಕರಣ ಮುಗಿದಿದೆ. ಇದು ಚಿತ್ರದ ಪ್ರಿ ಕ್ಲೈಮ್ಯಾಕ್ಸ್ ಸೀನ್. ಇದರ ನಂತರ ನೆದರ್ ಲ್ಯಾಂಡ್‌ನಲ್ಲಿ ಚಿತ್ರೀಕರಣ ಮುಂದುವರಿಯುತ್ತದೆ. ನಿರ್ಮಾಪಕ ಕುಮಾರ್ ಅವರ ಸಹಕಾರದಿಂದ ಚಿತ್ರದ ಚಿತ್ರೀಕರಣ ಅಂದುಕೊಂಡ ಪ್ಲಾನ್ ಪ್ರಕಾರ ಸರಾಗವಾಗಿ ಮುಗಿಯುತ್ತಿದೆ. ಹನ್ನೆರಡು ಕೋಟಿ ಅಂದುಕೊಂಡ ಬಜೆಟ್ ಈಗ ಹದಿನೈದು ಕೋಟಿಯಾಗಿದೆ.

ಶೂಟಿಂಗ್ ಜೊತೆಗೇ ಎಡಿಟಿಂಗ್ ಸೇರಿದಂತೆ ಚಿತ್ರದ ಪೋಸ್ಟ್ ಪ್ರೊಡಕ್ಷನ್ ಕೆಲಸಗಳು ಬಹುತೇಕ ಮುಗಿದಿವೆ ಅಂದುಕೊಂಡ ಹಾಗೆ ದಸರಾ ವೇಳೆಗೆ ಚಿತ್ರವನ್ನು ತೆರೆಗೆ ತರಲು ಪ್ರಯತ್ನ ಮಾಡುತ್ತಿದ್ದೇವೆ. ಈಗಾಗಲೇ ಸ್ವಿಟ್ಜರ್ ಲ್ಯಾಂಡ್ ನಲ್ಲಿ 15 ದಿನ ಹನ್ನೊಂದು ಲೊಕೇಶನ್ ಗಳಲ್ಲಿ ಚಿತ್ರೀಕರಣ ಮಾಡಿದ್ದೇವೆ. ಈಗ ನೆದರ್ ಲ್ಯಾಂಡ್ ಗೆ ಹೋಗ್ತಿದ್ದೇವೆ ಎಂದು ಹೇಳಿದರು. ನಂತರ ಚಿತ್ರದ ಕುರಿತಂತೆ ಮಾತನಾಡಿದ ನಿರ್ಮಾಪಕ ಛಲವಾದಿ ಕುಮಾರ್, ಈಗಾಗಲೇ ನಾವು ಶೂಟಿಂಗ್ ಕೊನೇ ಹಂತಕ್ಕೆ ಬಂದಿದ್ದೇವೆ. ಅಂದುಕೊಂಡ ಹಾಗೆ ಚಿತ್ರ ಮೂಡಿಬರುತ್ತಿದೆ.

# ಬಿಗ್ ಬಾಸ್ ಲೈವ್‌ನಲ್ಲೇ ಸೆಕ್ಸ್



ರಾತ್ರಿ ಆದ ಬಳಿಕ ಬಿಗ್ ಬಾಸ್ ಮನೆಯಲ್ಲಿ ಲೈಟ್ ಆಫ್ ಆಗುತ್ತದೆ. ಆದರೆ, ಬಿಗ್ ಬಾಸ್ ಮನೆಯಲ್ಲಿ ಇರುವ ಕ್ಯಾಮೆರಾಗಳು ಎಷ್ಟು ಆಧುನಿಕವಾಗಿರುತ್ತವೆ ಎಂದರೆ ಎಷ್ಟೇ ಕಗ್ಗತ್ತಲು ಇದ್ದರೂ ಕ್ಯಾಮೆರಾ ಕಣ್ಣಲ್ಲಿ ಕಾಣುತ್ತವೆ. ಬಹುಶಃ ಅರ್ಮಾನ್ ಹಾಗೂ ಕೃತಿಕಾ ಇದನ್ನು ಮರೆತಂತೆ ಇದೆ.

'ಬಿಗ್ ಬಾಸ್' ಫ್ಯಾಮಿಲಿ ಶೋ ಎನ್ನುವ ಖ್ಯಾತಿಗೆ ಪಾತ್ರವಾಗಿತ್ತು. ಆದರೆ, ಈಗ ಶೋಗೆ ಈ ಟೈಟಲ್ ಯಾಕೋ ಹೊಂದಿಕೆ ಆಗುತ್ತಿಲ್ಲ. ಸಾಕಷ್ಟು ವಿವಾದಗಳು ಶೋನಲ್ಲಿ ಆಗುತ್ತವೆ. ಫೈಟ್‌ಗಳು ನಡೆದರೆ ಹೇಗೋ ಸಹಿಸಿಕೊಳ್ಳಬಹುದು. ಆದರೆ, ಸ್ಪರ್ಧಿಗಳು ಸಖತ್ ಇಂಟಿಮೇಟ್ ಆಗಿಬಿಟ್ಟರೆ ಈಗ ಅದೇ ರೀತಿಯ ಘಟನೆ ನಡೆದಿದೆ. 'ಬಿಗ್ ಬಾಸ್ ಒಟಿಟಿ 3'ನಲ್ಲಿ ಅರ್ಮಾನ್ ಮಲಿಕ್ ಹಾಗೂ ಅವರ ಎರಡನೇ ಪತ್ನಿ ಕೃತಿಕಾ ಮಲಿಕ್ ಬ್ಲ್ಯಾಂಕೇಟ್ ಒಳಗೆ ಇಂಟಿಮೇಟ್ ಆಗಿದ್ದಾರೆ. ಈ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ಚರ್ಚೆ ಹುಟ್ಟುಹಾಕಿದೆ.

ರಾತ್ರಿ ಆದ ಬಳಿಕ ಬಿಗ್ ಬಾಸ್ ಮನೆಯಲ್ಲಿ ಲೈಟ್ ಆಫ್ ಆಗುತ್ತದೆ. ಆದರೆ, ಬಿಗ್ ಬಾಸ್ ಮನೆಯಲ್ಲಿ ಇರುವ ಕ್ಯಾಮೆರಾಗಳು ಎಷ್ಟು ಆಧುನಿಕವಾಗಿರುತ್ತವೆ ಎಂದರೆ ಎಷ್ಟೇ ಕಗ್ಗತ್ತಲು ಇದ್ದರೂ ಕ್ಯಾಮೆರಾ ಕಣ್ಣಲ್ಲಿ ಕಾಣುತ್ತವೆ. ಬಹುಶಃ ಅರ್ಮಾನ್ ಹಾಗೂ ಕೃತಿಕಾ ಇದನ್ನು ಮರೆತಂತೆ ಇದೆ. ಇಬ್ಬರೂ ಮನೆ ಒಳಗೆ ಲೈಂಗಿಕ ಕ್ರಿಯೆ ನಡೆಸಿದ್ದಾರೆ. ಇದು ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದ್ದು, ಇದನ್ನು ಖಂಡಿಸೋ ಕೆಲಸ ಆಗುತ್ತಿದೆ.

# ಪೂಜಾಗಾಂಧಿ ಜತೆ ತನಿಷಾ ಲಿಪ್ ಲಾಕ್

## 6 ಟೇಕ್ ತೆಗೆದುಕೊಂಡ ಅನುಭವ



ದಂಡುಪಾಳ್ಯ 2 ಸಿನಿಮಾದಲ್ಲಿ ನಟಿ ಪೂಜಾ ಗಾಂಧಿಯವರಿಗೆ ಲಿಪ್ ಲಾಕ್ ಮಾಡಿರುವ ಬಗ್ಗೆ ತನಿಷಾ ಮಾತನಾಡಿದ್ದಾರೆ. ತನಿಷಾ ಕುಪ್ಪಂಡ 'ಕುಪ್ಪಂಡ ಜ್ಯುವೆಲರೀಸ್' ಹೆಸರಿನ ಆಭರಣ ಮಳಿಗೆಯನ್ನು ಪ್ರಾರಂಭಿಸಿ ಸುದ್ದಿಯಾಗಿದ್ದರು. ತನಿಷಾ ಕುಪ್ಪಂಡ 'ಕುಪ್ಪಂಡ ಜ್ಯುವೆಲರೀಸ್' ಹೆಸರಿನ ಆಭರಣ ಮಳಿಗೆಯನ್ನು ಪ್ರಾರಂಭಿಸಿ ಸುದ್ದಿಯಾಗಿದ್ದರು.

ಇದೀಗ ದಂಡು ಪಾಳ್ಯ ಸಿನಿಮಾದಲ್ಲಿ ಪೂಜಾ ಗಾಂಧಿಗೆ ಕಿಸ್ ಮಾಡಿದ ಅನುಭವದ ಬಗಗೆ ಹೇಳಿಕೊಂಡಿದ್ದಾರೆ. ಬಿಗ್ ಬಾಸ್' ಬೆಡಗಿ ತನಿಷಾ ಕುಪ್ಪಂಡ ದೊಡ್ಮನೆ ಆಟ ಮುಗಿದ ಮೇಲೆ ನಟನೆ, ಉದ್ಯಮ ಕ್ಷೇತ್ರಗಳಲ್ಲಿ ಬ್ಯುಸಿಯಾಗಿದ್ದಾರೆ. 'ನನ್ನಮ್ಮ ಸೂಪರ್ ಸ್ಟಾರ್-3'ರಲ್ಲಿ ತನಿಷಾ ಭಾಗಿಯಾಗಿದ್ದರು. ತನಿಷಾ ಕುಪ್ಪಂಡ 'ಕುಪ್ಪಂಡ ಜ್ಯುವೆಲರೀಸ್' ಹೆಸರಿನ ಆಭರಣ ಮಳಿಗೆಯನ್ನು ಪ್ರಾರಂಭಿಸಿ ಸುದ್ದಿಯಾಗಿದ್ದರು. ಇದೀಗ ದಂಡುಪಾಳ್ಯ 2 ಸಿನಿಮಾದಲ್ಲಿ ನಟಿ ಪೂಜಾ ಗಾಂಧಿಯವರಿಗೆ ಲಿಪ್ ಲಾಕ್ ಮಾಡಿರುವ ಬಗ್ಗೆ ಮಾತನಾಡಿದ್ದಾರೆ. ಈ ಬಗ್ಗೆ ತನಿಷಾ ಮಾತನಾಡಿ ಅದು ಪ್ರಾಪರ್ ಕಿಸ್ ಥರ ಇರಲಿಲ್ಲ, ಬಲವಂತದ ಕಿಸ್ಸಿಂಗ್ ಸೀನ್ ಅದಾಗಿತ್ತು, ಹಾಗಾಗಿ ನಾನು ಪೂಜಾ ಗಾಂಧಿಯವರಿಗೆ ಗಂಡಸರ ರೀತಿ ಕಿಸ್ ಮಾಡಿದ ಹಾಗಿತ್ತು, ಅದಕ್ಕೆ ಪೂಜಾ ಅವರು ಅಮ್ಮ ನೀನು ತುಂಬಾ ರಫ್ ಆಗಿ ಇದ್ಯಾ.. ಅಂದಿದ್ರು ಎಂದು ಶೂಟಿಂಗ್ ದಿನಗಳನ್ನ ಮೆಲುಕು ಹಾಕಿದ್ದಾರೆ. ಬಹಳ ಕಾಂಟ್ರೋವರ್ಸಿ ಸೃಷ್ಟಿಸಿದ ದೃಶ್ಯ ಇದಾಗಿತ್ತು. ಇದೇ ಲಿಪ್ ಲಾಪ್ ಸೀನ್ ಮಾಡಲು 6 ಟೇಕ್ ತೆಗೆದುಕೊಂಡಿರೋ ಬಗ್ಗೆ ಮಾತನಾಡಿದ್ದಾರೆ ತನಿಷಾ.

# ರೊಮ್ಯಾಂಟಿಕ್ ಆಗಿ ಅಜಿತ್ ಕುಮಾರ್, ತ್ರಿಷಾ



ತಮಿಳಿನ ಸ್ಟಾರ್ ನಟ ಅಜಿತ್ ಕುಮಾರ್ ಜೊತೆ ತ್ರಿಷಾ ಹೊಸ ಸಿನಿಮಾಗಾಗಿ ಕೈಜೋಡಿಸಿದ್ದಾರೆ. ದಂಪತಿಗಳಾಗಿ ಅಜಿತ್ ಕುಮಾರ್ ಮತ್ತು ತ್ರಿಷಾ ಕಾಣಿಸಿಕೊಂಡಿದ್ದಾರೆ. ಈ ಸಿನಿಮಾದ 'ವಿದಾ ಮುಯಾರ್ಚಿ' ಚಿತ್ರದ ಹೊಸ ಪೋಸ್ಟರ್ ಈಗ ಬಿಡುಗಡೆಯಾಗಿದೆ.

ಸಾಕಷ್ಟು ದಿನಗಳಿಂದ ಅಜಿತ್ ಕುಮಾರ್ ಹೊಸ ಸಿನಿಮಾದಲ್ಲಿ ತ್ರಿಷಾ ನಾಯಕಿ ಎಂದು ಹೇಳಲಾಗಿತ್ತು. ಆದರೆ ಈ ಕುರಿತು ಚಿತ್ರತಂಡದಿಂದ ಯಾವುದೇ ಅಧಿಕೃತ ಮಾಹಿತಿ ಹೊರಬಿದ್ದಿರಲಿಲ್ಲ. ಈಗ ಅಜಿತ್ ಮತ್ತು ತ್ರಿಷಾ ಜೊತೆಯಾಗಿರುವ ಪೋಸ್ಟರ್‌ವೊಂದು ಹಂಚಿಕೊಂಡು ನಿರ್ಮಾಣ ಸಂಸ್ಥೆ ಅನೌನ್ಸ್ ಮಾಡಿದೆ.

ಹಸಿರು ಬಣ್ಣದ ಧಿರಿಸಿನಲ್ಲಿ ನಟಿ ಮಿಂಚಿದ್ರೆ, ಕಪ್ಪು ಬಣ್ಣದ ಉಡುಗೆಯಲ್ಲಿ ಅಜಿತ್ ಕಾಣಿಸಿಕೊಂಡಿದ್ದಾರೆ. 'ವಿದಾ ಮುಯಾರ್ಚಿ' ಸಿನಿಮಾದಲ್ಲಿ ಇಬ್ಬರೂ ದಂಪತಿಗಳಾಗಿ ನಟಿಸಿದ್ದಾರೆ. ಸದ್ಯ ಈ ಪೋಸ್ಟರ್‌ಗೆ ಫ್ಯಾನ್ಸ್ ಮೆಚ್ಚುಗೆ ಸೂಚಿಸಿದ್ದಾರೆ. ಇನ್ನೂ ಈ ಚಿತ್ರವನ್ನು ಲೈಕಾ ಸಂಸ್ಥೆ ನಿರ್ಮಾಣ ಮಾಡಿದೆ.

ಇನ್ನೂ ತ್ರಿಷಾ ಕೃಷ್ಣನ್‌ಗೆ ಚಿತ್ರರಂಗದಲ್ಲಿ ಈಗ ಬೇಡಿಕೆ ಹೆಚ್ಚಾಗಿದೆ. ಸ್ಟಾರ್ ಸಿನಿಮಾಗಳಲ್ಲಿ ನಟಿಸಲು ತ್ರಿಷಾಗೆ ನಿರ್ಮಾಪಕರು ಮಣೆ ಹಾಕ್ತಿದ್ದಾರೆ. ತೆಲುಗು ಮತ್ತು ತಮಿಳಿನಲ್ಲಿ ನಟಿ ಆಕ್ಟೀವ್ ಆಗಿದ್ದಾರೆ.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**